ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಮಾರ್ಚ್ 29 ಶುಕ್ರವಾರ 2024

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 44 | ಸಂಚಿಕೆ: 340 | ಪುಟಗಳು: 12

ಸುದ್ದಿ ಮತ್ತು ಫೋಟೋಗೆ: news@mysurumithra.com ಜಾಹೀರಾತು: ad@mysurumithra.com



ಮೈಸೂರು ಮಿತ್ರ
ಶುಕ್ರವಾರ 29 ಮಾರ್ಚ್ 2024

ವಿಜೃಂಭಣೆಯ ಗುಜ್ಜಮ್ಮ ತಾಯಿ ರಥೋತ್ಸವ



ಜಯಪುರ: ಜಯಪುರ ಗ್ರಾಮದಲ್ಲಿ ಗುರುವಾರ ಗ್ರಾಮದೇವತೆ ಗುಜ್ಜಮ್ಮ ತಾಯಿಯವರ ಜಾತ್ರಾ ಮಹೋತ್ಸವ ಪ್ರಯುಕ್ತ ವಿಜೃಂಭಣೆಯ ರಥೋತ್ಸವ ನಡೆಯಿತು. ಭಕ್ತರು ದೇವಿಗೆ ಹರಕೆ ಸೀರೆ ತೊಡಿಸಿದರು. ಹೂವು ಹೊಂಬಾಳೆ ನೀಡಿದರು.

ಗ್ರಾಮದ ಗಂಗಸ್ಥಾನವಾದ ಕೆಗ್ಗೆರೆಯಲ್ಲಿ ಗುಜ್ಜಮ್ಮ ತಾಯಿ, ಮಲೆಯ ಋಷಿ ಕೊಣಪ್ಪ ಸ್ವಾಮಿ, ಕೆಂಗಲಮ್ಮ, ಚಿಕ್ಕ ದೇವಮ್ಮ ದೇವರ ಬಿರುದು ಬಾವಲಿಗಳಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ನಂತರ ಭಾರಿ ಗಾತ್ರದ ಹೂವಿನ ಅಲಂಕಾರಗೊಂಡ ರಥೋತ್ಸವಕ್ಕೆ ಚಾಲನೆ ದೊರೆಯಿತು. ಗುಜ್ಜಮ್ಮ ತಾಯಿಯ ಮೂರ್ತಿಯನ್ನು ರಥೋತ್ಸವದಲ್ಲಿ ಮೆರವಣಿಗೆ ಮಾಡಲಾಯಿತು. ಬಾಲಕಿಯರು ಹಾಲರವಿ ಹೊತ್ತು ಮೆರವಣಿಗೆಯಲ್ಲಿ ಸಾಗಿದರು. ನೂರಾರು ಭಕ್ತರು ಬಾಯಿಬೀಗ ಹಾಕಿ ಸಿಕೊಂಡು ದೇವಿಯ ಹರಕೆ ತೀರಿಸಿದರು. ತಮಟೆಯ ಸದ್ದಿಗೆ ಬರಡನಪುರ ಗ್ರಾಮಸ್ಥರು ನಂದಿಕಂಬವನ್ನು ಹೊತ್ತು ಕುಣಿದರು. ಮಧ್ಯಾಹ್ನ ಒಂದು ಗಂಟೆಗೆ ಪ್ರಾರಂಭವಾದ ರಥೋತ್ಸವ ಸಂಜೆ 5 ಗಂಟೆಗೆ ದೇವಾಲಯ ಆವರಣ ತಲುಪಿತು. ರಥೋತ್ಸವ ನೋಡಲು ಸುತ್ತಮುತ್ತಲ ಗ್ರಾಮಸ್ಥರು ಆಗಮಿಸಿದ್ದರು. ಹರಕೆ ಹೊತ್ತ ಭಕ್ತರು ಮಜ್ಜಿಗೆ, ಪಾನಕ, ಹಣ್ಣುಗಳು ಮತ್ತು ನೀರಿನ ಬಾಟಲಿಗಳನ್ನು ವಿತರಿಸಿದರು. ಸುಡುಬಿಸಿಲನ್ನು ಲೆಕ್ಕಿಸದೆ ಜನರು ರಥೋ ತ್ಸವದಲ್ಲಿ ಪಾಲ್ಗೊಂಡು ದೇವಿ ಕೃಪೆಗೆ ಪಾತ್ರ ರಾದರು. ರಥೋತ್ಸವ ದೇವಾಲಯ ತಲು ಪುತ್ತಿದ್ದಂತೆಯೇ ಮಹಾಮಂಗಳಾರತಿ ನೆರವೇರಿತು. ಭಕ್ತರು ಮಡೆ ಬೇಯಿಸಿ, ದೇವಿಗೆ ನೈವೇದ್ಯ ಸಮರ್ಪಿಸಿ, ಪೂಜೆ ಸಲ್ಲಿಸಿದರು.


ಸರತಿ ಸಾಲಿನಲ್ಲಿ ನಿಂತು ಭಕ್ತರು ದೇವರ ದರ್ಶನ ಪಡೆದರು. ಮಲೆಯ ಋಷಿ ಕೊಣಪ್ಪ ಸ್ವಾಮಿಯವರ ಶ್ವೇತವಸ್ತ್ರ ಸತ್ತಿಗೆಯನ್ನು ಗ್ರಾಮದಲ್ಲಿ ಮೆರವಣಿಗೆ ಮಾಡಲಾಯಿತು.



ಮೈಸೂರು ತಾಲೂಕು, ಜಯಪುರ ಗ್ರಾಮದಲ್ಲಿ ಗುಜ್ಜಮ್ಮ ತಾಯಿ ಜಾತ್ರಾ ಮಹೋತ್ಸವ ಜರುಗಿದ ಹಿನ್ನೆಲೆಯಲ್ಲಿ ಮೈಸೂರು–ಕೊಡಗು ಲೋಕಸಭಾ ಬಿಜೆಪಿ ಅಭ್ಯರ್ಥಿ ಯದುವೀರ್ ಅವರು ಗ್ರಾಮದ ಬಸವೇಶ್ವರ ಸ್ವಾಮಿ ಮತ್ತು ಗುಜ್ಜಮ್ಮತಾಯಿ ದೇವಾಲಯಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು. ಈ ವೇಳೆ ದೇವಾಲಯ ಪ್ರಧಾನ ಅರ್ಚಕರಾದ ನಾಗರಾಜು, ಕುಮಾರ, ಕೆಂಪರಾಜು, ಯಜಮಾನರಾದ ಮೂಗನಾಯಕ, ಮಲ್ಲಪ್ಪ, ನಾಗಣ್ಣ, ಗ್ರಾಮ ಪಂಚಾಯ್ತಿ ಸದಸ್ಯರಾದ ಎಂ.ನಾಗರಾಜು, ರೇಣುಕಾ, ಗ್ರಾಮದ ಮುಖಂಡರಾದ ದಾರಿಪುರ ಡಿ.ಚಂದ್ರಶೇಖರ್, ಜವರನಾಯಕ ಮತ್ತಿತರರು ಉಪಸ್ಥಿತರಿದ್ದರು.

ಯುಗಾದಿ ಹಬ್ಬಕ್ಕೆ ಮಾಂಸದ ಚೀಟಿ ಹಾಕಿದ್ದವರಿಗೆ ಪಂಗನಾಮ

ಬೆಂಗಳೂರು: ಬೆಂಗಳೂರಿನಲ್ಲಿ ಯುಗಾದಿ ಹಬ್ಬದ ಸಾಮಗ್ರಿ, ಮಾಂಸಕ್ಕಾಗಿ ಚೀಟಿ ಹಾಕಿದ್ದ ಸಾವಿರಾರು ಜನ ಈಗ ಮೋಸ ಹೋಗಿದ್ದಾರೆ. ಯುಗಾದಿ ಹಬ್ಬದ ಮಾಂಸದ ಚೀಟಿ ಹಾಕಿದವರಿಗೆ ಉಂಡೆನಾಮ ಹಾಕಿ ವ್ಯಕ್ತಿಯೊಬ್ಬ ರಾತ್ರೋರಾತ್ರಿ ಮನೆ ಖಾಲಿ ಮಾಡಿದ್ದಾನೆ. ಯುಗಾದಿ ಹಬ್ಬದ ಚೀಟಿ ಮಾಡುತ್ತಿದ್ದ ಪುಟ್ಟಸ್ವಾಮಿ ಎಂಬಾತ ಎಲ್ಲರಿಗೂ ಮೋಸ ಮಾಡಿ ರಾತ್ರೋರಾತ್ರಿ ಮನೆ ಖಾಲಿ ಮಾಡಿದ್ದು, ಈ ಸಂಬಂಧ ಬ್ಯಾಟರಾಯನಪುರ ಠಾಣೆಯಲ್ಲಿ ದೂರು ದಾಖಲು ಮಾಡಲಾಗಿದೆ. ಒಬ್ಬೊಬ್ಬರ ಬಳಿ 4ರಿಂದ 5 ಸಾವಿರ ಹಣ ಪಡೆದು ಮೋಸ ಮಾಡಲಾಗಿದೆ. ಪುಟ್ಟಸ್ವಾಮಿ ಓಡಿ ಹೋಗಿದ್ದಾನೆ ಎಂಬ ವಿಚಾರ ತಿಳಿಯುತ್ತಿದ್ದಂತೆಯೇ ಮೋಸ ಹೋದವರೆಲ್ಲ ಆತನ ಮನೆ ಮುಂದೆ ಜಮಾಯಿಸಿದ್ದಾರೆ. ಕಳೆದ ಎರಡು ವರ್ಷಗಳಿಂದ ಪುಟ್ಟಸ್ವಾಮಿ ಯುಗಾದಿ ಚೀಟಿ ನಡೆಸುತ್ತಿದ್ದ. ಈ ಬಾರಿ ಚೀಟಿ ಸಂಖ್ಯೆಯನ್ನೂ ಹೆಚ್ಚಿಸಿಕೊಂಡು ಕೋಟ್ಯಾಂತರ ರೂ.ಗುಳುಂ ಮಾಡಿದ್ದಾನೆ. ಯುಗಾದಿ ಹತ್ತಿರ ಬರುತ್ತಿದ್ದಂತೆಯೇ ಪುಟ್ಟಸ್ವಾಮಿ ಎಸ್ಕೇಪ್ ಆಗಿದ್ದು, ಹಬ್ಬಕ್ಕೆ ದುಡ್ಡು ಒಂದೇ ಬಾರಿಗೆ ಹೊಂದಿಸೋಕೆ ಆಗಲ್ಲ ಎಂದು ಚೀಟಿ ಹಾಕಿದ್ದ ಜನರಿಗೆ ಈಗ ದಿಕ್ಕೇ ತೋಚದಂತೆ ಆಗಿದೆ.



ಚಾಮುಂಡೇಶ್ವರಿ ನಗರ ಮಂಡಲದ ಬಿಜೆಪಿ ನೂತನ ಯುವ ಮೋರ್ಚಾ ಅಧ್ಯಕ್ಷ ಮಧು ಸೋಮಶೇಖರ್, ನಗರಾಧ್ಯಕ್ಷ ಎಲ್.ನಾಗೇಂದ್ರ ಅವರನ್ನು ಅಭಿನಂದಿಸಿದರು. ಈ ವೇಳೆ ನಗರ ಯುವ ಮೋರ್ಚಾ ಅಧ್ಯಕ್ಷ ರಾಕೇಶ್‌ಗೌಡ, ಪ್ರಧಾನ ಕಾರ್ಯದರ್ಶಿ ಸಚಿನ್, ಮಂಡಲದ ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ಚಂದನ್‌ಗೌಡ, ಸಾಗರ್ ಸಿಂಗ್, ಮುಖಂಡರಾದ ಸೂರ್ಯ, ಶಿವು, ಚೇತನ್ ಉಪಸ್ಥಿತರಿದ್ದರು.

ಕಳೆದ ಬಾರಿಗಿಂತ ಈ ಸಲ ಭಾರೀ ಪ್ರಮಾಣದ ಚುನಾವಣಾ ಅಕ್ರಮ

ಬೆಂಗಳೂರು, ಮಾ.28– ರಾಜ್ಯದಲ್ಲಿ ಕಳೆದ ಲೋಕಸಭಾ ಚುನಾವಣೆಗೆ ಹೋಲಿಸಿದರೆ ಈ ಬಾರಿ ಡಬಲ್ ಪ್ರಮಾಣದಲ್ಲಿ ಚುನಾವಣಾ ಅಕ್ರಮ ಪತ್ತೆಯಾಗಿದೆ.

2019ರ ಲೋಕಸಭಾ ಚುನಾವಣೆ ಘೋಷಣೆಯಾದ ದಿನದಿಂದ ನಾಮಪತ್ರ ಸಲ್ಲಿಕೆಯ ಆರಂಭದವರೆಗೆ 26.54 ಕೋಟಿ ರೂ. ಚುನಾವಣಾ ಅಕ್ರಮ ಪತ್ತೆಯಾಗಿತ್ತು. ಆದರೆ ಈ ಬಾರಿ ಇದೇ ಅವಧಿಯಲ್ಲಿ 55.76 ಕೋಟಿ ರೂ. ಮೌಲ್ಯದ ಚುನಾವಣಾ ಅಕ್ರಮ ಪತ್ತೆಯಾಗಿದೆ. ಈ ಹಿಂದಿನ ಲೋಕಸಭಾ ಚುನಾವಣೆಗಿಂತ ಶೇ.110ರಷ್ಟು ಹೆಚ್ಚು ಅಕ್ರಮ ವರದಿ ಆಗಿದೆ ಎಂದು ರಾಜ್ಯದ ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ಪ್ರಕಟಣೆಯಲ್ಲೇ ಬಹಿರಂಗಗೊಂಡಿದೆ.

ಒಂದೇ ದಿನ 7.20 ಕೋಟಿ ಅಕ್ರಮ ಪತ್ತೆ: ಕಳೆದ 24 ಗಂಟೆಗಳ ಅವಧಿಯಲ್ಲಿ ಚುನಾವಣಾ ನೀತಿ ಸಂಹಿತೆ ಜಾರಿಗೊಳಿಸುವ ತಂಡಗಳು 7.20 ಕೋಟಿ ರೂ. ಮೌಲ್ಯದ ಚುನಾವಣಾ ಅಕ್ರಮವನ್ನು ಪತ್ತೆ ಹಚ್ಚಿವೆ. 1.30 ಕೋಟಿ ರೂ. ನಗದು, 19.44 ಲಕ್ಷ ಉಚಿತ ಉಡುಗೊರೆಗಳು, 1.27 ಕೋಟಿ ರೂ. ಮೌಲ್ಯದ ಮದ್ಯ, 4.96 ಲಕ್ಷ ರೂ. ಮೌಲ್ಯದ ಮಾದಕ ವಸ್ತು, 4.19 ಕೋಟಿ ರೂ. ಮೌಲ್ಯದ ಚಿನ್ನ, 2.47 ಲಕ್ಷ ರೂ. ಮೌಲ್ಯದ ಬೆಳ್ಳಿ ವಸ್ತುಗಳನ್ನು ವಶಕ್ಕೆ ಪಡೆಯಲಾಗಿದೆ.

ಇದರಲ್ಲಿ ಹಾಸನದ ಶ್ರವಣಬೆಳಗೊಳದ ಚೆಕ್‌ಪೋಸ್ಟ್‌ನಲ್ಲಿ 56.89 ಲಕ್ಷ ರೂ ನಗದು, ಚಿತ್ರದುರ್ಗದ ಪಿಳ್ಳೆಕೆರನಹಳ್ಳಿ ಚೆಕ್‌ಪೋಸ್ಟ್‌ನಲ್ಲಿ 20.35 ಲಕ್ಷ ರೂ ನಗದು, ಉಡುಪಿ– ಚಿಕ್ಕಮಗಳೂರು ಕ್ಷೇತ್ರದ ತರೀಕೆರೆಯ ಎಂಸಿ ಹಳ್ಳಿ ಚೆಕ್‌ಪೋಸ್ಟ್‌ನಲ್ಲಿ 4.21 ಕೋಟಿ ರೂ ಮೌಲ್ಯದ ಚಿನ್ನ, ಬೆಳ್ಳಿ, ವಜ್ರವನ್ನು ಪತ್ತೆಯಾಗಿದೆ.

ಮೈಸೂರು ವಕೀಲರ ಸಂಘಕ್ಕೆ ಯದುವೀರ್ ಭೇಟಿ

ಬಿಜೆಪಿ ಅಭ್ಯರ್ಥಿಗೆ ಸಂಪೂರ್ಣ ಬೆಂಬಲ ವ್ಯಕ್ತಪಡಿಸಿದ ವಕೀಲರು

ಮೈಸೂರು, ಮಾ.28(ಜಿಎ)–ಮೈಸೂರಿನ ಕೃಷ್ಣರಾಜ ಬುಲೇವಾರ್ಡ್ ರಸ್ತೆಯ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿರುವ ವಕೀಲರ ಸಂಘಕ್ಕೆ ಭೇಟಿ ನೀಡಿದ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್‌ಗೆ ವಕೀಲರ ಸಂಘದಿಂದ ಅದ್ದೂರಿ ಸ್ವಾಗತ ನೀಡಲಾಯಿತು.

ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ನ್ಯಾಯಾಲಯದ ಆವರಣಕ್ಕೆ ಆಗಮಿಸುತ್ತಿದ್ದಂತೆ ವಕೀಲರು ನಾದಸ್ವರದ ಮೂಲಕ ಸ್ವಾಗತಿಸಿ, ಪಟಾಕಿ ಸಿಡಿಸಿ, ಮೈಸೂರು ಮಹಾರಾಜ ಯದುವೀರ್‌ಗೆ ಜಯವಾಗಲಿ ಎಂಬ ಘೋಷಣೆಗಳೊಂದಿಗೆ ಸಂಘಕ್ಕೆ ಸ್ವಾಗತಿಸಿದರು. ಈ ವೇಳೆ ನ್ಯಾಯಾಲಯದ ಆವರಣದಲ್ಲಿದ್ದ ವಕೀಲರು ಅವರೊಟ್ಟಿಗೆ ಸೆಲ್ಫಿ ಕ್ಲಿಕ್ಕಿಸಿಕೊಂಡು ಹಸ್ತಲಾಘವ ಮಾಡುವ ಮೂಲಕ ತಮ್ಮ ಅಭಿಮಾನ ಪ್ರದರ್ಶಿಸಿದರು.

ನಂತರ ವಕೀಲರ ಸಂಘದಲ್ಲಿ ಆಯೋಜಿಸಿದ್ದ ಕಾರ್ಯಕ್ರಮ ಉದ್ದೇಶಿಸಿ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿ, ನಮ್ಮ ಕುಟುಂಬಕ್ಕೂ ವಕೀಲರಿಗೂ ಅವಿನಾಭಾವ ಸಂಬಂಧವಿದ್ದು, ಅರಮನೆ ಪರಂಪರೆ ಉಳಿಸಿಕೊಳ್ಳಲು ಅವರ ಶ್ರಮ ಹೆಚ್ಚಿದೆ. ಅವರಿಗೆ ಸದಾ ಚಿರಋಣಿಯಾಗಿದ್ದೇನೆ. ಹಾಗೇ ಮೈಸೂರಿನ ಪರಂಪರೆಯನ್ನು, ನ್ಯಾಯಾಂಗ ವ್ಯವಸ್ಥೆಯನ್ನು ಉಳಿಸುತ್ತಿರುವ ನಿಮಗೂ ಸಾಕಷ್ಟು ಸಮಸ್ಯೆಗಳಿವೆ. ಅದನ್ನು ಬಗೆಹರಿಸಲು ನಾನು ನಿಮ್ಮೊಟ್ಟಿಗೆ ಸದಾ ಇರುತ್ತೇನೆ ಎಂದು ಭರವಸೆ ನೀಡಿದರು. ಈ ವೇಳೆ ವಕೀಲರ ರಾಜ್ಯ ಸಂಘದ ಸದಸ್ಯ ಚಂದ್ರಮೌಳಿ ಮಾತನಾಡಿ, ವಕೀಲರ ಸಮುದಾಯಕ್ಕೂ ಅರಮನೆಗೂ ಹಲವಾರು ವರ್ಷಗಳಿಂದ ಉತ್ತಮ ಬಾಂಧವ್ಯವಿದ್ದು, ಎಲ್ಲಾ ವಕೀಲರು ಪಕ್ಷಾತೀತವಾಗಿ ನಿಮಗೆ ಬೆಂಬಲ ಸೂಚಿಸಿದ್ದಾರೆ. ಟಿಕೆಟ್ ಘೋಷಣೆಯಾಗದ ಆರಂಭದಲ್ಲಿ ಮಹಾರಾಜರು ಸಾಮಾನ್ಯರೊಟ್ಟಿಗೆ ಬೆರೆಯುತ್ತಾರಾ ಎಂಬ ಗೊಂದಲಗಳು ಸೃಷ್ಟಿಯಾಗಿತ್ತು. ಆದರೆ, ಯದುವೀರ್ ಅವರ ಹಿನ್ನೆಲೆಯನ್ನು ನೋಡಿದಾಗ ಅವರು ಸಾಮಾನ್ಯರಲ್ಲಿ ಸಾಮಾನ್ಯರು ಎಂದು ತಿಳಿಯುತ್ತದೆ. ಅವರು ಗೆಲ್ಲುವುದು ಖಚಿತವಾಗಿದೆ. ಆದರೆ ಹೆಚ್ಚು ಮತಗಳಿಂದ ಜಯಶೀಲರಾಗಲಿ ಎಂದು ಹಾರೈಸಿದರು.

ಸಂಘದ ಅಧ್ಯಕ್ಷ ಮಹದೇವಸ್ವಾಮಿ ಮಾತನಾಡಿ, ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಅವರು ತಮ್ಮ ಸಂಸದರ ಅನುದಾನದಿಂದ ಹಣ ನೀಡಿದ್ದರಿಂದ ಸಂಘದ ಕಟ್ಟಡ ನಿರ್ಮಾಣವಾಗಿದೆ. ಅವರು ಜನರಿಗೆ ಮಾತು ಕೊಟ್ಟರೇ ಅದನ್ನು ಉಳಿಸಿಕೊಳ್ಳುತ್ತಾರೆ. ಎಂದಿಗೂ ತಪ್ಪುವುದಿಲ್ಲ. ಅವರಂತೆ ಯದುವೀರ್ ಅವರು ಸಾಮಾನ್ಯರಂತೆ ಎಲ್ಲರೊಟ್ಟಿಗೆ ಬೆರೆಯುತ್ತಾರೆ ಎಂದರು. ಕಾರ್ಯಕ್ರಮದಲ್ಲಿ ನೂರಾರು ವಕೀಲರು ಭಾಗವಹಿಸಿದ್ದರು.



ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಮೈಸೂರು ವಕೀಲರ ಸಂಘದ ಕಚೇರಿಗೆ ಗುರುವಾರ ಭೇಟಿ ನೀಡಿದರು.



ಮೈಸೂರು ನಗರ ಬಿಜೆಪಿ ಎಸ್‌ಟಿ ವಿಭಾಗದ ಅಧ್ಯಕ್ಷ, ವಕೀಲ ಪಡುವಾರಹಳ್ಳಿ ಎಂ.ರಾಮಕೃಷ್ಣ ಭಾರತದ ಸಂವಿಧಾನದ ಪ್ರತಿಯನ್ನು ಯದುವೀರ್ ಅವರಿಗೆ ನೀಡಿದರು. ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಮಹದೇವಸ್ವಾಮಿ, ಎಸ್.ಉಮೇಶ್, ಸಿಂಡಿಕೇಟ್ ಸದಸ್ಯರಾದ ಗೋಕುಲ್ ಗೋವರ್ಧನ, ಲಕ್ಷ್ಮಣ್ ಇತರರಿದ್ದರು.

ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು,ಮಾ.28–ಮಾ.29ರಂದು ಬೆಳಗ್ಗೆ 10ರಿಂದ ಸಂಜೆ 5.30 ಗಂಟೆಯವರೆಗೆ ನಿರ್ವಹಣಾ ಕಾಮಗಾರಿ ನಿಮಿತ್ತ ರಾಮಾನುಜ ರಸ್ತೆ 1ರಿಂದ 9ನೇ ಕ್ರಾಸ್‌ವರೆಗೆ, ಹೊಸ ಬಂಡಿಕೇರಿ, ಜೆ.ಎಸ್.ಎಸ್.ಆಸ್ಪತ್ರೆ, ಅಗ್ರಹಾರ, ಬಸವೇಶ್ವರ ರಸ್ತೆ, ಚಾಮುಂಡಿಪುರಂನ ಹಲವು ಭಾಗಗಳು, ತ್ಯಾಗರಾಜ ರಸ್ತೆ, ಚಾಮುಂಡಿಬೆಟ್ಟ ಮತ್ತು ಪಾದ, ಗುಂಡೂರಾವ್ ನಗರ, ದತ್ತನಗರ, ಮುನೇಶ್ವರನಗರ, ಗೌರಿಶಂಕರನಗರ, ನಂಜನ ಗೂಡು ಟೋಲ್ ಗೇಟ್, ತಾವರೆಕೆರೆ, ಜಾಕಿ ಕ್ವಾರ್ಟ್‌ಸ್, ರೇಸ್‌ಕೋರ್ಸ್ ಹಿಂಭಾಗ, ಸಬರ್ಬನ್ ಬಸ್ ನಿಲ್ದಾಣ, ನಜರ್‌ಬಾದ್, ಇಟ್ಟಿಗೆಗೂಡು, ಮೃಗಾಲಯದ ಸುತ್ತ–ಮುತ್ತ, ಸರ್ಕಾರಿ ಅತಿಥಿ ಗೃಹ ಮತ್ತು ಸುತ್ತ–ಮುತ್ತಲಿನ ಪ್ರದೇಶಗಳು, ತಾಲೂಕು ಕಚೇರಿ, ಡಿ.ದೇವರಾಜ ಅರಸು ರಸ್ತೆ, ಬಿ.ಎನ್.ರಸ್ತೆ, ಸಿದ್ದಾರ್ಥನಗರ, ಕುರುಬಾರಹಳ್ಳಿ, ಜೆ.ಸಿ.ನಗರ, ಕೆ.ಸಿ.ನಗರ, ಜೆ.ಎಸ್.ಎಸ್ ಆಯುರ್ವೇದಿಕ್ ಸುತ್ತ–ಮುತ್ತ, ಅರಮನೆ ಸುತ್ತ–ಮುತ್ತಲಿನ ಪ್ರದೇಶಗಳು, ಶ್ರೀ ಹರ್ಷ ರಸ್ತೆ, ಸಯ್ಯಾಜಿರಾವ್ ರಸ್ತೆ, ಇರ್ವಿನ್ ರಸ್ತೆ ಸುತ್ತ–ಮುತ್ತಲಿನ ಪ್ರದೇಶಗಳು, ಧನ್ವಂತರಿ ರಸ್ತೆ ಹಾಗೂ ಶಿವರಾಂಪೇಟೆ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.



ಮೈಸೂರಿನ ಮಹದೇಶ್ವರ ಬಡಾವಣೆಯಲ್ಲಿ ಬಿಜೆಪಿ ಕಾರ್ಯಕರ್ತರು ಭಾರತ್ ಅಕ್ಕಿ ವಿತರಣೆ ಮಾಡಿದರು. ಈ ಸಂದರ್ಭದಲ್ಲಿ ಎಸ್.ಆರ್.ಶಿವಕುಮಾರ್, ಎಸ್‌ಆರ್‌ಎಸ್ ಪದ್ಮ, ಸೌಮ್ಯಗೌಡ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರಿನ ಅಪೋಲೋ ಬಿಜಿಎಸ್ ಆಸ್ಪತ್ರೆ ಆವರಣದಲ್ಲಿ ರಸ್ತೆ ಅಪಘಾತ, ಅಂಗಾಂಗ ದಾನದ ಬಗ್ಗೆ ಜಾಗೃತಿ



ಅಪೋಲೋ ಬಿಜಿಎಸ್ ಆಸ್ಪತ್ರೆ ಆವರಣದಲ್ಲಿ ರಸ್ತೆ ಅಪಘಾತ, ಅಂಗಾಂಗ ದಾನದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು.

ಮೈಸೂರು, ಮಾ.28(ಎಂಕೆ)– ಮೈಸೂರಿನ ಅಪೋಲೋ ಬಿಜಿಎಸ್ ಆಸ್ಪತ್ರೆ ಆವರಣದಲ್ಲಿ ರಸ್ತೆ ಅಪಘಾತ ಹಾಗೂ ಅಂಗಾಂಗ ದಾನದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು. ದ್ವಿಚಕ್ರ ವಾಹನ ಸವಾರರು ಸಂಚಾರ ನಿಯಮಗಳ ಪಾಲನೆ ಜೊತೆಗೆ ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಹೆಲ್ಮೆಟ್ ಜೀವ ಉಳಿಸಲಿದೆ. ಹಾಗೆಯೇ ಅಂಗಾಂಗ ದಾನ ಮಾಡುವ ಮೂಲಕ ಇನ್ನೊಂದು ಜೀವನ್ನು ಉಳಿಸುವ ಜೊತೆಗೆ ಅಂಗಾಂಗ ಪಡೆದವರ ಹೊಸ ಬದುಕಿಗೆ ಬೆಳಕಾಗಬಹುದಾಗಿದೆ ಎಂದು ತಿಳಿಸಲಾಯಿತು. ಇದೇ ವೇಳೆ ಹಲವರಿಗೆ ಹೆಲ್ಮೆಟ್ ವಿತರಿಸಲಾಯಿತು. ಕೆ.ಆರ್.ಸಂಚಾರ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಹೆಚ್.ಪಿ.ಶರತ್‌ಕುಮಾರ್, ಸಬ್ ಇನ್ಸ್‌ಪೆಕ್ಟರ್ ಮಹಾವೀರ ಬಿಳಗಿ, ಅಪೋಲೋ ಬಿಜಿಎಸ್ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಅಮನ್ ನಾಯಕ್, ಗ್ಯಾಸ್ಟ್ರೋಎಂಟರಾಲಜಿಸ್ಟ್ ವಿಭಾಗದ ಮುಖ್ಯಸ್ಥ ಡಾ.ರಾಜ್ ಕುಮಾರ್ ವಾದ್ವಾ, ಹೃದ್ರೋಗ ತಜ್ಞ ಡಾ.ಅರುಣ್ ಶ್ರೀನಿವಾಸ್, ನೆಫ್ರಾಲಜಿಸ್ಟ್ ಡಾ.ಶ್ರೀನಿವಾಸ್ ನಲ್ಲೂರು, ಡಾ.ಜಯಂತ್ ರೆಡ್ಡಿ, ಡಾ.ಸಾಗರ್ ನಾರಾಯಣ್, ಡಾ.ಶಿವಕುಮಾರ್ ಬಿ. ಬಸವರಡ್ಡರ್, ಎನ್.ಜಿ.ಭರತೀಶ ರೆಡ್ಡಿ ಮತ್ತಿತರರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

29.3.2024 ಶುಕ್ರವಾರ, ಮಳೆ ನಕ್ಷತ್ರ: ಉತ್ತರಾಭಾದ್ರ 17.03.2024ರಿಂದ 30.03.2024
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಫಾಲ್ಗುಣ ಮಾಸ, ಕೃಷ್ಣ ಪಕ್ಷ,
ತಿಥಿ: ಚೌತಿ, ನಕ್ಷತ್ರ: ವಿಶಾಖ, ರಾಹುಕಾಲ: ಬೆಳಗ್ಗೆ 10.30 ರಿಂದ 12 ರವರೆಗೆ

■ **ರಾಮ್‌ಸನ್ಸ್ ಬೊಂಬೆ ಮನೆ:** ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ ಸಂಜೆ 7 ರವರೆಗೆ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಶ್ರವಣ ಸಮಸ್ಯೆಗಳಿಗೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ, ಬೆಳಗ್ಗೆಯಿಂದ.

■ **ದೇಸಿರಂಗ ಸಾಂಸ್ಕೃತಿಕ ಟ್ರಸ್ಟ್, ಮಹಾರಾಣಿ ಕಲಾ ಕಾಲೇಜು, ಪತ್ರಿಕೋದ್ಯಮ ವಿಭಾಗ:** ಆಂದೋಲನ ದಿನಪತ್ರಿಕೆ ಸಂಸ್ಥಾಪಕರಾದ ರಾಜಶೇಖರ ಕೋಟಿ ಅವರ ನೆನಪಿನಲ್ಲಿ ಕುರಿತು ವಿಚಾರ ಸಂಕಿರಣ ಮತ್ತು ಸಂವಾದ, ಉದ್ಘಾಟನೆ: ಹಿರಿಯ ಪತ್ರಕರ್ತ ಅಂಶಿಪ್ರಸನ್ನಕುಮಾರ್, ಅಧ್ಯಕ್ಷತೆ: ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಮಾಜಿ ಕಾರ್ಯದರ್ಶಿ ಎಂ.ಸುಬ್ರಹ್ಮಣ್ಯ, ಪತ್ರಕರ್ತ ಕೆ.ನರಸಿಂಹಮೂರ್ತಿ ಅವರಿಂದ ದುರಿತ ಕಾಲದ ವರದಿಗಾರಿಕೆ ಕುರಿತು ಉಪನ್ಯಾಸ, ಪತ್ರಕರ್ತ ಎಂ.ಆರ್.ಸತ್ಯನಾರಾಯಣ ಅವರಿಂದ ಮಾಧ್ಯಮ ಕಲಿಕೆ–ಉದ್ಯೋಗಾವಕಾಶಗಳು ಕುರಿತು ಉಪನ್ಯಾಸ, ಪತ್ರಕರ್ತ ವಿನೋದ್‌ಸ್ವಾಮಿ ಎಂ.ಮಾದಾಪುರ ಅವರಿಂದ ಚುನಾವಣೆ, ವರದಿಗಾರರು, ವರದಿಗಾರಿಕೆ ಕುರಿತು ಭಾಷಣ, ಪತ್ರಕರ್ತ ವಿನೋದ್ ಮಹಾದೇವಪುರ, ಹಿರಿಯ ವರದಿಗಾರ ಕಾರ್ತಿಕ್‌ರಿಂದ ಭಾಷಣ, ಸ್ಥಳ: ಶ್ರೀರಂಗ ವೇದಿಕೆ, ರಂಗಾಯಣ, ಬೆಳಗ್ಗೆ 10.30ಕ್ಕೆ.

■ **ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು, ಮೈಸೂರು ನಗರ ಘಟಕ, ಕದಳಿ ಮಹಿಳಾ ವೇದಿಕೆ, ಮೈಸೂರು:** ವಿಶ್ವ ಮಹಿಳಾ ದಿನಾಚರಣೆ, ಉದ್ಘಾಟನೆ: ವಿಶ್ರಾಂತ ಪ್ರಾಂಶುಪಾಲ ಪ್ರೊ.ಎಂ.ಕೃಷ್ಣೇಗೌಡ, ಮುಖ್ಯ ಅತಿಥಿಗಳು: ಪೊಲೀಸ್ ಅಧೀಕ್ಷಕರಾದ ಡಾ.ಬಿ.ಟಿ.ಕವಿತಾ, ಸನ್ಮಾನಿತರು: ಕರ್ನಾಟಕ ರಾಜ್ಯ ಮುಕ್ತ ವಿವಿ ಪ್ರಾಧ್ಯಾಪಕಿ ಡಾ.ಜ್ಯೋತಿ ಶಂಕರ್, ಉಪಸ್ಥಿತರು: ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು, ಮೈಸೂರು ನಗರ ಘಟಕ ಅಧ್ಯಕ್ಷ ಮ.ಗು.ಸದಾನಂದಯ್ಯ, ಅಧ್ಯಕ್ಷತೆ: ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಶಾರದಾ ಶಿವಲಿಂಗಸ್ವಾಮಿ, ಸ್ಥಳ: ಶ್ರೀ ರಾಜೇಂದ್ರ ಭವನ, ಜೆಎಸ್‌ಎಸ್ ಆಸ್ಪತ್ರೆ ಆವರಣ, ಬೆಳಗ್ಗೆ 11ಕ್ಕೆ.

■ **ನುಡಿರಂಗ ಫೌಂಡೇಷನ್, ಕನ್ನಡ ವಿಕಾಸ ಶೈಕ್ಷಣಿಕ ಸಾಮಾಜಿಕ ಸಾಂಸ್ಕೃತಿಕ ಸಂಸ್ಥೆ :** ಬೆಳಕಿನೆಡೆಗೆ ರಂಗಭೂಮಿ ಮತ್ತು ಲಲಿತ ಕಲೆಗಳ ಬೆಳಕು ಮತ್ತು ಶಬ್ದ ತಂತ್ರಗಳ ಕಾರ್ಯಾಗಾರ, ಪ್ರಸ್ತಾವನೆ : ಶ್ರೀಮತಿ ನುಡಿ ಸುದರ್ಶನ, ಉದ್ಘಾಟನೆ : ರಂಗಕರ್ಮಿ ಮೈಮ್ ರಮೇಶ್, ಉಪಸ್ಥಿತರು : ಎಚ್.ಜಿ. ಕೃಷ್ಣಪ್ಪ, ಶ್ರೀಮತಿ ಸವಿತಾ ಪ. ಮಲ್ಲೇಶ್, ಅಧ್ಯಕ್ಷತೆ : ನುಡಿರಂಗ ಅಧ್ಯಕ್ಷ ಸ.ರ. ಸುದರ್ಶನ, ಸ್ಥಳ: ರಮಾಗೋವಿಂದ ರಂಗಮಂದಿರ, ನೃಪತುಂಗ ಕನ್ನಡ ಶಾಲೆ ಆವರಣ, ರಾಮಕೃಷ್ಣನಗರ, ಬೆಳಗ್ಗೆ 11ಕ್ಕೆ.

■ **ನೇಗಿಲಯೋಗಿ ಮಹಿಳೆಯರ ಕ್ಷೇಮಾಭಿವೃದ್ಧಿ ಸಂಘ, ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್:** ವಿಶ್ವ ಮಹಿಳಾ ದಿನಾಚರಣೆ, ಅಧ್ಯಕ್ಷತೆ: ನೇಗಿಲಯೋಗಿ ಮಹಿಳೆಯರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷೆ ಜೆ.ಶೋಭ ರಮೇಶ್, ಉದ್ಘಾಟನೆ : ಕಾವೇರಿ ಹಾಸ್ಪಿಟಲ್ ಮುಖ್ಯ ಸಲಹೆಗಾರರಾದ ಡಾ.ಸರಳ ಚಂದ್ರಶೇಖರ್, ಮುಖ್ಯ ಅತಿಥಿಗಳು: ಕರ್ನಾಟಕ ಲೆಕ್ಕ ಪರಿಶೋಧನೆ ಹಾಗೂ ಲೆಕ್ಕಪತ್ರ ಇಲಾಖೆ ಉಪನಿರ್ದೇಶಕಿ ಐ.ಎಂ.ಸವಿತಾ, ಕರಾಮುವಿವಿ ಸಹಾಯಕ ಪ್ರಾಧ್ಯಾಪಕಿ ಜಾಹ್ನವಿ, ಪೊಲೀಸ್ ಇನ್ಸ್‌ಪೆಕ್ಟರ್ ವಿ.ಡಿ.ಮಮತಾ, ಸ್ಥಳ: ನೇಗಿಲಯೋಗಿ ಮರುಳೇಶ್ವರ ಸೇವಾ ಭವನ, ಹೊಸ ನ್ಯಾಯಾಲಯದ ಎದುರು, ಜಯನಗರ, ಬೆಳಗ್ಗೆ 11ಕ್ಕೆ.

■ **ಮೈಸೂರು ಕನ್ನಡ ವೇದಿಕೆ:** ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ, ಸಾಧಕ ಮಹಿಳೆಯರಿಗೆ ಅಹಲ್ಯ ಬಾಯಿ ಹೋಲ್ಕರ್ ಪ್ರಶಸ್ತಿ ಪ್ರದಾನ ಸಮಾರಂಭ, ಉದ್ಘಾಟನೆ : ಸಹಾಯಕ ಸರ್ಕಾರಿ ಅಭಿಯೋಜಕರಾದ ಎ.ಐ. ದಿವ್ಯಾ, ಪ್ರಧಾನ ಭಾಷಣ : ಹಿರಿಯ ಸಾಹಿತಿ ಡಾ. ಕೆ. ಲೀಲಾ ಪ್ರಕಾಶ್, ಸನ್ಮಾನಿಸುವವರು : ಪತ್ರಕರ್ತೆ ರಶ್ಮಿ ಕೋಟಿ, ಉಪಸ್ಥಿತರು : ಭಾರತಿ, ನಾಲಾಬೀದಿ ರವಿ, ಅಧ್ಯಕ್ಷತೆ : ಮೈಸೂರು ಕನ್ನಡ ವೇದಿಕೆ ಅಧ್ಯಕ್ಷ ಎಸ್. ಬಾಲಕೃಷ್ಣ, ಸ್ಥಳ: ಪತ್ರಕರ್ತರ ಭವನ, ಬೆಳಗ್ಗೆ 11.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಬಣ್ಣದ ಬಾನಾಡಿಗಳು–ಬಾನುಲಿ ಸರಣಿ, ರಚನೆ– ಲೀಲಾ ಅಪ್ಪಾಜಿ, ಪ್ರಸ್ತುತಿ–ಜಿ.ಶಾಂತಕುಮಾರ್, 6.40 ಕರಾಮುವಿವಿ ಮುಕ್ತವಾಣಿ–ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾನಿಲಯದ ಅಧ್ಯಯನ ಅವಕಾಶಗಳನ್ನು ಕುರಿತ ಪ್ರಾಯೋಜಿತ ಬಾನುಲಿ ಸರಣಿ. ಭಾಗವಹಿಸುತ್ತಾರೆ ಡೀನ್ ಎಂ.ರಾಮನಾಥ ನಾಯ್ಡು, ಪ್ರಸ್ತುತಿ–ಎನ್.ಕೇಶವಮೂರ್ತಿ, 6.50 ರೈತರಿಗೆ ಸಲಹೆ, 9.10 ನಮ್ಮ ಆರೋಗ್ಯ–ವಿಶ್ವ ಆಟಿಸಂ ಜಾಗೃತಿ ದಿನಾಚರಣೆ ಸಂಬಂಧವಾಗಿ ಆಟಿಸಂ ಕಾಯಿಲೆಯ ಲಕ್ಷಣಗಳು ಮತ್ತು ಚಿಕಿತ್ಸೆ ಕುರಿತು ಮಾತುಕತೆಯಲ್ಲಿ ಭಾಗವಹಿಸುತ್ತಾರೆ ಡಾ.ಶಶಿಕಿರಣ್ ಕೆ.ಬಿ., 10.00 ಕೆ.ಸತ್ಯನಾರಾಯಣ–ಕೀ ಬೋರ್ಡ್, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30 ದೇವರ ನಾಮ, 12.45 ಕಾದಂಬರಿ ವಿಹಾರ–ನಾ ಕಸ್ತೂರಿ ಅವರ ರಂಗನಾಯಕಿ ಕಾದಂಬರಿಯ ಬಾನುಲಿ ಓದು, ಪ್ರಸ್ತುತಿ–ಉಮೇಶ್ ಎಸ್.ಎಸ್., 1.20 ಭಾವಗೀತೆ–ಅಕ್ಷತಾ ಅದ್ದೋನಿ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 3.00 ದ್ವಾರಂ ವೆಂಕಟಸ್ವಾಮಿ ನಾಯ್ಡು–ವಯೋಲಿನ್, 4.00 ಮಹಿಳಾರಂಗ–ಆಕಾಶವಾಣಿ ಅಡುಗೆ ಮನೆ, ಪ್ರಸ್ತುತಿ– ಕೆ.ಬಿ.ಮೀನಾ, 4.30 ವೃತ್ತಿ ಮಾರ್ಗದರ್ಶನ–ಆರ್ಕಿಟೆಕ್ಚರ್, ಪ್ಲಾನಿಂಗ್ ಮತ್ತು ಡಿಸೈನ್ ವಿಷಯಗಳಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು ಕುರಿತು ಪ್ರೊ.ಸಪ್ನಾ ಶಿವಕುಮಾರ್ ಅವರೊಂದಿಗೆ ಮಾತುಕತೆ, 5.45 ಕರಾಮುವಿವಿ ಮುಕ್ತವಾಣಿ–ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಅಧ್ಯಯನ ಅವಕಾಶಗಳನ್ನು ಕುರಿತ ಪ್ರಾಯೋಜಿತ ಕೊಂಡೇನಾಳು ನಾಟಿ ಕೋಳಿ ನಂಜಮ್ಮ, ರಚನೆ–ಡಾ.ಜಿ.ಬಿ.ಮುರಳೀಧರ, ನಿರ್ಮಾಣ– ಪ್ರಭುಸ್ವಾಮಿ ಮಳೀಮಠ, 8.00 ಸಂಧ್ಯಾರಾಗ–ಹಿರಿಯ ಗಾಂಧೀವಾದಿ ಟಿ.ಜಿ. ಸತ್ಯನಾರಾಯಣ ಮತ್ತು ಶಶಿರೇಖ ಸತ್ಯನಾರಾಯಣ ಅವರೊಂದಿಗೆ ಆತ್ಮೀಯ ಮಾತುಕತೆ, 9.30 ಅರುಣ ಸಾಯಿರಾಂ–ಹಾಡುಗಾರಿಕೆ, 10.00 ಹಳ್ಳಿ ಹಾಡು, ಪ್ರಸ್ತುತಿ–ಡಾ.ಮೈಸೂರು ಉಮೇಶ್, 10.30 ಸವಿನೆನಪು

■ **ಜಿಲ್ಲಾ ಗೃಹರಕ್ಷಕ ದಳ, ಮೈಸೂರು ಜಿಲ್ಲೆ:** ಗೃಹ ರಕ್ಷಕರ ಮೂಲ ತರಬೇತಿ ಶಿಬಿರದ 1ನೇ ಬ್ಯಾಚಿನ ಸಮಾರೋಪ ಸಮಾರಂಭ, 2ನೇ ಬ್ಯಾಚಿನ ಉದ್ಘಾಟನಾ ಸಮಾರಂಭ, ಮುಖ್ಯ ಅತಿಥಿಗಳು : ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ನಗರ ಪೊಲೀಸ್ ಆಯುಕ್ತ ಬಿ.ರಮೇಶ್, ಪೊಲೀಸ್ ಅಧೀಕ್ಷಕಿ ಸೀಮಾ ಲಾಟ್ಕರ್, ಎಎಸ್‌ಪಿ ಡಾ.ಬಿ.ಎನ್.ನಂದಿನಿ, ಸಾಹಿತಿ ಪ್ರೊ.ಎನ್.ಆರ್.ಶಿವರಾಂ, ಜಿಲ್ಲಾ ಗೃಹರಕ್ಷಕ ದಳದ ಎಂ.ಆರ್. ಚಂದನ್, ಎಸ್.ಮಂಜುನಾಥ್, ಎಂ.ಎನ್.ವಿಶ್ವನಾಥ್, ಅಧ್ಯಕ್ಷತೆ: ಜಿಲ್ಲಾ ಗೃಹ ರಕ್ಷಕ ದಳದ ಸಮಾದೇಷ್ಟರಾದ ಡಾ.ಎಂ.ಕಾಂತರಾಜು, ಸ್ಥಳ: ಡಿಎಆರ್ ಸಮುದಾಯ ಭವನ, ಜ್ಯೋತಿನಗರ, ಸಂಜೆ 4ಕ್ಕೆ.

■ **ಶಂಕರ ಜಯಂತಿ ಸಭಾ, ಸರಸ್ವತಿಪುರಂ ಕನ್ನಡ ಗೆಳೆಯರ ಬಳಗ:** ಅಭಿನಂದನಾ ಸಮಾರಂಭ, ಉದ್ಘಾಟನೆ: ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಸನ್ಮಾನಿತರು: ಶಿಲ್ಪಿ ಅರುಣ್ ಯೋಗಿರಾಜ್, ಅಧ್ಯಕ್ಷತೆ: ಮಾಜಿ ಸಚಿವ ಸಾ.ರಾ.ಮಹೇಶ್, ಮುಖ್ಯ ಅತಿಥಿಗಳು: ಮಾಜಿ ಶಾಸಕ ಎಲ್.ನಾಗೇಂದ್ರ, ಸ್ಥಳ: ತೆಂಗಿನತೋಪು ರಾಮಮಂದಿರ, ಸರಸ್ವತಿಪುರಂ, ಸಂಜೆ 4.30ಕ್ಕೆ.

■ **ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ, ವಿಪ್ರ ಸಹಾಯವಾಣಿ :** ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ವಿಪ್ರ ಮಹಿಳಾ ರತ್ನ ಪ್ರಶಸ್ತಿ ಪ್ರದಾನ ಸಮಾರಂಭ, ಮುಖ್ಯ ಅತಿಥಿಗಳು : ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ. ಪ್ರಕಾಶ್, ಹಿರಿಯ ಸಮಾಜ ಸೇವಕ ಡಾ. ಕೆ. ರಘುರಾಮ್ ವಾಜಪೇಯಿ, ಸುಗಂಧ ದ್ರವ್ಯಗಳ ತಯಾರಕರಾದ ಜ್ಞಾನವಿಮೂರ್ತಿ, ಅಂಕಣಕಾರರಾದ ರೂಪ ಅಯ್ಯರ್, ಹೊಯ್ಸಳ ಕನ್ನಡ ಸಂಘದ ಅಧ್ಯಕ್ಷ ಕೆ.ಆರ್. ಸತ್ಯನಾರಾಯಣ್, ಹೋಟೆಲ್ ಮಾಲೀಕರ ಸಂಘದ ರಾಜ್ಯ ಉಪಾಧ್ಯಕ್ಷ ರವಿಶಾಸ್ತ್ರಿ, ವಿಪ್ರ ಮಹಿಳಾ ಸಂಗಮದ ಅಧ್ಯಕ್ಷೆ ಡಾ. ಲಕ್ಷ್ಮೀದೇವಿ, ಸ್ಥಳ: ಕೆ.ವಿ.ಆರ್. ವೆಡ್ಡಿಂಗ್ ಬೆಲ್ಸ್, ವಿಶ್ವೇಶ್ವರನಗರ, ಸಂಜೆ 5ಕ್ಕೆ.

■ **ಚಾಮರಾಜೇಶ್ವರಿ ಅಕ್ಕನ ಬಳಗ :** ಉದ್ಘಾಟನಾ ಸಮಾರಂಭ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಅಧ್ಯಕ್ಷತೆ : ಶರಣ ಸಾಹಿತ್ಯ ಪರಿಷತ್, ಮೈಸೂರು ನಗರ ಘಟಕ ಅಧ್ಯಕ್ಷ ಮ.ಗು. ಸದಾನಂದಯ್ಯ, ಮುಖ್ಯ ಅತಿಥಿಗಳು : ವಕೀಲರಾದ ಶ್ರೀಮತಿ ಸುಮನಾ, ಉಪಸ್ಥಿತರು : ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಶ್ರೀಮತಿ ಶಾರದಾ ಶಿವಲಿಂಗಸ್ವಾಮಿ, ಉಪಸ್ಥಿತರು : ಗಾಯಕಿ ವಿದುಷಿ ಪಾವನಿ ಭಾರದ್ವಾಜ್, ಶ್ರೀಮತಿ ವರ್ಷ ಶ್ರೀಕಂಠಸ್ವಾಮಿ, ಸ್ಥಳ: ನವಜ್ಯೋತಿ ಸಭಾಂಗಣ, ಜೆಎಸ್‌ಎಸ್ ಮಹಿಳಾ ಕಾಲೇಜು, ಸರಸ್ವತಿಪುರಂ, ಸಂಜೆ 5ಕ್ಕೆ.

■ **ಗಾನಭಾರತೀ :** ಆರ್. ಸುಂದರಾಚಾರ್ ಮತ್ತು ಸರಸ್ವತಿರಾವ್ ಸಂಸ್ಮರಣ ಸಂಗೀತ ಕಛೇರಿ, ವಿದ್ವಾನ್ ಎ.ಪಿ. ಶ್ರೀನಿವಾಸ್–ಪಿಟೀಲು, ವಿದುಷಿ ಡಾ. ಎ.ವಿ. ಸಹನಾ–ವೀಣಾವಾದನ, ವಿದ್ವಾನ್ ಅರ್ಜುನ್ ಕುಮಾರ್–ಮೃದಂಗ, ವಿದ್ವಾನ್ ಜಿ.ಎಸ್. ರಾಮಾನುಜನ್–ಘಟಂ, ಸ್ಥಳ: ವೀಣೆ ಶೇಷಣ್ಣ ಭವನ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ, ಸಂಜೆ 6ಕ್ಕೆ.

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 29 ಶುಕ್ರವಾರ 2024

ಸಂಪುಟ: 44 | ಸಂಚಿಕೆ: 340 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಕೆಆರ್‌ಎಸ್ ಸುತ್ತಮುತ್ತ ಕಲ್ಲು ಗಣಿಗಾರಿಕೆ: ಜಲಾಶಯಗಳ ಸುರಕ್ಷಿತ ಸಮಿತಿ ನಿರ್ಧಾರವೇ ಅಂತಿಮ

■ ರಾಜ್ಯ ಹೈಕೋರ್ಟ್ ಆದೇಶ ■ ಇದರ ಬಗ್ಗೆ ತೀರ್ಮಾನಿಸಲು ಕೋರ್ಟ್ ತಜ್ಞ ಅಲ್ಲ

ಬೆಂಗಳೂರು, ಮಾ.28– ಕೆಆರ್‌ಎಸ್ ಜಲಾಶಯದ ಸುತ್ತಲಿನ 20 ಕಿ.ಮೀ ವ್ಯಾಪ್ತಿಯಲ್ಲಿ ಹಾಗೂ ಅದರಾಚೆಗೂ ಯಾವುದೇ ಕಲ್ಲು ಗಣಿಗಾರಿಕೆ ಹಾಗೂ ಸ್ಫೋಟಕ ಚಟುವಟಿಕೆ ಸಂಬಂಧ ಕರ್ನಾಟಕ ರಾಜ್ಯ ಜಲಾಶಯಗಳ ಸುರಕ್ಷಿತ ಸಮಿತಿ ತೀರ್ಮಾನವೇ ಅಂತಿಮ ಎಂದು ಹೈಕೋರ್ಟ್ ಆದೇಶಿಸಿದೆ.

ಕರ್ನಾಟಕ, ತಮಿಳುನಾಡು, ಪುದುಚೇರಿ ಹಾಗೂ ಕೇರಳ ರಾಜ್ಯಗಳಿಗೆ ನೀರುಣಿಸುವ ಜೀವನದಿಯಾದ ಕಾವೇರಿ ನದಿಗೆ ಕಟ್ಟಲಾಗಿರುವ ಕೆಆರ್‌ಎಸ್ ಅಣೆಕಟ್ಟೆಗೆ ಕಿಂಚಿತ್ತೂ ಧಕ್ಕೆಯಾಗದಂತೆ ನೋಡಿಕೊಳ್ಳಬೇಕಾದ ತುರ್ತು ಹೆಚ್ಚಿದೆ. ಕೆಆರ್‌ಎಸ್ ಸುತ್ತಮುತ್ತಲ ಪ್ರದೇಶದಲ್ಲಿ ಯಾವುದೇ ರೀತಿಯ ಗಣಿಗಾರಿಕೆ ಅತ್ಯಂತ ಅಪಾಯಕಾರಿ ಎಂದು ನ್ಯಾಯಾಲಯ ಅತೀವ ಕಾಳಜಿ ವ್ಯಕ್ತಪಡಿಸಿದೆ.

ಜಲಾಶಯದ ಸುತ್ತಲಿನ 20 ಕಿ.ಮೀ ವ್ಯಾಪ್ತಿಯಲ್ಲಿ ಹಾಗೂ ಅದರಾಚೆಗೂ ಯಾವುದೇ ಕಲ್ಲು ಗಣಿಗಾರಿಕೆ ಹಾಗೂ ಸ್ಫೋಟಕ ಚಟುವಟಿಕೆಗಳಿಗೆ ಸಂಬಂಧಿಸಿದ ತಕರಾರುಗಳಿಗೆ ಪರಿಹಾರ ಪಡೆಯಲು, ಕರ್ನಾಟಕ ರಾಜ್ಯ ಜಲಾಶಯಗಳ ಸುರಕ್ಷಿತ ಸಮಿತಿಯ ಮುಂದೆಯೇ ಮನವಿ ಸಲ್ಲಿಸಬೇಕು. ಈ ವಿಚಾರದಲ್ಲಿ ಸಮಿತಿಯ ತೀರ್ಮಾನವೇ ಅಂತಿಮ ಎಂದು ಮುಖ್ಯ ನ್ಯಾಯಮೂರ್ತಿ ಎನ್.ವಿ.ಅಂಜಾರಿಯಾ ಹಾಗೂ ನ್ಯಾಯಮೂರ್ತಿ ಕೃಷ್ಣ ಎಸ್.ದೀಕ್ಷಿತ್ ಒಳಗೊಂಡ ವಿಭಾಗೀಯ ನ್ಯಾಯಪೀಠ ಆದೇಶ ನೀಡಿದೆ.



ಅಣೆಕಟ್ಟೆಗೆ ಏನಾದರೂ ಆದರೆ ಗತಿಯೇನು? ಕೆಆರ್‌ಎಸ್ ಸುತ್ತಮುತ್ತಲ ಪ್ರದೇಶದಲ್ಲಿ ಯಾವುದೇ ಗಣಿಗಾರಿಕೆಯ ಚಟುವಟಿಕೆಗಳು ಅಪಾಯ ತಂದೊಡ್ಡಬಲ್ಲವು. ಇಂತಹ ಚಟುವಟಿಕೆಗಳ ಬಗ್ಗೆ ಉಂಟಾಗುವ ತಕರಾರುಗಳನ್ನು ಈಗಾಗಲೇ ಶಾಸನಾತ್ಮಕವಾಗಿ ರೂಪುಗೊಂಡಿರುವ ತಜ್ಞರ ಸಮಿತಿಯೇ ಪರಾಮರ್ಶಿಸಬೇಕು. ಅದು ಯಾವುದೇ ಕ್ರಮ ಕೈಗೊಳ್ಳಲು ಯುಕ್ತವಿದೆ. ಈ ವಿಷಯದಲ್ಲಿ ತೀರ್ಮಾನ ಪ್ರಕಟಿಸಲು ಕೋರ್ಟ್ ಏನೂ ತಜ್ಞ ಅಲ್ಲ ಎಂದು ನ್ಯಾಯಪೀಠ ಸ್ಪಷ್ಟಪಡಿಸಿದೆ. ನಿಮ್ಮ ಮನವಿಯನ್ನು ತಜ್ಞರ ಸಮಿತಿಯ ಮುಂದೆಯೇ ಸಲ್ಲಿಸಿ ಎಂದು ಅರ್ಜಿದಾರರಿಗೆ ನಿರ್ದೇಶಿಸಿ, ವಿಲೇವಾರಿ ಮಾಡಿತು. ಇದಕ್ಕೆ ಪ್ರತಿಯಾಗಿ ಅರ್ಜಿದಾರರ ಪರ ಹಿರಿಯ ವಕೀಲ ಸಂದೇಶ್ ಎಸ್. ಚೌಟ, ಅರ್ಜಿಯನ್ನು ಇಂತಿಷ್ಟೇ ಅವಧಿಯಲ್ಲಿ ಇತ್ಯರ್ಥಗೊಳಿಸುವಂತೆ ಸಮಯ ಮಿತಿ ವಿಧಿಸಿ ಎಂದು ಕೋರಿದರು. ಇದನ್ನು ನಿರಾಕರಿಸಿದ ನ್ಯಾಯಪೀಠ, ಗಡುವಿಗೆ ಸಮಿತಿಯನ್ನೇ ಕೇಳಿಕೊಳ್ಳಿ. ನಾವು ವಿಧಿಸಲು ಆಗುವುದಿಲ್ಲ. ನಾವೆಲ್ಲಾ ಸಮಿತಿಯನ್ನು ಗೌರವಿಸಬೇಕು ಎಂದು ಹೇಳಿತು. ಅರ್ಜಿದಾರರ ಪರ ವಿಕ್ರಮ ಉನ್ನಿ ಬಾಲಕೃಷ್ಣ ವಕಾಲತ್ತು ವಹಿಸಿದ್ದರು. ರಾಜ್ಯ ಸರ್ಕಾರದ ಪರ ಎಸ್.ಎಸ್.ಮಹೇಂದ್ರ ವಾದ ಮಂಡಿಸಿದರು.

ಪ್ರಕರಣವೇನು: ಮಂಡ್ಯ ಜಿಲ್ಲೆ ಪಾಂಡವಪುರ ತಾಲೂಕಿನ ಕನಗನಮರಡಿ ಗ್ರಾಮದ ಮಂಚಮ್ಮದೇವಿ ಸ್ಟೋನ್ ಕ್ರಷರ್ ಹಾಗೂ ಎಂ.ಸ್ಯಾಂಡ್ ಘಟಕಕ್ಕೆ ಜಿಲ್ಲಾ ಸ್ಟೋನ್ ಕ್ರಷರ್ ಪರವಾನಗಿ ಮತ್ತು ನಿಯಂತ್ರಣ ಪ್ರಾಧಿಕಾರವು 2024ರ ಜನವರಿ 20ರಂದು ನೋಟಿಸ್ ನೀಡಿರುವ ಕಾರಣ ಘಟಕದ ಚಟುವಟಿಕೆ ಸ್ಥಗಿತಗೊಳಿಸಲಾಗಿದೆ. ಇದನ್ನು ಪ್ರಶ್ನಿಸಿ ಮಾಲೀಕ ವೈ.ಬಿ.ಅಶೋಕ್‌ಗೌಡ ಪಟೇಲ್ ಹೈಕೋರ್ಟ್ ಮೆಟ್ಟಿಲೇರಿದ್ದಾರೆ. ನಮ್ಮದು ಕೇವಲ ಕ್ರಷರ್ ಮತ್ತು ಎಂ.ಸ್ಯಾಂಡ್ ಘಟಕವಾಗಿದ್ದು ಗಣಿಗಾರಿಕೆಗೆ ಹೊಂದಿಕೊಂಡ ಇತರೆ ಯಾವುದೇ ಕಲ್ಲು ಸ್ಫೋಟಿಸುವ ಅಥವಾ ನಿರ್ಬಂಧಿತ ಚಟುವಟಿಕೆಗಳನ್ನು ಕೈಗೊಳ್ಳುತ್ತಿಲ್ಲ. ನಾವು ಕೆಆರ್‌ಎಸ್ ಅಣೆಕಟ್ಟಿನ 20 ಕಿ.ಮೀ. ಸುತ್ತಳತೆಯ ವ್ಯಾಪ್ತಿ ಪ್ರದೇಶದಿಂದ ಹೊರಗಿದ್ದೇವೆ. ಆದರೂ, ಘಟಕದ ಕಾನೂನುಬದ್ಧ ಚಟುವಟಿಕೆಗಳಿಗೆ ಅಡ್ಡಿ ಉಂಟುಮಾಡಲಾಗಿದೆ. ಚಟುವಟಿಕೆ ಪುನರಾರಂಭಕ್ಕೆ ನಿರ್ದೇಶಿಸಬೇಕು ಎಂದು ಅರ್ಜಿದಾರ ಮನವಿ ಮಾಡಿದ್ದರು.




ಪ್ರಧಾನಿ ಮೋದಿ, ಗೃಹ ಸಚಿವ ಅಮಿತ್ ಷಾ, ಉತ್ತರ ಪ್ರದೇಶ ಸಿಎಂ ಯೋಗಿ ಆದಿತ್ಯನಾಥ

ರಾಜ್ಯದಲ್ಲಿ ಪ್ರಚಾರ

● ಸ್ಟಾರ್ ಪ್ರಚಾರಕರ ಪಟ್ಟಿಯಲ್ಲಿ ಹೆಚ್.ಡಿ.ದೇವೇಗೌಡರು, ಕುಮಾರಸ್ವಾಮಿ ಹೆಸರು
● ಎರಡು ವೇದಿಕೆಯಲ್ಲಿ ಪ್ರಧಾನಿ ಮೋದಿಯೊಂದಿಗೆ ದೇವೇಗೌಡರು ಭಾಗಿ


ನರೇಂದ್ರ ಮೋದಿ


ಅಮಿತ್ ಷಾ


ಯೋಗಿ ಆದಿತ್ಯನಾಥ್

ಬೆಂಗಳೂರು, ಮಾ.28(ಕೆಎಂಶಿ)– **ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಷಾ, ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಸೇರಿದಂತೆ ಬಿಜೆಪಿಯ ವರಿಷ್ಠ ನಾಯಕರ ದಂಡೇ ಕರ್ನಾಟಕದಲ್ಲಿ ಚುನಾವಣಾ ಪ್ರಚಾರ ಕೈಗೊಳ್ಳಲಿದೆ.**

ಬಿಜೆಪಿಯ ತಾರಾ ಪ್ರಚಾರಕರ ಪಟ್ಟಿಯಲ್ಲಿ ಪಕ್ಷದ ವರಿಷ್ಠ ನಾಯಕರಲ್ಲದೆ, ಜೆಡಿಎಸ್ ನಾಯಕ ಹಾಗೂ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ಹೆಚ್.ಡಿ.ಕುಮಾರಸ್ವಾಮಿಯೂ ಇದ್ದಾರೆ. ಕರ್ನಾಟಕದ 28 ಲೋಕಸಭಾ ಕ್ಷೇತ್ರಗಳ ಪೈಕಿ ಮೊದಲ ಹಂತದಲ್ಲಿ ಹಳೆ ಮೈಸೂರು ಭಾಗದ 14 ಕ್ಷೇತ್ರಗಳಿಗೆ ಏಪ್ರಿಲ್ 26 ರಂದು ಮತದಾನ ನಡೆಯಲಿದೆ. ಈ ಕ್ಷೇತ್ರಗಳಿಗೆ ಸೀಮಿತವಾಗಿ ಪ್ರಧಾನಿ ಅವರು ಏಪ್ರಿಲ್ ಮೊದಲ ವಾರದಿಂದ ಪ್ರಚಾರ ಅಂತ್ಯದವರೆಗೂ ನಾಲ್ಕು ಬೃಹತ್ ಸಮಾವೇಶಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

ಕೇಂದ್ರ ಬಿಜೆಪಿ ಕಚೇರಿಯಿಂದ ಬಂದಿರುವ ತಾತ್ಕಾಲಿಕ ವೇಳಾಪಟ್ಟಿಯಂತೆ ಪ್ರಧಾನಿ ಅವರು, ಮೈಸೂರು, ಬೆಂಗಳೂರು ಗ್ರಾಮಾಂತರ ಹಾಗೂ ಹಾಸನದಲ್ಲೂ ಸಾರ್ವಜನಿಕ ಸಮಾವೇಶ ಉದ್ದೇಶಿಸಿ ಮಾತನಾಡಲಿದ್ದಾರೆ.

ಚಿಕ್ಕಬಳ್ಳಾಪುರ ಇಲ್ಲವೇ ದಕ್ಷಿಣ ಕನ್ನಡದಲ್ಲಿ ಮತ್ತೊಂದು ಸಮಾವೇಶ ಉದ್ದೇಶಿಸಿ ಅವರು ಭಾಷಣ ಮಾಡುವ ನಿರೀಕ್ಷೆ ಇದೆ. ಪ್ರಧಾನಿ ಅವರು, ಬೃಹತ್ ಸಮಾವೇಶ ಉದ್ದೇಶಿಸಿ ಮಾತನಾಡುವ ಸ್ಥಳ ಕನಿಷ್ಠ ಮೂರು ಲೋಕಸಭಾ ಕ್ಷೇತ್ರಗಳನ್ನು ಒಳಗೊಂಡಿರುತ್ತದೆ.

ಮೈಸೂರು ಕೇಂದ್ರದಲ್ಲಿ ಚಾಮರಾಜನಗರ, ಮಂಡ್ಯ ಹಾಗೂ ಸ್ಥಳೀಯ ಕ್ಷೇತ್ರವನ್ನು ಒಳಗೊಂಡಿರುತ್ತದೆ. ಬೆಂಗಳೂರು ಗ್ರಾಮಾಂತರ ಪ್ರಚಾರ ಸಂದರ್ಭದಲ್ಲಿ ಬೆಂಗಳೂರು ನಗರ ವ್ಯಾಪ್ತಿಗೆ ಬರುವ ಎಲ್ಲಾ ಕ್ಷೇತ್ರಗಳು ಒಳಗೊಂಡಿರುತ್ತವೆ. ಇನ್ನು ಹಾಸನದ ಸಮಾವೇಶ ಉಡುಪಿ–ಚಿಕ್ಕಮಗಳೂರು ● 9ನೇ ಪುಟಕ್ಕೆ

ಕೇಂದ್ರ ಗೃಹ ಸಚಿವ ಅಮಿತ್ ಷಾ ಗೂಂಡಾ, ರೌಡಿ

ಮಾಜಿ ಶಾಸಕ, ಸಿಎಂ ಸಿದ್ದರಾಮಯ್ಯರ ಪುತ್ರ ಡಾ.ಯತೀಂದ್ರ ಮತ್ತೊಂದು ವಿವಾದಾತ್ಮಕ ಹೇಳಿಕೆ

ಹನೂರು, ಮಾ.28–ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರನ್ನು ಗೂಂಡಾ, ರೌಡಿ ಎಂದು ಕರೆಯುವ ಮೂಲಕ ಮಾಜಿ ಶಾಸಕರೂ ಆದ ಮುಖ್ಯಮಂತ್ರಿ ಸಿದ್ದರಾಮಯ್ಯ ಪುತ್ರ ಡಾ. ಯತೀಂದ್ರ ಸಿದ್ದರಾಮಯ್ಯ ವಿವಾದ ಮೈಮೇಲೆ ಎಳೆದುಕೊಂಡಿದ್ದಾರೆ.



ಹನೂರಿನ ವಾಸವಿ ಕಲ್ಯಾಣ ಮಂಟಪದಲ್ಲಿ ಗುರುವಾರ ಏರ್ಪಡಿಸಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಅಮಿತ್ ಷಾ ಓರ್ವ ಗೂಂಡಾ, ರೌಡಿ. ಗುಜರಾತ್‌ನಲ್ಲಿ ಕೊಲೆ ಮಾಡಿರುವ ಆರೋಪ ಅವರ ಮೇಲಿದೆ. ಅಲ್ಪಸಂಖ್ಯಾತರನ್ನು ನರಮೇಧ ಮಾಡಿದ ಆರೋಪವೂ ಅವರ ಮೇಲಿದೆ. ಇಂತಹವರನ್ನು ಪಕ್ಕದಲ್ಲಿ ಕೂರಿಸಿಕೊಂಡಿರುವ ಪ್ರಧಾನಿ ಮೋದಿ, ಅವರಿಗೆ ಉನ್ನತ ಸ್ಥಾನ ನೀಡಿದ್ದಾರೆ. ಇಂತಹ ವ್ಯಕ್ತಿಗಳು ಕಳೆದ 10 ವರ್ಷದಿಂದ ಕೇಂದ್ರದಲ್ಲಿ ಆಳ್ವಿಕೆ ಮಾಡುತ್ತಿದ್ದಾರೆ. ಇವರ ಆಳ್ವಿಕೆ ಮುಂದುವರೆದರೆ ದೇಶದ ಗತಿ ಏನು? ಎಂದು ಕಿಡಿಕಾರಿದರು. ವರ್ಷಕ್ಕೆ 2 ಕೋಟಿ ಯುವಕರಿಗೆ ಉದ್ಯೋಗ ನೀಡುವುದಾಗಿ ಮೋದಿ ಹೇಳಿದ್ದರು. ಆದರೆ ಯಾರಿಗೂ ಉದ್ಯೋಗ ಕೊಟ್ಟಿಲ್ಲ. ಈಗ ಉದ್ಯೋಗ ಸೃಷ್ಟಿಸುವುದು ಕೇಂದ್ರ ಸರ್ಕಾರದ ಹೊಣೆ ಅಲ್ಲ ಎಂದು ಹೇಳುತ್ತಿದ್ದಾರೆ. ಸ್ವಿಸ್ ಬ್ಯಾಂಕ್‌ನಿಂದ ಕಪ್ಪು ಹಣ ತರುತ್ತೇವೆ ಎಂದು ಹೇಳಿದ್ದರು. ಅದನ್ನು ತಂದಿಲ್ಲ. ಕೊನೇ ಪಕ್ಷ ಸ್ವಿಸ್ ಬ್ಯಾಂಕ್‌ನಲ್ಲಿ ಯಾರ್‍ಯಾರ ಖಾತೆ ಇದೆ ಎಂಬ ಪಟ್ಟಿಯನ್ನೂ ಕೂಡ ರಿಲೀಸ್ ಮಾಡಿಲ್ಲ. ಇವರ ಸರ್ಕಾರದಲ್ಲಿ ಎಲ್ಲಾ ಅಗತ್ಯ ವಸ್ತುಗಳ ಬೆಲೆಯೂ ಏರಿಕೆಯಾಗಿದೆ. ಪೆಟ್ರೋಲ್, ಡೀಸೆಲ್ ಬೆಲೆಯಂತೂ ಪ್ರತೀ ದಿನ ಏರುತ್ತಲೇ ಇದೆ ಎಂದು ಆರೋಪಿಸಿದರು.

400 ಸ್ಥಾನಗಳಲ್ಲಿ ಗೆಲ್ಲುತ್ತೇವೆ ಎಂದು ಹೇಳುತ್ತಿದ್ದಾರೆ. ಒಂದು ವೇಳೆ ಇವರು 400 ಸ್ಥಾನ ಗೆದ್ದರೆ ಸಂವಿಧಾನವನ್ನು ಬದಲಾವಣೆ ಮಾಡುವುದೇ ಇವರ ಹಿಡನ್ ಅಜೆಂಡಾ ಆಗಿದೆ. ದೇಶದ ಇತಿಹಾಸದಲ್ಲೇ ಪ್ರಜಾಪ್ರಭುತ್ವದ ಕತ್ತು ಹಿಸುಕುವ ಸರ್ಕಾರ ಎಂದರೆ ಅದು ಮೋದಿ ಸರ್ಕಾರ ಎಂದು ವಾಗ್ದಾಳಿ ನಡೆಸಿದರು. ಇದೇ ವೇಳೆ ಮಾತನಾಡಿದ ಚಾಮರಾಜನಗರ ಉಸ್ತುವಾರಿ ಸಚಿವ ಕೆ.ವೆಂಕಟೇಶ್, ಕಳೆದ 10 ವರ್ಷ ಕೇಂದ್ರದಲ್ಲಿ ಆಡಳಿತ ನಡೆಸಿರುವ ಬಿಜೆಪಿ ಸರ್ಕಾರ ಬಡವರು, ದಲಿತರು, ಅಲ್ಪಸಂಖ್ಯಾತರು, ರೈತರು ಹಾಗೂ ಮಹಿಳೆಯರಿಗೆ ಯಾವುದೇ ● 9ನೇ ಪುಟಕ್ಕೆ

ಲೋಕಸಭಾ ಚುನಾವಣೆ–2024; ಅಧಿಸೂಚನೆ ಪ್ರಕಟ

ಮೈಸೂರಲ್ಲಿ ಮೊದಲ ದಿನ ಇಬ್ಬರು ನಾಮಪತ್ರ ಸಲ್ಲಿಕೆ

ಮೈಸೂರು, ಮಾ. 28 (ಆರ್‌ಕೆ)– ಲೋಕಸಭಾ ಸಾರ್ವತ್ರಿಕ ಚುನಾವಣಾ–2024ರ ಅಧಿಸೂಚನೆ ಇಂದು ಪ್ರಕಟವಾಯಿತು. ಇದರೊಂದಿಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆಗೂ ಚಾಲನೆ ದೊರೆಯಿತು. ಹಾಗಾಗಿ ಮೊದಲ ದಿನವಾದ ಇಂದು ಮೈಸೂರು–ಕೊಡಗು ಕ್ಷೇತ್ರದಲ್ಲಿ ಇಬ್ಬರು ನಾಮಪತ್ರ ಸಲ್ಲಿಸಿದ್ದಾರೆ.





ಮೈಸೂರಿನ ಜಿಲ್ಲಾಧಿಕಾರಿ ಕಚೇರಿಯಲ್ಲಿ ಎಸ್‌ಯುಸಿಐ ಅಭ್ಯರ್ಥಿಯಾಗಿ ಟಿ.ಆರ್. ಸುನಿಲ್ ಹಾಗೂ ಕೆಆರ್‌ಎಸ್ ಪಕ್ಷದ ಎಂ.ಎಸ್. ಪ್ರವೀಣ್, ಗುರುವಾರ ಜಿಲ್ಲಾ ಚುನಾವಣಾಧಿಕಾರಿಗಳೂ ಆದ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಅವರಿಗೆ ನಾಮಪತ್ರ ಸಲ್ಲಿಸಿದರು.

ಸೋಷಿಯಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯೂನಿಸ್ಟ್) ಪಕ್ಷದ ಅಭ್ಯರ್ಥಿಯಾಗಿ ಟಿ.ಆರ್.ಸುನಿಲ್ ಹಾಗೂ ಕರ್ನಾಟಕ ರಾಷ್ಟ್ರ ಸಮಿತಿ (ಕೆಆರ್‌ಎಸ್) ಪಕ್ಷದ ಅಭ್ಯರ್ಥಿಯಾಗಿ ಎಂ.ಎಸ್. ಪ್ರವೀಣ್ ಇಂದು ತಲಾ ನಾಲ್ವರು ಬೆಂಬಲಿಗರೊಂದಿಗೆ ಬಂದು ಜಿಲ್ಲಾ ಚುನಾವಣಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಅವರಿಗೆ ತಮ್ಮ ಉಮೇದುವಾರಿಕೆ ಸಲ್ಲಿಸಿದರು.

ಸೂಚಕರು, ಅನುಮೋದಕರನ್ನೊರತುಪಡಿಸಿ ನಾಮಪತ್ರ ಸಲ್ಲಿಸುವ ವೇಳೆ ಬೇರೆಯವರಿಗೆ ಜಿಲ್ಲಾ ಚುನಾವಣಾಧಿಕಾರಿ ಕಚೇರಿ ಪ್ರವೇಶಕ್ಕೆ ಅವಕಾಶವಿಲ್ಲ. ಅದೇ ರೀತಿ ಅಭ್ಯರ್ಥಿ ಆಕಾಂಕ್ಷಿಗಳು ಸೇರಿ ಐವರಿಗೆ ಮಾತ್ರ ಕಚೇರಿ ಪ್ರವೇಶಿಸಲು ಅವಕಾಶ ಮಾಡಿಕೊಡಲಾಗಿದೆ. ನಾಮಪತ್ರ ಸಲ್ಲಿಸಿದ ಬಳಿಕ ಹೊರ ಬಂದು ಸುದ್ದಿಗಾರರೊಂದಿಗೆ ಮಾತನಾಡಿದ ಟಿ.ಆರ್.ಸುನಿಲ್, ಎಸ್‌ಯುಸಿಐ ಹಲವು ವರ್ಷಗಳಿಂದ ಸಮಾಜದ ಅಭಿವೃದ್ಧಿ ವಿಷಯದಲ್ಲಿ ಕೆಲಸ ಮಾಡುತ್ತಾ ಬಂದಿದ್ದು, ಸಮಾಜಮುಖಿ ಚಿಂತನೆ ಹಿನ್ನೆಲೆಯಿಂದ ಬಂದಿರುವ ತಾವು ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸುತ್ತಿರುವುದಾಗಿ ತಿಳಿಸಿದರು.

ಎಂ.ಎಸ್.ಪ್ರವೀಣ್ ಮಾತನಾಡಿ, ಕರ್ನಾಟಕ ರಾಷ್ಟ್ರ ಸಮಿತಿ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದೇನೆ. ಜನಬೆಂಬಲ ದೊರೆತರೆ ಗೆದ್ದು ಸಮಾಜದ ಎಲ್ಲಾ ಸಮುದಾಯದ ಜನರ ಪರ ಹೋರಾಟ ಮಾಡಿ ನ್ಯಾಯ ದೊರಕಿಸಿಕೊಡುವೆ ಎಂದು ನುಡಿದರು. ನಾಮಪತ್ರ ಸಲ್ಲಿಸುವ ಪ್ರಕ್ರಿಯೆಗೆ ಮೈಸೂರಿನ ಸಿದ್ದಾರ್ಥ ಬಡಾವಣೆಯ ಜಿಲ್ಲಾ ಕಚೇರಿಗಳ ಸಂಕೀರ್ಣದ ಹೊಸ ಜಿಲ್ಲಾಧಿಕಾರಿ ಕಚೇರಿ ಮೊದಲ ಮಹಡಿಯ ಕೊಠಡಿಯಲ್ಲಿ ಸರ್ವ ಸಿದ್ಧತೆ ಮಾಡಲಾಗಿದ್ದು, ಅಗತ್ಯ ಮೂಲ ಸೌಕರ್ಯ ಸಹ ಕಲ್ಪಿಸಲಾಗಿದೆ.

ದೇವರಾಜ ಉಪವಿಭಾಗದ ಎಸಿಪಿ ಶಾಂತಮಲ್ಲಪ್ಪ ನೇತೃತ್ವದಲ್ಲಿ ನಜರ್‌ಬಾದ್ ಠಾಣೆ ಇನ್ಸ್‌ಪೆಕ್ಟರ್ ಮಹದೇವಸ್ವಾಮಿ ಅವರು ಚುನಾವಣಾಧಿಕಾರಿ ಕಚೇರಿಗೆ ಹೆಚ್ಚುವರಿ ಸಿಬ್ಬಂದಿ ನಿಯೋಜಿಸಿ ನಾಮಪತ್ರ ಸಲ್ಲಿಕೆ ವೇಳೆ ಭಾರೀ ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಿದ್ದಾರೆ.


ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣ: ಸಂಚು ರೂಪಿಸಿದ್ದ ಪ್ರಮುಖ ಆರೋಪಿ ಬಂಧನ

ಬೆಂಗಳೂರು: ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣದ ಸಂಚು ರೂಪಿಸಿದ್ದ ಪ್ರಮುಖ ಆರೋಪಿಯನ್ನು ಬಂಧಿಸುವಲ್ಲಿ ಎನ್‌ಐಎ ಯಶಸ್ವಿಯಾಗಿದೆ. 3 ರಾಜ್ಯಗಳ 18 ಸ್ಥಳಗಳಲ್ಲಿ ದಾಳಿ ನಡೆಸಿದ ಬಳಿಕ ಮುಝಮ್ಮಿಲ್ ಶರೀಫ್ ಎಂಬಾತನನ್ನು ಎನ್‌ಐಎ ಬಂಧಿಸಿದೆ. ಕರ್ನಾಟಕದ 12, ತಮಿಳುನಾಡಿನ 5 ಮತ್ತು ಉತ್ತರ ಪ್ರದೇಶದ 1 ಸೇರಿದಂತೆ 18 ಸ್ಥಳಗಳಲ್ಲಿ ಎನ್‌ಐಎ ತಂಡಗಳು ದಾಳಿ ನಡೆಸಿದ ನಂತರ ಶರೀಫ್‌ನನ್ನು ಬೆಂಗಳೂರಿನಿಂದ ಕರೆದೊಯ್ದು ಸಹ ಸಂಚುಕೋರನೆಂದು ಪರಿಗಣಿಸಿ ಕಸ್ಟಡಿಯಲ್ಲಿ ● 9ನೇ ಪುಟಕ್ಕೆ



ಅರವಿಂದ್ ಕೇಜ್ರಿವಾಲ್ ಏ.1ರವರೆಗೆ ED ವಶಕ್ಕೆ

ನವದೆಹಲಿ, ಮಾ.28– ಅಬಕಾರಿ ನೀತಿ ಪ್ರಕರಣದಲ್ಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಜಾರಿ ನಿರ್ದೇಶನಾಲಯದ ಕಸ್ಟಡಿ ಅವಧಿಯನ್ನು ರೋಸ್ ಅವೆನ್ಯೂ ನ್ಯಾಯಾಲಯ ಏಪ್ರಿಲ್ 1ರವರೆಗೆ ವಿಸ್ತರಿಸಿದೆ. ಎಎಪಿ ಮುಖ್ಯಸ್ಥರಾದ ಕೇಜ್ರಿವಾಲ್ ಅವರ ವಿಚಾರಣೆಗೆ ಏಳು ದಿನಗಳ ಕಸ್ಟಡಿಗೆ ಇಡಿ ಕೋರಿತ್ತು. ಆದರೆ ಏಪ್ರಿಲ್ 1 ರಂದು ಬೆಳಿಗ್ಗೆ 11 ಗಂಟೆಗೆ ನ್ಯಾಯಾಲಯದ ಮುಂದೆ ಹಾಜರುಪಡಿಸಬೇಕು ಎಂದು ನ್ಯಾಯಾಲಯ ಹೇಳಿತ್ತು. ಗುರುವಾರ ಕಸ್ಟಡಿ ಅವಧಿ ಕೊನೆಗೊಳ್ಳುತ್ತಿದ್ದಂತೆಯೇ, ಅವರನ್ನು ರೋಸ್ ಅವೆನ್ಯೂ ನ್ಯಾಯಾಲಯದ ವಿಶೇಷ ನ್ಯಾಯಾಧೀಶ ಕಾವೇರಿ ಬವೇಜಾ ಅವರ ಮುಂದೆ ಇಡಿ ಹಾಜರುಪಡಿಸಿತು. ಕಸ್ಟಡಿ ವಿಚಾರಣೆ ಸಮಯದಲ್ಲಿ ಐದು ದಿನಗಳಲ್ಲಿ ಅವರ ಹೇಳಿಕೆಗಳನ್ನು ದಾಖಲಿಸಲಾಗಿದ್ದು, ಅವರು ತಪ್ಪಿಸಿಕೊಳ್ಳುವ ಉತ್ತರ ನೀಡುತ್ತಿದ್ದಾರೆ ಎಂದು ಇಡಿ ಹೊಸ ರಿಮಾಂಡ್ ಅರ್ಜಿಯಲ್ಲಿ ಹೇಳಿತು. ಕಸ್ಟಡಿ ಅವಧಿಯಲ್ಲಿ ಇತರ ● 9ನೇ ಪುಟಕ್ಕೆ



ಬಿಜೆಪಿಯೊಂದಿಗೆ ಮೈತ್ರಿ ನಮಗೆ ಹೊಸದೇನಲ್ಲ; 2014ರಲ್ಲಿ ಅನಧಿಕೃತ ಮೈತ್ರಿ ಏರ್ಪಟ್ಟಿತ್ತು

● ಮಾಜಿ ಸಿಎಂ ಕುಮಾರಸ್ವಾಮಿ ಸ್ಪಷ್ಟನೆ ● ಈ ಬಾರಿ ಉಭಯ ಪಕ್ಷಗಳ ಕಾರ್ಯಕರ್ತರು ಯಾವ ಗೊಂದಲವಿಲ್ಲದೆ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಲಿದ್ದಾರೆ ● ಸುಮಲತಾ ನಮಗೇನು ಶಾಶ್ವತ ಶತ್ರುವಲ್ಲ; ಅಗತ್ಯ ಬಿದ್ದರೆ ಅವರನ್ನು ಭೇಟಿಯಾಗ್ತೇನೆ

ಮೈಸೂರು,ಮಾ.28(ಎಂಟಿವೈ)– ಬಿಜೆಪಿಯೊಂದಿಗೆ ಮೈತ್ರಿ ಜೆಡಿಎಸ್‌ಗೆ ಇದೇ ಮೊದಲೇನಲ್ಲ. 2014ರ ಚುನಾವಣೆಯಲ್ಲೂ ಹೊಂದಾಣಿಕೆ ಮಾಡಿಕೊಂಡಿದ್ದೆವು. ಹಾಗಾಗಿ ಈ ಬಾರಿ ಪಕ್ಷದ ಕಾರ್ಯಕರ್ತರು ಸಮನ್ವಯತೆಯಿಂದ ಕಾರ್ಯನಿರ್ವಹಿಸಲಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ.

ಬುಧವಾರ ಮೈಸೂರಿಗೆ ಆಗಮಿಸಿ, ಮೈತ್ರಿ ಸಮನ್ವಯ ಸಮಾವೇಶದಲ್ಲಿ ಪಾಲ್ಗೊಂಡ ನಂತರ ಇಲ್ಲೇ ವಾಸ್ತವ್ಯ ಹೂಡಿದ್ದ ಅವರು, ಇಂದು ಚಾಮುಂಡಿಬೆಟ್ಟಕ್ಕೆ ಭೇಟಿ ನೀಡಿ, ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ರಾಜ್ಯ ರಾಜಕಾರಣದಲ್ಲಿ ಜೆಡಿಎಸ್ ಹಾಗೂ ಬಿಜೆಪಿ ನಡುವಿನ ಮೈತ್ರಿ ಹೊಸದೇನಲ್ಲ. ಈ ಹಿಂದೆಯೂ ಉಭಯ ಪಕ್ಷಗಳು ಮೈತ್ರಿ ಮಾಡಿಕೊಂಡು ಚುನಾವಣೆ ಎದುರಿಸಿದ್ದೇವೆ. 2014ರಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲೂ ನಮ್ಮ ನಡುವೆ ಅನಧಿಕೃತ ಮೈತ್ರಿ ಏರ್ಪಟ್ಟಿತ್ತು. ಈಗ ಮೈತ್ರಿ ಮಾಡಿಕೊಂಡಿರುವುದರಿಂದ ಕಾರ್ಯಕರ್ತರಲ್ಲಿ ಯಾವುದೇ ಗೊಂದಲಗಳಿಲ್ಲ. ಎಲ್ಲೆಡೆ ಮೈತ್ರಿ ಅಭ್ಯರ್ಥಿಗಳು ಗೆಲುವು ಸಾಧಿಸುವುದು ನಿಶ್ಚಯ. ಪಕ್ಷದ ಕಾರ್ಯಕರ್ತರು ಗೊಂದಲಕ್ಕೆ ಒಳಗಾಗದೇ ಕೆಲಸ ಮಾಡುತ್ತಿದ್ದಾರೆ.


ಸಿಎಂ ಹೆಚ್.ಡಿ.ಕುಮಾರಸ್ವಾಮಿ ಚಾಮುಂಡಿಬೆಟ್ಟದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದರು.

ಎರಡು ಪಕ್ಷಗಳ ಕಾರ್ಯಕರ್ತರು ಸಮನ್ವಯತೆಯಿಂದ ಪ್ರಚಾರ ಕಾರ್ಯ ನಡೆಸಲಿದ್ದಾರೆ. ಕಾಂಗ್ರೆಸ್ ಸೋಲಿಸಬೇಕೆಂಬ ವಿಚಾರದಲ್ಲಿ ಮುಖಂಡರು ಒಗ್ಗಟ್ಟಿನಿಂದ ಕೆಲಸ ಮಾಡಲಿದ್ದಾರೆ ಎಂದರು.

ನಾನು ವಲಸಿಗನಲ್ಲ: ಮಂಡ್ಯ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸುತ್ತಿರುವ ನನ್ನನ್ನು ವಲಸಿಗ ಎನ್ನುವ ಸಂದೇಶ ಹರಿದಾಡುತ್ತಿದೆ. ಕಾಂಗ್ರೆಸ್‌ನಲ್ಲಿ ನೀವು ಯಾರು? ಅಲ್ಲಿ ವಲಸಿಗರಲ್ಲವೇ? ಮೂಲ ಕಾಂಗ್ರೆಸ್ಸಿಗರನ್ನು ಕಡೆಗಣಿಸಿ ನೀವು ಅಲ್ಲಿ ಅಧಿಕಾರ ಮಾಡುತ್ತಿಲ್ಲವೇ? ನಾನು ಕನ್ನಡಿಗ, ಎಲ್ಲಿ ಬೇಕಾದರೂ ಸ್ಪರ್ಧೆ ಮಾಡಬಹುದು. ಈ ಬಾರಿ ಮಂಡ್ಯದಲ್ಲಿ ನಮ್ಮ ಹಳೆಯ ಸ್ನೇಹಿತರುಗಳ ಜತೆ ಸ್ಪರ್ಧೆ ಎದುರಿಸಬೇಕು. ನನ್ನ ಹಣೆಬರಹದಲ್ಲಿ ಇರುವುದನ್ನು ಎದುರಿಸಬೇಕಿದೆ. ಜೆಡಿಎಸ್ ಕೋಮುವಾದಿ ಎಂದು ಮುಖ್ಯಮಂತ್ರಿ ಹೇಳಿರುವುದು ಹಾಸ್ಯಾಸ್ಪದ. ಸಿಎಂ ಸಿದ್ದರಾಮಯ್ಯ ಅವರಿಂದ ನನಗೆ ಸರ್ಟಿಫಿಕೇಟ್ ಬೇಕಾಗಿಲ್ಲ. ಮೇಕೆದಾಟು ವಿಚಾರದಲ್ಲಿ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರನ್ನು ಪ್ರಶ್ನಿಸುವ ನೈತಿಕತೆ ಕಾಂಗ್ರೆಸ್‌ನವರಿಗೆ ಇಲ್ಲ ಎಂದು ಕಿಡಿಕಾರಿದರು.

ಅವರೇನು ಜ್ಯೋತಿಷಿಯಲ್ಲ

ಮಂಡ್ಯದಲ್ಲಿ ಹೆಚ್.ಡಿ.ಕುಮಾರಸ್ವಾಮಿ ಸೋಲುತ್ತಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನೀಡಿರುವ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಕಳೆದ ಲೋಕಸಭಾ ಚುನಾವಣೆಯಲ್ಲಿ ನನ್ನ ಮಗ ನಿಖಿಲ್ ಕುಮಾರಸ್ವಾಮಿ ಸೋಲಿಗೆ ಈ ಮಹಾನುಭಾವರೇ ಕಾರಣ ಎಂಬುದು ಗೊತ್ತಿದೆ. ಅದರ ಆಧಾರದ ಮೇಲೆ ಈಗ ಮಾತನಾಡುತ್ತಿದ್ದಾರೆ. ಎಲ್ಲದಕ್ಕೂ ಜನರೇ ಉತ್ತರ ಕೊಡುತ್ತಾರೆ. ನಾನು ಸೋಲುತ್ತೇನೆಂದು ಹೇಳುವ ಸಿದ್ದರಾಮಯ್ಯ ಯಾವಾಗ ಜ್ಯೋತಿಷಿಯಾದರು ಎನ್ನುವುದು ನನಗೆ ಗೊತ್ತಿಲ್ಲ ಎಂದು ಕುಮಾರಸ್ವಾಮಿ ಅಸಮಾಧಾನ ವ್ಯಕ್ತಪಡಿಸಿದರು.

ರಾಜಕೀಯದಲ್ಲಿ ಯಾರೂ ಶತ್ರುಗಳಲ್ಲ: ಮಂಡ್ಯದಲ್ಲಿ ಜೆಡಿಎಸ್‌ಗೆ ಬೆಂಬಲ ನೀಡುವಂತೆ ಸಂಸದೆ ಸುಮಲತಾ ಅವರನ್ನು ಕೋರುತ್ತೇನೆ. ಸಂಸದೆ ಸುಮಲತಾ ಅವರೇನೂ ನಮಗೆ ಶಾಶ್ವತ ಶತ್ರುವಲ್ಲ. ರಾಜಕೀಯವಾಗಿ ನಾವು ವಿರೋಧ ಮಾಡಿದಾಕ್ಷಣ ಶತ್ರುವಾಗಲ್ಲ. ರಾಮಾಂಜನೇಯ ಯುದ್ಧವೇ ಈ ಮಣ್ಣಿನಲ್ಲಿ ನಡೆದು ಹೋಗಿಲ್ಲವೇ. ನಾವೆಲ್ಲರೂ ಹುಲುಮಾನವರು. ಅದರ ಮುಂದೆ ಯಾವ ಲೆಕ್ಕ, ರಾಜಕೀಯದಲ್ಲಿ ಹೋರಾಟ, ಜಗಳ ಎಲ್ಲವೂ ಇದ್ದೇ ಇರುತ್ತದೆ. ಅವನ್ನೆಲ್ಲ ಒಮ್ಮೊಮ್ಮೆ ದಾಟಿ ಹೋಗಬೇಕು. ಸುಮಲತಾ ನಮಗೇನು ಬಹಳ ದೂರದವರೇನೂ ಅಲ್ಲ. ಅಂಬರೀಶ್ ಇದ್ದ ಕಾಲದಲ್ಲಿ ನಮ್ಮ ಜತೆಗೆ ಇದ್ದವರು. ರಾಜಕಾರಣಕ್ಕಾಗಿ ಕೆಲವು ವ್ಯತ್ಯಾಸಗಳಾಗಿತ್ತು. ಅಗತ್ಯಬಿದ್ದರೆ ಅವರನ್ನು ಭೇಟಿ ಮಾಡಿ, ಮಾತುಕತೆ ನಡೆಸುತ್ತೇನೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಸಾ.ರಾ. ಮಹೇಶ್, ವಿಧಾನಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ, ಜಿಪಂ ಮಾಜಿ ಸದಸ್ಯ ಸಿ.ಜೆ. ದ್ವಾರಕೀಶ್, ಮಾಜಿ ಮೇಯರ್ ಎಂ.ಜೆ.ರವಿಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

ನಕ್ಕರೆ ಅದೇ ಸ್ವರ್ಗ

ವೈದ್ಯರು : ನಿಮ್ಮ ಗಂಡ ನಿದ್ದೆಯಲ್ಲಿ ಮಾತಾಡ್ತಾ ಇದ್ದರು ಅಂತ ಏನು ಗ್ಯಾರಂಟಿ?

ಆಕೆ : ಎಚ್ಚರವಾಗಿದ್ರೆ ಅಂತ ಪದಗಳಿಂದ ಬೈಯ್ಯುವ ಧೈರ್ಯ ನಮ್ಮ ಯಜಮಾನರಿಗೆಲ್ಲಿಂದ ಬರ್ಬೇಕು ಡಾಕ್ಟ್ರೆ?!

ಮೈಸೂರು ಮಿತ್ರ

ಶುಕ್ರವಾರ, 29 ಮಾರ್ಚ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಜಯದ ರಹಸ್ಯ ಕೈ ಹಾಕಿದ ಕಾರ್ಯದಲ್ಲಿ ನೆಲೆಯಾಗಿ ನಿಲ್ಲುವುದೇ ಆಗಿದೆ.
–ಡಿಸ್ರೇಲಿ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಊರ್ಗ್ನೋಡು ಅಂದ್ರೆ ತಡಿ ಮೊದಲು ಸೂರ್ಗ್ನೋಡ್ತೀನಿ ಅಂದ್ನಂತೆ

ನಿಮ್ಮ ಪತ್ರಗಳು

ಮತದಾರರು ತಪ್ಪದೇ ಮತ ಚಲಾಯಿಸಬೇಕು

ಮಾನ್ಯರೆ,

ಲೋಕಸಭಾ ಚುನಾವಣೆ ಘೋಷಣೆಯಾಗಿದೆ. ಚುನಾವಣಾ ಘೋಷಣೆ ಮಾಡಿದ ಕೇಂದ್ರ ಚುನಾವಣಾ ಆಯೋಗದ ಮುಖ್ಯ ಚುನಾವಣಾಧಿಕಾರಿ ರಾಜೀವ್ ಕುಮಾರ್ ಅವರು ಚುನಾವಣೆ ಹೇಗೆ ನಡೆಯುತ್ತದೆ ಎನ್ನುವ ಮಾಹಿತಿಯ ಜೊತೆಗೆ ರಾಜಕೀಯ ಪಕ್ಷಗಳ ನಾಯಕರು ಪರಸ್ಪರ ವೈಯಕ್ತಿಕ ಹೇಳಿಕೆ ನೀಡಿದರೆ ಕ್ರಮ ಕೈಗೊಳ್ಳಲಾಗುವುದು ಎಂದಿದ್ದಾರೆ. ಹಾಗೆಯೇ ಈ ಬಾರಿ ಚುನಾವಣಾ ಆಯೋಗ ಅಂತಹ ಪ್ರಕರಣ ಕಂಡರೆ ಹಿಂದಿನ ಕೇಸ್‌ಗಳನ್ನೂ ಈಗ ಮತ್ತೆ ಪರಿಗಣಿಸಿ ಕಾನೂನು ಕ್ರಮ ಜರುಗಿಸಲಾಗುವುದು ಎಂದೂ ಹೇಳಿದ್ದು ಕೇವಲ ಕಾಗದದ ಮೇಲೆ ಮಾತ್ರವೇ ಎಂಬುದನ್ನು ತಮಿಳುನಾಡು, ಕರ್ನಾಟಕ ಸೇರಿದಂತೆ ಎಲ್ಲೆಡೆ ಇದರ ಸ್ಪಷ್ಟ ಉಲ್ಲಂಘನೆ ಆಗುತ್ತಿರುವುದು ಆಯೋಗದ ಗಮನಕ್ಕೆ ಬರುತ್ತಿಲ್ಲವೇ ಎಂಬ ಪ್ರಶ್ನೆ ಸಾರ್ವಜನಿಕರನ್ನು ಕಾಡುತ್ತಿದೆ.

ಕರ್ನಾಟಕದಲ್ಲಿ ಹಾಲಿ ಸಂಸ್ಕೃತಿ ಸಚಿವರು ಹಾಗೆಯೇ ಮಾಜಿ ಸಂಸ್ಕೃತಿ ಸಚಿವರ ನಡುವೆ ಸಂಸ್ಕೃತಿ ಹೀನ ಹೇಳಿಕೆಗಳು ಅಸಹ್ಯ ತರಿಸುತ್ತಿದೆ. ಹಾಗೆಯೇ ಅದನ್ನು ಸಮರ್ಥಿಸುತ್ತಿರುವ ಉಪಮುಖ್ಯಮಂತ್ರಿಯವರ ನಡೆಯೂ ತರವಲ್ಲದ್ದು.

ಸ್ವಾಮಿ ರಾಜಕಾರಣಿಗಳೇ ಈಗ ಹಿಂದಿನ ದಿನಗಳಂತೆ ನಾನು ಹಾಗೇ ಹೇಳಿಯೇ ಇಲ್ಲ ಎನ್ನುವಂತಿಲ್ಲ. ಎಲ್ಲಾ ಸಾಕ್ಷಿ ಸಮೇತ ಮರುಕ್ಷಣದಲ್ಲೇ ಸಿಕ್ಕಿ ಬಿಡುತ್ತದೆ. ಬಿಡಿ. ಇವೆಲ್ಲಾ ನಿಮಗೆ ಮಹಾ ಅಪರಾಧದಂತೆ ಕಾಣುವುದೇ ಇಲ್ಲ.

ರಾಜಕಾರಣ ಎಂಬುದು ಈಗಂತೂ ಕುಟುಂಬ, ವಂಶ, ಜಾತಿ, ಕುಟೀಲ ತಂತ್ರ ಅನುಸರಿಸುವ ಮಟ್ಟಕ್ಕೆ ಇಳಿದು ಬೆನ್ನಿಗೆ ಚೂರಿ ಇರಿಯುವುದು ನೀರು ಕುಡಿದಷ್ಟು ಸಲೀಸಾಗಿದೆ. ಹಾಗೆಯೇ ತಾವು ಏನು ಮಾಡಿದರೂ ಜಯಿಸಬಲ್ಲವೆಂಬ ಹುಂಬತನದಲ್ಲಿ ದುರಹಂಕಾರ ಮಾಡುತ್ತಿರುವುದು ಸರ್ವಥಾ ಅಪೇಕ್ಷಣೀಯ ಅಲ್ಲ.

ಚುನಾವಣಾ ಆಯೋಗದ ನೀತಿ ಸಂಹಿತೆಗಳು ಹಲ್ಲು ಕಿತ್ತ ಹಾವಿನಂತಾಗಿದ್ದು, ಯಾರಿಗೂ ಇದರ ಬಗ್ಗೆ ಭಯ, ಗೌರವ ಇಲ್ಲವಾಗಿದೆ. ಕೆಲವೊಮ್ಮೆ ಶಿಕ್ಷೆಯಾದರೂ ಅದು ಗೌಣ ಎನಿಸುತ್ತದೆ. ಜೈಲುವಾಸವನ್ನೇ ಬಿರುದು ಎಂದು ಭಾವಿಸುವ, ಹಾಗೆಯೇ ಅದನ್ನು ಬಿಂಬಿಸುವ ಭಂಡರಿರುವಾಗ ಇವರಿಗೆ ಚುನಾವಣೆಯಲ್ಲಿ ಸ್ಪರ್ಧೆಯ ಅನರ್ಹತೆ ಜೊತೆಗೆ ಸದಸ್ಯತ್ವ ಚ್ಯುತಿಯಂತಹ ಶಿಕ್ಷೆಗಳು ಮಾತ್ರ ಬೆದರಿಸಬಲ್ಲದೇನೋ? ಜನಪ್ರತಿನಿಧಿ ಕಾಯಿದೆಗೆ ಸೂಕ್ತ ತಿದ್ದುಪಡಿ ತಂದರೆ ಮಾತ್ರ ಇದು ಸಾಧ್ಯ. ಎಲ್ಲರನ್ನೂ ಮತದಾರ ಗಮನಿಸಿ ಮಣ್ಣು ತಿನ್ನಿಸುವ ದಿನ ದೂರವಿಲ್ಲ. ನೆನಪಿರಲಿ. ಹಾಗೆಯೇ ಇಂತಹ ಮಂದಿಗೆ ಬುದ್ಧಿ ಕಲಿಸಲು ಮತದಾರರು ತಪ್ಪದೇ ಮತ ಚಲಾಯಿಸಬೇಕು ಎಂಬುದು ನಮ್ಮ ಮನವಿ

–ಶಿವಮೊಗ್ಗ ನಾ. ದಿನೇಶ್ ಅಡಿಗ ಮೈಸೂರು.

ಪಾದಚಾರಿ ಮಾರ್ಗ ಅತಿಕ್ರಮಣ

ಮಾನ್ಯರೆ,




ಮೈಸೂರಿನ ಕುವೆಂಪುನಗರ ಎಂ–ಬ್ಲಾಕ್‌ನಲ್ಲಿರುವ ಕುವೆಂಪು ನಗರ ಕಾಂಪ್ಲೆಕ್ಸ್ ಮತ್ತು ಸಾರಿಗೆ ಡಿಪೋ ಸಂಪರ್ಕಿಸುವ ನೃಪತುಂಗ ರಸ್ತೆಯಲ್ಲಿರುವ ಶತಾಬ್ದಿ ಸೂಪರ್ ಮಾರ್ಕೆಟ್ ಮುಂಭಾಗದಲ್ಲಿ ಪಾದಚಾರಿ ರಸ್ತೆಯನ್ನು ಅತಿಕ್ರಮಣ ಮಾಡಿ, ಅಡ್ಡಲಾಗಿ ಹೆವನ್ ಚಾಯ್ ಹೆಸರಿನ ಕಾಫಿ, ಟೀ ಬೂತನ್ನು ಸ್ಥಾಪಿಸಿ, ಪಾದಚಾರಿಗಳ ಓಡಾಟಕ್ಕೆ ಅನಾನುಕೂಲ ಮಾಡಿದ್ದಾರೆ.

ಅಕ್ಕ–ಪಕ್ಕದ ವಾಣಿಜ್ಯ ಕಟ್ಟಡದಲ್ಲಿರುವ ವ್ಯಾಪಾರಸ್ಥರಿಗೆ ತೊಂದರೆ ಉಂಟು ಮಾಡಿದ್ದಾರೆ. ಇದು ಸಾಲದು ಎಂಬಂತೆ ಪಾದಚಾರಿ ಮಾರ್ಗವನ್ನು ನೆಲಮಟ್ಟದಿಂದ 10 ಇಂಚು ಎತ್ತರಿಸಿ, ಕಾಂಕ್ರೀಟ್ ನೆಲಹಾಸನ್ನು ಹಾಕಿಸಿದ್ದಾರೆ. ಇದರಿಂದ ವಯಸ್ಸಾದವರು, ಮಕ್ಕಳು ಎಡವಿ ಬೀಳುವಂತೆ ಮಾಡಿದ್ದಾರೆ. ಆದ್ದರಿಂದ ಕೂಡಲೇ ಪಾದಚಾರಿ ಮಾರ್ಗದ ಅತಿಕ್ರಮಣವನ್ನು ತೆರವುಗೊಳಿಸಬೇಕು ಎಂದೂ, ವಾರ್ಡಿನ ರೆವಿನ್ಯೂ ಇನ್ಸ್‌ಪೆಕ್ಟರ್ ಅವರ ಕಾರ್ಯ ವೈಫಲ್ಯತೆ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕೆಂದು ಸಂಬಂಧಪಟ್ಟ ಹಿರಿಯ ಅಧಿಕಾರಿಗಳಿಗೆ ಒತ್ತಾಯ. –ಲಕ್ಷ್ಮಣರಾವ್ ಬಿ.ಆರ್., ನ್ಯಾಯವಾದಿಗಳು

ಪೆಟ್ರೋಲ್, ಡೀಸೆಲ್ ದರ ಇಳಿಕೆ ಸ್ವಾಗತಾರ್ಹ

ಮಾನ್ಯರೆ,



ಅಂತರರಾಷ್ಟ್ರೀಯ ಕಚ್ಚಾ ತೈಲದ ಬೆಲೆ ಇಳಿಕೆಯಾದ ಕಾರಣ ಭಾರತ ಸರ್ಕಾರ ಶುಕ್ರವಾರದಿಂದ ಜಾರಿಯಾಗುವಂತೆ ಪೆಟ್ರೋಲ್ ಮತ್ತು ಡೀಸೆಲ್ ದರವನ್ನು 2 ರೂ. ಕಡಿಮೆಗೊಳಿಸಿರುವುದು ಉತ್ತಮ ಬೆಳವಣಿಗೆಯಾಗಿದ್ದು, ಇದರಿಂದ ಸರಕು ಸಾಗಣೆಯ ವೆಚ್ಚ, ಬಸ್ಸುಗಳ ದರ ಕಡಿಮೆಯಾಗಿ ದಿನ ನಿತ್ಯದ ವಸ್ತುಗಳ ಬೆಲೆ ಕಡಿಮೆಯಾಗುವ ಸಾಧ್ಯತೆ ಹೆಚ್ಚಾಗಿದೆ.

ಇದರಿಂದಾಗಿ ರಾಷ್ಟ್ರದ ಮಹಾನಗರಗಳಾದ ರಾಜಧಾನಿ ದೆಹಲಿಯಲ್ಲಿ ಬೆಲೆ ಇಳಿಕೆಯಾದ ನಂತರ ಪೆಟ್ರೋಲ್ ಲೀಟರ್‌ಗೆ 94.72 ರೂ., ಮುಂಬೈನಲ್ಲಿ 104.21 ರೂ., ಕೋಲ್ಕತ್ತಾದಲ್ಲಿ 103.94 ರೂ. ಮತ್ತು ಚೆನ್ನೈನಲ್ಲಿ ಲೀಟರ್‌ಗೆ 100.75 ರೂ.ನಂತೆ ಮಾರಾಟವಾಗುತ್ತಿದೆ.

ಡೀಸೆಲ್‌ನ ಹೊಸ ಬೆಲೆಗಳನ್ನು ಗಮನಿಸಿದರೆ, ದೆಹಲಿಯಲ್ಲಿ ಒಂದು ಲೀಟರ್ ಡೀಸೆಲ್ ರೂ. 87.62, ಮುಂಬೈನಲ್ಲಿ 92.15 ರೂ., ಕೋಲ್ಕತ್ತಾದಲ್ಲಿ 90.76 ರೂ. ಮತ್ತು ಚೆನ್ನೈನಲ್ಲಿ 92.34 ರೂ.ಗೆ ಲಭ್ಯವಿರುತ್ತದೆ.

ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯಲ್ಲಿನ ಕಡಿತವು ಗ್ರಾಹಕರ ವೆಚ್ಚವನ್ನು ಕಡಿಮೆಗೊಳಿಸುವ ಜೊತೆಗೆ ಮತ್ತು ಭಾರತ ದೇಶದಲ್ಲಿನ 58 ಲಕ್ಷಕ್ಕೂ ಹೆಚ್ಚು ಭಾರಿ ಸರಕು ವಾಹನಗಳು, 7 ಕೋಟಿ ಕಾರುಗಳು ಮತ್ತು 27 ಕೋಟಿ ದ್ವಿಚಕ್ರ ವಾಹನಗಳ ನಿರ್ವಹಣಾ ವೆಚ್ಚವನ್ನು ಕಡಿಮೆ ಮಾಡುತ್ತದೆ. ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಇಳಿಕೆಯಿಂದ ನಾಗರಿಕರಿಗೆ ಲಾಭವಾಗಲಿದೆ. ಪೆಟ್ರೋಲ್ ಮತ್ತು ಡೀಸೆಲ್‌ನ ದರವನ್ನು ಬಡ ಮತ್ತು ಮಧ್ಯಮ ವರ್ಗಕ್ಕೆ ಭಾರವಾಗದಂತೆ ಸ್ಥಿರವಾಗಿರುವಂತಹ ಕ್ರಮಗಳನ್ನು ಕೈಗೊಳ್ಳಬೇಕೆಂದು ಕೇಂದ್ರ ಸರ್ಕಾರವನ್ನು ಆಗ್ರಹಿಸುತ್ತಾ, ದರ ಕಡಿಮೆ ಮಾಡಿದ ಕೇಂದ್ರ ಸರ್ಕಾರಕ್ಕೆ ದೇಶದ ಜನತೆಯ ಪರವಾಗಿ ಅಭಿನಂದನೆಗಳು.


–ರಾಸುಮ ಭಟ್, ಸಂಶೋಧನಾ ವಿದ್ಯಾರ್ಥಿ, ಚಿಕ್ಕಮಗಳೂರು.

ಅಭಿನವ ಶಂಕರಾಲಯದ ಶತಮಾನೋತ್ಸವ ಸಂಭ್ರಮಾಚರಣೆ

ಸನಾತನ ಧರ್ಮ ರಕ್ಷಣೆಯಲ್ಲಿ ಅಂದಿನಿಂದಲೂ ಮುಂಚೂಣಿಯಲ್ಲಿರುವ ಪರಶಿವಾತಾರಿಗಳು ಸನಾತನ ಧರ್ಮೋದ್ಧಾರಕರೂ ಆದ ಆದಿಗುರು ಶ್ರೀ ಶಂಕರಾಚಾರ್ಯರು ಸ್ಥಾಪಿಸಿದ ನಾಲ್ಕು ಚತುರಾಮ್ನಾಯ ಪೀಠಗಳಲ್ಲಿ ಪ್ರಥಮವಾದದ್ದು ದಕ್ಷಿಣಾ ಮ್ನಾಯ ಶೃಂಗೇರಿ ಶ್ರೀ ಶಾರದಾ ಪೀಠವು ಅವಿಚ್ಛಿನ್ನ ಪರಂಪರೆಯಲ್ಲಿ ಮೂವತ್ತೈದು ಯತಿಶ್ರೇಷ್ಠರು ವಿರಾಜಮಾನರಾಗಿ ಆಸ್ತಿಕರಿಗೆ ಮಾತ್ರವಲ್ಲದೇ ವಿಶೇಷವಾಗಿ ರಾಜಮಹಾ ರಾಜರುಗಳಿಗೂ ಮಾರ್ಗದರ್ಶನ ಮಾಡಿ ಜೀವನ್ಮುಕ್ತರಾಗಿದ್ದಾರೆ. ಪ್ರಸ್ತುತ 36ನೇ ಪೀಠಾಧಿಪತಿಗಳಾದ ಜಗದ್ಗುರು ಶ್ರೀ ಭಾರತೀ ತೀರ್ಥ ಮಹಾಸನ್ನಿಧಾನಂಗಳವರು ಅವರ ಕರಕಮಲ ಸಂಜಾತರಾದ ಜಗದ್ಗುರು ಶ್ರೀ ವಿಧುಶೇಖರ ಭಾರತೀ ಸನ್ನಿಧಾನಂಗಳವರು ಸಹ ಅನುಗ್ರಹಿಸಿ ಮಾರ್ಗದರ್ಶನ ಮಾಡುತ್ತಿರುವುದು ನಮ್ಮೆಲ್ಲರ ಸೌಭಾಗ್ಯವಾಗಿದೆ.

ಮಹಾಪುರುಷರು ಜನ್ಮತಳೆದಂತಹ ಮತ್ತು ಅವರು ನಿರ್ವಾಣ ಹೊಂದಿದ ಸ್ಥಳಗಳು ಎಲ್ಲಾ ಮತ ಧರ್ಮ ಗಳಲ್ಲಿಯೂ ಗೌರವ ಆದರಗಳನ್ನು ಮೂಡಿಸುವ ಪಾವಿತ್ರ್ಯತೆಗಳನ್ನು ಪಡೆದಿವೆ. ಆದರೆ ಎಲ್ಲಾ ಮಹಾತ್ಮರು ಜನಿಸಿದ ಮತ್ತು ನಿರ್ವಾಣ ಹೊಂದಿದ ಸ್ಥಳಗಳು ಎಲ್ಲಿವೆ, ಯಾವುವು ಎಂದು ಸ್ಪಷ್ಟವಾಗುವುದಿಲ್ಲ. ಕೆಲವು ಸ್ಥಳಗಳನ್ನು ಯಾವ ಸಂದಿಗ್ದವು ಇಲ್ಲದೆ ಸ್ಪಷ್ಟವಾಗಿ ಗುರುತಿ ಸಬಹುದು. ಜಗದ್ಗುರು ಶ್ರೀ ಆದಿಶಂಕರಾಚಾರ್ಯರು ಅವತರಿಸಿದುದು ಕೇರಳ ಪ್ರಾಂತ್ಯದ ಕಾಲಟಿ ಗ್ರಾಮದಲ್ಲಿ. ಅವರ ದಿವ್ಯ ಸಂಬಂಧದಿಂದ ಆ ಸ್ಥಳವು ಪುಣ್ಯ ಕ್ಷೇತ್ರವಾಯಿತು. ಅದನ್ನು ಸ್ಪಷ್ಟವಾಗಿ ಗುರುತಿಸಿ, ಅಲ್ಲಿ ಆಚಾರ್ಯರ ದಿವ್ಯಸ್ಮರಣೆಗಾಗಿ ಶ್ರೀಶಾರದಾ ಅಮ್ಮನವರ ಮತ್ತು ಶ್ರೀ ಶಂಕರಾಲಯವನ್ನು ನಿರ್ಮಾಣ ಮಾಡಿಸಿ ಕಾಲಟಿಯನ್ನು ಪುಣ್ಯ ಕ್ಷೇತ್ರವನ್ನಾಗಿ ಪರಿವರ್ತಿಸಿದವರು ಶೃಂಗೇರಿಯ ಶ್ರೀ ಶಾರದಪೀಠದ 33ನೇ ಜಗದ್ಗುರುಗಳಾಗಿದ್ದ ಶ್ರೀ ಸಚ್ಚಿದಾನಂದ ಶಿವಾಭಿನವನೃಸಿಂಹಭಾರತೀ ಸ್ವಾಮಿಗಳವರು (1892–1912). ಶ್ರೀಗಳವರು ತಮ್ಮ ವಿದ್ವತ್ತು, ತಪಸ್ಸು, ಜ್ಞಾನ, ವೈರಾಗ್ಯಗಳಿಂದ ಜಗದ್ಗುರು ಶ್ರೀ ಆದಿಶಂಕರಾಚಾರ್ಯರ ಪುನ ರವತಾರವೆಂದೇ ಖ್ಯಾತಿಗಳಿಸಿದ 'ಅಭಿನವ ಶಂಕರರು' ಎಂಬುದಾಗಿ ಪ್ರಸಿದ್ಧರಾಗಿ ಎಲ್ಲೆಡೆ ಸಂಚಾರ ಮಾಡಿ ಧರ್ಮ ಪ್ರಸಾರ ಮಾಡಿದರು. ಜಗದ್ಗುರು ಶ್ರೀ ಶಂಕರಾಚಾರ್ಯರ ಜಯಂತಿಯನ್ನು ವೈಶಾಖ ಶುದ್ಧ ಪಂಚಮಿ ಎಂಬುದಾಗಿ ನಿಶ್ಚಯಿಸಿ ಪ್ರಥಮವಾಗಿ ಆಚರಣೆಯನ್ನು ಆರಂಭಿಸಿದರು. ಇಂದು ಎಲ್ಲಾ ಪ್ರಾಂತ್ಯಗಳಲ್ಲೂ ಆಸ್ತಿಕರು ಶಂಕರ ಜಯಂತಿಯನ್ನು ಶ್ರದ್ಧಾ ಭಕ್ತಿಯಿಂದ ಆಚರಿಸುತ್ತಿದ್ದಾರೆ.

ಮೈಸೂರು ಸಾಂಸ್ಕೃತಿಕ, ಶೈಕ್ಷಣಿಕ ಕೇಂದ್ರ, ಅಂತೆಯೇ ಮಠಮಾನ್ಯಗಳ ನೆಲೆಯ ಬೀಡು. ಪರಮ ಪವಿತ್ರವಾದ ಈ ಸ್ಥಳದಲ್ಲಿ ಜನ್ಮತಾಳಿ ಅಧ್ಯಾತ್ಮ ಸಾಧನೆಯನ್ನು ಮಾಡಿ ಶೃಂಗೇರಿ ಶ್ರೀ ಶಾರದಾಪೀಠದ 33ನೇ ಶ್ರೇಷ್ಠ ಪೀಠಾದಿ ಪತಿಗಳಾಗಿದ್ದ ಜಗದ್ಗುರು ಶ್ರೀ ಸಚ್ಚಿದಾನಂದಶಿವಾಭಿನವನೃಸಿಂಹಭಾರತೀ ಮಹಾಸ್ವಾಮಿಗಳವರ ಜನ್ಮಸ್ಥಾನದ ಅವರ ಗೃಹವನ್ನು ಅದ್ವೈತ ಆಧ್ಯಾತ್ಮಿಕ ಕೇಂದ್ರವನ್ನಾಗಿ ಮಾಡಲಾಗಿದೆ. ಶೃಂಗೇರಿ ಶ್ರೀ ಶಾರದಾಪೀಠದ 34ನೇ ಜಗದ್ಗುರುಗಳಾದ ಶ್ರೀ ಚಂದ್ರಶೇಖರಭಾರತೀ ಮಹಾಸ್ವಾಮಿಗಳವರು ಮೈಸೂರು ಸಂಸ್ಥಾನದ ಮಹಾರಾಜರಾದ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಮತ್ತು ಭಕ್ತಾದಿಗಳ ಕೋರಿಕೆಯಂತೆ 31–3–1924ರ ಶ್ರೀ ರುಧಿರೋದ್ಗಾರಿ ಸಂವತ್ಸರದ ಪುಷ್ಯ ಶುದ್ಧ ದ್ವಾದಶಿಯಂದು ವಿಜಯಯಾತ್ರೆಯನ್ನು ಮಾಡಿ ಮೈಸೂರಿಗೆ ದಯಮಾಡಿಸಿ ತಮ್ಮ ಗುರುಗಳಾದ ಜಗದ್ಗುರು ಶ್ರೀ ಸಚ್ಚಿದಾನಂದ ಶಿವಾಭಿನವ ನೃಸಿಂಹ ಭಾರತೀ ಮಹಾಸ್ವಾಮಿಗಳವರ ಜನ್ಮಸ್ಥಾನದಲ್ಲಿ ಅವರ ಜಯಂತಿ ದಿವಸವಾದ ಫಾಲ್ಗುಣ ಕೃಷ್ಣ ಏಕಾದಶಿ ದಿನದಂದೇ ಜಗದ್ಗುರು ಶ್ರೀ ಚಂದ್ರಶೇಖರ ಭಾರತೀ ಜಗದ್ಗುರು ಮಹಾಸ್ವಾಮಿರವರು ಅಮೃತ ಶಿಲಾಮೂರ್ತಿ ಯನ್ನು ಪ್ರತಿಷ್ಠಾಪಿಸಿ ಆ ಭವ್ಯಮಂದಿರಕ್ಕೆ **ಅಭಿನವ ಶಂಕರಾಲಯ** ಎಂದು ನಾಮಕರಣ ಮಾಡಿದರು. ಆಲಯದಲ್ಲಿ ನಿತ್ಯವು ವೇದಾಂತ ಪಾಠಗಳು ನಡೆಯುವಂತೆ ವ್ಯವಸ್ಥೆ ಮಾಡಿದರು.



ಶ್ರೀ ಶಂಕರಾಚಾರ್ಯ ವಿಧುಶೇಖರ ಭಾರತಿ ಸನ್ನಿದಾನಂ

ದಿನಾಂಕ: 30–03–2024ರಿಂದ 06–04–2024ರವರೆಗೆ ಮೈಸೂರಿನ ಅಭಿನವ ಶಂಕರಾಲಯದ ಶತಮಾನೋತ್ಸವ ಸಂಭ್ರಮಾಚರಣೆ ಅಂಗವಾಗಿ ವಿಶೇಷ ಲೇಖನ

ನಂತರ ಅನೇಕ ಭಕ್ತರಿಗೆ ಅಭಿನವ ಶಂಕರಾಲಯದಲ್ಲಿ ಶ್ರೀ ಶಾರದಾಂಬ, ಶ್ರೀ ಶಂಕರಾಚಾರ್ಯರರ ಮೂರ್ತಿಗಳ ಪ್ರತಿಷ್ಠೆಯಾಗಬೇಕೆಂಬ ಹೆಬ್ಬಯಕೆ ಉಂಟಾಗಿ 1962ರಲ್ಲಿ ಶೃಂಗೇರಿ ಶಾರದಾಪೀಠದ 35ನೇ ಜಗದ್ಗುರುಗಳಾಗಿದ್ದ ಶ್ರೀ ಅಭಿನವ ವಿದ್ಯಾತೀರ್ಥ ಮಹಾಸ್ವಾಮಿಗಳವರಲ್ಲಿ ಪ್ರಮುಖ ಭಕ್ತರಾದ ಪಿ.ಆರ್. ಹರಿಹರನ್, ಸ್ವಾತಂತ್ರ್ಯ ಹೋರಾಟಗಾರರಾಗಿದ್ದ ಅಗರಂ ರಂಗಯ್ಯ ಮುಂತಾದವರು ಅರಿಕೆ ಮಾಡಲಾಗಿ ದೇವತಾ ಪ್ರತಿಷ್ಠೆಯಾಗಲಿ ಎಂದು ಶ್ರೀಗುರುಗಳವರು ಅಪ್ಪಣೆ ಕೊಟ್ಟರು. ಶ್ರೀಗಳವರ ಒಪ್ಪಿಗೆ ಅನುಗ್ರಹವು ದೊರೆಯುತ್ತಿದ್ದಂತೆಯೇ



ಸಂ. ಶ್ರೀಕಂಠ ಕುಮಾರ್
ಮೊ: 9481067333

ಭಕ್ತ ವೃಂದವು ಕಾರ್ಯೋನ್ಮುಖವಾಗಿ ಆದಿಗುರು ಶ್ರೀ ಶಂಕರಾಚಾರ್ಯರ, ಶ್ರೀ ಶಾರದಾ ಅಮ್ಮನವರ ಶಿಲಾಮೂರ್ತಿಯ ಪ್ರತಿಷ್ಠಾಪನೆಗೆ ಸಕಲ ಸಿದ್ದತೆಗಳು ನಡೆದವು. ಅಭಿನವ ಶಂಕರಾಲಯಕ್ಕೆ ಪೂರ್ವದಲ್ಲಿ ಮಹಾದ್ವಾರವು, ಉತ್ತರ–ದಕ್ಷಿಣ ಪಾರ್ಶ್ವಗಳಲ್ಲಿ ಒಂದೊಂದು ದ್ವಾರವು ಪಶ್ಚಿಮದಲ್ಲಿನ ಗರ್ಭಗುಡಿಯ ಅಕ್ಕಪಕ್ಕಗಳಲ್ಲಿ ಒಂದೊಂದು ದ್ವಾರವೂ ಇದ್ದವು. ಈ ಪಶ್ಚಿಮ ದ್ವಾರವನ್ನು ಮುಚ್ಚಿಸಿ, ಅಲ್ಲಿ ಎರಡು ಗರ್ಭಗುಡಿಗಳನ್ನು ನಿರ್ಮಿಸಲಾಯಿತು. ದೇವತಾ ಮೂರ್ತಿಗಳು, ಶ್ರೀಶಾರದಾ ಅಮ್ಮನವರ ಪಂಚಲೋಹದ ಎರಕದ ವಿಗ್ರಹ, ಶ್ರೀ ಶಂಕರಾ ಚಾರ್ಯರರ ಅಮೃತ ಶಿಲಾಮೂರ್ತಿಗಳನ್ನು ವ್ಯವಸ್ಥೆಗೊಳಿಸಲಾಯಿತು.

ಮುಂದೆ, ರೌದ್ರಿ ಸಂವತ್ಸರದಲ್ಲಿ ಅಂದರೆ 1980ರ ಮೇ ಮಾಸದಲ್ಲಿ ಪರಮಪೂಜ್ಯ ಜಗದ್ಗುರು ಶ್ರೀ ಅಭಿನವ ವಿದ್ಯಾತೀರ್ಥ ಮಹಾ ಸ್ವಾಮಿಗಳು, ಅವರ ತತ್ಕರಕಮಲ ಸಂಜಾತರಾದ ಜಗದ್ಗುರು ಶ್ರೀ ಭಾರತೀ ತೀರ್ಥಸ್ವಾಮಿಗಳವರು ಮೈಸೂರಿಗೆ ವಿಜಯಯಾತ್ರೆ ಚಿತ್ತೈಸಿ ಹಲವು ದಿನಗಳ ಕಾಲ ವಾಸ್ತವ್ಯಮಾಡಿ ಅಭಿನವ ಶಂಕರಾಲಯದಲ್ಲಿನ ಮಧ್ಯದಲ್ಲಿರುವ ಗರ್ಭ ಗುಡಿಯಲ್ಲಿ ಶ್ರೀ ಶಾರದಾ ಅಮ್ಮನವರು, ಬಲಭಾಗದ ಗರ್ಭಗುಡಿಯಲ್ಲಿ ಜಗದ್ಗುರು ಶ್ರೀ ಶಂಕರಾಚಾರ್ಯರ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ಅದೇ ಜನ್ಮಸ್ಥಾನದಲ್ಲಿ ಜಗದ್ಗುರು ಶ್ರೀ ಸಚ್ಚಿದಾನಂದ ಶಿವಾಭಿನವ ನೃಸಿಂಹ ಭಾರತೀ ಮಹಾಸ್ವಾಮಿಗಳವರ ಶಿಲಾಮೂರ್ತಿಯನ್ನು ಪುನರ್ ಪ್ರತಿಷ್ಠಾಪಿಸಿದರು. ಮುಮುಕ್ಷುಗಳ ಉಪಾಸನೆಗಾಗಿ ಶ್ರೀ ಶಂಕರಭಗವತ್ಪಾದರು ಸಗುಣೋ ಪಾಸನೆಯನ್ನು ಹಾಕಿಕೊಟ್ಟು ಶಾಸ್ತ್ರಸಮ್ಮತವಾದ ಪಂಚಾಯತನ ಪೂಜಾ ವಿಧಾನವನ್ನು ರೂಢಿಗೆ ತಂದರು.

ಅಂತೆಯೇ ಭಕ್ತರ ಕೋರಿಕೆಯನ್ನು ಮನ್ನಿಸಿ ಶ್ರೀಶಾರದಾಪೀಠದ 35ನೇ ಪೀಠಾಧಿಪತಿಗಳಾದ ಜಗದ್ಗುರು ಶ್ರೀ ಅಭಿನವವಿದ್ಯಾತೀರ್ಥ ಮಹಾಸ್ವಾಮಿಗಳು ಮತ್ತು ಜಗದ್ಗುರು ಶ್ರೀ ಭಾರತೀ ತೀರ್ಥ ಸ್ವಾಮಿಗಳವರು 1984ರ ಫೆಬ್ರವರಿಯಲ್ಲಿ ಮೈಸೂರಿಗೆ ದಯ ಮಾಡಿಸಿ ಅಭಿನವ ಶಂಕರಾಲಯದಲ್ಲಿ ಶ್ರೀ ಮಹಾ ಗಣಪತಿ, ಶ್ರೀ ಸತ್ಯನಾರಾಯಣಸ್ವಾಮಿಗಳವರ ಮೂರ್ತಿ ಪ್ರತಿಷ್ಠೆಯನ್ನು ನೆರವೇರಿಸಿದರು. ಅನಂತರ ಪಂಚಾಯತನಕ್ಕೆ ಅಗತ್ಯವಾಗಿದ್ದ ಶ್ರೀ ಸೂರ್ಯ ನಾರಾಯಣಸ್ವಾಮಿಯೊಡನೆ ನವಗ್ರಹ ಮೂರ್ತಿಗಳ ಪ್ರತಿಷ್ಠಾಪನೆಯೂ ನೆರವೇರಿತು. ಈ ಅಭಿನವ ಶಂಕರಾಲಯವು ಪಂಚಾಯತನ ಪೂಜಾಮಂದಿರವಾಗಿ, ಧಾರ್ಮಿಕ ಪರಮಶ್ರದ್ಧಾ ಕೇಂದ್ರವಾಗಿ ಶ್ರೀ ಶಾರದಾ ಪರಮೇಶ್ವರಿ ಅಮ್ಮನವರ, ಶ್ರೀ ಶಂಕರ ಭಗವತ್ಪಾದಾಚಾರ್ಯರ, ಶ್ರೀ ಮಹಾಗಣಪತಿ, ಶ್ರೀ ಸತ್ಯ ನಾರಾಯಣ ಸ್ವಾಮಿ, ಶ್ರೀಮಠದ ಆವರಣದಲ್ಲಿ ನವಗ್ರಹಗಳವರ ಸನ್ನಿಧಿ, ಅರಳಿಮರಕ್ಕೆ ಅಶ್ವತ್ಥಕಟ್ಟೆ ನಿರ್ಮಾಣ ಮಾಡಿ ಜಗದ್ಗುರು ಶ್ರೀ ಸಚ್ಚಿದಾನಂದ ಶಿವಾಭಿನವನೃಸಿಂಹ ಭಾರತೀ ಮಹಾಸ್ವಾಮಿಗಳವರ ಜನ್ಮಸ್ಥಾನವು ಪೂರ್ಣ ಪ್ರಮಾಣದ ಆಧ್ಯಾತ್ಮಿಕ, ಧಾರ್ಮಿಕ, ಸಾಂಸ್ಕೃತಿಕ ಚಟುವಟಿಕೆಗಳಿಗೆ ಮೈಸೂರು ಪ್ರಾಂತ್ಯದಲ್ಲಿ ಪ್ರಮುಖ ಕೇಂದ್ರವಾಗಿದೆ. ಪ್ರಸ್ತುತ ಅಭಿನವ ಶಂಕರಾಲಯದ ಶತಮಾನೋತ್ಸವ ವನ್ನು ಆಚರಿಸಲ್ಪಡುತ್ತಿರುವುದು ಶ್ರೀಮಠದ ಭಕ್ತರಿಗೆ ಹಾಗೂ ಆಸ್ತಿಕರಿಗೆ ಸಂತಸ ತಂದಿದೆ.

ಅಭಿನವ ಶಂಕರಾಲಯದಲ್ಲಿ ಜಗದ್ಗುರು ಶ್ರೀ ಸಚ್ಚಿದಾನಂದ ಶಿವಾಭಿನವನೃಸಿಂಹ ಭಾರತೀ ಮಹಾಸ್ವಾಮಿಗಳವರ ಶಿಲಾಮೂರ್ತಿಯ ಸ್ಥಾಪನೆಯು 100 ವಸಂತಗಳನ್ನು ಪೂರೈಸಿದ ಈ ಶುಭ ಸಂದರ್ಭದಲ್ಲಿ ಶತಮಾನೋತ್ಸವ ಸಂಭ್ರಮಾಚರಣೆಯ ಅಂಗವಾಗಿ ಶೃಂಗೇರಿ ಶ್ರೀ ಶಾರದಾಪೀಠದ 37ನೇ ಜಗದ್ಗುರುಗಳಾದ ಶ್ರೀ ವಿಧುಶೇಖರಭಾರತೀ ಸನ್ನಿಧಾನಂ ರವರು ಮೈಸೂರಿಗೆ ಚಿತ್ತೈಸಿ, 30–03–2024ರಿಂದ 06–04–2024ರವರೆಗೆ ವಾಸ್ತವ್ಯ ಮಾಡಿ ನೂತನವಾಗಿ ನಿರ್ಮಾಣಗೊಂಡಿರುವ 'ಸಚ್ಚಿದಾನಂದ ವಿಲಾಸ' ಎಂಬ ಹೆಸರಿನ ಗುರುಭವನ ಹಾಗೂ ಸಭಾಂಗಣವನ್ನು ಲೋಕಾರ್ಪಣೆ ಮಾಡಲಿದ್ದು ಅಭಿನವ ಶಂಕರಾಲಯದ ಶ್ರೀ ಮಹಾಗಣಪತಿ, ಶ್ರೀಸತ್ಯ ನಾರಾಯಣಸ್ವಾಮಿ, ಜಗದ್ಗುರು ಶ್ರೀ ಶಂಕರಭಗವತ್ಪಾದರ ಸನ್ನಿಧಿಯಲ್ಲಿ ಪಂಚಾಭಿಷೇಕ, ನವಗ್ರಹ ಮೂರ್ತಿಗಳ ಪುನರ್ ಪ್ರತಿಷ್ಠಾಪನೆ, ಲೋಕ ಕಲ್ಯಾಣಾರ್ಥವಾಗಿ ಮಹಾ ರುದ್ರ ಜಪ ಮತ್ತು ಶತಚಂಡಿಕಾ ಮಹಾಯಾಗಗಳು ಸಾರ್ವಜನಿಕ ದರ್ಶನ, ಪಾದಪೂಜೆ ಮತ್ತು ಭಿಕ್ಷಾವಂದನೆ, ಮತ್ತು ಶ್ರೀಶಾರದಾಂಬ ಮತ್ತು ಜಗದ್ಗುರು ಶ್ರೀ ಸಚ್ಚಿದಾನಂದ ಶಿವಾಭಿನವ ನೃಸಿಂಹ ಭಾರತೀ ಮಹಾಸ್ವಾಮಿಗಳ ಸನ್ನಿಧಿಯಲ್ಲಿ ಕುಂಭಾಭಿಷೇಕ ಮತ್ತು ಶಿಖರ ಕುಂಬಾಭಿಷೇಕವು ಸನ್ನಿಧಾನಂಗಳವರ ಅಮೃತ ಹಸ್ತದಿಂದ ನೆರವೇರಲಿದ್ದು ಮುಂತಾದ ಹಲವಾರು ಕಾರ್ಯಕ್ರಮಗಳು ಅಲ್ಲದೇ ಪ್ರತಿನಿತ್ಯ ರಾತ್ರಿ ಶ್ರೀ ಚಂದ್ರಮೌಳೇಶ್ವರ ಸ್ವಾಮಿಯ ಸಂಸ್ಥಾನ ಪೂಜೆಯನ್ನು ನೆರವೇರಿಸಿ ಭಕ್ತರನ್ನು ಅನುಗ್ರಹಿಸಲಿದ್ದಾರೆ. ಹಾಗೆಯೇ ಭಕ್ತರಿಂದ ಗುರು ವಂದನಾ ಕಾರ್ಯಕ್ರಮವು ನಡೆಯಲಿದೆ.

ಈ ಎಲ್ಲಾ ಕಾರ್ಯಕ್ರಮಗಳು ಜಗದ್ಗುರು ಶ್ರೀ ವಿಧುಶೇಖರ ಭಾರತೀ ಸನ್ನಿಧಾನಂಗಳವರ ಪೂರ್ಣಾಶೀರ್ವಾದ ಮತ್ತು ಮಾರ್ಗದರ್ಶನದೊಂದಿಗೆ ಶ್ರೀಮಠದ ಸೇವಾಕರ್ತರಾಗಿ, ಪ್ರಸ್ತುತ ಅಭಿನವ ಶಂಕರಾಲಯದ ಧರ್ಮಾಧಿಕಾರಿಗಳಾದ ಹೆಚ್. ರಾಮಚಂದ್ರರವರು ಜವಾಬ್ದಾರಿ ಮತ್ತು ಶ್ರಮ ವಹಿಸಿರುವುದು ಅಭಿನವ ಶಂಕರಾಲಯದ ಶತಮಾನೋತ್ಸವದ ಸಂಭ್ರಮಾಚರಣೆಗೆ ಹೆಚ್ಚಿನ ಮೆರುಗು ನೀಡಿ ಭಕ್ತರಲ್ಲಿ ಭಕ್ತಿಯ ಭಾವ ಹೆಚ್ಚಿಸಿದೆ.

ಬೆಂಗಳೂರು ಗ್ರಾಮಾಂತರದಿಂದ ಕಾಂಗ್ರೆಸ್ ಅಭ್ಯರ್ಥಿ ಡಿಕೆ ಸುರೇಶ್, ಹಾಸನದಿಂದ ಜೆಡಿಎಸ್ ಅಭ್ಯರ್ಥಿ ಪ್ರಜ್ವಲ್ ರೇವಣ್ಣ ನಾಮಪತ್ರ ಸಲ್ಲಿಕೆ

ಬೆಂಗಳೂರು: ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಹಾಗೂ ಹಾಲಿ ಸಂಸದ ಡಿ.ಕೆ. ಸುರೇಶ್ ಇಂದು ರಾಮನಗರದಲ್ಲಿ ಮತ್ತು ಹಾಸನ ಲೋಕಸಭಾ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿಯಾಗಿ ಹಾಲಿ ಶಾಸಕ ಪ್ರಜ್ವಲ್ ರೇವಣ್ಣ ಹಾಸನದಲ್ಲಿ ಗುರುವಾರ ನಾಮಪತ್ರ ಸಲ್ಲಿಸಿದರು.

ಕರ್ನಾಟಕದಲ್ಲಿ 2019ರ ಲೋಕಸಭೆ ಚುನಾವಣೆಯಲ್ಲಿ ಗೆದ್ದ ಏಕೈಕ ಕಾಂಗ್ರೆಸ್ ಅಭ್ಯರ್ಥಿಯಾಗಿದ್ದ ಹಾಲಿ ಸಂಸದ ಡಿ.ಕೆ ಸುರೇಶ್ ಗುರುವಾರ ಬೆಂಗಳೂರು ಗ್ರಾಮಾಂತರ ಕ್ಷೇತ್ರದಿಂದ ನಾಮಪತ್ರ ಸಲ್ಲಿಸುವ ವೇಳೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ರಾಮನಗರ ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾ ರೆಡ್ಡಿ ಇತರರು ಉಪಸ್ಥಿತರಿದ್ದರು. ಡಿ.ಕೆ ಸುರೇಶ್ ನಾಮಪತ್ರ ಸಲ್ಲಿಕೆಗೂ ಮುನ್ನ ತಮ್ಮ ಮನೆ ದೇವರು ಕಬ್ಬಾಳಮ್ಮ ದೇಗುಲಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿದರು. ಕನಕಪುರದ ಕೋಡಿಹಳ್ಳಿ ನಿವಾಸಕ್ಕೆ ಭೇಟಿ ನೀಡಿ ತಾಯಿ ಆಶೀರ್ವಾದ ಪಡೆದುಕೊಂಡರು. ಬಳಿಕ ಮನೆ ದೇವರುಗಳಾದ ಕೆಂಕೇರಮ್ಮ, ಕಬ್ಬಾಳಮ್ಮ, ಮರಳೆಮಠಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು

ನಾಮಪತ್ರ ಸಲ್ಲಿಕೆ ವೇಳೆ ಮಾತನಾಡಿದ ಡಿಕೆ ಸುರೇಶ್, ದೇವೇಗೌಡರ ಕುಟುಂಬದೊಂದಿಗೆ ಚುನಾವಣಾ ಹೋರಾಟಗಳು ನಮಗೆ ಹೊಸದಲ್ಲ. ದೇವೇಗೌಡರ ಕುಟುಂಬದ ವಿರುದ್ಧ ನಾವು ಹಲವು ಚುನಾವಣೆಗಳನ್ನು ಎದುರಿಸಿದ್ದೇವೆ. ಅವರ ವಿರುದ್ಧ ಮಹಿಳೆಯೊಬ್ಬರ ಗೆಲ್ಲಿಸಿದ್ದೇವೆ. ಕುಮಾರಸ್ವಾಮಿ ಅವರನ್ನು ಚುನಾವಣೆಯಲ್ಲಿ ಎದುರಿಸಿದ್ದೇನೆ. ಈ ಬಾರಿಯೂ ಗೆಲ್ಲುವ ವಿಶ್ವಾಸವಿದೆ. ಹಿಂದಿನ ಸಿದ್ದರಾಮಯ್ಯ ಸರ್ಕಾರದಲ್ಲಿ ನಾನು ಮಂತ್ರಿಯಾಗಿರದಿದ್ದರೂ ಅನಿತಾ ಕುಮಾರಸ್ವಾಮಿ ಅವರನ್ನು ಭಾರಿ ಅಂತರದಿಂದ ಸೋಲಿಸಿದ್ದೇವೆ. ಅಂದಿನಿಂದ ಇಂದಿನವರೆಗೂ ಜನರು ನಮಗೆ ಬೆಂಬಲ ನೀಡುತ್ತಿದ್ದಾರೆ ಎಂದರು.

ಕಳೆದ ಲೋಕಸಭಾ ಚುನಾವಣೆಯಲ್ಲಿ ಜೆಡಿಎಸ್‌ನಿಂದ ಗೆದ್ದ ಏಕೈಕ ಸಂಸದ ಪ್ರಜ್ವಲ್ ರೇವಣ್ಣ ಈ ಬಾರಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿ ಸ್ಪರ್ಧೆಗಿಳಿದಿದ್ದಾರೆ. ಇಂದು ಅವರು ನಾಮಪತ್ರ ಸಲ್ಲಿಸುವ ವೇಳೆ ಅವರ ತಂದೆ ಹಾಗು ಮಾಜಿ ಸಚಿವ ಹೆಚ್.ಡಿ. ರೇವಣ್ಣ, ಶಾಸಕರಾದ ಎ.ಮಂಜು, ಸಿ.ಎನ್.ಬಾಲಕೃಷ್ಣ, ಸ್ವರೂಪ್ ಸಾಥ್ ನೀಡಿದರು.



ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಹಾಗೂ ಹಾಲಿ ಸಂಸದ ಡಿ.ಕೆ. ಸುರೇಶ್ ಗುರುವಾರ ರಾಮನಗರದಲ್ಲಿ ನಾಮಪತ್ರ ಸಲ್ಲಿಸಿದರು.



ಹಾಸನ ಲೋಕಸಭಾ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿಯಾಗಿ ಹಾಲಿ ಶಾಸಕ ಪ್ರಜ್ವಲ್ ರೇವಣ್ಣ ಗುರುವಾರ ಹಾಸನದಲ್ಲಿ ನಾಮಪತ್ರ ಸಲ್ಲಿಸಿದರು.

ನೂರಕ್ಕೆ ನೂರರಷ್ಟು ಈ ಬಾರಿಯೂ ಸುರೇಶ್ ಗೆಲ್ತಾರೆ

ಮುಖ್ಯಮಂತ್ರಿ ಸಿದ್ದರಾಮಯ್ಯ ಭವಿಷ್ಯ



ರಾಮನಗರ: ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ಡಿಕೆ ಸುರೇಶ್ ನೂರಕ್ಕೆ ನೂರರಷ್ಟು ಈ ಬಾರಿಯೂ ಗೆಲ್ಲುತ್ತಾರೆ. ಪ್ರತಿನಿತ್ಯ ನನಗೆ ಮಾಹಿತಿ ಬರುತ್ತಿದೆ. ಈ ಆಧಾರದಲ್ಲಿ ಹೇಳುತ್ತೇನೆ. ಡಿಕೆ ಸುರೇಶ್ ಅವರ ಗೆಲುವು ಶತಸಿದ್ಧ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಡಿಕೆ ಸುರೇಶ್ ನಾಮಪತ್ರ ಸಲ್ಲಿಕೆ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು. ಡಿಕೆ ಸುರೇಶ್ ಕ್ಷೇತ್ರದ ಅಭಿವೃದ್ಧಿಗೆ ಮತ್ತು ಜಿಲ್ಲೆಯ ಪ್ರಗತಿಗೆ ನಿರಂತರವಾಗಿ ದುಡಿಯುತ್ತಾರೆ. ಈ ಕಾರಣಕ್ಕೆ ಕಾಂಗ್ರೆಸ್ ಮತ್ತೆ ಇವರನ್ನು ಅಭ್ಯರ್ಥಿಯನ್ನಾಗಿಸಿದೆ. ಇವರನ್ನು ನಿಮ್ಮ ಪ್ರತಿನಿಧಿಯಾಗಿ ಗೆಲ್ಲಿಸಿ ದೆಹಲಿಗೆ ಕಳುಹಿಸಿದರೆ ಇವರು ನಿಮ್ಮ ದ್ವನಿಯಾಗಿ ಕೆಲಸ ಮಾಡುತ್ತಾರೆ ಎಂದರು.

ಸರ್ಕಾರ ಬಂದ ದಿನದಿಂದಲೇ ನಾವು ಕೊಟ್ಟ ಮಾತನ್ನು ಈಡೇರಿಸುವ ಕೆಲಸ ಶುರು ಮಾಡಿದೆವು. ಎಂಟೇ ತಿಂಗಳಲ್ಲಿ ಐದು ಗ್ಯಾರಂಟಿ ಜಾರಿ ಮಾಡಿದ್ದೇವೆ. ಬಿಜೆಪಿ ಇವತ್ತಿನವರೆಗೂ ಕೊಟ್ಟ ಮಾತಿನಲ್ಲಿ ಒಂದನ್ನೂ ಈಡೇರಿಸಿಲ್ಲ. ಹೀಗಾಗಿ ಬಿಜೆಪಿಗೆ ಮತ ಹಾಕಿದರೆ ಏನು ಪ್ರಯೋಜನ ಎಂದು ಪ್ರಶ್ನಿಸಿಕೊಳ್ಳಿ ಎಂದರು.

ನಾವು ನಮ್ಮ ಗ್ಯಾರಂಟಿ ಯೋಜನೆಗಳ ಮೂಲಕ ನೇರವಾಗಿ ಕನ್ನಡ ನಾಡಿನ ಜನತೆಯ ಖಾತೆಗೆ ಹಣ ಜಮೆ ಮಾಡುತ್ತಿದ್ದೇವೆ. ಶೂದ್ರರು, ದಲಿತರು, ಮಹಿಳೆಯರು, ಶ್ರಮಿಕರು, ದುಡಿಯುವ ವರ್ಗಗಳ ಎಲ್ಲರ ಮನೆ ಮನೆಯನ್ನೂ ನಮ್ಮ ಗ್ಯಾರಂಟಿಗಳು ತಲುಪಿವೆ. ಇದು ನಮ್ಮ ಬದ್ಧತೆ. ನೀವು ಕೊಟ್ಟ ಒಂದೊಂದು ಓಟಿಗೂ ಘನತೆ ತಂದಿದ್ದೇವೆ ಎಂದು ಹೇಳಿದರು.

ಬಿಜೆಪಿ–ಜೆಡಿಎಸ್ ಕಾರ್ಯಕರ್ತರು, ಕುಟುಂಬಗಳಿಗೂ ನಮ್ಮ ಸರ್ಕಾರ ಹಣ ಜಮೆ ಮಾಡುತ್ತಿದೆ. ಪಕ್ಷ, ಜಾತಿ, ಧರ್ಮ ಯಾವುದನ್ನೂ ನೋಡದೆ ಇಡೀ ನಾಡಿನ ಜನತೆಗೆ ಅವರ ಕುಟುಂಬಗಳಿಗೆ ಉಚಿತ ಅಕ್ಕಿ, ಉಚಿತ ವಿದ್ಯುತ್ ಜತೆಗೆ ಮಹಿಳೆಯರ ಖಾತೆಗೆ 2 ಸಾವಿರ ರೂಪಾಯಿ, ನಿರುದ್ಯೋಗಿಗಳ ಖಾತೆಗೆ ಭತ್ಯೆಯನ್ನು ಜಮೆ ಮಾಡುತ್ತಿದೆ. ಹೀಗೆ ಕಾಂಗ್ರೆಸ್ ಪಕ್ಷ ಪ್ರತಿಯೊಬ್ಬ ಮತದಾರರ ನಂಬಿಕೆ ಉಳಿಸಿಕೊಂಡಿದೆ ಎಂದು ವಿವರಿಸಿದರು.

ಪ್ರತೀ ತಿಂಗಳು 4 ರಿಂದ 5 ಸಾವಿರ ರೂ. ಅನ್ನು ಪ್ರತಿ ಅರ್ಹ ಕುಟುಂಬಗಳಿಗೆ ನಮ್ಮ ಕಾಂಗ್ರೆಸ್ ಸರ್ಕಾರ ನೀಡುತ್ತಿದೆ. ಕಾಂಗ್ರೆಸ್ ಅಂದರೆ ಬಡವರ, ಮಧ್ಯಮ ವರ್ಗದವರ ಪರವಾಗಿ ಕೆಲಸ ಮಾಡುವ ಪಕ್ಷ ಎಂದರು.

ಈ ವೇಳೆ ಡಿಸಿಎಂ ಡಿಕೆ ಶಿವಕುಮಾರ್, ಸಚಿವರಾದ ಎಂಸಿ ಸುಧಾಕರ್, ಮಂಕಾಳ ವೈದ್ಯ, ರಾಷ್ಟ್ರೀಯ ಯುವ ಕಾಂಗ್ರೆಸ್ ಅಧ್ಯಕ್ಷರಾದ ಬಿವಿ ಶ್ರೀನಿವಾಸ್, ವಿಧಾನ ಪರಿಷತ್ ಸದಸ್ಯ ಸುದಾಮ ದಾಸ್ ಸೇರಿ ರಾಮನಗರ ಜಿಲ್ಲೆಯ ಕಾಂಗ್ರೆಸ್ ಶಾಸಕರು ಮತ್ತು ಜಿಲ್ಲಾ ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

ಪ್ರಜ್ವಲ್ ರೇವಣ್ಣ ಆಸ್ತಿ ಮೌಲ್ಯ ನಾಲ್ಕು ಪಟ್ಟು ಹೆಚ್ಚಳ

ಬೆಂಗಳೂರು: ಹಾಸನ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸುತ್ತಿರುವ ರಾಜ್ಯದ ಏಕೈಕ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಅವರು 40.85 ಕೋಟಿ ರೂ. ಮೌಲ್ಯದ ಆಸ್ತಿಯನ್ನು ಘೋಷಿಸಿದ್ದಾರೆ. ಇದು 2019ರ ಚುನಾವಣಾ ಅಫಿಡವಿಟ್‌ಗೆ ಹೋಲಿಸಿದರೆ ನಾಲ್ಕು ಪಟ್ಟು ಹೆಚ್ಚಳವಾಗಿದೆ. ಠೇವಣಿ, ಹೂಡಿಕೆ, ಇತರರಿಗೆ ನೀಡಿದ ಸಾಲ ಮತ್ತು ಆಭರಣ ಸೇರಿದಂತೆ ಒಟ್ಟು 5.45 ಕೋಟಿ ಮೌಲ್ಯದ ಚರ ಮತ್ತು 35.84 ಕೋಟಿ ಮೌಲ್ಯದ ಸ್ಥಿರಾಸ್ತಿಯನ್ನೂ ಹೊಂದಿರುವುದಾಗಿ ಅವರು ಘೋಷಿಸಿದ್ದಾರೆ.

2019ರ ಸಾರ್ವತ್ರಿಕ ಚುನಾವಣೆಯಲ್ಲಿ ಅವರು ತಮ್ಮ ಒಟ್ಟು ಆಸ್ತಿ ಮೌಲ್ಯ 9.78 ಕೋಟಿ ರೂಪಾಯಿ ಎಂದು ಘೋಷಿಸಿದ್ದರು. ಮಾಜಿ ಪ್ರಧಾನಿ ದೇವೇಗೌಡರ ಮೊಮ್ಮಗನಾಗಿರುವ ಪ್ರಜ್ವಲ್ ಅವರು 4.49 ಕೋಟಿ ರೂ. ಬಾಧ್ಯತೆ ಹೊಂದಿದ್ದು, ಸರ್ಕಾರದ ಬಾಕಿ 3.04 ಕೋಟಿ ರೂ. ಇರುವುದಾಗಿ ತಿಳಿಸಿದ್ದಾರೆ.

ಸುರೇಶ್ ಆಸ್ತಿ 5 ವರ್ಷಗಳಲ್ಲಿ 259.19 ಕೋಟಿ ಹೆಚ್ಚಳ

ಡಿ.ಕೆ.ಸುರೇಶ್ ಕಳೆದ ಲೋಕಸಭಾ ಚುನಾವಣೆಯಲ್ಲಿ (2019ರಲ್ಲಿ) ಆಸ್ತಿ ಮೌಲ್ಯ 333.86 ಕೋಟಿ ರೂ. ಇದೆ ಎಂದು ಘೋಷಿಸಿಕೊಂಡಿದ್ದರು. ಅಲ್ಲದೇ 8 ತಿಂಗಳ ಹಿಂದೆ ಅಷ್ಟೇ ಸುರೇಶ್ ಅವರು ವಿಧಾನಸಭೆ ಚುನಾವಣೆ ವೇಳೆ ಡಮ್ಮಿ ಅಭ್ಯರ್ಥಿಯಾಗಿ ಕನಕಪುರ ಕ್ಷೇತ್ರದಿಂದ ನಾಮಪತ್ರ ಸಲ್ಲಿಸಿದ್ದಾಗ ತಮ್ಮ ಹೆಸರಿನಲ್ಲಿ ಒಟ್ಟು ಆಸ್ತಿ ಮೌಲ್ಯ 353.7 ಕೋಟಿ ರೂ. ಎಂದು ಘೋಷಿಸಿಕೊಂಡಿದ್ದರು. ಆದರೆ ಇದೀಗ ಬೆಂಗಳೂರು ಗ್ರಾಮಾಂತರ ಲೋಕಸಭಾದಿಂದ ಕಣಕ್ಕಿಳಿದಿದ್ದು, ಈ ಸಂದರ್ಭದಲ್ಲಿ ಒಟ್ಟು 593.04 ಕೋಟಿ ರೂ. ಮೌಲ್ಯದ ಆಸ್ತಿ ಇದೆ ಎಂದು ಮಾಹಿತಿ ಹಂಚಿಕೊಂಡಿದ್ದಾರೆ. ಇದರೊಂದಿಗೆ ಒಂದೇ ವರ್ಷದ ಅವರ ಆಸ್ತಿ ಮೌಲ್ಯ ಬರೋಬ್ಬರಿ 239.34 ಕೋಟಿ ಹೆಚ್ಚಳವಾಗಿದ್ದರೆ, ಕಳೆದ ಲೋಕಸಭಾ ಚುನಾವಣೆ ವೇಳೆ ಘೋಷಿಸಿಕೊಂಡಿರುವುದು ಮತ್ತು ಈಗ ತೋರಿಸಿರುವುದು ನೋಡಿದರೆ 5 ವರ್ಷಗಳಲ್ಲಿ ಬರೋಬ್ಬರಿ 259.19 ಕೋಟಿ ರೂ. ಆಸ್ತಿ ಮೌಲ್ಯ ಹೆಚ್ಚಳವಾಗಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Vishveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಆಟೋದಲ್ಲಿ ಬಿಟ್ಟು ಹೋಗಿದ್ದ ಚಿನ್ನಾಭರಣ ಬ್ಯಾಗ್ ಮಾಲೀಕರ ವಶಕ್ಕೆ

ಮೈಸೂರು,ಮಾ.28(ಆರ್‌ಕೆ)–ಆಟೋದಲ್ಲಿ ಮರೆತು ಬಿಟ್ಟು ಹೋಗಿದ್ದ ಚಿನ್ನಾಭರಣವಿದ್ದ ಬ್ಯಾಗ್ ಅನ್ನು ಒಂದು ಗಂಟೆಯಲ್ಲಿ ಪತ್ತೆ ಮಾಡಿದ ಲಷ್ಕರ್ ಠಾಣೆ ಪೊಲೀಸರು ಆಟೋ ಚಾಲಕರ ಸಹಕಾರದಿಂದ ಮಾಲೀಕರಿಗೆ ಒಪ್ಪಿಸಿದ್ದಾರೆ.

ಮೈಸೂರಿನ ಸಾತಗಳ್ಳಿ ನಿವಾಸಿ ಜ್ಯೋತಿ ಎಂಬುವರು ಆಟೋದಲ್ಲಿ ತಾವು ಹಿಂದೆ ಖರೀದಿಸಿದ್ದ 60 ಗ್ರಾಂ ಚಿನ್ನದ ಆಭರಣಗಳನ್ನು ಬದಲಾಯಿಸಲೆಂದು ಅಶೋಕ ರಸ್ತೆಯ ಜುವೆಲರಿ ಅಂಗಡಿಗೆ ಬಂದು ಆಟೋದಿಂದ ಇಳಿಯುವಾಗ ಚಿನ್ನದ ಆಭರಣವಿದ್ದ ಬ್ಯಾಗ್ ತೆಗೆದುಕೊಳ್ಳುವುದನ್ನು ಮರೆತಿದ್ದರು.

ಕೂಡಲೇ ಎಚ್ಚೆತ್ತ ಜ್ಯೋತಿ ಅವರು ನೋಡಿಕೊಳ್ಳುವಷ್ಟರಲ್ಲಿ ಆಟೋ ಹೊರಟು ಹೋಗಿತ್ತು. ತಕ್ಷಣ ಅವರು ಲಷ್ಕರ್ ಠಾಣೆಗೆ ತೆರಳಿ ಮಾಹಿತಿ ನೀಡುತ್ತಿದ್ದಂತೆಯೇ ಕ್ಷಿಪ್ರ ಕಾರ್ಯಾಚರಣೆ ನಡೆಸಿದ ಇನ್ಸ್‌ಪೆಕ್ಟರ್ ಮಹಮದ್ ಸಲೀಂ ಅಬ್ಬಾಸ್ ಹಾಗೂ ಸಿಬ್ಬಂದಿ, ಕೇವಲ ಒಂದೇ ಗಂಟೆ ಯಲ್ಲಿ ಆಟೋ ಪತ್ತೆ ಮಾಡಿ ದರು. ಆದರೆ, ಪ್ರಯಾಣಿಕರು ಸೀಟ್ ಮೇಲೆ ಆಭರಣದ ಬ್ಯಾಗ್ ಬಿಟ್ಟು ಹೋಗಿರುವುದನ್ನು ಆಟೋ ಚಾಲಕ ಮಹಮದ್ ನಸೀರ್ ಗಮನಿಸಿರಲಿಲ್ಲ. ನಂತರ ಆಟೋ ಚಾಲಕ ನನ್ನೂ ಠಾಣೆಗೆ ಕರೆತಂದ ಪೊಲೀಸರು, ಒಡವೆಯನ್ನು ಅದರ ಮಾಲೀಕರಾದ ಜ್ಯೋತಿ ಅವರಿಗೆ ಹಿಂದಿರುಗಿಸಿದರು. ಪೊಲೀಸರ ಸಮಯಪ್ರಜ್ಞೆ ಮತ್ತು ಆಟೋ ಚಾಲಕ ಮಹಮದ್ ನಸೀರ್ ಅವರ ಸಹಕಾರವನ್ನು, ನಗರ ಪೊಲೀಸ್ ಕಮಿಷ್ನರ್ ಬಿ.ರಮೇಶ್, ಡಿಸಿಪಿಗಳಾದ ಎಂ.ಮುತ್ತುರಾಜ್ ಹಾಗೂ ಎಸ್. ಜಾಹ್ನವಿ ಅವರು ಶ್ಲಾಘಿಸಿದ್ದಾರೆ.


ಮಹಮದ್ ನಸೀರ್

ನಾಳೆ ಸುವರ್ಣ ಕಲಾ ಉತ್ಸವ

ಮೈಸೂರು,ಮಾ.28–ಲಯಾಭಿನಯ ಸಂಸ್ಥೆ ನಿರ್ದೇಶಕಿ ವಿದುಷಿ ಎಂ.ಡಿ. ಮಹಾಲಕ್ಷ್ಮಿ ಅವರು ತಮ್ಮ ಮಾತೃಶ್ರೀ ಶ್ರೀಮತಿ ಸುವರ್ಣಮ್ಮ ಅವರ ಸ್ಮರಣಾರ್ಥ ಮಾ.30ರಂದು ಸಂಜೆ 5.30ರಿಂದ ಸುವರ್ಣ ಕಲಾ ಉತ್ಸವ ವಿಶೇಷ ನೃತ್ಯ ಕಾರ್ಯಕ್ರಮವನ್ನು ಜಗನ್ಮೋಹನ ಅರಮನೆಯಲ್ಲಿ ಏರ್ಪಡಿಸಲಾಗಿದೆ. ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದು, ಅಧ್ಯಕ್ಷತೆಯನ್ನು ಬೆಂಗಳೂರಿನ ಶ್ರೀ ರವಿಶಂಕರ ವಿದ್ಯಾಮಂದಿರದ ಪ್ರಾಂಶುಪಾಲರಾದ ಬಿ.ಗಾಯತ್ರಿ ವಹಿಸುವರು. ಮುಖ್ಯ ಅತಿಥಿಗಳಾಗಿ ಮೈಸೂರು ವಿವಿ ಲಲಿತ ಕಲಾ ಕಾಲೇಜಿನ ನೃತ್ಯ ವಿಭಾಗದ ನಿವೃತ್ತ ಪ್ರಾಧ್ಯಾಪಕಿ ಕರ್ನಾಟಕ ಕಲಾಶ್ರೀ ಡಾ.ಶೀಲಾ ಶ್ರೀಧರ್ ಹಾಗೂ ನಂದಿನಿ ನೃತ್ಯಾಲಯದ ನಿರ್ದೇಶಕರಾದ ಗುರು ವಿದ್ವಾನ್ ಆರ್.ಕಣ್ಣನ್ ಆಗಮಿಸಲಿದ್ದಾರೆ. ವಿಶೇಷ ಅತಿಥಿಗಳಾಗಿ ನೂಪುರ ಕಲಾವಿದರು ಟ್ರಸ್ಟ್‌ನ ನಾಟ್ಯಾಚಾರ್ಯ ಪ್ರೊ.ಕೆ.ರಾಮಮೂರ್ತಿರಾವ್ ಭಾಗವಹಿಸಲಿದ್ದಾರೆ.

ಪ್ರಮಾಣ ಪತ್ರ

ಮೈಸೂರು ಸಿಟಿ, ರಾಜೀವ್ ನಗರ, ದೇವನೂರು ಬಡಾವಣೆ, (ಪಿಐಡಿ–191621) ನಿವೇಶನ ನಂ–907 ರಲ್ಲಿನ ಅಧ್ಯಕ್ಷರು ಜಮಯತ್ ಇ ಕುದಾದ್ ಟ್ರಸ್ಟ್ (ರಿ) ಆದ ನಾನು ದೇವರ ಹೆಸರಿನಲ್ಲಿ ಪ್ರಮಾಣೀಕರಿಸುವುದೇನೆಂದರೆ,

ಆದಾಗಿ ನಾನು ಮೈಸೂರು ಸಿಟಿ, ಎನ್.ಆರ್. ಮೊಹಲ್ಲಾ, ದೇವನೂರು ಬಡಾವಣೆ, 1ನೇ ಹಂತ, 17ನೇ ಕ್ರಾಸ್, ಸ್ವತ್ತಿನ ಸಂಖ್ಯೆ: 907 (ಪಿಐಡಿ 191621) ನಲ್ಲಿ ಧರ್ಮಶಾಲಾ ಕಟ್ಟಡವನ್ನು ನಿರ್ಮಿಸುತ್ತಿರುವ ಕಾರಣ ಆದಾಗಿ ನಾನು ಸದರಿ ಸ್ವತ್ತಿನ ಕಟ್ಟಡವನ್ನು ನಿರ್ಮಿಸುವ ವೇಳೆಯಲ್ಲಿ ಅಕ್ಕಪಕ್ಕದ ಕಟ್ಟಡದವರಿಗೆ ಯಾವುದೇ ತೊಂದರೆಯಾಗದಂತೆ ಮತ್ತು ಪಾದಚಾರಿಗಳಿಗೆ ಅಥವಾ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕಟ್ಟಡವನ್ನು ಕಟ್ಟುವುದಾಗಿ ಈ ಮೂಲಕ ಪ್ರಮಾಣೀಕರಿಸುತ್ತೇನೆ. ಸದರಿ ಧಾರ್ಮಿಕ ಕಟ್ಟಡ ನಿರ್ಮಾಣದ ಬಗ್ಗೆ ಯಾವುದೇ ಆಕ್ಷೇಪಣೆಗಳು/ಸಲಹೆಗಳಿದ್ದಲ್ಲಿ ಈ ಪ್ರಕಟಣೆಯು ಪತ್ರಿಕೆಯಲ್ಲಿ ಪ್ರಕಟವಾದ ದಿನಾಂಕದಿಂದ 15 ದಿನದೊಳಗಾಗಿ ಈ ಕೆಳಗೆ ಸಹಿ ಮಾಡಿರುವವರಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಬಹುದಾಗಿದೆ. ಈ ಮೂಲಕ ಪ್ರಮಾಣೀಕರಿಸುತ್ತೇನೆ ಮತ್ತು ಕಟ್ಟಡ ಕಟ್ಟುವಾಗ ಅಕ್ಕಪಕ್ಕದ ಕಟ್ಟಡಕ್ಕೆ ಧಕ್ಕೆ ಆಗದಂತೆ ನೋಡಿಕೊಳ್ಳುತ್ತೇನೆಂದು ಈ ಮೂಲಕ ಪ್ರಮಾಣೀಕರಿಸುತ್ತೇನೆ. ಮೇಲ್ಕಂಡ ಎಲ್ಲಾ ಅಂಶಗಳು ಸತ್ಯವಾಗಿರುತ್ತದೆ.

ಸಹಿ/– ಅಧ್ಯಕ್ಷರು,
ಜಮಯತ್ ಇ ಕುದಾದ್ ಟ್ರಸ್ಟ್ (ರಿ)
ದಿನಾಂಕ: 27–03–2024
ಸ್ಥಳ : ಮೈಸೂರು

ಮೈಸೂರು ಮಿತ್ರ — ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಈ ಕೆಳಗೆ ವಿವರಿಸಿರುವ ಷೆಡ್ಯೂಲ್ ಸ್ವತ್ತಿನ ಮಾಲೀಕರಾದ ಶ್ರೀ. ಕೆ.ಆರ್. ಶ್ರೀನಿವಾಸನ್ ರವರ ಮಗಳು ಹಾಗೂ ಶ್ರೀ ಜೋಡೋಕ್ ಬ್ರನ್ನರ್ ರವರ ಪತ್ನಿ ಶ್ರೀಮತಿ ನೀನ ಸವಿತ ಶ್ರೀನಿವಾಸನ್ ಬ್ರನ್ನರ್ ರವರು ಷೆಡ್ಯೂಲ್ ಸ್ವತ್ತನ್ನು ನನ್ನ ಕಕ್ಷಿದಾರರಿಗೆ ಮಾರಾಟ ಮಾಡಲು ಒಪ್ಪಿರುತ್ತಾರೆ. ಅದರಂತೆ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧಕ್ರಯಕ್ಕೆ ಪಡೆಯಲು ಸಿದ್ಧರಿರುವುದರಿಂದ ಸದರಿ ಸ್ವತ್ತಿನ ಮೇಲೆ ಬ್ಯಾಂಕ್ ಮತ್ತು ಆರ್ಥಿಕ ಸಂಸ್ಥೆಗಳನ್ನು ಒಳಗೊಂಡಂತೆ, ಯಾರಿಗಾದರೂ ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿ, ಆಕ್ಷೇಪಣೆ, ಸಿವಿಲ್ ವ್ಯಾಜ್ಯ, ತಂಟೆ–ತಕರಾರುಗಳು ಇದ್ದಲ್ಲಿ ಈ ಪ್ರಕಟಣೆ ಪ್ರಕಟವಾದ ದಿನದಿಂದ 07 (ಏಳು) ದಿನಗಳ ಒಳಗಾಗಿ ತಮ್ಮ ಆಕ್ಷೇಪಣೆಗಳನ್ನು ಲಿಖಿತ ರೂಪದಲ್ಲಿ ಅಥವಾ ಖುದ್ದಾಗಿ ಸೂಕ್ತ ದಾಖಲಾತಿಗಳೊಂದಿಗೆ ಈ ಕೆಳಗೆ ನಮೂದಿಸಿರುವ ಕಛೇರಿ ವಿಳಾಸಕ್ಕೆ ಸಲ್ಲಿಸಬಹುದಾಗಿದೆ. ತಪ್ಪಿದಲ್ಲಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧಕ್ರಯಕ್ಕೆ ಪಡೆದುಕೊಳ್ಳುತ್ತಾರೆ. ಮೇಲ್ಕಂಡ ಅವಧಿ ನಂತರ ಬರುವ ಆಕ್ಷೇಪಣೆ, ತಂಟೆ–ತಕರಾರುಗಳಿಗೆ ನನ್ನ ಕಕ್ಷಿದಾರರು ಬಾಧ್ಯರಾಗುವುದಿಲ್ಲ ಎಂಬ ಅಂಶವನ್ನು ಈ ಮೂಲಕ ತಿಳಿಯಪಡಿಸಲಾಗಿದೆ.

ಷೆಡ್ಯೂಲ್ ಸ್ವತ್ತಿನ ವಿವರ

ಮೈಸೂರು ನಗರ, ಚಾಮರಾಜ ಮೊಹಲ್ಲಾ, ಚಾಮರಾಜ ಅಗ್ರಹಾರ, ವಿಷ್ಣುವರ್ಧನ ರಸ್ತೆಯಲ್ಲಿರುವ ಸ್ವತ್ತಿನ ಸಂಖ್ಯೆ. 1085, CH-15 ಹಾಲಿ ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ವಾರ್ಡ್ ಸಂಖ್ಯೆ. 04 ಪಿಐಡಿ ಸಂಖ್ಯೆ. 694, ಸ್ವತ್ತಿನ ನಂ. 4–4–530–204, ಹಳೆ ನಂ. 1085, CH-15, ನಿರ್ಧರಣಾ ಸಂಖ್ಯೆ. 1085, CH-15, ದಾಖಲೆ ಸಂಖ್ಯೆ. 23068227 ರ ವಿಸ್ತೀರ್ಣ ಪೂರ್ವ–ಪಶ್ಚಿಮ: 41.148082 ಮೀಟರ್ ಮತ್ತು ಉತ್ತರ–ದಕ್ಷಿಣ 6.096012 ಮೀಟರ್ ಉಳ್ಳ ಸ್ವತ್ತಿಗೆ ಚಕ್ಕುಬಂದಿ ಪೂರ್ವಕ್ಕೆ: ಕನ್ಸರ್ವೆನ್ಸಿ ಗಲ್ಲಿ, ಪಶ್ಚಿಮಕ್ಕೆ: ವಿಷ್ಣುವರ್ಧನ ರಸ್ತೆ, ಉತ್ತರಕ್ಕೆ: ಸ್ವತ್ತಿನ ಸಂಖ್ಯೆ. 1084 ಮತ್ತು ದಕ್ಷಿಣಕ್ಕೆ: ಸ್ವತ್ತಿನ ಸಂಖ್ಯೆ. 1086.

ಸಹಿ/– ಶ್ರೀಲತಾ ದೀಕ್ಷಿತ್, ವಕೀಲರು
ಎಸ್‌ಎಲ್‌ಡಿ ಲಾ ಫರ್ಮ್, ನಂ. 1458/ಎ, ನಾರಾಯಣಶಾಸ್ತ್ರಿ ರಸ್ತೆ, ಸಪ್ನ ಬುಕ್ ಹೌಸ್ ಹತ್ತಿರ, ಮೈಸೂರು–570001. ಮೊ: 9844640641
email: sldlawfirm2021@gmail.com

ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವುದೇನೆಂದರೆ, ನನ್ನ ಕಕ್ಷಿದಾರರು ಕೆಳಗಿನ ಅನುಸೂಚಿಯಲ್ಲಿರುವ ಷೆಡ್ಯೂಲ್ ಸ್ವತ್ತನ್ನು (1) ಶ್ರೀ ಹೆಬ್ಬಾಳಯ್ಯ ಬಿನ್ ಲೇಟ್: ಬೀರೇಗೌಡ, (2) ಶ್ರೀ ಅನಂತ ಬಿನ್ ಲೇಟ್: ಬೀರೇಗೌಡ, (3) ಶ್ರೀ ನಿಂಗರಾಜು ಎಂ.ಕೆ. ಬಿನ್ ಲೇಟ್: ಕೆಂಪೇಗೌಡ (4) ಶ್ರೀ ಶಶಿಕುಮಾರ್ ಬಿನ್ ಶ್ರೀ ನಿಂಗರಾಜು ಎಂ.ಕೆ. (5) ಶ್ರೀ ದರ್ಶನ್ ಗೌಡ ಎನ್ ಬಿನ್ ಶ್ರೀ ನಿಂಗರಾಜು ಎಂ.ಕೆ. (6) ಶ್ರೀ ಅಭಿಷೇಕ್ ಎನ್ ಬಿನ್ ಶ್ರೀ ನಿಂಗರಾಜು ಎಂ.ಕೆ ಮತ್ತು (7) ಶ್ರೀ ಶಿವಕುಮಾರ ಬಿ ಬಿನ್ ಲೇಟ್: ಬೀರೇಗೌಡ ರವರುಗಳಿಂದ ಖರೀದಿಸಲು ಇಚ್ಛೆಯುಳ್ಳವರಾಗಿದ್ದು, ಷೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟಂತೆ ಬೇರೆ ಯಾವುದೇ ವ್ಯಕ್ತಿ ಅಥವಾ ಸಂಸ್ಥೆಗಳಿಗೆ ಯಾವುದೇ ರೀತಿಯ ಹಕ್ಕು, ಹಿತಾಸಕ್ತಿ, ಸ್ವಾಧೀನ, ಮಾಲೀಕತ್ವ, ಋಣಭಾರ, ಅಡಮಾನ, ಕ್ಲೇಮು, ತಕರಾರು ವಗೈರೆಗಳು ಇದ್ದಂತಹ ಪಕ್ಷದಲ್ಲಿ ಅಂತಹ ವ್ಯಕ್ತಿಗಳು ಈ ಪ್ರಕಟಣೆ ಪ್ರಕಟವಾದ ದಿನದಿಂದ 10 ದಿನಗಳೊಳಗೆ ನನ್ನ ಕಛೇರಿ ವಿಳಾಸವಾದ ನಂ.1063/71ಎ, ಎಫ್–3ಎ, 2ನೇ ಮೇನ್, 8ನೇ ಕ್ರಾಸ್, ವಿದ್ಯಾರಣ್ಯಪುರಂ, ಮೈಸೂರು 570 008 ಕ್ಕೆ ದಾಖಲಾತಿಗಳ ಸಮೇತ ತಮ್ಮ ಹಕ್ಕು, ಹಿತಾಸಕ್ತಿ, ಸ್ವಾಧೀನ, ಮಾಲೀಕತ್ವ, ಋಣಭಾರ, ಅಡಮಾನ, ಕ್ಲೇಮು, ತಕರಾರು, ಸಾಬೀತುಪಡಿಸಬೇಕಾಗಿರುತ್ತದೆ. ನಿಗದಿತ ಅವಧಿಯೊಳಗಡೆ ದಾಖಲೆ ಸಮೇತ ತಕರಾರು ವಗೈರೆಗಳು ಬರದೇ ಇದ್ದಲ್ಲಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಖರೀದಿಸುವ ನಿಟ್ಟಿನಲ್ಲಿ ಕ್ರಮವಹಿಸಲು ಸಿದ್ಧರಿದ್ದು, ಮುಂದೆ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಬರಬಹುದಾದ ತಂಟೆ ತಕರಾರುಗಳಿಗೆ ನಮ್ಮ ಕಕ್ಷಿದಾರರು ಬಾಧ್ಯರಾಗಿರುವುದಿಲ್ಲ.

ಷೆಡ್ಯೂಲ್ ಸ್ವತ್ತಿನ ವಿವರ

ಮೈಸೂರು ತಾಲ್ಲೂಕು, ವರುಣ ಹೋಬಳಿ, ಮಾರಶೆಟ್ಟಿಹಳ್ಳಿ ಗ್ರಾಮಕ್ಕೆ ಸೇರಿದ ಸರ್ವೆ ನಂ.21/5ರ ವಿಸ್ತೀರ್ಣ 2 ಎಕರೆ ಪೈಕಿ ಪಶ್ಚಿಮ ಭಾಗದ ಸ್ವತ್ತಿನ ವಿಸ್ತೀರ್ಣ 1ಎಕರೆ ಜಮೀನಿಗೆ ಚೆಕ್ಕುಬಂದಿ:

ಪೂರ್ವಕ್ಕೆ : ಸ.ನಂ.21/5 ಬಾಕಿ ಜಮೀನು
ಪಶ್ಚಿಮಕ್ಕೆ : ಉತ್ತನಹಳ್ಳಿ ಎಲ್ಲೆ ಮತ್ತು ರಸ್ತೆ,
ಉತ್ತರಕ್ಕೆ : ಉತ್ತನಹಳ್ಳಿ ಎಲ್ಲೆ ಮತ್ತು ರಸ್ತೆ,
ದಕ್ಷಿಣಕ್ಕೆ : ಸ.ನಂ.21/4ರ ಸ್ವತ್ತು.

ಸಹಿ/– ಶ್ರೀಲಕ್ಷ್ಮಿ ವೈ.ಎಸ್, ವಕೀಲರು
ನಂ.1063/71ಎ, ಎಫ್–3ಎ, 2ನೇ ಮೇನ್, 8ನೇ ಕ್ರಾಸ್, ವಿದ್ಯಾರಣ್ಯಪುರಂ, ಮೈಸೂರು–08
ಮೊ: 9743476614
ಸ್ಥಳ: ಮೈಸೂರು
ದಿ: 28–03–2024

ಹಳೇ ಮೈತ್ರಿಯಿಂದ ಬೆನ್ನಿಗೆ ಚೂರಿ; ಈಗಿನದ್ದು ಸ್ವಾಭಾವಿಕ ಮೈತ್ರಿ

ಬಿಜೆಪಿ-ಜೆಡಿಎಸ್ ಸಮನ್ವಯ ಸಭೆಯಲ್ಲಿ ಕಾಂಗ್ರೆಸ್ ವಿರುದ್ಧ ಮಂಡ್ಯ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಹೆಚ್.ಡಿ.ಕುಮಾರಸ್ವಾಮಿ ತೀವ್ರ ವಾಗ್ದಾಳಿ

ಮಂಡ್ಯ,ಮಾ.28– ಹಳೇ ಸ್ನೇಹಿತರು ಮೈತ್ರಿ ಹೆಸರಿನಲ್ಲಿ ಬೆನ್ನಿಗೆ ಚೂರಿ ಹಾಕಿದರು. ಆದರೆ ಬಿಜೆಪಿ–ಜೆಡಿಎಸ್ ಮೈತ್ರಿ ನ್ಯಾಚುರಲ್ ಅಲಯನ್ಸ್ (ಸ್ವಾಭಾವಿಕ ಮೈತ್ರಿ) ಆಗಿದ್ದು, ರಾಜ್ಯದ ಅಭಿವೃದ್ಧಿಗಾಗಿ ಈ ಮೈತ್ರಿ ನಿರ್ಧಾರವಾಗಿದೆ ಎಂದು ಮಂಡ್ಯ ಲೋಕಸಭಾ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಹಾಗೂ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಕಾಂಗ್ರೆಸ್ ನಾಯಕರ ವಿರುದ್ಧ ವಾಗ್ದಾಳಿ ನಡೆಸಿದರು.

ನಗರದ ಖಾಸಗಿ ಸಮುದಾಯ ಭವನದಲ್ಲಿ ಗುರುವಾರ ನಡೆದ ಜೆಡಿಎಸ್–ಬಿಜೆಪಿ ಸಮನ್ವಯ ಸಮಿತಿ ಸಭೆಯಲ್ಲಿ ಎರಡು ಪಕ್ಷದ ಮುಖಂಡರು, ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಅವರು, ಬಿಜೆಪಿ–ಜೆಡಿಎಸ್ ಹೊಂದಾಣಿಕೆ ಹಾಲು ಜೇನು ಇದ್ದಂತೆ. ಹಿಂದೆ ಬಿಜೆಪಿ ಜೊತೆ ಸರ್ಕಾರ ಮಾಡಿದ ದಿನದಿಂದ ಜೆಡಿಎಸ್ ಮುಗಿಸಲು ಕಾಂಗ್ರೆಸ್ ಪ್ರಯತ್ನಿಸುತ್ತಿದೆ. ಬಿಜೆಪಿಯೊಂದಿಗಿನ 20 ತಿಂಗಳ ಆಡಳಿತ ಇಂದಿಗೂ ಜನ ನೆನೆಯುತ್ತಾರೆ. ಆದರೆ ಅಧಿಕಾರ ಹಸ್ತಾಂತರ ಮಾಡಿಲ್ಲ ಎಂಬ ಆರೋಪ ನನ್ನ ಮೇಲೆ ಮಾಡುತ್ತಾರೆ. ನಾನು ಮಾಡದೆ ಇರುವ ತಪ್ಪನ್ನು ನನ್ನ ತಲೆ ಮೇಲೆ ಹೊತ್ತಿದ್ದೇನೆ. 17 ವರ್ಷ ವನವಾಸ ಅನುಭವಿಸಿದ್ದೇನೆ ಎಂದರು.

ಕಾಂಗ್ರೆಸ್ ಅಧಿಕಾರಕ್ಕೆ ಬರಲಿಕ್ಕೆ ಕಾರಣ ಅವರ ಶಕ್ತಿ ಅಲ್ಲ. ಜೆಡಿಎಸ್ ಬಿಜೆಪಿ ಹೊಂದಾಣಿಕೆ ಆಗದೆ, ನಮ್ಮಲ್ಲಿದ್ದ ಪೈಪೋಟಿ ಅವರಿಗೆ ಲಾಭವಾಗಿದೆ. ಕಾಂಗ್ರೆಸ್ ಸರ್ಕಾರ ಆಕಸ್ಮಿಕ ಸರ್ಕಾರ. ನರೇಂದ್ರ ಮೋದಿ ಪ್ರಧಾನಿಯಾದರೆ ದೇಶ ಬಿಡುತ್ತೇನೆ ಎಂದು ಮಾಜಿ ಪ್ರಧಾನಿ ದೇವೇಗೌಡರು ಹೇಳಿರಲಿಲ್ಲ. ರಾಜ್ಯಸಭೆಗೆ ರಾಜೀನಾಮೆ ಕೊಡುತ್ತೇನೆ ಎಂದಿದ್ದರು. ಆದರೆ ಆ ಬಳಿಕ ಮೋದಿ ಅವರನ್ನು ಭೇಟಿಯಾದ ದೇವೇಗೌಡರಿಗೆ ಗೌರವ ಕೊಟ್ಟರು. ಚುನಾವಣೆ ಸಮಯದ ಹೇಳಿಕೆಗಳ ಬಗ್ಗೆ ತಲೆ ಕೆಡಿಸಿಕೊಳ್ಳುವುದು ಬೇಡ ಎಂದಿದ್ದರು. ಮೋದಿ ಅವರು ದೇವೇಗೌಡರನ್ನು ತಂದೆ ಸಮಾನರಾಗಿ ನಡೆಸಿಕೊಳ್ಳುತ್ತಾರೆ. ಆದರೆ ಸಿದ್ದರಾಮಯ್ಯ ದೇವೇಗೌಡರನ್ನು ಹೀಯಾಳಿಸುತ್ತಾರೆ. ಇದೇ ಸಿದ್ದರಾಮಯ್ಯಗೂ ಮೋದಿಗೂ ಇರುವ ವ್ಯತ್ಯಾಸ ಎಂದು ಕಿಡಿಕಾರಿದರು.

ಕಾಂಗ್ರೆಸ್ ಎಷ್ಟೇ ಶ್ರಮ ವಹಿಸಿದರೂ ಜೆಡಿಎಸ್ ಮುಗಿಸಲು ಆಗಲ್ಲ. ರಾಜ್ಯಕ್ಕೆ ಸುಭದ್ರ ಸರ್ಕಾರದ ಅವಶ್ಯಕತೆ ಇದೆ. ದೇಶಕ್ಕೆ ನರೇಂದ್ರ ಮೋದಿ ಆಡಳಿತ ಅನಿವಾರ್ಯವಾಗಿದ್ದು, ರಾಜ್ಯದ ಎಲ್ಲಾ ಕ್ಷೇತ್ರಗಳಲ್ಲಿ ಮೈತ್ರಿ ಅಭ್ಯರ್ಥಿ ಗೆಲುವು ಸಾಧಿಸಲಿದ್ದಾರೆ. ಮಂಡ್ಯದಲ್ಲಿ ಬಿಜೆಪಿ ಜೆಡಿಎಸ್ ಕಾರ್ಯಕರ್ತರು ಒಗ್ಗಟ್ಟಾದರೆ ಐತಿಹಾಸಿಕ ಗೆಲುವು ಸಿಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ನಾನು ಜೋತಿಷ್ಯಿಯಲ್ಲ, ಆದರೆ ಈ ಚುನಾವಣೆ ನಂತರ ಮುಂದಿನ ಡಿಸೆಂಬರ್‌ನೊಳಗೆ ಸರ್ಕಾರ ಬೀಳಲಿದೆ. ನಾವು ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಕಷ್ಟ ಪಡಬೇಕಿಲ್ಲ. ಅವರೇ ಅವರ ಸರ್ಕಾರವನ್ನು ಬೀಳಿಸಿಕೊಳ್ಳುತ್ತಾರೆ ಎಂದು ಸರ್ಕಾರ ಬೀಳಿಸುವ ಮುನ್ಸೂಚನೆ ನೀಡಿದರು.



ಮಂಡ್ಯದಲ್ಲಿ ನಡೆದ ಬಿಜೆಪಿ–ಜೆಡಿಎಸ್ ಸಮನ್ವಯ ಸಭೆಯನ್ನು ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಉದ್ಘಾಟಿಸುತ್ತಿರುವುದು

ಮೇಕೆದಾಟು ಪಾದಯಾತ್ರೆ ಮಾಡಿದಿರಿ. ಆದರೆ ಇವತ್ತು ಏನಾಗಿದೆ. ಮೇಕೆದಾಟು ಕಟ್ಟಲು ಅನುಮತಿ ಕೇಳುತ್ತಿದ್ದಾರೆ. ಮತ್ತೆ ಅವತ್ತು ಯಾಕೆ ಪಾದಯಾತ್ರೆ ಮಾಡಿದಿರಿ? ಎಂದು ಪ್ರಶ್ನಿಸಿದ ಅವರು, ನಿಮ್ಮ ಅಂಗ ಪಕ್ಷ ಡಿಎಂಕೆ ಪ್ರಣಾಳಿಕೆಯಲ್ಲಿ ಮೇಕೆದಾಟು ಕಟ್ಟಲು ಅವಕಾಶ ಕೊಡಲ್ಲ ಎಂದಿದ್ದಾರೆ. ಪೇಪರ್ ಪೆನ್ನುಕೊಟ್ಟರೆ ನಾಳೆ ಬೆಳಿಗ್ಗೆ ಮೇಕೆದಾಟು ಮಾಡುತ್ತೇನೆ ಎಂದರಲ್ಲ. ಅದರಂತೆ ಮೇಕೆದಾಟು ಯೋಜನೆ ಮಾಡಿ. ಮೇಕೆದಾಟು ಹೆಸರೇಳಿ ರಾಜಕಾರಣ ಮಾಡುವ ದರಿದ್ರ ದೇವೇಗೌಡರಿಗೆ ಬಂದಿಲ್ಲ ಪಾದಯಾತ್ರೆಯಿಂದ ನೀರು ತರಲು ಆಗಲ್ಲ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಗೆ ವ್ಯಂಗ್ಯವಾಡಿದರು.

ಮಂಡ್ಯ ಮೇಲೆ ಕೆಟ್ಟ ದೃಷ್ಟಿ ಬೇಡ ಎಂದು ಹಳೇ ಸ್ನೇಹಿತ ಹೇಳಿದ್ದಾನೆ. ನಮ್ಮ ದೃಷ್ಟಿ ಇದ್ದಾಗ ಮಳೆ ಬೆಳೆ ಚೆನ್ನಾಗಿ ಆಗುತ್ತಿತ್ತು. ನಿಮ್ಮ ದೃಷ್ಟಿ ಬಿದ್ದ ಮೇಲೆ ಬರಗಾಲ ಬಂದಿದೆ. ಭತ್ತ ನಾಟಿ ಮಾಡಬೇಡಿ ಎಂದು ಹೇಳಿದ ಏಕೈಕ ಸಚಿವ ನನ್ನ ಹಳೇ ಸ್ನೇಹಿತ ಎಂದು ಪರೋಕ್ಷವಾಗಿ ಸಚಿವ ಎನ್.ಚಲುವರಾಯಸ್ವಾಮಿ ವಿರುದ್ಧ ಕಿಡಿಕಾರಿದರು.

ಕಾಂಗ್ರೆಸ್ ಅಭ್ಯರ್ಥಿಗೆ ದುಡ್ಡಿಗೆ ಸಮಸ್ಯೆ ಇಲ್ಲ. ಈಗಾಗಲೇ ಅವರು ದುಡ್ಡು ಹಂಚಿರಬಹುದು. ಮಂಡ್ಯ ಜನ ದುಡ್ಡಿಗೆ ಬೆಲೆ ಕೊಡಲ್ಲ. ಮಂಡ್ಯದ ಈ ಚುನಾವಣೆ ಧರ್ಮ ಯುದ್ಧವಾಗಿದೆ. ಕಳೆದ 10 ತಿಂಗಳ ಕಾಂಗ್ರೆಸ್ ಅಧಿಕಾರ ನೋಡಿದ್ದೀರಾ? ಎಂದ ಅವರು, ಚುನಾವಣೆ ನಡೆಸಲು ವ್ಹೀಲ್‌ಚೇರ್‌ನಲ್ಲಿ ಬರುತ್ತೀರಾ ಎಂದು ಕಾಂಗ್ರೆಸ್ ನಾಯಕರು ನನ್ನನ್ನು ಟೀಕಿಸಿದ್ದಾರೆ. ಆದರೆ ನನಗೆ ಆ ದುರ್ಗತಿ ಬಂದಿಲ್ಲ ನಾಟಕ ಆಡಿಕೊಂಡು ನಾನು ಬರಲ್ಲ ಯಾರಿಗೂ ಅಪನಂಬಿಕೆ ಬೇಡ. ನಿಮಗೆ ಗೌರವ ತರುವ ಕೆಲಸ ಮಾಡುತ್ತೇನೆ ಎಂದರು.

ಸಭೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಶಾಸಕರಾದ ಜಿ.ಟಿ.ದೇವೇಗೌಡ, ಡಾ.ಸಿ.ಎನ್.ಅಶ್ವತ್ಥ್ ನಾರಾಯಣ, ಹೆಚ್.ಟಿ.ಮಂಜು, ಮಾಜಿ ಸಚಿವರಾದ ಸಿ.ಎಸ್.ಪುಟ್ಟರಾಜು, ಸಾ.ರಾ.ಮಹೇಶ್, ಡಿ.ಸಿ.ತಮ್ಮಣ್ಣ ಎಸ್.ಎ.ರಾಮದಾಸ್, ಕೆ.ಸಿ.ನಾರಾಯಣಗೌಡ, ಮಾಜಿ ಶಾಸಕರಾದ ರವೀಂದ್ರ ಶ್ರೀಕಂಠಯ್ಯ, ಕೆ.ಸುರೇಶ್‌ಗೌಡ, ಡಾ.ಕೆ.ಅನ್ನದಾನಿ, ಕೆ.ಟಿ.ಶ್ರೀಕಂಠೇಗೌಡ, ಜಿ.ಬಿ.ಶಿವಕುಮಾರ್, ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್, ಬಿಜೆಪಿ ಜಿಲ್ಲಾಧ್ಯಕ್ಷ ಡಾ.ಇಂದ್ರೇಶ್, ವಿಧಾನಪರಿಷತ್ ಸದಸ್ಯ ಮಂಜೇಗೌಡ, ಎರಡು ಪಕ್ಷದ ಪ್ರಮುಖ ಮುಖಂಡರಾದ ಬಿ.ಆರ್.ರಾಮಚಂದ್ರ, ಸಿ.ಪಿ.ಉಮೇಶ್, ಕೆ.ಎಸ್.ನಂಜುಂಡೇಗೌಡ, ಅಶೋಕ್ ಜಯರಾಂ, ನೆಲ್ಲಿಗೆರೆ ಬಾಲು, ಕೃಷ್ಣಪ್ಪ, ವಿಜಯ್‌ಕುಮಾರ್ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

ಮಂಡ್ಯ ಕ್ಷೇತ್ರದ ಭಾವಿ ಸಂಸದ ಕುಮಾರಸ್ವಾಮಿ: ವಿಜಯೇಂದ್ರ ಭವಿಷ್ಯ

ಮಂಡ್ಯ,ಮಾ.28– ಮಂಡ್ಯ ಕ್ಷೇತ್ರದ ಮೈತ್ರಿ ಅಭ್ಯರ್ಥಿಯಾಗಿ ಹೆಚ್.ಡಿ.ಕುಮಾರಸ್ವಾಮಿ ಅವರು ಸ್ಪರ್ಧೆ ಮಾಡಲಿದ್ದು, ದೇಶದ ಭವಿಷ್ಯ ರೂಪಿಸುವ ಮಹಾಚುನಾವಣೆಯಲ್ಲಿ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಅವರು ಈಗಾಗಲೇ ಭಾವಿ ಸಂಸದರಾಗಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಭವಿಷ್ಯ ನುಡಿದರು.

ಸಮನ್ವಯ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, 9 ತಿಂಗಳಿನಿಂದ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಅಧಿಕಾರದ ಅಮಲಿನಿಂದ ತೇಲುತ್ತಿದೆ. ಈಗ ರಾಜ್ಯದಲ್ಲಿ ಭೀಕರ ಬರಗಾಲ ಇದೆ. 800ಕ್ಕೂ ಹೆಚ್ಚು ರೈತರ ಆತ್ಮಹತ್ಯೆ ಆಗಿದೆ. ಜನ–ಜಾನುವಾರುಗಳು ಕುಡಿಯುವ ನೀರು, ಮೇವಿಲ್ಲದೆ ಪರಿತಪಿಸುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಕಷ್ಟದಲ್ಲಿರುವ ಜನರ ಬಗ್ಗೆ ಕನಿಕರ ಇಲ್ಲದಂತಾಗಿದೆ. ಇವರು ಒಂದು ವರ್ಗದ ಮುಖ್ಯವಾಗಿಲ್ಲ. ರಾಜ್ಯದ ಆರೂವರೆ ಕೋಟಿ ಜನರ ಮುಖ್ಯಮಂತ್ರಿಯಾಗಿದ್ದಾರೆ ಎಂದರು.

ಕಾಂಗ್ರೆಸ್‌ನಿಂದ ಜಾತಿ ಜಾತಿಗಳ ನಡುವೆ ಸಂಘರ್ಷ ಸೃಷ್ಟಿಯಾಗುತ್ತಿದೆ. ಬಿಜೆಪಿ–ಜೆಡಿಎಸ್ ಒಂದಾಗುತ್ತಿದ್ದಂತೆ ಕಾಂಗ್ರೆಸ್‌ನವರಿಗೆ ನಿದ್ರೆ ಬರುತ್ತಿಲ್ಲ. ನಮ್ಮ ಮೈತ್ರಿಯಿಂದ ಕಾಂಗ್ರೆಸ್ ಕಾರ್ಯಕರ್ತರು ತತ್ತರಿಸಿ ಹೋಗಿದ್ದಾರೆ. ಭಯದಿಂದ ಮಂತ್ರಿ ಮಂಡಲದ ಸದಸ್ಯರು ಚುನಾವಣೆ ಅಭ್ಯರ್ಥಿ ಆಗಲಿಲ್ಲ. ಜನರಿಂದ ಜನರಿಗಾಗಿ ಇರುವ ಕುಮಾರಸ್ವಾಮಿ ಮಂಡ್ಯದಿಂದ ಸಂಸದರಾಗಬೇಕು. 28 ಕ್ಷೇತ್ರಗಳಲ್ಲಿ ನಮ್ಮ ಮೈತ್ರಿ ಅಭ್ಯರ್ಥಿ ಗೆಲುವು ನಿಶ್ಚಿತ. 28ಕ್ಕೆ 28 ಗೆಲ್ಲುವುದೇ ನಮ್ಮ ಗುರಿ ಎಂದು ಹೇಳಿದರು.

ಮೈಮರೆಯುವ ಪ್ರಶ್ನೆಯೇ ಇಲ್ಲ. ಎಚ್.ಡಿ.ಕುಮಾರಸ್ವಾಮಿ, ದೇವೇಗೌಡರು, ಬಿ.ಎಸ್.ಯಡಿಯೂರಪ್ಪ ಎಲ್ಲರೂ ರಾಜ್ಯಾದ್ಯಂತ ಪ್ರವಾಸ ಮಾಡುತ್ತಾರೆ. ನಾವೇ ನಾಯಕರು, ಅಭ್ಯರ್ಥಿ ಅಂತಾ ತಿಳಿದು ಕೆಲಸ ಮಾಡಬೇಕು. ಚುನಾವಣೆ ಮುಗಿಯುವವರೆಗೂ ಜವಾಬ್ದಾರಿಯಿಂದ ನುಣುಚಿಕೊಳ್ಳಬಾರದು. ಮಂಡ್ಯದಿಂದಲೇ ಮೊದಲ ಫಲಿತಾಂಶ ಬರಬೇಕು ಎಂದು ಕಾರ್ಯಕರ್ತರಿಗೆ ಮನವಿ ಮಾಡಿದರು.

ಕೆರೆ ಸೇರುತ್ತಿರುವ ಚರಂಡಿ ನೀರು, ಮೀನುಗಳ ಮಾರಣ ಹೋಮ

ಜನ–ಜಾನುವಾರುಗಳಿಗೆ ಚರ್ಮರೋಗ

ನಾಗಮಂಗಲ: ಒಳ ಚರಂಡಿಯ ತ್ಯಾಜ್ಯ ನೀರು ಕೆರೆಗಳಿಗೆ ಸೇರುತ್ತಿದ್ದು, ಮೀನುಗಳು ಸಾವನ್ನಪ್ಪಿ, ನೀರು ಉಪಯೋಗಿಸುತ್ತಿರುವ ಸಾರ್ವಜನಿಕರಿಗೆ ಮತ್ತು ದನಗಳಿಗೆ ಚರ್ಮ ರೋಗ ಕಾಣಿಸಿಕೊಳ್ಳುತ್ತಿದೆ.

ಆ ನೀರಿನಲ್ಲಿ ಕೈ ಕಾಲು ತೊಳೆದವರಿಗೆ ವಿಚಿತ್ರ ಚರ್ಮ ರೋಗಗಳು ಕಾಣಿಸಿಕೊಳ್ಳುತ್ತಿದೆ. ಕೆರೆಗಳಲ್ಲಿ ವಾಸಿಸುವ ಮೀನುಗಳು ಸಾಯುತ್ತಿವೆ. ಕೋಟ್ಯಾಂತರ ರೂ. ವೆಚ್ಚದಲ್ಲಿ ಒಳಚರಂಡಿ ಕಾಮಗಾರಿ ಮಾಡಿ ನೀರು ಹರಿದು ಅಮ್ಮನ ಕಟ್ಟೆ, ದೊಂದೆಮಾದ ಹಳ್ಳಿ, ಉಪ್ಪರಹಳ್ಳಿ, ಸಾರೇ ಮೇಗಲ ಕೊಪ್ಪಲು ಗ್ರಾಮಗಳಲ್ಲಿ ನಿರ್ಮಿಸಿರುವ ವೆಟ್‌ವೆಲ್‌ಗಳಲ್ಲಿ ಶೇಖರಣೆಗೊಂಡು ಫಿಲ್ಟರ್ ಆಗಿ ನಂತರ ಪ್ರತ್ಯೇಕವಾಗಿ ನಿರ್ಮಿಸಿರುವ ಹೊಂಡದಲ್ಲಿ ಮತ್ತೆ ಶೇಖರಣೆಯಾಗಿ ಕೆರೆಗಳನ್ನು ಸೇರಬೇಕು.



ಕೆರೆಯಲ್ಲಿನ ನೀರು ವಿಷ ಮಿಶ್ರಿತವಾಗುತ್ತಿದ್ದು ಮೀನು ಸತ್ತು ತೇಲುತ್ತಿರುವುದು

ಇದು ಅಂದಾಜು ಪಟ್ಟಿಯಲ್ಲಿ ನಮೂದಾಗಿರುವ ಅಂಶ. ಆದರೆ ಸಾರೆ ಮೇಗಲಕೊಪ್ಪಲು ಗ್ರಾಮದಲ್ಲಿ ನಿರ್ಮಿಸಿರುವ ವೆಟ್‌ವೆಲ್ ಪೂರ್ಣವನ್ನು ಬಿಟ್ಟರೆ ಯಾವುದೂ ಪೂರ್ಣಗೊಂಡಿಲ್ಲದಿರುವುದರಿಂದ ತ್ಯಾಜ್ಯ ನೀರು ಪಟ್ಟಣದ ಹಿರಿಕೆರೆ, ಪಾಲಗ್ರಹಾರದ ಪಾಲ ಕೆರೆಗಳಿಗೆ ಸೇರುತ್ತಿದೆ. ಇದರಿಂದಾಗಿ ನೀರು ವಿಷವಾಗುತ್ತಿದ್ದು ಇಲ್ಲದ ರೋಗಗಳು ಕಂಡು ಬರುತ್ತಿದೆ.

ಪಾಲಗ್ರಹಾರ ಕಸುವಿನಹಳ್ಳಿ ಸುತ್ತ ಮುತ್ತಲಿನ ಗ್ರಾಮಸ್ಥರು ದನಗಳಿಗೆ ನೀರು ಕುಡಿಸಿಕೊಂಡು ಬಂದ ಕೆಲವೇ ದಿನಗಳಲ್ಲಿ ಕಾಲುಗಳಲ್ಲಿ ತುರಿಕೆ ಕಂಡು ಬರುತ್ತಿದ್ದು ದವಾಖಾನೆಗೆ ದಿನ ನಿತ್ಯ ಅಲೆದಾಡುವಂತಾಗಿದೆ. ದನಗಳ ಮೈ ಮೇಲೆ ಗಂಟು ರೋಗಗಳು ಕಾಣಿಸಿಕೊಳ್ಳುತ್ತಿವೆ. ಇಷ್ಟಲ್ಲದೇ ನೀರಿನಲ್ಲಿರುವ ಮೀನುಗಳು ಉಸಿರಾಟದ ತೊಂದರೆಯಿಂದಾಗಿ ಸಾವನ್ನಪ್ಪುತ್ತಿವೆ.

ನಾಗಮಂಗಲಕ್ಕೆ ಮತಯಂತ್ರಗಳು

ನಾಗಮಂಗಲ: ಮುಂದಿನ ತಿಂಗಳು ನಡೆಯಲಿರುವ ಲೋಕಸಭಾ ಚುನಾವಣೆ ಸಂಬಂದಪಟ್ಟಂತೆ, 338 ವಿವಿ ಪ್ಯಾಟ್‌ಗಳು ನಾಗಮಂಗಲಕ್ಕೆ ಬಂದಿದ್ದು ಟಿಬಿ ಬಡಾವಣೆಯ ಪದವಿ ಪೂರ್ವ ಕಾಲೇಜಿನ ಸ್ಟ್ರಾಂಗ್ ಕೋಣೆಯಲ್ಲಿ ಭದ್ರಪಡಿಸಿ ಬಂದೋಬಸ್ತ್ ಮಾಡಲಾಗಿದೆ.

ನಿಮಿಷಾಂಬ ದೇವಿಗೆ ಹೆಚ್‌ಡಿಕೆ ವಿಶೇಷ ಪೂಜೆ

ಶ್ರೀರಂಗಪಟ್ಟಣ: ಮಂಡ್ಯ ಲೋಕಸಭಾ ಕ್ಷೇತ್ರದ ಜೆಡಿಎಸ್–ಬಿಜೆಪಿ ಅಭ್ಯರ್ಥಿಯಾಗಿ ಅಧಿಕೃತ ಘೋಷಣೆಯಾದ ನಂತರ ಮೊದಲ ಬಾರಿಗೆ ಹೆಚ್.ಡಿ.ಕುಮಾರಸ್ವಾಮಿ ಗಂಜಾಂನ ಶಕ್ತಿ ದೇವತೆ ನಿಮಿಷಾಂಭ ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು.

ಗುರುವಾರ ಬೆಳಿಗ್ಗೆ ಶ್ರೀರಂಗಪಟ್ಟಣ ಸಮೀಪದ ಗಂಜಾಂನ ಶ್ರೀ ನಿಮಿಷಾಂಭ ದೇವಾಲಯಕ್ಕೆ ಆಗಮಿಸಿದ ಕುಮಾರಸ್ವಾಮಿ ಅವರು ಕುಟುಂಬಸ್ಥರು ಹಾಗೂ ತಮ್ಮ ಹೆಸರಿನಲ್ಲಿ ಅರ್ಚನೆ ನೆರವೇರಿಸಿ ಪೂಜೆ ಸಲ್ಲಿಸಿದರು.

ಇದಕ್ಕೂ ಮುನ್ನ ದೇವಾಲಯದ ಪ್ರಧಾನ ಅರ್ಚಕ ಸೂರ್ಯ ನಾರಾಯಣ್ ಭಟ್ ಉಪಸ್ಥಿತಿಯಲ್ಲಿ ನಿಮಿಷಾಂಭ ದೇವಿಗೆ ಅಭಿಷೇಕ, ವಿಶೇಷ ಸೇವೆ, ಚಕ್ರದರ್ಶನ, ಮೂಲ ಯಂತ್ರ ದರ್ಶನ ಸೇವೆಗಳನ್ನು ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಜಿ.ಟಿ.ದೇವೇಗೌಡ, ಮಾಜಿ ಸಚಿವ ಸಾ.ರಾ.ಮಹೇಶ್, ರವೀಂದ್ರ ಶ್ರೀಕಂಠಯ್ಯ ಇತರರು ಉಪಸ್ಥಿತರಿದ್ದರು.

ನಂತರ ದೇವಾಲಯದಿಂದ ಹೊರಬಂದು ಕುಮಾರಸ್ವಾಮಿ, ದೇವಾಲಯ ಪ್ರಾಂಗಣದಲ್ಲಿ ಸರಳ ವಿವಾಹವಾಗುತ್ತಿದ್ದ ತಾಲೂಕಿನ ನಗುವನಹಳ್ಳಿ ಗ್ರಾಮದ ನೂತನ ದಂಪತಿಗಳಿಗೆ ಶುಭ ಹಾರೈಸಿ ಫೋಟೊ ತೆಗೆಸಿಕೊಂಡಿದ್ದು ವಿಶೇಷವಾಗಿತ್ತು




ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಗುರುವಾರ ಶ್ರೀರಂಗಪಟ್ಟಣ ತಾಲೂಕಿನ ಶ್ರೀ ನಿಮಿಷಾಂಭ ದೇವಸ್ಥಾನಕ್ಕೆ ತೆರಳಿ ವಿಶೇಷ ಪೂಜೆ ನೆರವೇರಿಸಿದರು

ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಚುನಾವಣಾ ಕೇಂದ್ರ ಆರಂಭ

ಗ್ಯಾರಂಟಿ ಫಲಾನುಭವಿಗೆ ಕರೆ ಮಾಡುವ ಮೂಲಕ ಸಚಿವ ಕೆ.ವೆಂಕಟೇಶ್‌ರಿಂದ ಚಾಲನೆ

ಮೈಸೂರು, ಮಾ.28(ಜಿಎ)–ಮೈಸೂರಿನ ಕುವೆಂಪುನಗರದ ಗಗನಚುಂಬಿ ಜೋಡಿ ರಸ್ತೆಯಲ್ಲಿ (ಮಾಜಿ ಸಚಿವರಾದ ದಿವಂಗತ ಹೆಚ್.ಎಸ್.ಮಹದೇವ ಪ್ರಸಾದ್ ಅವರ ನಿವಾಸದ ಎದುರು) ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ನೇತೃತ್ವದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಪರವಾಗಿ ಮೈಸೂರು–ಕೊಡಗು ಲೋಕಸಭಾ ಚುನಾವಣಾ ಮಾಹಿತಿ ಕೇಂದ್ರ (ವಾರ್ ರೂಂ)ವನ್ನು ಗುರುವಾರ ತೆರೆಯಲಾಯಿತು.

ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಅವರ ಚುನಾವಣಾ ಮಾಹಿತಿ ಕೇಂದ್ರ (ವಾರ್ ರೂಂ)ವನ್ನು ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್ ಉದ್ಘಾಟಿಸಿದರು. ನಂತರ ಸಚಿವ ಕೆ.ವೆಂಕ ಟೇಶ್ ಮಾತನಾಡಿ, ನಾನು ಖುದ್ದು ಗ್ಯಾರಂಟಿ ಯೋಜನೆಯ ಫಲಾನುಭವಿ ಮತದಾರನಿಗೆ ಕರೆ ಮಾಡಿ ಚಾಲನೆ ನೀಡಿದ್ದೇನೆ. ಇದು ಉತ್ತಮ ಚಿಂತನೆ. ಕಾಂಗ್ರೆಸ್ ಸರ್ಕಾರದ ಕಾರ್ಯಕ್ರಮಗಳಿಂದ ಅದೆಷ್ಟೋ ಕುಟುಂಬಗಳು ಆರ್ಥಿಕವಾಗಿ ಸಬಲವಾಗುವಂತೆ ಮಾಡಿದ್ದು, ಪ್ರತಿ ಮನೆಯಲ್ಲಿಯೂ ಗ್ಯಾರಂಟಿಗಳ ಫಲಾನುಭವಿಗಳು ಇರುವುದರಿಂದ ಅವರು ನಮ್ಮ ಅಭ್ಯರ್ಥಿಯನ್ನು ಕೈಹಿಡಿಯುತ್ತಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.



ಗ್ಯಾರಂಟಿ ಯೋಜನೆಯ ಫಲಾನುಭವಿಗೆ ಕರೆ ಮಾಡುವ ಮೂಲಕ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಅವರ ಚುನಾವಣಾ ಮಾಹಿತಿ ಕೇಂದ್ರ (ವಾರ್ ರೂಂ)ವನ್ನು ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಪಶುಸಂಗೋಪನಾ ಸಚಿವ ಕೆ.ವೆಂಕಟೇಶ್ ಗುರುವಾರ ಉದ್ಘಾಟಿಸಿದರು.

ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮಾತನಾಡಿ, ಎಂ.ಲಕ್ಷ್ಮಣ್ ವಿದ್ಯಾವಂತ, ಬುದ್ಧಿವಂತ, ಸಾಮಾಜಿಕ ಸಮಸ್ಯೆಗಳನ್ನು ಕಳೆದ ಹಲವಾರು ವರ್ಷಗಳಿಂದಲೂ ಹತ್ತಿರದಿಂದ ಬಲ್ಲವರಾಗಿದ್ದು, ಕೇಂದ್ರ ಸರ್ಕಾರದ ಜನ ವಿರೋಧಿ ನೀತಿಗಳನ್ನು ಸದಾ ಪ್ರಶ್ನಿಸುತ್ತಾ ಎಚ್ಚರಿಸುತ್ತಾ ಬಂದಿದ್ದಾರೆ. ಅವರ ಪರವಾಗಿ ಮಾಹಿತಿ ಕೇಂದ್ರದಲ್ಲಿ ಮತಯಾಚನೆ ನಡೆಸುತ್ತಿದ್ದು ಸಕಾರಾತ್ಮಕ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಉಳಿದ ದಿನಗಳಲ್ಲಿ ಎಲ್ಲಾ ಮತದಾರರನ್ನು ಸಂಪರ್ಕಿಸಿ ಮತಯಾಚಿಸುತ್ತೇವೆ ಎಂದು ಹೇಳಿದರು.

ಈ ವೇಳೆ ಶಾಸಕರಾದ ಗಣೇಶ್ ಪ್ರಸಾದ್, ಅನಿಲ್ ಚಿಕ್ಕಮಾದು, ಕೆಪಿಸಿಸಿ ವಕ್ತಾರ ಹೆಚ್.ಎ.ವೆಂಕಟೇಶ್, ಪಾಲಿಕೆ ಮಾಜಿ ಸದಸ್ಯ ಜೆ.ಗೋಪಿ, ಮಾಜಿ ಮೇಯರ್‌ಗಳಾದ ನಾರಾಯಣ್, ಟಿ.ಬಿ.ಚಿಕ್ಕಣ್ಣ, ಪುಷ್ಪಲತಾ ಚಿಕ್ಕಣ್ಣ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಸೋಮಶೇಖರ್, ಶ್ರೀಧರ್, ಶಿವ ಸಾಗರ್, ಭಾರ್ಗವ್, ರವಿಶಂಕರ್, ವಿಜಯ್‌ಕುಮಾರ್, ಗುಣಶೇಖರ್, ವಿನಯ್ ಕುಮಾರ್, ಭವ್ಯ, ಇಂದಿರಾ, ಲತಾ ರಂಗನಾಥ್, ಲೀಲಾ ಪಂಪಾಪತಿ, ನಾಗರತ್ನ ಮಂಜುನಾಥ್, ಕಮಲ, ಕುಮಾರ್, ಮಂಜುನಾಥ್, ಫಾರೂಖ್, ಶಂಕರ್, ಮಧುರಾಜ್, ಡೈರಿ ವೆಂಕಟೇಶ್ ಮತ್ತಿತರರಿದ್ದರು.

ಇಂದು ಮೈಸೂರಿನಲ್ಲಿ 'ಯುವ ಸಂಪರ್ಕ ಅಭಿಯಾನ'



ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ 'ಯುವ ಸಂಪರ್ಕ ಅಭಿಯಾನ'ದ ಪೋಸ್ಟರ್ ಬಿಡುಗಡೆಗೊಳಿಸಲಾಯಿತು.

ಮೈಸೂರು,ಮಾ.28(ಜಿಎ)–ಮೈಸೂರು ನಗರ ಬಿಜೆಪಿ ಯುವ ಮೋರ್ಚಾದ ವತಿಯಿಂದ 'ಯುವ ಸಂಪರ್ಕ ಅಭಿಯಾನ ಯುವರಾಜರೊಂದಿಗೆ ಯುವ–ಸಂವಾದ' ಕಾರ್ಯಕ್ರಮವನ್ನು ಮಾ.29ರಂದು ಸಂಜೆ 5 ಗಂಟೆಗೆ ಬಂದಂತಮ್ಮ ಕಾಳಮ್ಮ ಸಮುದಾಯ ಭವನದಲ್ಲಿ ಏರ್ಪಡಿಸಲಾಗಿದೆ ಎಂದು ನಗರ ಯುವ ಮೋರ್ಚಾ ಅಧ್ಯಕ್ಷ ರಾಕೇಶ್‌ಗೌಡ ತಿಳಿಸಿದರು.

ನಗರದ ಬಿಜೆಪಿ ಕಚೇರಿಯಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯುವ ಮತದಾರರಿಗೆ ಮೈಸೂರಿನ ಮಹಾರಾಜರು ರಾಜ್ಯಕ್ಕೆ ನೀಡಿರುವ ಕೊಡುಗೆ ಮತ್ತು ಭವಿಷ್ಯದಲ್ಲಿ ರೂಪಿಸಲಿರುವ ಯೋಜನೆಗಳ ಕುರಿತು ತಿಳಿಸಲು ಹಾಗೂ ಮತದಾನ ಹೆಚ್ಚಿಸುವ ಸಲುವಾಗಿ 'ಯುವ ಸಂಪರ್ಕ ಅಭಿಯಾನ ಯುವರಾಜರೊಂದಿಗೆ ಯುವ– ಸಂವಾದ' ಆಯೋಜಿಸಲಾಗಿದೆ ಎಂದರು.

ಅಂದು ಸಂಜೆ 5 ಗಂಟೆಗೆ ಮೈಸೂರು–ಕೊಡಗು ಲೋಕಸಭಾ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಕೆ.ಜಿ.ಕೊಪ್ಪಲಿನ ಚಾಮುಂಡೇಶ್ವರಿ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಲಿದ್ದಾರೆ. ನಂತರ ಕಾಲ್ನಡಿಗೆಯ ಮೂಲಕ ಬಂದಂತಮ್ಮ ಕಾಳಮ್ಮ ಸಮುದಾಯ ಭವನಕ್ಕೆ ಆಗಮಿಸಲಿದ್ದಾರೆ. ಅವರೊಟ್ಟಿಗೆ ಸಂಸದ ಪ್ರತಾಪ್ ಸಿಂಹ, ಬಿಜೆಪಿ ಲೋಕಸಭಾ ಚುನಾವಣೆಯ ಉಸ್ತುವಾರಿಗಳು, ಮಾಜಿ ಸಚಿವ, ಬಿಜೆಪಿ ಮೈಸೂರು ನಗರ ಅಧ್ಯಕ್ಷ ಎಲ್.ನಾಗೇಂದ್ರ ಶಾಸಕರಾದ ಜಿ.ಟಿ.ದೇವೇಗೌಡ, ಶ್ರೀವತ್ಸ, ಹಿಂದುಳಿದ ವರ್ಗಗಳ ಮೋರ್ಚಾ ರಾಜ್ಯ ಅಧ್ಯಕ್ಷ ರಘು ಕೌಟಿಲ್ಯ, ರಾಜ್ಯ ಅಲ್ಪಸಂಖ್ಯಾತ ಮೋರ್ಚಾ ಅಧ್ಯಕ್ಷ ಅನಿಲ್ ಥಾಮಸ್, ಮಾಜಿ ಮೇಯರ್ ಸಂದೇಶ್ ಸ್ವಾಮಿ, ಮುಖಂಡರಾದ ಕವೀಶ್‌ಗೌಡ ಸೇರಿದಂತೆ ಮತ್ತಿತರರು ಆಗಮಿಸಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಲೋಹಿತ್, ಕಿರಣ್‌ಗೌಡ, ಮಹೇಶ್ ರಾಜೇ ಅರಸ್, ಕೀರ್ತಿ, ಅರ್ಜುನ್ ಉಪಸ್ಥಿತರಿದ್ದರು.



ಮೈಸೂರಿನ ಕೃಷ್ಣರಾಜ ಕ್ಷೇತ್ರದಲ್ಲಿ ನಡೆದ ಎಚ್.ವಿ.ರಾಜೀವ್ ಕಾಂಗ್ರೆಸ್ ಸೇರ್ಪಡೆ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸಮ್ಮುಖದಲ್ಲಿ ನಾಗೇಶ್ ರಘುರಾಮ್, ಮುರಳಿ ಕೆ, ಹುಡ್ಕೋ ಕುಮಾರ್ ಕಾಂಗ್ರೆಸ್ ಸೇರ್ಪಡೆಯಾದರು. ಮುಖಂಡರಾದ ರಮೇಶ್, ರಾಮಪ್ಪ ಬ್ರಾಡ್ ವೇ ಕಿರಣ್ ಚಿತ್ರದಲ್ಲಿದ್ದಾರೆ.

ವಿವಿಧ ಆಟೋಟ, ಮನೋರಂಜನಾ ಸ್ಪರ್ಧೆ

ಮೈಸೂರು, ಮಾ.28– ಮಹಿಳಾ ದಿನಾಚರಣೆ ಅಂಗವಾಗಿ ಮೈಸೂರಿನ ಶ್ರೀದೇವಿ ಮಹಿಳಾ ಸಂಘದ ವತಿಯಿಂದ ಮಾ.30ರಂದು ಮಹಿಳೆಯರಿಗೆ ವಿವಿಧ ಆಟೋಟ, ಮನೋರಂಜನಾ ಸ್ಪರ್ಧೆಯನ್ನು ರಾಮಕೃಷ್ಣನಗರದ ಸಿದ್ಧಿ ವಿನಾಯಕ ದೇವಸ್ಥಾನದಲ್ಲಿ ಆಯೋಜಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ.9164865341, 9606563337 ಅನ್ನು ಸಂಪರ್ಕಿಸಬಹುದು.

ನಿಧನ

ಎಸ್.ಮಹದೇವಪ್ಪ



ಮೈಸೂರು, ಮಾ.28– ಮೈಸೂರು ತಾಲೂಕು ಗೆಜ್ಜಗಳ್ಳಿ ನಿವಾಸಿಯಾದ ತಾಲೂಕು ಬೋರ್ಡ್ ಮಾಜಿ ಸದಸ್ಯ ಎಸ್.ಮಹದೇವಪ್ಪ (79) ಅವರು ಗುರುವಾರ ನಿಧನರಾದರು. ದಿವಂಗತರು ಪತ್ನಿ ಮರಮ್ಮಣ್ಣಿ, ಪುತ್ರ ಯುವ ಕಾಂಗ್ರೆಸ್ ಮುಖಂಡ ರೇವಣ್ಣ ಎಂ., ಪುತ್ರಿಯರಾದ ಕಲ್ಪನಾ, ಶಶಿಕುಮಾರಿ ಹಾಗೂ ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

ಅಂತ್ಯಕ್ರಿಯೆ ನಾಳೆ (ಶುಕ್ರವಾರ) ಮಧ್ಯಾಹ್ನ 1 ಗಂಟೆಗೆ ಗೆಜ್ಜಗಳ್ಳಿಯಲ್ಲಿರುವ ಜಮೀನಿನಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ನಾನಿ ಪಾಲ್ಕಿವಾಲ ನ್ಯಾಷನಲ್ ಟ್ಯಾಕ್ಸ್ ಮೂಟ್ ಕೋರ್ಟ್ ಕಾಂಪಿಟೇಷನ್‌ನಲ್ಲಿ ಜೆಎಸ್‌ಎಸ್‌ಗೆ ಪ್ರಶಸ್ತಿ

ಮೈಸೂರು, ಮಾ. 28 – ಮೈಸೂರಿನ ಜೆಎಸ್‌ಎಸ್ ಕಾನೂನು ಕಾಲೇಜು ಮಾ. 23 ಮತ್ತು 24ರಂದು ತಮಿಳುನಾಡು, ತಂಜಾವೂರು, ಶಾಸ್ತ್ರ ವಿಶ್ವವಿದ್ಯಾನಿಲಯ, ಕಾನೂನು ಶಾಲೆಯಲ್ಲಿ ನಡೆದ ಮೂಟ್ ಕಾಂಪಿಟೇಷನ್‌ನಲ್ಲಿ ಪ್ರತಿಷ್ಠಿತ 19ನೇ ನಾನಿ ಪಾಲ್ಕಿವಾಲ ಮೆಮೋರಿಯಲ್ ನ್ಯಾಷನಲ್ ಟ್ಯಾಕ್ಸ್ ಮೂಟ್ ಕೋರ್ಟ್ ಕಾಂಪಿಟೇಷನ್ ಪ್ರಶಸ್ತಿ ಪಡೆದುಕೊಂಡಿತು.



ದೆಹಲಿಯ ನ್ಯಾಷನಲ್ ಲಾ ಯೂನಿವರ್ಸಿಟಿ (ಎನ್‌ಎಲ್‌ಯು) ವಿರುದ್ಧ ನಿಕಟ ಪೈಪೋಟಿ ನಡೆದ ಫೈನಲ್‌ನಲ್ಲಿ ಜೆಎಸ್‌ಎಸ್ ಕಾನೂನು ಕಾಲೇಜಿನ ಹೇಮಿಕಾ ಪೊನ್ನಮ್ಮ ಮದ್ರಿರಾ, ನೀರಜ ರಾಜೇಶ್ ಮತ್ತು ಪಿ.ಜಿ. ಲಿಶಾ ಒಳಗೊಂಡ ಬಾಲಕಿಯರ ತಂಡ ಟ್ರೋಫಿ ಮತ್ತು 50,000 ರೂ. ನಗದು ಬಹುಮಾನದೊಂದಿಗೆ ವಿಜೇತರಾದರು.

ಇದಕ್ಕೂ ಮುನ್ನ ಮೈಸೂರು ತಂಡ ಸೆಮಿಫೈನಲ್‌ನಲ್ಲಿ ಹರಿಯಾಣದ ಜಿಂದಾಲ್ ಗ್ಲೋಬಲ್ ಲಾ ಸ್ಕೂಲ್ ವಿರುದ್ಧ ಮತ್ತು ಕ್ವಾರ್ಟರ್ ಫೈನಲ್‌ನಲ್ಲಿ ಕೊಚ್ಚಿಯ ನ್ಯಾಷನಲ್ ಯೂನಿವರ್ಸಿಟಿ ಆಫ್ ಅಡ್ವಾನ್ಸ್ಡ್ ಲೀಗಲ್ ಸ್ಟಡೀಸ್ (NUALS) ವಿರುದ್ಧ ಜಯ ಗಳಿಸಿತ್ತು.

ಮದ್ರಾಸ್ ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಪಿ.ಎನ್. ಪ್ರಕಾಶ್, ಮದ್ರಾಸ್ ಹೈಕೋರ್ಟ್‌ನ ಹಿರಿಯ ವಕೀಲ ಪಿ.ಹೆಚ್ ಅರವಿಂದ್ ಪಾಂಡಿ ಯನ್ ಮತ್ತು ಡೆಲಾಯ್ಟ್‌ನಲ್ಲಿ ಪಾಲು ದಾರ ಕೆ.ಆರ್. ಶೇಖರ್ ಅಂತಿಮ ಪಂದ್ಯದ ತೀರ್ಪುಗಾರರಾಗಿದ್ದರು.

ಕಾರ್ಮಿಕರ ಸ್ಟಾಕ್ ಆಯ್ಕೆಗಳು (ESOP) ಮತ್ತು ಇಂಡೋ–ಸ್ಪೇನ್ ಡಬಲ್ ಟ್ಯಾಕ್ಸೇಶನ್ ತಪ್ಪಿಸುವಿಕೆ ಒಪ್ಪಂದದ (DTAA) ಸಮಸ್ಯೆಗಳ ಜೊತೆಗೆ ಅಂಗ ಸಂಸ್ಥೆಯ ಸಾಲ ಮನ್ನಾಗೆ ಸಂಬಂಧಿಸಿದ ಆದಾಯ ತೆರಿಗೆ ಕಾಯಿದೆಯ ಸೆಕ್ಷನ್ 37(1) ರೊಂದಿಗೆ ಮೂಟ್ ಪ್ರಸ್ತಾವನೆಯು ವ್ಯವಹರಿಸಿದೆ. ದೇಶಾದ್ಯಂತದ ಪ್ರಮುಖ ಕಾನೂನು ಶಾಲೆಗಳು ತೆರಿಗೆ ಮೂಟ್‌ನಲ್ಲಿ ಭಾಗವಹಿಸಿದ್ದವು.

ಅಂತಿಮ ಪಂದ್ಯದ ತೀರ್ಪುಗಾರರು ಭಾಗವಹಿಸಿದ್ದಕ್ಕೆ ಪ್ರಶಂಸೆ, ಮಂಡನೆ, ಪ್ರಸ್ತುತಿ, ಖಂಡನೆಗಳು ಮತ್ತು ಎಲ್ಲಕ್ಕಿಂತ ಹೆಚ್ಚಾಗಿ ಯುವ ಶಕ್ತಿಯ ಸರ್ವಾನುಮತದ ಮೆಚ್ಚುಗೆಯನ್ನು ವ್ಯಕ್ತಪಡಿಸಿದರು. ನ್ಯಾಯಮೂರ್ತಿ ಪ್ರಕಾಶ್ ಅವರು ವಕೀಲರು ಮತ್ತು ನ್ಯಾಯಪೀಠದ ಗುಣಮಟ್ಟವನ್ನು ಉತ್ಕೃಷ್ಟಗೊಳಿಸಲು ವಕೀಲ ವೃತ್ತಿಯನ್ನು ತೆಗೆದುಕೊಳ್ಳುವಂತೆ ವಿದ್ಯಾರ್ಥಿಗಳನ್ನು ಒತ್ತಾಯಿಸಿದರು.

ವಿಜೇತರನ್ನು ಮುಖ್ಯ ಕಾರ್ಯ ನಿರ್ವಾಹಕ ಪ್ರೊ.ಕೆ.ಎಸ್.ಸುರೇಶ್, ಪ್ರಿನ್ಸಿಪಾಲ್ ಡಾ.ಎಸ್.ನಟರಾಜು, ಸಿಬ್ಬಂದಿ ಸಂಯೋಜಕರಾದ ಪ್ರೊ.ಅಸಮತುನ್ನೀಸಾ, ಬೋಧಾ ಸದಸ್ಯರು ಮತ್ತು ಜೆಎಸ್‌ಎಸ್ ಕಾನೂನು ಕಾಲೇಜು ಸಿಬ್ಬಂದಿ ಅಭಿನಂದಿಸಿದರು.

ಸಾರ್ವಜನಿಕರಿಂದ ದೂರು ಸ್ವೀಕರಿಸಲು ಸಿ-ವಿಜಿಲ್ ಆ್ಯಪ್

ಮೈಸೂರು, ಮಾ.28– ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಸಂಬಂಧ ಮಾದರಿ ನೀತಿ ಸಂಹಿತೆ ಉಲ್ಲಂಘನೆಯ ದೂರುಗಳನ್ನು 'ಸಿ–ವಿಜಿಲ್ ಆ್ಯಪ್'ನಲ್ಲಿ ಸಾರ್ವಜನಿಕರು ದಾಖಲಿಸಬಹುದಾಗಿರುತ್ತದೆ ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಜಿಲ್ಲಾ ಮಾದರಿ ನೀತಿ ಸಂಹಿತೆ ನೋಡಲ್ ಅಧಿಕಾರಿ ಕೆ.ಎಂ.ಗಾಯತ್ರಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವೇತನ ಬಿಡುಗಡೆಗೆ ವಿಶೇಷಚೇತನ ಶಿಕ್ಷಕರಿಂದ ಲಂಚ ಸ್ವೀಕಾರ; ನಂ.ಗೂಡು ಬಿಇಓ, ವಿಶೇಷ ಶಿಕ್ಷಕ ಲೋಕಾಯುಕ್ತ ಬಲೆಗೆ

ಲಂಚ... ಲಂಚ ಯಾರೇ ಅಧಿಕಾರಕ್ಕೆ ಬಂದರೂ ನೀಗಲೇ ಇಲ್ಲ ಕೊಂಚ!


ಶಿವಲಿಂಗಯ್ಯ


ರಮೇಶ್

ಮೈಸೂರು,ಮಾ.28(ಆರ್‌ಕೆ)–ಮೂರು ತಿಂಗಳ ಬಾಕಿ ವೇತನ ಬಿಡುಗಡೆಗೆ ವಿಶೇಷ ಚೇತನ ಶಿಕ್ಷಕರೊಬ್ಬರಿಂದ ಲಂಚ ಸ್ವೀಕರಿಸುತ್ತಿದ್ದ ನಂಜನಗೂಡು ಕ್ಷೇತ್ರ ಶಿಕ್ಷಣಾಧಿಕಾರಿ ಹಾಗೂ ಸ್ಪೆಷಲ್ ಟೀಚರ್ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ


ನಂಜನಗೂಡು ಬಿಇಓ ಶಿವಲಿಂಗಯ್ಯ ಮತ್ತು ಕಚೇರಿ ವಿಶೇಷ ಶಿಕ್ಷಕ ರಮೇಶ್ ಲೋಕಾಯುಕ್ತ ಪೊಲೀಸರು ಬೀಸಿದ ಬಲೆಗೆ ಲಂಚದ ಹಣದೊಂದಿಗೆ ಸಿಕ್ಕಿ ಬಿದ್ದಿದ್ದಾರೆ. ವಿಶೇಷಚೇತನ ಶಿಕ್ಷಕ ನರಸಿಂಹ ಮೂರ್ತಿ ಎಂಬುವರು ತಮಗೆ ಬರಬೇಕಾಗಿದ್ದ ಮೂರು ತಿಂಗಳ ಬಾಕಿ ಸಂಬಳ ಮಂಜೂರು ಮಾಡಿಕೊಡುವಂತೆ ನಂಜನಗೂಡು ಬಿಇಓ ಕಚೇರಿಗೆ ಅರ್ಜಿ ಸಲ್ಲಿಸಿ ಮನವಿ ಮಾಡಿಕೊಂಡಿದ್ದರು.

ಅರ್ಜಿ ಪರಿಶೀಲಿಸಿದ ಬಿಇಓ ಶಿವಲಿಂಗಯ್ಯ ಪ್ರಕ್ರಿಯೆ ಮುಂದುವರೆಸಿ ಬಾಕಿ ಸಂಬಳ ಬಿಡುಗಡೆ ಮಾಡಲು 10 ಸಾವಿರ ರೂ.ಲಂಚಕ್ಕೆ ಬೇಡಿಕೆ ಇಟ್ಟಿದ್ದರಲ್ಲದೆ, ಹಣ ತಂದುಕೊಡುವಂತೆ ಒತ್ತಾಯಿಸುತ್ತಿದ್ದರು. ಈ ಸಂಬಂಧ ಶಿಕ್ಷಕ ನರಸಿಂಹಮೂರ್ತಿ ಅವರು ಮೈಸೂರಿನ ಲೋಕಾಯುಕ್ತ ಎಸ್ಪಿ ಕಚೇರಿಗೆ ಲಿಖಿತ ದೂರು ನೀಡಿದ್ದರು.

ಭ್ರಷ್ಟಾಚಾರ ನಿಗ್ರಹ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡಿದ್ದು ಎಸ್ಪಿ ವಿಜೆ.ಸಜಿತ್ ಮಾರ್ಗದರ್ಶನದಂತೆ ಕಾರ್ಯಾಚರಣೆ ನಡೆಸಿದ ಲೋಕಾಯುಕ್ತ ಅಧಿಕಾರಿಗಳು, ನರಸಿಂಹ ಮೂರ್ತಿಯವರಿಂದ 5000 ರೂ. ಲಂಚ ಪಡೆಯುತ್ತಿದ್ದಾಗ ಇಂದು ಮಧ್ಯಾಹ್ನ 3.30 ಗಂಟೆ ವೇಳೆಗೆ ನಂಜನಗೂಡು ತಾಲೂಕು ಬಿಇಓ ಕಚೇರಿಯಲ್ಲಿ ಶಿವಲಿಂಗಯ್ಯ ಮತ್ತು ರಮೇಶರನ್ನು ಹಣದ ಸಮೇತ ವಶಕ್ಕೆ ಪಡೆದರು.

ಮೈಸೂರಿನ ಲೋಕಾಯುಕ್ತ ಎಸ್ಪಿ ಕಚೇರಿಗೆ ಕರೆ ತಂದು ವಿಚಾರಣೆ ನಡೆಸಿದ ಪೊಲೀಸರು, ಹಣ ಜಪ್ತಿ ಮಾಡಿ, ಆರೋಪಿಗಳಿಬ್ಬರನ್ನು ಇಂದು ರಾತ್ರಿ ನ್ಯಾಯಾಧೀಶರ ನಿವಾಸದಲ್ಲಿ ಹಾಜರುಪಡಿಸಲಾಗಿ ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಯಿತು.

ಬೆಳವಾಡಿ ಗ್ರಾಮಸ್ಥರಿಂದ ರಸ್ತೆ ಅಭಿವೃದ್ಧಿಗೆ ಅಡ್ಡಿಯಾಗಿದ್ದ ಕಾಂಪೌಂಡ್ ತೆರವು



ಮೈಸೂರು,ಮಾ.28(ಆರ್‌ಕೆ)–ರಸ್ತೆ ಅಭಿವೃದ್ಧಿಗೆ ಅಡ್ಡಿಯಾಗಿದ್ದ ಕಾಂಪೌಂಡ್ ಗೋಡೆಯನ್ನು ಬೆಳವಾಡಿ ಗ್ರಾಮಸ್ಥರೇ ತೆರವುಗೊಳಿಸಿದ್ದಾರೆ. ಹೂಟಗಳ್ಳಿಯ ಹೌಸಿಂಗ್ ಬೋರ್ಡ್ ಕಾಲೋನಿಯಿಂದ ಬೆಳವಾಡಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ 60 ಅಡಿ ಅಗಲದ ಮುಖ್ಯ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಹೂಟಗಳ್ಳಿ ನಗರ ಸಭೆಯಿಂದ ಕೈಗೊಳ್ಳಲಾಗಿತ್ತು. ಎರಡೂ ಕಡೆ ಚರಂಡಿ ಮತ್ತು ರಸ್ತೆ ಮಾಡಿ ಡಾಂಬರ್ ಹಾಕುವ ಕೆಲಸ ಪ್ರಗತಿಯಲ್ಲಿತ್ತಾದರೂ, ಇಲ್ಲಿ ನಿರ್ಮಿಸಿದ್ದ ಕಾಂಪೌಂಡ್ ನಿಂದಾಗಿ ಕಾಮಗಾರಿ ಸ್ಥಗಿತಗೊಂಡಿತ್ತು.

ಈ ಸಂಬಂಧ ಬೆಳವಾಡಿ ಗ್ರಾಮಸ್ಥರು ನಗರ ಸಭೆ ಕಮಿಷ್ನರ್‌ಗೆ ದೂರು ಸಲ್ಲಿಸಿ ಗೋಪಾಲರಾವ್, ನಾರಾಯಣರಾವ್ ಹಾಗೂ ಇತರರು ಸಾರ್ವಜನಿಕ ರಸ್ತೆ ಒತ್ತುವರಿ ಮಾಡಿ ಅಡ್ಡಲಾಗಿ ನಿರ್ಮಿಸಿರುವ ಕಾಂಪೌಂಡ್ ತೆರವುಗೊಳಿಸಿ ಕಾಮಗಾರಿ ಪೂರ್ಣಗೊಳಿಸುವಂತೆ ಕೋರಿಕೊಂಡಿದ್ದರು. ಈ ಬಗ್ಗೆ ಅಧಿಕಾರಿಗಳು ಕ್ರಮಕೈಗೊಳ್ಳದ ಕಾರಣ, ಮಂಗಳವಾರ ಸಂಜೆ ಬೆಳವಾಡಿ ಗ್ರಾಮಸ್ಥರೇ ಸೇರಿಕೊಂಡು ಕಾಂಪೌಂಡ್ ತೆರವುಗೊಳಿಸಿದ್ದಾರೆ. ಆ ವೇಳೆ ಕೆಲ ಸಮಯ ಗೊಂದಲ ಉಂಟಾಗಿತ್ತಾದರೂ, ವಿಜಯನಗರ ಠಾಣೆ ಗರುಡ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಪರಿಸ್ಥಿತಿ ತಿಳಿಗೊಳಿಸಿದ್ದರು. ನಂತರ ಗೋಪಾಲರಾವ್ ವಿಜಯನಗರ ಠಾಣೆಗೆ ತೆರಳಿ ಈ ಸಂಬಂಧ ದೂರು ನೀಡಿದ್ದಾರೆ ಎಂದು ಹೇಳಲಾಗಿದೆ.



ಡೆಲ್ಲಿ ವಿರುದ್ಧ ರಾಜಸ್ಥಾನ್‌ಗೆ ಗೆಲುವು



ಜೈಪುರ, ಮಾ.28– ರಿಯಾನ್ ಪರಾಗ್ ಅವರ ಅರ್ಧಶತಕದ ನೆರವಿನಿಂದ ರಾಜಸ್ಥಾನ್ ರಾಯಲ್ಸ್, ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ 12 ರನ್‌ಗಳ ರೋಚಕ ಜಯ ಸಾಧಿಸಿದೆ.

ಇಲ್ಲಿನ ಸವಾಯ್ ಮಾನ್‌ಸಿಂಗ್ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ 186 ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಡೆಲ್ಲಿ 20 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 173 ರನ್ ಗಳಿಸಿ ಸೋಲನ್ನು ಒಪ್ಪಿಕೊಂಡಿತು. ಆ ಮೂಲಕ ಸತತ 2 ಪಂದ್ಯಗಳನ್ನು ಗೆದ್ದ ರಾಜಸ್ಥಾನ ರಾಯಲ್ಸ್ 4 ಅಂಕಗಳೊಂದಿಗೆ 2ನೇ ಸ್ಥಾನದಲ್ಲೇ ಮುಂದುವರೆದಿದೆ.

ಕೊನೆ 18 ಎಸೆತಗಳಲ್ಲಿ ಡೆಲ್ಲಿ ತಂಡಕ್ಕೆ 41 ರನ್‌ಗಳ ಅಗತ್ಯವಿತ್ತು. 18ನೇ ಓವರ್‌ನಲ್ಲಿ ಅವೇಶ್ ಖಾನ್ 9 ರನ್, 19ನೇ ಓವರ್‌ನಲ್ಲಿ ಸಂದೀಪ್ ಶರ್ಮಾ 15 ರನ್ ಬಿಟ್ಟು ಕೊಟ್ಟರೆ ಕೊನೆ ಓವರ್‌ನಲ್ಲಿ ಆವೇಶ್ ಖಾನ್ ಕೇವಲ 4 ರನ್ ನೀಡಿದ್ದರಿಂದ ರಾಜಸ್ಥಾನ ಗೆಲುವು ಸಾಧಿಸಿತು.

ಡೆಲ್ಲಿ ತಂಡದ ಮೊತ್ತ 30 ರನ್ ಆಗುವಷ್ಟರಲ್ಲೇ ಮಿಚೆಲ್ ಮಾರ್ಷ್ 23 ರನ್, ರಿಕಿ ಭುಯಿ ಪೆವಿಲಿಯನ್‌ಗೆ ಮರಳಿದರು. ನಂತರ ನಾಯಕ ರಿಷಬ್ ಪಂತ್ 28 ರನ್ ಹೊಡೆದರೆ, ಆರಂಭಿಕ ಆಟಗಾರ ಡೇವಿಡ್ ವಾರ್ನರ್ 34 ಎಸೆತಗಳಲ್ಲಿ, 5 ಬೌಂಡರಿ, 3 ಸಿಕ್ಸರ್ ಒಳಗೊಂಡ 49 ರನ್ ಸಿಡಿಸಿ ವಿಕೆಟ್ ಒಪ್ಪಿಸಿದರು. ಮಧ್ಯಮ ಕ್ರಮಾಂಕದಲ್ಲಿ ಟ್ರಿಸ್ಟಾನ್ ಸ್ಟಬ್ಸ್ ಮತ್ತು ಅಕ್ಷರ್ ಪಟೇಲ್ ಮುರಿಯದ 6ನೇ ವಿಕೆಟ್‌ಗೆ 27 ಎಸೆತದಲ್ಲಿ 51 ರನ್ ಜೊತೆಯಾಟವಾಡಿದರೂ ತಂಡಕ್ಕೆ ಜಯ ದಕ್ಕಲಿಲ್ಲ. ಟ್ರಿಸ್ಟಾನ್ ಸ್ಟಬ್ಸ್ ಔಟಾಗದೇ 44 ರನ್ ಗಳಿಸಿದರೇ ಅಕ್ಷರ್ ಪಟೇಲ್ ಔಟಾಗದೇ 15 ರನ್ ಗಳಿಸಿದರು. ರಾಜಸ್ಥಾನ್ ಪರ ನಂದ್ರೆ ಬರ್ಗರ್, ಯಜುವೇಂದ್ರ ಚಹಲ್ ತಲಾ 2, ಆವೇಶ್ ಖಾನ್ 1 ವಿಕೆಟ್ ಪಡೆದರು.

ಇದಕ್ಕೂ ಮುನ್ನಾ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನ ತಂಡದ ಮೊತ್ತ 36 ರನ್ ಆಗುವಷ್ಟರಲ್ಲೇ ಯಶಸ್ವಿ ಜೈಸ್ವಾಲ್ (5), ಜೋಸ್ ಬಟ್ಲರ್ (11) ಹಾಗೂ ನಾಯಕ ಸಂಜು ಸ್ಯಾಮ್ಸನ್ (15 ರನ್) ಗಳಿಸಿ ಔಟಾದರು. ಈ ವೇಳೆ ಕ್ರೀಸ್‌ಗೆ ಆಗಮಿಸಿದ ರವಿಚಂದ್ರನ್ ಅಶ್ವಿನ್ 3 ಸಿಕ್ಸರ್ ಒಳಗೊಂಡ 29 ರನ್ ಗಳಿಸಿ ನಿರ್ಗಮಿಸಿದರು. ಒಂದೆಡೆ ವಿಕೆಟ್ ಬೀಳುತ್ತಿದ್ದರೂ ಪಂದ್ಯದಲ್ಲಿ ಅಬ್ಬರದ ಬ್ಯಾಟಿಂಗ್ ಮಾಡಿದ ರಿಯಾನ್ ಪರಾಗ್ 45 ಎಸೆತಗಳಲ್ಲಿ 6 ಸಿಕ್ಸರ್, 7 ಬೌಂಡರಿ ಒಳಗೊಂಡ 84ರನ್ ಗಳಿಸಿ ಅಜೇಯರಾಗಿ ಉಳಿದರು. ಉಳಿದಂತೆ ಧ್ರುವ್ ಜುರೇಲ್ 20, ಹೇಟ್ಮೆಯರ್ ಔಟಾಗದೇ 14 ರನ್ ಹೊಡೆದರು. ಅಶ್ವಿನ್ ಮತ್ತು ಪರಾಗ್ 37 ಎಸೆತಗಳಲ್ಲಿ 54 ರನ್ ಜೊತೆಯಾಟವಾಡಿದರೆ, ಪರಾಗ್ ಮತ್ತು ಜರೇಲ್ 23 ಎಸೆತಗಳಲ್ಲಿ 52 ರನ್ ಹೊಡೆದರು. ಅಂತಿಮವಾಗಿ ಹೇಟ್ಮೆಯರ್ ಮತ್ತು ಜರೇಲ್ ಮುರಿಯದ 6ನೇ ವಿಕೆಟ್‌ಗೆ 16 ಎಸೆತಗಳಲ್ಲಿ 43 ರನ್ ಜೊತೆಯಾಟವಾಡಿದ ಪರಿಣಾಮ ತಂಡದ ಮೊತ್ತ 180 ರ ಗಡಿ ದಾಟಿತು. ಅಂತಿಮವಾಗಿ ರಾಜಸ್ಥಾನ್ ರಾಯಲ್ಸ್ 20 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 185ರನ್ ಗಳಿಸಿತು.

ಡೆಲ್ಲಿ ಪರ ಖಲೀಲ್ ಅಹಮ್ಮದ್, ಮುಖೇಶ್ ಕುಮಾರ್, ಅನ್ರಿಚ್ ನಾರ್ಟ್ಜೆ, ಅಕ್ಷರ್ ಪಟೇಲ್ ಹಾಗೂ ಕುಲದೀಪ್ ಯಾದವ್ ತಲಾ ಒಂದೊಂದು ವಿಕೆಟ್ ಪಡೆದರು. ರಿಯಾನ್ ಪರಾಗ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಅಂಕಪಟ್ಟಿ ವಿವರ

ತಂಡ	ಪಂದ್ಯಗಳು	ಗೆಲುವು	ಸೋಲು	ಡ್ರಾ	ಅಂಕ
ಚೆನ್ನೈ	2	2	0	0	4
ರಾಜಸ್ಥಾನ್	2	2	0	0	4
ಹೈದರಾಬಾದ್	2	1	1	0	2
ಕೊಲ್ಕತ್ತಾ	1	1	0	0	2
ಪಂಜಾಬ್	2	1	1	0	2
ಬೆಂಗಳೂರು	2	1	1	0	2
ಗುಜರಾತ್	2	1	1	0	2
ಡೆಲ್ಲಿ	2	0	2	0	0
ಮುಂಬೈ	2	0	2	0	0
ಲಕ್ನೋ	1	0	1	0	0

ಇಂದಿನ ಪಂದ್ಯ
ರಾಯಲ್ ಚಾಲೆಂಜರ್ಸ್ ಬೆಂಗಳೂರು V/S ಕೋಲ್ಕತ್ತಾ ನೈಟ್ ರೈಡರ್ಸ್
ಸ್ಥಳ: ಬೆಂಗಳೂರು, ಎಂ.ಚಿನ್ನಸ್ವಾಮಿ ಕ್ರೀಡಾಂಗಣ
ಸಮಯ: ಸಂಜೆ 7.30ಕ್ಕೆ

ಹೆದ್ದಾರಿಗಳಲ್ಲಿ ಇನ್ನು ಸ್ಯಾಟಲೈಟ್ ಆಧಾರಿತ ಟೋಲ್ ಸಂಗ್ರಹ

●ಕೇಂದ್ರ ರಸ್ತೆ ಸಾರಿಗೆ, ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಮಾಹಿತಿ ●ಇನ್ನು ಮುಂದೆ ಟೋಲ್‌ಗಳಲ್ಲಿ ಕಾದು ನಿಲ್ಲುವ ಅಗತ್ಯವಿಲ್ಲ



ನವದೆಹಲಿ, ಮಾ.28– ಶೀಘ್ರದಲ್ಲೇ ಟೋಲ್ ಪಾವತಿ ಸೇವೆಗಳಿಗೆ ತೆರೆ ಬೀಳಲಿದ್ದು, ಸ್ಯಾಟಲೈಟ್ ಆಧಾರಿತ ಟೋಲ್ ಸೇವೆ ಆರಂಭಗೊಳ್ಳಲಿದೆ ಎಂದು ಕೇಂದ್ರ ಸಾರಿಗೆ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ.

ಹಾಲಿ ಫಾಸ್ಟ್‌ಟ್ಯಾಗ್ ಪಾವತಿ ಸೇವೆ ಇದ್ದರೂ ಟೋಲ್‌ಗಳಲ್ಲಿ ಸಂಚಾರ ದಟ್ಟಣೆ ಹೆಚ್ಚಾಗಿ ಟೋಲ್‌ಗೇಟ್‌ಗಳಲ್ಲಿ ಕಾಯುವ ಪರಿಸ್ಥಿತಿ ಇದೆ. ಇದನ್ನು ತಪ್ಪಿಸಲು ಹೊಸ ಯೋಜನೆ ರೂಪಿಸಿದ್ದು, ದೇಶದಲ್ಲಿ ಟೋಲ್ ಸಂಗ್ರಹಕ್ಕೆ ಟೋಲ್‌ಗೇಟ್‌ಗಳ ಬದಲು, ಸ್ಯಾಟಲೈಟ್ ಆಧಾರಿತ ಟೋಲ್ ಸಿಸ್ಟಂ ಜಾರಿಗೆ ತರಲು ಮುಂದಾಗಿದ್ದಾರೆ.

ಈ ಬಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿರುವ ಕೇಂದ್ರ ಸಾರಿಗೆ ಸಚಿವ ನಿತಿನ್ ಗಡ್ಕರಿ, ನಾವು ಶೀಘ್ರದಲ್ಲಿಯೇ ದೇಶಾದ್ಯಂತ ಸ್ಯಾಟಲೈಟ್ ಆಧಾರಿತ ಟೋಲ್ ಸಂಗ್ರಹ ವ್ಯವಸ್ಥೆ ಜಾರಿಗೆ ತರುತ್ತೇವೆ. ಹೊಸ ಯೋಜನೆ ಮೂಲಕ ದೇಶದ ಜನ ಎಷ್ಟು ಕಿಲೋ ಮೀಟರ್‌ವರೆಗೆ ರಸ್ತೆಯನ್ನು ಬಳಸಿರುತ್ತಾರೋ, ಅಷ್ಟು ಕಿಲೋಮೀಟರ್‌ವರೆಗೆ ಮಾತ್ರ ಟೋಲ್ ಸಂಗ್ರಹಿಸಲಾಗುತ್ತದೆ. ಜನರ ಬ್ಯಾಂಕ್ ಖಾತೆಯಿಂದಲೇ ಹಣ ನೇರವಾಗಿ ಕಡಿತವಾಗುತ್ತದೆ. ಇದರಿಂದ ಸಮಯದ ಜತೆಗೆ ಹಣದ ಉಳಿತಾಯವೂ ಆಗಲಿದೆ ಎಂದು ತಿಳಿಸಿದ್ದಾರೆ.

ಕೇಂದ್ರ ಸರ್ಕಾರವು 2021ರಿಂದ ಫಾಸ್ಟ್‌ಟ್ಯಾಗ್ ಕಡ್ಡಾಯಗೊಳಿಸಿದ್ದು, ಇದರಿಂದ ಟೋಲ್‌ಗೇಟ್‌ಗಳಲ್ಲಿ ಜನರ ಅರ್ಧ ಸಮಯ ಉಳಿದಿದೆ. ಫಾಸ್ಟ್‌ಟ್ಯಾಗ್‌ನ ಪರಿಚಯವು ಈಗಾಗಲೇ ಟೋಲ್ ಪ್ಲಾಜಾಗಳಲ್ಲಿ ಸರಾಸರಿ ಕಾಯುವ ಸಮಯವನ್ನು 47 ಸೆಕೆಂಡ್‌ಗಳಿಗೆ ಕಡಿಮೆ ಮಾಡಿದ್ದು, ಇದು ಹಿಂದಿನ ಸರಾಸರಿ 714 ಸೆಕೆಂಡುಗಳಿಂದ ಗಮನಾರ್ಹ ಸುಧಾರಣೆಯಾಗಿದೆ. ಈಗ ಹೊಸ ವ್ಯವಸ್ಥೆ ಮೂಲಕ ಮತ್ತೊಂದು ಕ್ರಾಂತಿಗೆ ನಿತಿನ್ ಗಡ್ಕರಿ ಸಾಕ್ಷಿಯಾಗಲಿದ್ದಾರೆ.

ಏನಿದು ತಂತ್ರಜ್ಞಾನ?: ಕೇಂದ್ರ ಸಚಿವ ನಿತಿನ್ ಗಡ್ಕರಿ ಉದ್ದೇಶಿಸಿರುವ ಉಪಗ್ರಹ ಆಧಾರಿತ ಟೋಲ್ ಸಂಗ್ರಹ ವ್ಯವಸ್ಥೆ ಜಾರಿಗೆ ಬಂದರೆ, ವಾಹನಗಳಿಗೆ ಜಿಪಿಎಸ್ ಯಂತ್ರಗಳನ್ನು ಅಳವಡಿಸಲಾಗುತ್ತದೆ. ಜಿಪಿಎಸ್ ಯಂತ್ರವು ಉಪಗ್ರಹದೊಂದಿಗೆ ಸಂಪರ್ಕ ಹೊಂದಿರುತ್ತದೆ. ಇದರಿಂದಾಗಿ ನಮ್ಮ ವಾಹನವು ಯಾವ ಟೋಲ್ ರಸ್ತೆಗೆ ಪ್ರವೇಶ ಪಡೆದಿದೆ, ಯಾವ ರಸ್ತೆಯಿಂದ ನಿರ್ಗಮಿಸಿದೆ ಎಂಬುದನ್ನು ಲೆಕ್ಕ ಹಾಕಿ, ಬ್ಯಾಂಕ್ ಖಾತೆಯಿಂದ ಟೋಲ್ ಕಡಿತಗೊಳಿಸುತ್ತದೆ.

ವಾಹನ ಸವಾರರಿಗೆ ಉಪಯೋಗ: ಉಪಗ್ರಹ ಆಧಾರಿತ ಟೋಲ್ ಸಂಗ್ರಹ ವ್ಯವಸ್ಥೆಯು ಜಾರಿಗೆ ಬಂದರೆ, ಭಾರತದಲ್ಲಿ ಸಮಯದ ಜತೆಗೆ ಹಣ ವನ್ನೂ ಉಳಿತಾಯ ಮಾಡಬಹುದಾಗಿದೆ. ಟೋಲ್ ಸಂಗ್ರಹ ಇರುವ ಹೆದ್ದಾರಿಯಲ್ಲಿ ನಾವು ಎಷ್ಟು ದೂರ ಕ್ರಮಿಸಿದ್ದೇವೋ, ಅಷ್ಟಕ್ಕೆ ಮಾತ್ರ ಟೋಲ್ ಶುಲ್ಕ ಪಾವತಿಸುತ್ತೇವೆ. ಟೋಲ್‌ಗೇಟ್ ನಂತರ ಅರ್ಧ ಕಿಲೋ ಮೀಟರ್ ಇದ್ದರೂ, ಪೂರ್ತಿ ಹಣವನ್ನು ನಾವೀಗ ಪಾವತಿಸಬೇಕಾಗುತ್ತಿದೆ.

ಅಮೆರಿಕಕ್ಕೆ ಭಾರತ ಸಡ್ಡು: 2024ರ ಅಂತ್ಯದ ವೇಳೆಗೆ ಭಾರತದ ರಸ್ತೆ ಸಂಪರ್ಕ ಜಾಲವನ್ನು ಅಮೆರಿಕಕ್ಕೆ ಸರಿ ಸಮನಾಗಿ ಮಾಡುವ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದ ನಿತಿನ್ ಗಡ್ಕರಿ, ಈ ವರ್ಷದ ಅಂತ್ಯದ ವೇಳೆಗೆ ಭಾರತದ ಭವಿಷ್ಯವು ಬದಲಾಗಲಿದೆ. ಈ ಕಠಿಣ ಕಾರ್ಯವನ್ನು ಸಾಧಿಸುವಲ್ಲಿ ನಾವು ಖಂಡಿತವಾಗಿಯೂ ಯಶಸ್ವಿಯಾಗುತ್ತೇವೆ ಎಂದರು.

ಭಾರತಮಾಲಾ–2 ಯೋಜನೆ: ಸುಮಾರು 26,000 ಕಿಮೀ ಆರ್ಥಿಕ ಕಾರಿಡಾರ್‌ಗಳನ್ನು ಅಭಿವೃದ್ಧಿಪಡಿ ಸುವ ಗುರಿಯನ್ನು ಹೊಂದಿರುವ ಭಾರತಮಾಲಾ ಪರಿಯೋಜನಾ ಯೋಜನೆ ಮತ್ತು ಹೆಚ್ಚಿನ ಸರಕು ಸಾಗಣೆಯನ್ನು ನಿರ್ವಹಿಸುವಲ್ಲಿ ಗೋಲ್ಡನ್ ಕ್ವಾಡ್ರಿಲ್ಯಾಟರಲ್ (GQ) ಮತ್ತು ಉತ್ತರ–ದಕ್ಷಿಣ ಮತ್ತು ಪೂರ್ವ–ಪಶ್ಚಿಮ (NS-EW) ಕಾರಿಡಾರ್‌ಗಳ ಜೊತೆಗೆ ಅದರ ಪ್ರಾಮುಖ್ಯತೆಯನ್ನು ಗಡ್ಕರಿ ಚರ್ಚಿಸಿದರು.

ಭಾರತ್ ಮಾಲಾ–1 34,000 ಕಿಮೀ ಒಳ ಗೊಂಡಿತ್ತು. ಅಂತೆಯೇ ಭಾರತ್ ಮಾಲಾ–2 ಸುಮಾರು 8,500 ಕಿಮೀ ದೂರವನ್ನು ಒಳಗೊಂಡಿರಲಿದೆ. ಹಲವು ಯೋಜನೆಗಳಿಗೆ ಮಂಜೂರಾತಿ ದೊರೆತಿದ್ದು, ಹಲವು ಕಾಮಗಾರಿಗಳು ನಡೆಯಬೇಕಿದೆ. 2011ರಿಂದ 2023ರವರೆಗಿನ ಇದೇ ಅವಧಿಗೆ ಹೋಲಿಸಿದರೆ ಪ್ರಸಕ್ತ ಹಣಕಾಸು ವರ್ಷದ ಏಪ್ರಿಲ್‌ನಿಂದ ನವೆಂಬರ್‌ವರೆಗೆ ರಾಷ್ಟ್ರೀಯ ಹೆದ್ದಾರಿಗಳಲ್ಲಿ ನಿರ್ಮಾಣ ಮತ್ತು ವಿಸ್ತರಣೆ ಚಟುವಟಿಕೆಗಳಲ್ಲಿ ಶೇ.10% ಹೆಚ್ಚಳವಾಗಿದೆ ಎಂದು ಕೇಂದ್ರ ಸಾರಿಗೆ ಸಚಿವ ನಿತಿನ್ ಗಡ್ಕರಿ ಹೇಳಿದರು.

ನಿಯಮ ಉಲ್ಲಂಘನೆ ದೂರು ಹಿನ್ನೆಲೆ

ಮೈಸೂರಿನ ಆಯಿಷ್ ಕಚೇರಿ ಮೇಲೆ ಸಿಬಿಐ ದಾಳಿ

ದಿನವಿಡೀ ಪರಿಶೀಲನೆ, ಕೆಲ ಕಡತ, ದಾಖಲೆಗಳ ವಶ



ಮೈಸೂರಿನ ಬೋಗಾದಿ ರಸ್ತೆಯಲ್ಲಿರುವ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ

ಮೈಸೂರು, ಮಾ.28(ಆರ್‌ಕೆ)–ಮೈಸೂರಿನ ಮಾನಸಗಂಗೋತ್ರಿಯ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ (AIISH) ಕಚೇರಿ ಮೇಲೆ ಇಂದು ಸಿಬಿಐ (ಸೆಂಟ್ರಲ್ ಬ್ಯೂರೋ ಆಫ್ ಇನ್‌ವೆಸ್ಟಿಗೇಷನ್) ಅಧಿಕಾರಿಗಳು ದಿಢೀರ್ ದಾಳಿ ನಡೆಸಿದ್ದಾರೆ.

ಬೆಳಗ್ಗೆ ಸುಮಾರು 10.45 ಗಂಟೆಗೆ ಕಾರೊಂದರಲ್ಲಿ ಆಗಮಿಸಿದ ನಾಲ್ವರು ಸಿಬಿಐ ಅಧಿಕಾರಿಗಳು, ನೇರವಾಗಿ ಎಲೆ ಕ್ಟ್ರಿಕಲ್, ಸಿವಿಲ್ ಕಂಪ್ಯೂಟರ್ ಮತ್ತು ಸಾಫ್ಟ್‌ವೇರ್ ವಿಭಾಗಗಳಿಗೆ ಭೇಟಿ ನೀಡಿದರು. ಅಲ್ಲಿ ಅವರಿಗೆ ಮಾಹಿತಿ ನೀಡುವವರೇ ಇರಲಿಲ್ಲ.

ಇಂದು ಸಂಸ್ಥೆ ನಿರ್ದೇಶಕಿ ಡಾ. ಎಂ.ಪುಷ್ಪಾವತಿ, ರಜೆ ಮೇಲೆ ಹೊರಗೆ ಹೋಗಿದ್ದರು. ಇಂಚಾರ್ಜ್ ಡೈರೆಕ್ಟರ್ ಡಾ.ಪಿ. ಮಂಜುಳಾ ಅವರನ್ನು ಭೇಟಿ ಮಾಡಿದ ಅಧಿಕಾರಿಗಳು, 2018ರಿಂದ ಈವರೆಗೆ ಸಂಸ್ಥೆಗೆ ಮಂಜೂರಾಗಿರುವ ಅನುದಾನ, ಸಲಕರಣೆಗಳು, ಖರ್ಚು–ವೆಚ್ಚ ಕಡತಗಳನ್ನು ಪಡೆದು ಪರಿಶೀಲಿಸಿ, ವಶಪಡಿಸಿಕೊಂಡರು.

ನುತುಡೀನ್ (ಮೂಲಸೌಕರ್ಯ) ಡಾ.ಅಜೀಶ್ ಕೆ.ಅಬ್ರಾಹಂ, ಮುಖ್ಯ ಆಡಳಿತಾಧಿಕಾರಿ ಡಾ.ಎಸ್.ರಾವ್ ಕುಮಾರ್, ಮುಖ್ಯ ಲೆಕ್ಕಾಧಿಕಾರಿ ರವಿ ಕುಮಾರ್ ಅವರಿಂದ ಮಾಹಿತಿ ಕಲೆ ಹಾಕಿ, ಕಡತಗಳನ್ನು ಅಮಾನತುಪಡಿಸಿಕೊಂಡರು. ಪರ್ಚೇಸ್ ವಿಭಾಗಕ್ಕೂ ಭೇಟಿ ನೀಡಿ 2018ರಿಂದೀಚೆಗೆ ಸಂಸ್ಥೆ ಖರೀದಿಸಿರುವ ಸಲಕರಣೆ, ಉಪಕರಣಗಳ ಬಗ್ಗೆ ಅಲ್ಲಿನ ಅಧಿಕಾರಿಗಳಿಂದಲೂ ದಾಖಲೆ ಸಮೇತ ಮಾಹಿತಿ ಪಡೆದುಕೊಂಡರು.

ಸಿಬಿಐ ಅಧಿಕಾರಿಗಳು ಇಂದು ಸಂಜೆವರೆಗೂ ಸಂಸ್ಥೆಯ ಎಲ್ಲಾ ವಿಭಾಗಗಳನ್ನು ಜಾಲಾಡಿ ಹಿಂದಿರುಗಿದ್ದಾರೆ ಆದರೆ, ನಾಳೆಯೂ ದಾಳಿ ಮುಂದುವರಿಯುತ್ತದೆಯೋ ಇಲ್ಲವೋ ಎಂಬ ಸುಳಿವು ನೀಡಿಲ್ಲ. ಮೈಸೂರಿನಲ್ಲೇ ವಾಸ್ತವ್ಯ ಹೂಡಿರುವ ಅಧಿಕಾರಿಗಳು, ಕಾರ್ಯಾಚರಣೆ ಮುಂದುವರಿಸುವ ಸಾಧ್ಯತೆ ಇದೆ ಎಂದು ಸಂಸ್ಥೆ ಮೂಲಗಳು ತಿಳಿಸಿವೆ.

ಆಯಿಷ್ ನಿವೃತ್ತ ಪ್ರಾಧ್ಯಾಪಕಿ ಡಾ. ಕೆ.ರಾಜಲಕ್ಷ್ಮಿ ಎಂಬುವರು 2022ರ ಮಾರ್ಚ್ ತಿಂಗಳಲ್ಲಿ ಸಂಸ್ಥೆಯಲ್ಲಿ ನಿಯಮಬಾಹಿರ ಚಟುವಟಿಕೆಗಳು ನಡೆಯುತ್ತಿವೆ ಎಂದು ಆರೋಪಿಸಿ ಕೇಂದ್ರ ಸರ್ಕಾರಕ್ಕೆ ಲಿಖಿತ ದೂರು ನೀಡಿದ್ದರಲ್ಲದೇ, ಆ ಕುರಿತು ಮೈಸೂರಲ್ಲಿ ಸುದ್ದಿಗೋಷ್ಠಿ ನಡೆಸಿ ಮಾಹಿತಿ ಬಹಿರಂಗಪಡಿಸಿದ್ದರು. ಆ ದೂರಿನ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ನಿರ್ದೇಶನದಂತೆ ಸಿಬಿಐ ಅಧಿ ಕಾರಿಗಳು ಆಯಿಷ್ ಮೇಲೆ ದಾಳಿ ನಡೆಸಿ ದಾಖಲೆಗಳನ್ನು ಪರಿಶೀಲಿಸುತ್ತಿದ್ದಾರೆ ಎಂದು ಹೇಳಲಾಗುತ್ತಿದೆ. ಈ ಬಗ್ಗೆ ಪ್ರತಿಕ್ರಿಯೆ ಪಡೆಯಲು ಪ್ರಯತ್ನಿಸಿದರೂ ನಿರ್ದೇಶಕರು 'ಮೈಸೂರು ಮಿತ್ರ'ನಿಗೆ ಲಭ್ಯವಾಗಲಿಲ್ಲ.

ಸಚಿವರು, ಕಾಂಗ್ರೆಸ್ ಮುಖಂಡರಿಂದ ಶ್ರೀನಿವಾಸ ಪ್ರಸಾದ್ ಭೇಟಿ

ಪುನಃ ಜನಸೇವೆಗೆ ಮರಳುವ ಆಶಯದೊಂದಿಗೆ ಭೇಟಿ ಮಾಡಿ; ಆರೋಗ್ಯ ವಿಚಾರಿಸಿದೆವು: ಹೆಚ್.ಸಿ.ಮಹದೇವಪ್ಪ

ಮೈಸೂರು, ಮಾ.28(ಎಸ್‌ಬಿಡಿ)– ಸಚಿವರು ಸೇರಿದಂತೆ ಕಾಂಗ್ರೆಸ್ ಮುಖಂಡರು ಗುರುವಾರ ರಾತ್ರಿ ಚಾಮರಾಜನಗರ ಸಂಸದ ವಿ.ಶ್ರೀನಿವಾಸ ಪ್ರಸಾದ್ ಅವರನ್ನು ಭೇಟಿ ಮಾಡಿ, 40 ನಿಮಿಷಕ್ಕೂ ಹೆಚ್ಚು ಕಾಲ ಮಾತುಕತೆ ನಡೆಸಿದರು.

ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್, ಗುಂಡ್ಲುಪೇಟೆ ಶಾಸಕ ಗಣೇಶ್ ಪ್ರಸಾದ್, ಮಾಜಿ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ, ಕಾಂಗ್ರೆಸ್ ಮೈಸೂರು ಜಿಲ್ಲಾ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯ್ ಕುಮಾರ್, ನಗರ ಸಮಿತಿ ಅಧ್ಯಕ್ಷ ಆರ್.ಮೂರ್ತಿ ಹಾಗೂ ಮೈಸೂರು–ಕೊಡಗು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್, ಜಯಲಕ್ಷ್ಮಿಪುರಂನಲ್ಲಿರುವ ನಿವಾಸದಲ್ಲಿ ವಿ.ಶ್ರೀನಿವಾಸ ಪ್ರಸಾದ್ ಅವರೊಂದಿಗೆ ಗೌಪ್ಯ ಚರ್ಚೆ ನಡೆಸಿದರು.

ನಂತರ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಸಚಿವ ಡಾ.ಮಹದೇವಪ್ಪ, ಸಕ್ರಿಯ ರಾಜಕಾರಣಕ್ಕೆ ನಿವೃತ್ತಿ ಘೋಷಿಸಿದ್ದರ ಹಿನ್ನೆಲೆಯಲ್ಲಿ ಭೇಟಿ ಮಾಡಿದ್ದು, ನಾವು ಯಾವುದೇ ರಾಜಕೀಯದ ವಿಚಾರಗಳ ಬಗ್ಗೆ ಚರ್ಚೆ ಮಾಡಿಲ್ಲ ಎಂದರು.

ನಾಡಿನ ಹಿರಿಯ ರಾಜಕೀಯ ನಾಯಕರಲ್ಲಿ ಒಬ್ಬರಾದ ವಿ.ಶ್ರೀನಿವಾಸ ಪ್ರಸಾದ್ ಅವರು ತಮ್ಮ ಸುದೀರ್ಘ 50 ವರ್ಷಗಳ ಚುನಾವಣಾ ರಾಜಕಾರಣಕ್ಕೆ ನಿವೃತ್ತಿ ಘೋಷಿಸಿದ್ದು ಪತ್ರಿಕೆ ಮತ್ತು ಮಾಧ್ಯಮಗಳಿಂದ ತಿಳಿದು ನಮಗೆ ಅತ್ಯಂತ ಬೇಸರವಾಯಿತು. ಅವರು ಚುನಾವಣಾ ರಾಜಕಾರಣದಿಂದ ನಿವೃತ್ತಿ ಘೋಷಣೆ ಮಾಡಿದ್ದಾರೆ. ಆದರೆ ಅವರ ಮಾರ್ಗದರ್ಶನ ಹಾಗೂ ಜನ ಸೇವೆಯನ್ನು ಮುಂದುವರೆಸಬೇಕು. ಹಾಗಾಗಿ ನಾವೆಲ್ಲಾ ಅವರನ್ನು ಭೇಟಿಯಾಗಿ ನಮ್ಮ ಆಶಯ ವ್ಯಕ್ತಪಡಿಸಿ, ಅವರ ಆರೋಗ್ಯ ವಿಚಾರಿಸಿದ್ದೇವೆ ಎಂದು ಹೇಳಿದರು.

ಐದು ದಶಕಗಳ ಕಾಲ ಚುನಾವಣಾ ರಾಜಕೀಯದಲ್ಲಿ ತಾವು ನಂಬಿರುವ ಸಿದ್ಧಾಂತಗಳಿಗೆ ರಾಜಿಯಾಗಿಲ್ಲ. ಬೇರೆ ಸಂದರ್ಭ ಹಾಗೂ ಕಾರಣದಿಂದ ಅವರು ಬೇರೆ ಪಕ್ಷಕ್ಕೆ ಹೋದರೂ ಕೂಡ ತಾವು ನಂಬಿರುವ ಸಿದ್ಧಾಂತವನ್ನೇ ಪ್ರತಿಪಾದನೆ ಮಾಡುತ್ತಾ ಬಂದಿದ್ದಾರೆ. ಪ್ರಸ್ತುತ ಸಾರ್ವಜನಿಕ ಸೇವೆಗಿಂತ ಬೇರೆ ಬೇರೆ ಉದ್ದೇಶವನ್ನಿಟ್ಟುಕೊಂಡು ರಾಜಕಾರಣಕ್ಕೆ ಬರುವವರೇ ಹೆಚ್ಚು. ಇಂತಹ ಸಂದರ್ಭದಲ್ಲಿ ಗುಣಾತ್ಮಕ ನಾಯಕತ್ವ ದೂರವಾದರೆ ಪ್ರಜಾಪ್ರಭುತ್ವಕ್ಕೆ ನಷ್ಟ, ಹಾಗಾಗಿ ವಿ.ಶ್ರೀನಿವಾಸ ಪ್ರಸಾದ್ ಅವರು ಸಕ್ರಿಯ ರಾಜಕಾರಣದಲ್ಲಿ ಇರಬೇಕು ಎನ್ನುವುದು ನಮ್ಮ ಅನಿಸಿಕೆ ಎಂದರು.

ಒಂದು ಸಂದರ್ಭದಲ್ಲಿ ನಾವು ಜೊತೆಯಲ್ಲೇ ಕೆಲಸ ಮಾಡಿದೆವು. ಕಾರಣಾಂತರಗಳಿಂದ ನಮ್ಮ ಪಕ್ಷಗಳು ಬೇರೆಯಾದವು. ನಾವು ಅವರನ್ನು ಸೋಲಿಸಿದೆವು, ಅವರು ನಮ್ಮನ್ನು ಸೋಲಿಸಿದರು. ಇದೆಲ್ಲಾ ಪ್ರಜಾಪ್ರಭುತ್ವದ ಪ್ರಕ್ರಿಯೆಗಳು. ರಾಜಕೀಯದಲ್ಲಿ ನಾವು ಪರಸ್ಪರ ಎದುರಾಳಿಗಳೇ ಹೊರತು, ಶತ್ರುಗಳಾಗಿಲ್ಲ. ರಾಜ್ಯದ ಅಭಿವೃದ್ಧಿ, ಸಾರ್ವಜನಿಕರ ಹಿತ, ಜನರ ಹಕ್ಕುಗಳ ರಕ್ಷಣೆ, ಸಾಮಾಜಿಕ ನ್ಯಾಯದ ಪ್ರತಿಪಾದನೆ, ಸಂವಿಧಾನದ ಆಶಯಗಳ ಜಾರಿಗೆ ಒತ್ತಾಯಕ್ಕೆ ದುಡಿದವರ ಸಾಲಿನಲ್ಲಿ ಪ್ರಸಾದ್ ಅವರು ಅಗ್ರ ಪಂಕ್ತಿಯಲ್ಲಿದ್ದವರು. ಹಾಗಾಗಿ ಅವರು ಯಾವುದೇ ಪಕ್ಷದಲ್ಲಿದ್ದರೂ, ಸಕ್ರಿಯ ರಾಜಕಾರಣದಿಂದ ನಿವೃತ್ತಿಯಾದರೂ ಕಾಲಕಾಲಕ್ಕೆ ರಾಜ್ಯದ ಒಳಿತಿಗೆ, ಸಮರ್ಪಕ ಆಡಳಿತಕ್ಕೆ ಮಾರ್ಗದರ್ಶನ ನೀಡಬೇಕು. ಈ ವಿಚಾರಗಳನ್ನು ಬಿಟ್ಟು ಅವರೊಂದಿಗೆ ಇನ್ನೇನೂ ಚರ್ಚೆ ಮಾಡಿಲ್ಲ ಎಂದು ಸ್ಪಷ್ಟಪಡಿಸಿದರು.


ಮೈಸೂರಿನ ಜಯಲಕ್ಷ್ಮೀಪುರಂ ನಿವಾಸದಲ್ಲಿ ಸಂಸದ ವಿ.ಶ್ರೀನಿವಾಸ ಪ್ರಸಾದ್ ಅವರನ್ನು ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ, ಕೆ.ವೆಂಕಟೇಶ್, ಶಾಸಕ ಗಣೇಶ್ ಪ್ರಸಾದ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್, ನಗರಾಧ್ಯಕ್ಷ ಆರ್.ಮೂರ್ತಿ, ಮೈಸೂರು–ಕೊಡಗು ಅಭ್ಯರ್ಥಿ ಎಂ.ಲಕ್ಷ್ಮಣ ಗುರುವಾರ ರಾತ್ರಿ ಭೇಟಿ ಮಾಡಿ, ಚರ್ಚಿಸಿದರು.

ರಾಜಕೀಯವಾಗಿ ಯಾರನ್ನೂ ಬೆಂಬಲಿಸುವುದಿಲ್ಲ...

ಎಲ್ಲರ ರೀತಿ ಕಾಂಗ್ರೆಸ್ ನಾಯಕರು ನನ್ನನ್ನು ಬಂದು ಭೇಟಿ ಮಾಡಿದ್ದಾರೆ. ನಾನು ರಾಜಕೀಯವಾಗಿ ಈಗ ಯಾರನ್ನೂ ಬೆಂಬಲಿಸುವುದಿಲ್ಲ. ನಾನು ರಾಜಕೀಯಕ್ಕೆ ವಿದಾಯ ಹೇಳಿದ್ದೇನೆ. ನನ್ನ ಅಭಿಮಾನಿಗಳು ಅವರ ನಿರ್ಧಾರ ಅವರೇ ತೆಗೆದುಕೊಳ್ಳುತ್ತಾರೆ. ನಾನು ರಾಜಕೀಯವಾಗಿ ಯಾವ ನಿರ್ಧಾರವನ್ನು ಹೇಳುವುದಿಲ್ಲ. ಮೊನ್ನೆ ಬಿಜೆಪಿ ಮತ್ತು ಬಿಎಸ್ಪಿಯವರು ಬಂದಿದ್ದರು. ಹಾಗೆಯೇ ಇಂದು ಕಾಂಗ್ರೆಸ್‌ನವರು ಬಂದಿದ್ದಾರೆ. ಎಲ್ಲರೂ ಸಹಜವಾಗಿ ಬೆಂಬಲ ಕೇಳುತ್ತಾರೆ. ಇದಕ್ಕೆ ಹೆಚ್ಚಿನ ಮಹತ್ವ ಬೇಡ. ಟಿಕೆಟ್ ವಿಚಾರವಾಗಿ ಬಿಜೆಪಿ ಹೈ ಕಮಾಂಡ್ ನನ್ನೊಂದಿಗೆ ಮಾತನಾಡಿಲ್ಲ.
-ವಿ.ಶ್ರೀನಿವಾಸ ಪ್ರಸಾದ್, ಸಂಸದ

ಬೆಂಬಲಕ್ಕೆ ಮನವಿ: ಮೈಸೂರು–ಕೊಡಗು ಮತ್ತು ಚಾಮರಾಜನಗರ ಲೋಕಸಭಾ ಕ್ಷೇತ್ರಗಳಲ್ಲಿ ವಿ.ಶ್ರೀನಿವಾಸ ಪ್ರಸಾದ್ ಅವರು ತಮ್ಮದೇ ಆದ ಪ್ರಾಬಲ್ಯ ಹೊಂದಿದ್ದಾರೆ. ಈ ಹಿನ್ನೆಲೆಯಲ್ಲಿ ನಿನ್ನೆಯಷ್ಟೇ ಚಾಮರಾಜನಗರ ಕ್ಷೇತ್ರದ ಕಾಂಗ್ರೆಸ್ ಸಂಭವನೀಯ ಅಭ್ಯರ್ಥಿ, ಮಹದೇವಪ್ಪ ಅವರ ಪುತ್ರ ಸುನೀಲ್ ಬೋಸ್, ಪ್ರಸಾದ್ ಅವರನ್ನು ಭೇಟಿ ಮಾಡಿದ್ದರು. ಇದರ ಬೆನ್ನಲ್ಲೇ ಇಂದು ಸಚಿವದ್ವಯರು, ಶಾಸಕ, ಸ್ಥಳೀಯ ಪ್ರಮುಖರು, ಮೈಸೂರು–ಕೊಡಗು ಕ್ಷೇತ್ರದ ಅಭ್ಯರ್ಥಿಯನ್ನೊಳಗೊಂಡ ನಿಯೋಗ ಭೇಟಿ ಮಾಡಿ, ಬೆಂಬಲ ಕೋರಿದೆ ಎನ್ನಲಾಗಿದೆ. ಆದರೆ ವಿ.ಶ್ರೀನಿವಾಸ ಪ್ರಸಾದ್ ಅವರು ತಮ್ಮ 50 ವರ್ಷದ ಚುನಾವಣಾ ರಾಜಕೀಯಕ್ಕೆ ಅಧಿಕೃತವಾಗಿ ನಿವೃತ್ತಿ ಘೋಷಿಸಿ 10 ದಿನಗಳ ನಂತರ ಈ ನೆಪದಲ್ಲಿ ಭೇಟಿಯಾಗಿದ್ದಾರೆ.

ನಾಳೆಯಿಂದ ಕೊಡವ ಹಾಕಿ ಉತ್ಸವ

• ಕುಂಡ್ಯೋಳಂಡ ಹಾಕಿ ಹಬ್ಬಕ್ಕೆ ಅಂತಿಮ ಸಿದ್ಧತೆ • ನಾಪೋಕ್ಲುವಿನಲ್ಲಿ ಏ.28ರವರೆಗೆ ಪಂದ್ಯಾವಳಿ





ನಾಪೋಕ್ಲುವಿನ ಕೆಪಿಎಸ್ ಶಾಲೆಯ ಜನರಲ್ ತಿಮ್ಮಯ್ಯ ಕ್ರೀಡಾ ಮೈದಾನವನ್ನು ಟ್ಯಾಂಕರ್‌ನಿಂದ ನೀರು ಹಾಕಿ ಸಿದ್ಧಗೊಳಿಸುತ್ತಿರುವುದು.

ಮಡಿಕೇರಿ, ಮಾ.28–ಕೊಡವ ಕುಟುಂಬಗಳ ನಡುವಿನ 24ನೇ ವರ್ಷದ ಪ್ರತಿಷ್ಠಿತ 'ಕುಂಡ್ಯೋಳಂಡ ಹಾಕಿ ಹಬ್ಬ'ಕ್ಕೆ ಕ್ಷಣಗಣನೆ ಆರಂಭವಾಗಿದ್ದು, ಅಂತಿಮ ಹಂತದ ಸಿದ್ಧತೆ ಭರದಿಂದ ಸಾಗಿದೆ.

ಮಾ.30ರಿಂದ ಏ.28ರವರೆಗೆ ನಾಪೋಕ್ಲುವಿನ ಕೆಪಿಎಸ್ ಶಾಲೆಯ ಜನರಲ್ ತಿಮ್ಮಯ್ಯ ಕ್ರೀಡಾಂಗಣದಲ್ಲಿ ಕೊಡವ ಹಾಕಿ ಪಂದ್ಯಾವಳಿ ನಡೆಯಲಿದ್ದು, ಏಕಕಾಲಕ್ಕೆ 30 ಸಾವಿರ ಮಂದಿ ಆಸೀನರಾಗಿ ಪಂದ್ಯಗಳನ್ನು ವೀಕ್ಷಿಸಲು ಅನುಕೂಲವಾಗುವಂತೆ ಮೈದಾನದ ಸುತ್ತಲೂ 12 ಮೆಟ್ಟಿಲುಗಳ ಗ್ಯಾಲರಿ ನಿರ್ಮಿಸಲಾಗಿದೆ. ಗಣ್ಯಾತಿಗಣ್ಯರಿಗೆ ಪ್ರತ್ಯೇಕ ಆಸನ ವ್ಯವಸ್ಥೆಗಳಿದ್ದು, ಹಾಕಿ ಪಂದ್ಯಾವಳಿಗೆ ಒಟ್ಟು 3 ಮೈದಾನಗಳನ್ನು ಸಿದ್ಧಗೊಳಿಸಲಾಗುತ್ತಿದೆ.

ಅಂತಾರಾಷ್ಟ್ರೀಯ ಗುಣಮಟ್ಟದ ಮಾದರಿಯಲ್ಲಿ ಆಟದ ಮೈದಾನವನ್ನು ಸಿದ್ಧಗೊಳಿಸಲಾಗುತ್ತಿದ್ದು, ಚೆಂಡು ಮತ್ತು ಆಟಗಾರರ ನಡುವೆ ಸಮತೋಲನೆ ಕಾಪಾಡುವ ಸಲುವಾಗಿ ಮೈದಾನವನ್ನು ನುಣುಪಾಗಿಸಲು ಟ್ಯಾಂಕರ್ ಮೂಲಕ ನೀರಿನ್ನು ಹರಿಸಲಾಗುತ್ತಿದೆ. ಪ್ರತಿ ಮೈದಾನದಲ್ಲಿ 6 ಪಂದ್ಯಗಳಂತೆ 1 ದಿನಕ್ಕೆ 18 ಪಂದ್ಯಗಳು ನಡೆಯಲಿವೆ. 10 ದಿನ ಬಳಿಕ 2 ಮೈದಾನ, ಪ್ರೀ ಕ್ವಾಟರ್ ಹಂತದ ಬಳಿಕ 1ನೇ ಮೈದಾನದಲ್ಲಿ ಹಾಕಿ ಕ್ರೀಡಾಕೂಟಗಳು ನಡೆಯಲಿವೆ.

ಈ ಬಾರಿ 360 ಕೊಡವ ಕೌಟುಂಬಿಕ ತಂಡಗಳು ನೋಂದಾಯಿಸಿಕೊಂಡಿವೆ. ಈ ಕ್ರೀಡಾಕೂಟವನ್ನು ಗಿನ್ನಿಸ್ ದಾಖಲೆಗೊಳಿಸುವ ಆಶಯವನ್ನು ಕುಂಡ್ಯೋಳಂಡ ಕುಟುಂಬಸ್ಥರು ವ್ಯಕ್ತಪಡಿಸಿದ್ದಾರೆ. ಹಿಂದಿನಂತೆ ಹಲವು ತಂಡಗಳಲ್ಲಿ ಮಕ್ಕಳು, ಮಹಿಳಾ ಹಾಕಿ ಪಟುಗಳ ಸಹಿತ ಹಿರಿಯ ನಾಗರಿಕ ಆಟಗಾರರು ಕೂಡ ಮೈದಾನದಲ್ಲಿ ಕ್ರೀಡಾಸ್ಫೂರ್ತಿ ಪ್ರದರ್ಶಿಸಲಿದ್ದಾರೆ.

ಹಾಕಿ ಕ್ರೀಡಾಕೂಟದೊಂದಿಗೆ ವಾರಾಂತ್ಯದಂದು ಕೊಡವ ಸಾಂಪ್ರದಾಯಿಕ ಉಮ್ಮತ್ತಾಟ್, ಬೊಳಕಾಟ್, ಮೆರಥಾನ್, ಆಹಾರ ಮೇಳ, ವಧು–ವರರ ಸಮಾವೇಶ, ಆರೋಗ್ಯ ಶಿಬಿರ, ವೃತ್ತಿ ಮಾರ್ಗದರ್ಶನ, ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಹಾಕಿ ಆಟಗಾರರ ಪುನರ್ ಮಿಲನ ಮತ್ತು ಬಾಳೋಪಾಟ್ ತರಬೇತಿ ಮತ್ತಿತರ ಕಾರ್ಯಕ್ರಮಗಳು ಕೂಡ ನಡೆಯಲಿದೆ.

ನಾಳೆ ಚಾಲನೆ: ಮಾ.30ರಂದು ಕೂರ್ಗ್ 11 ಮತ್ತು ಇಂಡಿಯನ್ ನೇವಿ ನಡುವೆ ಉದ್ಘಾಟನಾ ಪಂದ್ಯ ಆಯೋಜಿಸಲಾಗಿದ್ದು, ಇದಕ್ಕೂ ಮುನ್ನ ಮಡಿಕೇರಿ ಮತ್ತು ಸಾಯಿ ಪೊನ್ನಂಪೇಟೆ ಬಾಲಕಿಯರ ತಂಡಗಳ ನಡುವೆ ಪ್ರದರ್ಶನ ಪಂದ್ಯ ನಡೆಯಲಿದೆ. ಕುಂಡ್ಯೋಳಂಡ ಹಾಕಿ ಚಾಂಪಿಯನ್ ತಂಡಕ್ಕೆ 4 ಲಕ್ಷ ರೂ. ನಗದು ಮತ್ತು ಟ್ರೋಫಿ, ದ್ವಿತೀಯ ಬಹುಮಾನ 3 ಲಕ್ಷ ರೂ., ತೃತೀಯ ಬಹುಮಾನ 2 ಲಕ್ಷ ರೂ. ಮತ್ತು 4ನೇ ಬಹುಮಾನ 1 ಲಕ್ಷ ರೂ. ನಗದು ಹಾಗೂ ಟ್ರೋಫಿ ನೀಡಲಾಗುವುದು.

> ಕುಂಡ್ಯೋಳಂಡ ಅತ್ಯಂತ ಚಿಕ್ಕ ಕುಟುಂಬವಾದರೂ ಹಾಕಿ ಹಬ್ಬದ ಯಶಸ್ಸಿಗಾಗಿ ಅದ್ಧೂರಿ ಸಿದ್ಧತೆ ಮಾಡಿಕೊಂಡಿದೆ. ಕಳೆದ ಕೆಲ ವರ್ಷಗಳಿಂದ ಇದಕ್ಕಾಗಿ ತಯಾರಿ ನಡೆಸಲಾಗುತ್ತಿತ್ತು. ಕುಂಡ್ಯೋಳಂಡ ಕುಟುಂಬಸ್ಥರಿಂದ 30 ಲಕ್ಷ ರೂ. ಸಂಗ್ರಹಿಸಲಾಗಿದೆ. ಕಳೆದ ವರ್ಷದ ಹಾಕಿ ಹಬ್ಬಕ್ಕೆ ಸರ್ಕಾರ 1 ಕೋಟಿ ರೂ. ನೀಡಿತ್ತು. ಈ ಬಾರಿ ಸರ್ಕಾರದ ಅನುದಾನ ಶೀಘ್ರ ದೊರೆತರೆ ಉತ್ತಮ. ಸಂಸದ ಪ್ರತಾಪ್ ಸಿಂಹ ಕೂಡ 25 ಲಕ್ಷ ರೂ. ಅನುದಾನ ನೀಡುವುದಾಗಿ ಭರವಸೆ ನೀಡಿದ್ದಾರೆ.
> –ರಮೇಶ್ ಮುದ್ದಯ್ಯ, ಅಧ್ಯಕ್ಷ, ಕುಂಡ್ಯೋಳಂಡ ಹಾಕಿ ನಮ್ಮೆ.

> ಹಾಕಿ ಕ್ರೀಡೆಯಲ್ಲಿ ಕೊಡಗು ಹೊರತುಪಡಿಸಿದರೆ ಪಂಜಾಬ್ ರಾಜ್ಯದವರು ಮಾತ್ರವೇ ಅತೀ ಹೆಚ್ಚಿನ ಸಾಧನೆ ಮಾಡಿದ್ದಾರೆ. ಕೊಡಗಿನ 50ಕ್ಕೂ ಅಧಿಕ ಆಟಗಾರರು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಹಾಕಿಯಲ್ಲಿ ಸಾಧನೆ ಮಾಡಿದ್ದಾರೆ. ಪಾಂಡಂಡ ಕುಟ್ಟಪ್ಪ ಕೌಟುಂಬಿಕ ಹಾಕಿ ಕ್ರೀಡೆಯ ಜನಕರಾಗಿದ್ದು, ಕ್ರೀಡಾಕೂಟದಲ್ಲಿ ಲಿಂಗ ಬೇಧವಿಲ್ಲದೇ ಮಕ್ಕಳು, ಮಹಿಳೆಯರು ಪಾಲ್ಗೊಳ್ಳಲಿದ್ದಾರೆ.
> –ಬಡಕಡ ದೀನಾ ಪೂವಯ್ಯ, ಉಪಾಧ್ಯಕ್ಷ, ಕೊಡವ ಹಾಕಿ ಅಕಾಡೆಮಿ

360 ತಂಡಗಳ ನೋಂದಣಿ

ಭಾರತೀಯ ಹಾಕಿಯ ತೊಟ್ಟಿಲು ಎಂದೇ ಪರಿಗಣಿಸಲ್ಪಟ್ಟಿರುವ ಕೊಡಗು ಜಿಲ್ಲೆ ಕ್ರೀಡಾ ಕ್ಷೇತ್ರದಲ್ಲಿ ಶ್ರೀಮಂತ ಪರಂಪರೆಯನ್ನು ಹೊಂದಿದೆ. 50ಕ್ಕೂ ಹೆಚ್ಚು ಕೊಡವ ಅಂತಾರಾಷ್ಟ್ರೀಯ ಹಾಕಿ ಆಟಗಾರರು ಹಾಕಿ ಕ್ರೀಡೆಯ ಪರಂಪರೆಗೆ ಕೊಡುಗೆ ನೀಡಿದ್ದಾರೆ. ಪಾಂಡಂಡ ಕುಟ್ಟಣ್ಣಿ ಹಾಗೂ ಅವರ ಸಹೋದರ ಕಾಶಿಯವರಿಂದ ಕೊಡವ ಹಾಕಿ ಉತ್ಸವ ಆರಂಭವಾಯಿತು. 1997ರಲ್ಲಿ ಕರಡದಲ್ಲಿ ಪಾಂಡಂಡ ಕುಟುಂಬ ಮೊದಲ ಬಾರಿಗೆ ಆಯೋಜಿಸಿದ್ದ ಹಾಕಿ ಹಬ್ಬದಲ್ಲಿ 60 ತಂಡಗಳು ಪಾಲ್ಗೊಂಡಿದ್ದವು.

ಈ ಬಾರಿ 360 ತಂಡಗಳ ನೋಂದಣಿಯೊಂದಿಗೆ ಹೊಸ ದಾಖಲೆ ಸೃಷ್ಟಿಸುವ ಮೂಲಕ ಪ್ರತಿಷ್ಠಿತ ಕಪ್‌ಗಾಗಿ ಸೆಣಸಾಡುತ್ತಿರುವುದು ವಿಶೇಷವಾಗಿದೆ.

ಆಕಸ್ಮಿಕ ಬೆಂಕಿಗೆ ಅಪಾರ ಬೆಳೆ ನಷ್ಟ

ಕಾಫಿ, ಅಡಕೆ ಮತ್ತು ಕರಿಮೆಣಸು ಬೆಳೆಗಳು ನಾಶ



ಸುಳುಗೋಡು ಗ್ರಾಮದಲ್ಲಿ ಬೆಂಕಿಗೆ ಆಹುತಿಯಾಗಿರುವ ಕಾಫಿ ಗಿಡಗಳು.

ಗೋಣಿಕೊಪ್ಪ: ಪೊನ್ನಂಪೇಟೆ ತಾಲೂಕಿನ ಬಾಳಲೆ ಹೋಬಳಿಯ ಸುಳುಗೋಡು ಗ್ರಾಮದ ತೋಟಗಳಿಗೆ ಆಕಸ್ಮಿಕ ಬೆಂಕಿ ಬಿದ್ದು ಸುಮಾರು 20 ಲಕ್ಷ ರೂ. ಮೌಲ್ಯದ ಕಾಫಿ, ಅಡಕೆ ಮತ್ತು ಕರಿಮೆಣಸು ಬೆಳೆಗಳು ನಾಶವಾಗಿವೆ.

ಗ್ರಾಮದ ಹೊಳೆಕೆರೆ ಕಾಡಿನಲ್ಲಿ ಬುಧವಾರ ಮಧ್ಯಾಹ್ನ ಆಕಸ್ಮಿಕವಾಗಿ ಬೆಂಕಿ ಕಾಣಿಸಿಕೊಂಡಿದ್ದು, ಸುಡು ಬಿಸಿಲಿನ ಪರಿಣಾಮ ನೋಡು ನೋಡುತ್ತಿದ್ದಂತೆ ಬೆಂಕಿಯ ಕೆನ್ನಾಲಿಗೆ ಪಕ್ಕದಲ್ಲಿರುವ ಕಾಫಿ ತೋಟಗಳಿಗೂ ಹಬ್ಬಿದೆ. ಸುಮಾರು ಒಂದೂವರೆ ಎಕರೆಯಷ್ಟು ಕಾಫಿ ತೋಟ, 3 ಎಕರೆಯಲ್ಲಿ ಬೆಳೆದಿದ್ದ ಅಡಕೆ ಸೇರಿದಂತೆ ಫಸಲುಗಳು ಸುಟ್ಟು ಭಸ್ಮವಾಗಿವೆ.

ಸುಳುಗೋಡು ಗ್ರಾಮದ ಅದೇಂಗಡ ವಿನು ಉತ್ತಪ್ಪ, ಮುದ್ದಿಯಡ ಬಬ್ಬು ವಿಶ್ವನಾಥ್, ಪೋರಂಗಡ ವಿಠಲ ತಿಮ್ಮಯ್ಯ, ಕಳ್ಳಿಚಂಡ ಚಂಗಪ್ಪ, ಅದೇಂಗಡ ಶೇಖರ್ ಬಬ್ಬು, ಅದೇಂಗಡ ಜೋಯಪ್ಪ ಹಾಗೂ ಮತ್ತಿತರರಿಗೆ ಸೇರಿದ ಸುಮಾರು 15 ಎಕರೆಯಷ್ಟು ಕಾಫಿ, ಅಡಕೆ, ಬಾಳೆ, ತೆಂಗು, ಸಪೋಟ, ತಾಳೆ, ಕಾಳುಮೆಣಸು ಬಳ್ಳಿಗಳು ಸುಟ್ಟು ಹೋಗಿವೆ. ಈ ಸಂದರ್ಭ ಅಕ್ಕಪಕ್ಕದ ತೋಟದಲ್ಲಿ ಕೆಲಸ ಮಾಡುತ್ತಿದ್ದ ಕಾರ್ಮಿಕರೊಂದಿಗೆ ತೋಟಗಳ ಮಾಲೀಕರು ಬೆಂಕಿಯನ್ನು ನಂದಿಸಲು ಹರಸಾಹಸಪಟ್ಟರೂ ಬಿಸಿಲಿನ ಝಳಕ್ಕೆ ಬೆಂಕಿ ನಿಯಂತ್ರಣಕ್ಕೆ ಬಾರದೆ ಅಕ್ಕಪಕ್ಕದ ತೋಟಗಳಿಗೆ ವಿಸ್ತರಿಸತೊಡಗಿತು.

ಗೋಣಿಕೊಪ್ಪಲಿನ ಅಗ್ನಿಶಾಮಕ ದಳದ ಸಿಬ್ಬಂದಿ ಸಂಜೆವರೆಗೆ ಪ್ರಯತ್ನಿಸಿ, ಬೆಂಕಿ ನಂದಿಸುವಲ್ಲಿ ಯಶಸ್ವಿಯಾದರು. ಬೆಂಕಿಯ ಕೆನ್ನಾಲಿಗೆಗೆ ಅಪಾರ ಪ್ರಮಾಣದ ಕೃಷಿ ಫಸಲುಗಳು ನಾಶವಾಗಿವೆ. ಬೆಂಕಿ ಅವಘಡ ಸಂಭವಿಸಿದ ತೋಟಗಳಲ್ಲಿ ಗುರುವಾರವೂ ಅಲ್ಲಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಬೆಳೆಗಾರರಲ್ಲಿ ಮತ್ತಷ್ಟು ಆತಂಕ ಮನೆಮಾಡಿದೆ.

ಕೂಜಿಮಲೆ ಎಸ್ಟೇಟ್‌ನಲ್ಲಿ ಅಪರಿಚಿತ ಮಹಿಳೆ ಪತ್ತೆ



ಮಡಿಕೇರಿ, ಮಾ.28– ಕೊಡಗಿನ ಗಡಿ ಪ್ರದೇಶ ಕೂಜಿಮಲೆ ಎಸ್ಟೇಟ್‌ನಲ್ಲಿ ಅಪರಿಚಿತ ಮಹಿಳೆ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ನಕ್ಸಲ್ ನಿಗ್ರಹ ದಳದ ಕಮಾಂಡೋಗಳು ಮತ್ತು ಮಡಿಕೇರಿ ಗ್ರಾಮಾಂತರ ಪೊಲೀಸರು ಮಹಿಳೆಯನ್ನು ವಶಕ್ಕೆ ಪಡೆದಿದ್ದಾರೆ.

ನಾನು ರಾಜಸ್ಥಾನ ಮೂಲದವಳು ಎಂದು ಅಪರಿಚಿತ ಮಹಿಳೆ ಪೊಲೀಸರಿಗೆ ತಿಳಿಸಿದ್ದಾಳೆ. ಬಳಲಿ, ಅಸ್ವಸ್ಥ ಸ್ಥಿತಿಯಲ್ಲಿದ್ದ ಹಿನ್ನೆಲೆಯಲ್ಲಿ ಆಕೆಯನ್ನು ಜಿಲ್ಲಾಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿದೆ. ಆಕೆ ಚೇತರಿಸಿಕೊಂಡ ಬಳಿಕ ಆಶ್ರಮಕ್ಕೆ ದಾಖಲಿಸಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಮರಾಜನ್ ಮಾಹಿತಿ ನೀಡಿದ್ದಾರೆ.

ಒಂಟಿಯಾಗಿ ಅಪರಿಚಿತ ಮಹಿಳೆ ಪ್ರತ್ಯಕ್ಷವಾದ ಹಿನ್ನೆಲೆಯಲ್ಲಿ ಆಕೆಯನ್ನು ನಕ್ಸಲ್ ಸಂಘಟನೆಯ ಸದಸ್ಯಳೆಂದು ಭಾವಿಸಿದ್ದ ಕೂಜಿಮಲೆ ರಬ್ಬರ್ ಎಸ್ಟೇಟ್ ಕಾರ್ಮಿಕರು ಮತ್ತು ವ್ಯವಸ್ಥಾಪಕರು ಪೊಲೀಸರಿಗೆ ಮಾಹಿತಿ ನೀಡಿದ್ದರು. ಸ್ಥಳಕ್ಕೆ ತೆರಳಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮತ್ತು ಎಎನ್‌ಎಫ್ ಕಮಾಂಡೋಗಳು ಮಾಹಿತಿ ಸಂಗ್ರಹಿಸಿದರು.

ಎಎನ್‌ಎಫ್ ತಂಡ ಹಾಗೂ ಕೊಡಗು ಜಿಲ್ಲಾ ಸಶಸ್ತ್ರ ಪಡೆ ಅಧಿಕಾರಿಗಳು ಮತ್ತು ಸಿಬ್ಬಂದಿ ಕೂಜಿಮಲೆ ಎಸ್ಟೇಟ್‌ಗೆ ಭೇಟಿ ನೀಡಿ, ಕಾರ್ಯಾಚರಣೆ ನಡೆಸಿದ್ದಾರೆ. ಯಾವುದೇ ಅಹಿತಕರ ಪರಿಸ್ಥಿತಿಯನ್ನು ನಿಭಾಯಿಸಲು ಕೊಡಗು ಜಿಲ್ಲಾ ಪೊಲೀಸ್ ಇಲಾಖೆ ಸಿದ್ಧವಿದೆ ಎಂದು ಎಸ್‌ಪಿ ರಾಮರಾಜನ್ ತಿಳಿಸಿದ್ದಾರೆ.

ಮಹಿಳೆಯ ಅಶ್ಲೀಲ ಫೋಟೋ ಹರಿಬಿಟ್ಟಿದ್ದ ವ್ಯಕ್ತಿಗೆ 5 ವರ್ಷ ಜೈಲು



ಸುರೇಶ

ಮಡಿಕೇರಿ, ಮಾ.28– ಮಹಿಳೆಯ ಅಶ್ಲೀಲ ಫೋಟೋಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟಿದ್ದ ವ್ಯಕ್ತಿಗೆ ಜಿಲ್ಲಾ ಸತ್ರ ನ್ಯಾಯಾಲಯ 5 ವರ್ಷ ಜೈಲು ಶಿಕ್ಷೆ ಹಾಗೂ 16 ಸಾವಿರ ರೂ. ದಂಡ ವಿಧಿಸಿ ತೀರ್ಪು ನೀಡಿದೆ.

ಪೊನ್ನಂಪೇಟೆ ಕೃಷ್ಣ ಕಾಲೋನಿ ನಿವಾಸಿ ಸುರೇಶ(50)ಗೆ ಶಿಕ್ಷೆ ವಿಧಿಸಲಾಗಿದೆ. ನನ್ನ ಅಶ್ಲೀಲ ಫೋಟೋಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟಿದ್ದಾನೆ ಎಂದು ಮಹಿಳೆಯೋರ್ವಳು ಸುರೇಶ ವಿರುದ್ಧ ಸಿದ್ದಾಪುರ ಪೊಲೀಸ್ ಠಾಣೆಗೆ ದೂರು ನೀಡಿದ್ದರು.

ಈ ಸಂಬಂಧ ಐಟಿ ಮತ್ತು ಎಸ್‌ಸಿ, ಎಸ್‌ಟಿ ದೌರ್ಜನ್ಯ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡ ಪೊಲೀಸರು ತನಿಖೆ ನಡೆಸಿ, 2021ರ ಸೆ.8ರಂದು ಈತನನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ಜಿಲ್ಲಾ ಸತ್ರ ನ್ಯಾಯಾಲಯ 5 ವರ್ಷ ಜೈಲು ಶಿಕ್ಷೆ ಹಾಗೂ 16 ಸಾವಿರ ರೂ. ದಂಡ ವಿಧಿಸಿ ತೀರ್ಪು ನೀಡಿದೆ. ಸರ್ಕಾರಿ ಅಭಿಯೋಜಕ ಎನ್.ಪಿ. ದೇವೇಂದ್ರ ಸರ್ಕಾರದ ಪರ ವಾದ ಮಂಡಿಸಿದರು.

ಹುಲಿ ದಾಳಿಗೆ ಹಸು ಬಲಿ



ಮಡಿಕೇರಿ: ಮೇಯಲು ಬಿಟ್ಟಿದ್ದ ಹಸುವಿನ್ನು ಹುಲಿ ಕೊಂದುಹಾಕಿದ ಘಟನೆ ಗುರುವಾರ ಪೊನ್ನಂಪೇಟೆ ತಾಲೂಕಿನ ಬಾಳಲೆ ಹೋಬಳಿಯ ಸುಳುಗೋಡು ಗ್ರಾಮದಲ್ಲಿ ನಡೆದಿದೆ.

ಸುಳುಗೋಡು ಗ್ರಾಮದ ಪಾಸುರ ಕಾಶಿ ಕಾರ್ಯಪ್ಪ ಎಂಬುವರಿಗೆ ಸೇರಿದ ಸುಮಾರು 40 ಸಾವಿರ ರೂ. ಬೆಲೆಬಾಳುವ ಹಸುವನ್ನು ಬೆಳಗ್ಗೆ 9 ಗಂಟೆಯಲ್ಲಿ ಗದ್ದೆಯಲ್ಲಿ ಮೇಯಲು ಬಿಡಲಾಗಿತ್ತು. ಆದರೆ, ಸುಮಾರು 11 ಗಂಟೆಯಲ್ಲಿ ಹಸುವಿನ ಅರಚಾಟ ಕೇಳಿ ಮಾಲೀಕರು ಓಡಿ ಬಂದು ನೋಡಿದಾಗ ಹಸುವಿನ ಮೇಲೆ ಹುಲಿ ದಾಳಿ ಮಾಡುತ್ತಿತ್ತು. ನಂತರ ಪಾಸುರ ಕಾಶಿ ಕಾರ್ಯಪ್ಪ ಅವರು ಜೋರಾಗಿ ಕೂಗಿದ್ದರಿಂದ ಹುಲಿ ಓಡಿ ಹೋಗಿದೆ.

ಕುತ್ತಿಗೆಯ ಭಾಗಕ್ಕೆ ಹುಲಿ ಬಲವಾಗಿ ಕಚ್ಚಿದ್ದ ಹಿನ್ನೆಲೆಯಲ್ಲಿ ಹಸು ಮೃತಪಟ್ಟಿದೆ. ತಿತಿಮತಿ ಅರಣ್ಯ ಇಲಾಖೆಯ ಅಧಿಕಾರಿಗಳು ಹಾಗೂ ಗಸ್ತು ಅರಣ್ಯ ಪಾಲಕ ರಘು, ಪ್ರಶಾಂತ್ ಸ್ಥಳ ಪರಿಶೀಲಿಸಿದರು.

ಬಿಜೆಪಿ ಅಭ್ಯರ್ಥಿ ಯದುವೀರ್‌ಗೆ ಜೆಡಿಎಸ್ ಬೆಂಬಲ

ಮಡಿಕೇರಿ: ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಹಿನ್ನೆಲೆಯಲ್ಲಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಅವರಿಗೆ ಬೆಂಬಲ ನೀಡಲಾಗುವುದು ಎಂದು ಯುವ ಜೆಡಿಎಸ್ ಜಿಲ್ಲಾಧ್ಯಕ್ಷ ಸಿ.ಎಲ್.ವಿಶ್ವ ತಿಳಿಸಿದರು.

ನಗರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಕ್ಷದ ನಾಯಕರ ನಿರ್ಧಾರದಂತೆ ಕೊಡಗು ಜೆಡಿಎಸ್‌ನ ಪ್ರಮುಖರು ಹಾಗೂ ಕಾರ್ಯಕರ್ತರು ಬಿಜೆಪಿ ಅಭ್ಯರ್ಥಿ ಪರ ಮತಯಾಚಿಸಲಿದ್ದಾರೆ. ಮಾ.30ರಂದು ಮಡಿಕೇರಿಯ ಖಾಸಗಿ ಹೋಟೆಲ್‌ನಲ್ಲಿ ಜಿಲ್ಲಾ ಜೆಡಿಎಸ್ ಮುಂಚೂಣಿ ನಾಯಕರ ಸಭೆ ನಡೆಯಲಿದೆ. ಮಾಜಿ ಸಚಿವ ಸಾ.ರಾ.ಮಹೇಶ್ ಹಾಗೂ ಜೆಡಿಎಸ್ ಕೊಡಗು ಉಸ್ತುವಾರಿ ಸಿ.ಎನ್. ಮಂಜೇಗೌಡ ಸಭೆಯಲ್ಲಿ ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಕೋರ್ ಕಮಿಟಿ ರಚಿಸಿ, ತಾಲೂಕು ಅಧ್ಯಕ್ಷರಿಗೆ ಸಂಪೂರ್ಣ ಜವಾಬ್ದಾರಿ ನೀಡಲಾಗುವುದು. ಜಿಲ್ಲಾಧ್ಯಕ್ಷರು ಇಲ್ಲದ ಕಾರಣ ಸಾಮೂಹಿಕ ನಾಯಕತ್ವದಲ್ಲಿ ಚುನಾವಣಾ ಕಾರ್ಯ ನಿರ್ವಹಿಸಲಿದ್ದೇವೆ. ಜೆಡಿಎಸ್‌ನಲ್ಲಿ ಪಕ್ಷ ನಿಷ್ಠ ಹಿರಿಯರು ಹಾಗೂ ಕಾರ್ಯಕರ್ತರು ಇದ್ದು, ಯದುವೀರ್ ಗೆಲುವಿಗೆ ಶ್ರಮಿಸಲಾಗುವುದು. ಹೆಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದಾಗ ಕೊಡಗು ಜಿಲ್ಲೆಗೆ ಸಾಕಷ್ಟು ಕೊಡುಗೆಗಳನ್ನು ನೀಡಿದ್ದಾರೆ. ಅತಿವೃಷ್ಟಿ ಮತ್ತು ಭೂಕುಸಿತದ ಸಂದರ್ಭ 7 ಬಾರಿ ಜಿಲ್ಲೆಗೆ ಆಗಮಿಸಿ ಸಂತ್ರಸ್ತರಿಗೆ ಧೈರ್ಯ ತುಂಬಿದ್ದರು ಎಂದರು.

ಸುದ್ದಿಗೋಷ್ಠಿಯಲ್ಲಿ ಜೆಡಿಎಸ್ ಜಿಲ್ಲಾ ಉಪಾಧ್ಯಕ್ಷ ಪಾಣತ್ತಲೆ ವಿಶ್ವನಾಥ್, ಕುಶಾಲನಗರ ತಾಲೂಕು ಅಧ್ಯಕ್ಷ ಪಿ.ಡಿ.ರವಿಕುಮಾರ್, ವಿರಾಜಪೇಟೆ ಅಧ್ಯಕ್ಷ ಪಿ.ಎ.ಮಂಜುನಾಥ್, ಸೋಮವಾರಪೇಟೆ ಅಧ್ಯಕ್ಷ ನಾಗರಾಜು ಹಾಗೂ ಅಲ್ಪಸಂಖ್ಯಾತರ ಘಟಕದ ಜಿಲ್ಲಾಧ್ಯಕ್ಷ ಕೆ.ಜಿ. ಜಾಶೀರ್ ಮೂರ್ನಾಡು ಉಪಸ್ಥಿತರಿದ್ದರು.

ಹನೂರು ಕ್ಷೇತ್ರ ಕಾಂಗ್ರೆಸ್ ಭದ್ರಕೋಟೆ

ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಸಚಿವ ಹೆಚ್.ಸಿ.ಮಹದೇವಪ್ಪ ಮೆಚ್ಚುಗೆ



ಹನೂರಿನ ವಾಸವಿ ಮಹಲ್ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯನ್ನು ಸಚಿವರಾದ ಹೆಚ್.ಸಿ.ಮಹದೇವಪ್ಪ ಹಾಗೂ ಕೆ.ವೆಂಕಟೇಶ್ ಉದ್ಘಾಟಿಸಿದರು. ಈ ವೇಳೆ ನರೇಂದ್ರ, ಯತೀಂದ್ರ ಸಿದ್ದರಾಮಯ್ಯ ಇತರರಿದ್ದರು.

> ನಾನು ಲೋಕಸಭಾ ಚುನಾವಣೆಯ ಕಾಂಗ್ರೆಸ್ ಟಿಕೆಟ್ ಪ್ರಬಲ ಆಕಾಂಕ್ಷಿಯಾಗಿ ವರ್ಷದಿಂದ ಕ್ಷೇತ್ರದಲ್ಲಿ ಸುತ್ತಾಡುತ್ತಿದ್ದೆ. ಆದರೆ, ಪಕ್ಷದ ಹಿರಿಯರ ಆದೇಶದಂತೆ ಸುನೀಲ್ ಬೋಸ್ ಅವರಿಗೆ ಅವಕಾಶ ನೀಡಿದ್ದೇನೆ. ಆದರೆ, ಪಕ್ಷದ ನಾಯಕರು ಮುಂದೆ ನನಗೆ ಮೋಸ, ದ್ರೋಹ ಮಾಡಬೇಡಿ.
> –ಜಿ.ಎನ್.ನಂಜುಂಡಸ್ವಾಮಿ, ಮಾಜಿ ಶಾಸಕ

ಹನೂರು, ಮಾ.28–ಹನೂರು ವಿಧಾನ ಸಭಾ ಕ್ಷೇತ್ರ ಕಾಂಗ್ರೆಸ್‌ನ ಭದ್ರಕೋಟೆಯಾಗಿದ್ದು, 14 ಚುನಾವಣೆಗಳ ಪೈಕಿ 10 ಚುನಾವಣೆಗಳಲ್ಲಿ ದಿ.ರಾಜುಗೌಡ ಮನೆತನದವರೇ ಆಡಳಿತ ನಡೆಸಿರುವುದು ಸಂತಸದ ವಿಚಾರ ಎಂದು ಸಮಾಜ ಕಲ್ಯಾಣ ಸಚಿವ ಹೆಚ್.ಸಿ.ಮಹದೇವಪ್ಪ ತಿಳಿಸಿದರು.

ಪಟ್ಟಣದ ವಾಸವಿ ಮಹಲ್ ಕಲ್ಯಾಣ ಮಂಟಪದಲ್ಲಿ ಗುರುವಾರ ಏರ್ಪಡಿಸಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ರಾಜುಗೌಡ ಮನೆತನದವರು ಹನೂರು ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಮೂರು ಬಾರಿ ಶಾಸಕರಾಗಿದ್ದ ಆರ್.ನರೇಂದ್ರ 3000 ಕೋಟಿ ರೂ. ಅನುದಾನದಿಂದ ವಿವಿಧ ಅಭಿವೃದ್ಧಿಪಡಿಸಿದ್ದಾರೆ. ಈ ನಿಟ್ಟಿನಲ್ಲಿ ಲೋಕಸಭಾ ಚುನಾವಣೆ ಮಾಜಿ ಶಾಸಕ ಆರ್.ನರೇಂದ್ರ ನೇತೃತ್ವದಲ್ಲಿ ನಡೆಯಲಿದೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಬಡವರು, ಹಿಂದುಳಿದವರು, ಶೋಷಿತ ವರ್ಗದವರ ಸಮಗ್ರ ಅಭಿವೃದ್ಧಿಗೆ ಸಾವಿರಾರು ಕೋಟಿ ರೂ. ಅನುದಾನ ಮೀಸಲಿಟ್ಟಿದ್ದಾರೆ. ವಿಧಾನ ಸಭೆ ಚುನಾವಣಾ ಪೂರ್ವದಲ್ಲಿ ನೀಡಿದ್ದ 5 ಗ್ಯಾರಂಟಿ ಭರವಸೆಗಳನ್ನು ಮಾತಿನಂತೆ ಎಲ್ಲಾ ಯೋಜನೆಗಳನ್ನು ಈಡೇರಿಸಿದ್ದಾರೆ. ಜನಪರ ಕಾಳಜಿ ಇರುವ ಕಾಂಗ್ರೆಸ್ ಸರ್ಕಾರದಿಂದ ಈ ಯೋಜನೆಗಳನ್ನು ನೀಡಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಮಾತನಾಡಿ, ಚಾಮರಾಜನಗರ ಜಿಲ್ಲೆ ಕಾಂಗ್ರೆಸ್ ಭದ್ರಕೋಟೆ ಎನ್ನುವುದನ್ನು ನಾವು ಮತ್ತೊಮ್ಮೆ ಸಾಬೀತುಪಡಿಸಬೇಕು. ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಬಡವರಿಗೆ 10 ವರ್ಷದಲ್ಲಿ ಯಾವ ಯೋಜನೆಯನ್ನು ಕೊಟ್ಟಿದೆ ಎಂದು ಜನರು ವಿಮರ್ಶೆ ಮಾಡಿಕೊಳ್ಳಬೇಕು. ಬಿಜೆಪಿಯವರು ಅಭಿವೃದ್ಧಿ ವಿಚಾರವಾಗಿ ಚರ್ಚೆ ಮಾಡದೆ ಭಾವನಾತ್ಮಕ ವಿಚಾರಗಳನ್ನು ಇಟ್ಟುಕೊಂಡು ಲೋಕಸಭಾ ಚುನಾವಣೆ ಎದುರಿಸುತ್ತಿದ್ದಾರೆ. ದೇಶದಲ್ಲಿ ಬಿಜೆಪಿಯ 400 ಸಂಸದರನ್ನು ಆಯ್ಕೆ ಮಾಡಿದ್ದೆ ಆದರೆ ಮುಂದಿನ ದಿನಗಳಲ್ಲಿ ದೇಶದಲ್ಲಿ ಚುನಾವಣೆಗಳೇ ನಡೆಯುವುದಿಲ್ಲ ಎಂದರು.

ಮಾಜಿ ಶಾಸಕ ಆರ್.ನರೇಂದ್ರ ಮಾತನಾಡಿ, ಕಳೆದ ಚುನಾವಣೆಯಲ್ಲಿ ನಾನು ಯಾವ ರೀತಿ ಪರಾಭವ ಹೊಂದಿದ್ದೇನೆ ಎಂಬುದು ಕ್ಷೇತ್ರದ ಪ್ರತಿಯೊಬ್ಬ ಮತದಾರರಿಗೂ ತಿಳಿದಿರುವ ವಿಚಾರ. ಹೊರಗಿನಿಂದ ಬಂದವರು ಹನೂರು ಕ್ಷೇತ್ರವನ್ನು ಅಭಿವೃದ್ಧಿ ಮಾಡಲು ಸಾಧ್ಯವಿಲ್ಲ. ಒಂದು ವರ್ಷಗಳಿಂದ ಕ್ಷೇತ್ರದಲ್ಲಿ ಯಾವುದೇ ಅಭಿವೃದ್ಧಿಯಾಗಿಲ್ಲ. ಕಳೆದ ಮೂರು ಲೋಕಸಭಾ ಚುನಾವಣೆಯಲ್ಲೂ ಕಾಂಗ್ರೆಸ್ ಅಭ್ಯರ್ಥಿಗೆ ಹನೂರು ಕ್ಷೇತ್ರದಿಂದ ಹೆಚ್ಚಿನ ಮತ ಕೊಡಿಸುವಲ್ಲಿ ಯಶಸ್ವಿಯಾಗಿದ್ದೇನೆ. ಈ ಬಾರಿಯೂ ಕಾಂಗ್ರೆಸ್ ಅಭ್ಯರ್ಥಿಗೆ 25 ಸಾವಿರ ಮತಗಳ ಅಂತರ ನೀಡಲು ಶ್ರಮಿಸುವುದಾಗಿ ಭರವಸೆ ನೀಡಿದರು.

ಸಭೆಯಲ್ಲಿ ಶಾಸಕ ಎ.ಆರ್.ಕೃಷ್ಣಮೂರ್ತಿ, ವಿಧಾನಪರಿಷತ್ ಸದಸ್ಯ ಡಾ.ತಿಮ್ಮಯ್ಯ, ಮಾಜಿ ಶಾಸಕ ಯತೀಂದ್ರ, ಕಾಡಾ ಅಧ್ಯಕ್ಷ ಮರಿಸ್ವಾಮಿ, ಪ್ರಚಾರ ಸಮಿತಿ ಅಧ್ಯಕ್ಷ ಶಿವಕುಮಾರ್, ಮುಖಂಡ ಸುನಿಲ್ ಬೋಸ್, ಕೆಪಿಸಿಸಿ ಸದಸ್ಯ ಬಸವರಾಜು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಈಶ್ವರ್ ಮುಕುಂದ ವರ್ಮ, ಚಾಮುಲ್ ನಿರ್ದೇಶಕರಾದ ನಂಜುಂಡಸ್ವಾಮಿ, ಶಾಹುಲ್ ಅಹಮದ್, ಪಪಂ ಸದಸ್ಯರಾದ ಹರೀಶ್, ಸುದೇಶ್ ಗಿರೀಶ್, ಸಂಪತ್, ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಚೇತನ್, ಮುಖಂಡರಾದ ನವನೀತ್ ಗೌಡ, ಎಲ್.ನಾಗೇಂದ್ರ, ಮಾದೇಶ್, ಅಜ್ಜಿಪುರ ನಾಗರಾಜು, ಮುರುಡೇಶ್ವರಸ್ವಾಮಿ, ಮಂಗಲ ಪುಟ್ಟರಾಜು, ಕೊಪ್ಪಳಿ ಮಹದೇವ ನಾಯಕ್, ಗುಂಡಾಪುರ ಮಾದೇಶ್, ರಮೇಶ್, ರಾಜೇಶ್ ಹಾಜರಿದ್ದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾಗಿ ನಂಜಯ್ಯ ಆಯ್ಕೆ



ಚಾಮರಾಜನಗರ ಜಿಲ್ಲಾ ವಕೀಲರ ಸಂಘದ ನೂತನ ಅಧ್ಯಕ್ಷ ಎಸ್.ನಂಜಯ್ಯ, ಪ್ರಧಾನ ಕಾರ್ಯದರ್ಶಿ ದೊಡ್ಡಮೋಳೆ ರಂಗಸ್ವಾಮಿ ಅವರನ್ನು ಸಂಘದ ವತಿಯಿಂದ ಅಭಿನಂದಿಸಲಾಯಿತು.

ಚಾಮರಾಜನಗರ, ಮಾ.28–ಜಿಲ್ಲಾ ವಕೀಲರ ಸಂಘದ ನೂತನ ಅಧ್ಯಕ್ಷರಾಗಿ ಎಸ್.ನಂಜಯ್ಯ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ದೊಡ್ಡಮೋಳೆ ರಂಗಸ್ವಾಮಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಖಜಾಂಚಿಯಾಗಿ ಸಿ.ಸಿ.ರಮೇಶ್, ಜಂಟಿ ಕಾರ್ಯದರ್ಶಿಗಳಾಗಿ ಎಂ.ಎಸ್.ಮೋಹನ್ ಜಗದೀಶ್, ಬಿ.ಯೋಗಿಶ್, ಕಾರ್ಯಕಾರಿಣಿ ಸದಸ್ಯರಾಗಿ ಬಿ.ವಿದ್ಯಾಲತಾ, ಬಿ.ಜಿ. ಜಯಪ್ರಕಾಶ್, ಎಂ.ಆರ್.ಶಿವಕುಮಾರ್ ಆಯ್ಕೆಯಾಗಿದ್ದಾರೆ.

ಪದಾಧಿಕಾರಿಗಳಿಗೆ ಸನ್ಮಾನ: ಇದೇ ವೇಳೆ ನೂತನ ಅಧ್ಯಕ್ಷ, ಪ್ರಧಾನ ಕಾರ್ಯದರ್ಶಿ ಹಾಗೂ ಪದಾಧಿಕಾರಿಗಳನ್ನು ಸಂಘದ ವತಿಯಿಂದ ಸನ್ಮಾನಿಸಲಾಯಿತು.

ನಂತರ ಮಾತನಾಡಿದ ಅಧ್ಯಕ್ಷ ಎಸ್. ನಂಜಯ್ಯ, ಸಂಘದ ಎಲ್ಲರೂ ಒಗ್ಗಟ್ಟಿನಿಂದ ಸಂಘದ ಏಳಿಗೆಗೆ ಶ್ರಮಿಸಬೇಕು. ಸಂಘವನ್ನು ಉತ್ತಮವಾಗಿ ನಡೆಸಿಕೊಂಡು ಹೋಗುತ್ತೇನೆ. ನ್ಯಾಯಾಲಯ ಹಾಗೂ ವಕೀಲರು ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ಪಾರದರ್ಶಕವಾಗಿ ಸಂಘವನ್ನು ಮುನ್ನೆಡೆಸಿಕೊಂಡು ಹೋಗಿ ವಕೀಲರ ಹಿತ ಕಾಯುವುದಾಗಿ ತಿಳಿಸಿದರು.

ಚುನಾವಣಾಧಿಕಾರಿಯಾಗಿ ಎಚ್.ಎನ್. ಲೋಕೇಶ್ ಮತ್ತು ಸಹಾಯಕ ಚುನಾವಣಾಧಿಕಾರಿಯಾಗಿ ಎಸ್.ಶಿವಸ್ವಾಮಿ ಕಾರ್ಯನಿರ್ವಹಿಸಿದರು. ಹಿರಿಯ ವಕೀಲರಾದ ಆರ್. ವಿರೂಪಾಕ್ಷ, ಗುರುಸ್ವಾಮಿ, ನಾಗಣ್ಣ, ಚಂದ್ರಕಾಂತ್, ವಿನಾಯಕ, ನಂಜುಂಡಸ್ವಾಮಿ, ನಂದೀಶ್, ಶಿವಕುಮಾರ್, ಮಹೇಶ್, ಪ್ರವೀಣ್ ಕುಮಾರ್, ಪರಶಿವಮೂರ್ತಿ, ಎಸ್. ಪ್ರತಾಪ್, ಸತೀಶ್, ವಿಜಯ್ ಸಿದ್ದರಾಜು, ಕೇಶವಮೂರ್ತಿ, ಉಮೇಶ್, ಚಂದ್ರು, ರಾಜೇಂದ್ರ ಕೆಂಪರಾಜು ಹಾಜರಿದ್ದರು.

ಲೋಕಸಭಾ ಚುನಾವಣೆ: ಅಧಿಸೂಚನೆ ಪ್ರಕಟ

ಚಾಮರಾಜನಗರ, ಮಾ.28–ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ಚಾಮರಾಜನಗರ ಲೋಕಸಭಾ ಕ್ಷೇತ್ರ ಚುನಾವಣಾಧಿಕಾರಿ ಶಿಲ್ಪನಾಗ್ ಗುರುವಾರ ಚುನಾವಣಾ ಅಧಿಸೂಚನೆ ಹೊರಡಿಸಿದ್ದಾರೆ.

ನಾಮಪತ್ರಗಳನ್ನು ಉಮೇದುವಾರರು ಅಥವಾ ಅವರ ಸೂಚಕರು ಚುನಾವಣಾಧಿಕಾರಿಗಳು ಅಥವಾ ಸಹಾಯಕ ಚುನಾವಣಾಧಿಕಾರಿ ಗೀತಾ ಹುಡೇದ ಅವರಿಗೆ ಜಿಲ್ಲಾಡಳಿತ ಭವನ ಮೊದಲನೇ ಮಹಡಿಯ ಕೊಠಡಿ ಸಂಖ್ಯೆ 101ರಲ್ಲಿ ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 3 ಗಂಟೆ ಒಳಗೆ (ಸರ್ಕಾರಿ ರಜಾ ದಿನದ ಹೊರತು) ಸಲ್ಲಿಸಬೇಕು. ಏ.5ರಂದು ಬೆಳಗ್ಗೆ 11 ಗಂಟೆಗೆ ನಾಮಪತ್ರ ಪರಿಶೀಲಿಸಲಾಗುವುದು. ನಾಮಪತ್ರ ಹಿಂಪಡೆಯಲು ಏ.8 ಕೊನೆಯ ದಿನವಾಗಿದ್ದು, ಏ.26ರಂದು ಮತದಾನ ನಡೆಯಲಿದೆ ಎಂದು ಚುನಾವಣಾಧಿಕಾರಿ ತಿಳಿಸಿದ್ದಾರೆ.

ಕೆಜೆಪಿ ಅಭ್ಯರ್ಥಿ ನಾಮಪತ್ರ ಸಲ್ಲಿಕೆ


ಚಾಮರಾಜನಗರ, ಮಾ.28–ಚಾಮರಾಜನಗರ ಮೀಸಲು ಕ್ಷೇತ್ರದಿಂದ ಲೋಕಸಭಾ ಚುನಾವಣೆ ನಾಮಪತ್ರ ಸಲ್ಲಿಕೆಯ ಮೊದಲ ದಿನವಾದ ಗುರುವಾರ ಓರ್ವ ಅಭ್ಯರ್ಥಿ ನಾಮಪತ್ರ ಸಲ್ಲಿಸಿದ್ದಾರೆ. ಕರ್ನಾಟಕ ಜನತಾ ಪಕ್ಷದ ಅಭ್ಯರ್ಥಿಯಾಗಿ ಎಸ್.ನಿಂಗರಾಜು ನಾಮಪತ್ರ ಸಲ್ಲಿಸಿದ್ದಾರೆ ಎಂದು ಚುನಾವಣಾಧಿಕಾರಿ ಶಿಲ್ಪನಾಗ್ ತಿಳಿಸಿದ್ದಾರೆ.

ಶೃಂಗೇರಿ ಶಂಕರ ಮಠದ ಆವರಣದಲ್ಲಿ ಮಹಾಗಣಪತಿ ಹೋಮ



ಚಾಮರಾಜನಗರ ತಾಲೂಕಿನ ಹೆಬ್ಬಸೂರು ಗ್ರಾಮದ ಶೃಂಗೇರಿ ಶಂಕರ ಶಾಖಾ ಮಠದ ಆವರಣದಲ್ಲಿ ಗುರುವಾರ ಶಾರದಾ ಕೃಪಾ ಸಭಾಭವನ ಉದ್ಘಾಟನೆ ಅಂಗವಾಗಿ ಮಹಾಗಣಪತಿ ಹೋಮ ಜರುಗಿತು.

ಮದುವೆ ಮನೆಯಲ್ಲಿ ಮತದಾನ ಜಾಗೃತಿ



ಚಾಮರಾಜನಗರದ ಮಾಂಗಲ್ಯಂ ಕಲ್ಯಾಣ ಮಂಟಪದಲ್ಲಿ ವಧು–ವರರಿಗೆ ಭಿತ್ತಿಪತ್ರ ನೀಡಿ ಮತದಾನದ ಅರಿವು ಮೂಡಿಸಲಾಯಿತು.

ಚಾಮರಾಜನಗರ, ಮಾ.28– ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ನಗರದ ಮಾಂಗಲ್ಯಂ ಕಲ್ಯಾಣ ಮಂಟಪದಲ್ಲಿ ನಡೆದ ಮದುವೆ ಸಮಾರಂಭದಲ್ಲಿ ಜಿಲ್ಲಾ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿ ಪಿ.ಲಕ್ಷ್ಮೀ ನೇತೃತ್ವದಲ್ಲಿ ಮತದಾನ ಜಾಗೃತಿ ಮೂಡಿಸಲಾಯಿತು.

ಮದುವೆ ಸಮಾರಂಭದಲ್ಲಿ 'ಚುನಾವಣಾ ಪರ್ವ ದೇಶದ ಗರ್ವ' ಚುನಾವಣಾ ಘೋಷವಾಕ್ಯವುಳ್ಳ ಭಿತ್ತಿಪತ್ರಗಳನ್ನು ವಧು–ವರರಿಗೆ ನೀಡಿ ಮತದಾನದ ಅರಿವು ಮೂಡಿಸಲಾಯಿತು. ಅಲ್ಲದೇ ಸಮಾರಂಭದಲ್ಲಿ ನೆರೆದಿದ್ದ ಸಾವಿರಾರು ಜನರಿಗೆ ಲೋಕಸಭಾ ಚುನಾವಣೆಯಲ್ಲಿ ತಪ್ಪದೇ ಮತದಾನ ಮಾಡುವಂತೆ ಜಾಗೃತಿ ಮೂಡಿಸಲಾಯಿತು. ಇದೇ ವೇಳೆ ಮದುವೆ ಮಂಟಪದಲ್ಲಿ ಚುನಾವಣಾ ಆಯೋಗ ಸಿದ್ಧಪಡಿಸಿರುವ ಮತದಾನದ ಸಂದೇಶ ಸಾರುವ ಜಾಗೃತಿ ಗೀತೆಯನ್ನು ಪ್ರಸಾರ ಮಾಡಲಾಯಿತು. ಇದೇ ವೇಳೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಎಂ.ಜುಂಜಣ್ಣ, ವಾರ್ತಾ ಸಹಾಯಕ ಸುರೇಶ್ ಕುಮಾರ್ ಹಾಗೂ ಸಿಬ್ಬಂದಿ ಇದ್ದರು.

ಇಂದು ಬೇಗೂರಿನಲ್ಲಿ ಮಹದೇಶ್ವರ ರಥೋತ್ಸವ



ಬೇಗೂರು, ಮಾ.28– ಗುಂಡ್ಲುಪೇಟೆ ತಾಲೂಕಿನ ಬೇಗೂರು ಗ್ರಾಮದ ಶ್ರೀ ಬಂಡಿಗೇರಿ ಮಹದೇಶ್ವರ ಸ್ವಾಮಿಯ ನೂತನ ರಥೋತ್ಸವ ಮತ್ತು ಕಳಸ ರೋಹಣ ಶುಕ್ರವಾರ ನಡೆಯಲಿದೆ.

ಕೆಬ್ಬೇಪುರದ ಶ್ರೀಮಠಿ ಮಠದ ಶ್ರೀ ಚಂದ್ರಶೇಖರಾಧ್ಯಸ್ವಾಮೀಜಿ ಸಾನ್ನಿಧ್ಯದಲ್ಲಿ ಮುಂಜಾನೆ 4.30 ರಿಂದ ಆಲಯ ಪ್ರವೇಶ ನಂತರ ಪುಣ್ಯಾಹ ಪಂಚಬ್ರಹ್ಮ ನವಗ್ರಹ, ಮೃತ್ಯುಂಜಯ, ಪ್ರಧಾನ ಕಳಸ ಪೂಜೆ, ಗಣಹೋಮ, ನವಗ್ರಹ ಹೋಮ, ಪ್ರಧಾನ ಹೋಮ ನಡೆಯಲಿವೆ.

ಬೆಳಗ್ಗೆ 7.15 ರಿಂದ 7.30ರ ಅಮೃತ ಮೇಷ ಲಗ್ನದಲ್ಲಿ ಸ್ವಾಮಿಯ ಕಳಾಸಾರೋಹಣ ಮತ್ತು ಅಷ್ಟೋತ್ತರ ಮಹಾ ಮಂಗಳಾರತಿ ನಡೆಯಲಿದೆ. ರಥೋತ್ಸವದಲ್ಲಿ ಬೇಗೂರ ಸೇರಿದಂತೆ ಸುತ್ತಮುತ್ತಲ ಬೆಳಚಲವಾಡಿ, ಕಮರಹಳ್ಳಿ, ಹಾಲಹಳ್ಳಿ, ರಾಘವಾಪುರ, ತ್ಗಗ್ಲೂರು, ಕಾಳನಹುಂಡಿ, ಬೆಟ್ಟದಮಾದಹಳ್ಳಿ, ಭೋಗಯ್ಯನಹುಂಡಿ, ಅರೇಪುರ, ತೊಂಡವಾಡಿ, ಕುಲಗಾಣ, ಮಾದಾಪಟ್ಟಣ, ಸೋಮಹಳ್ಳಿ ಮುಂತಾದ ಗ್ರಾಮಸ್ಥರು ಭಾಗಹಿಸಲಿದ್ದಾರೆ.

ಮೈಸೂರಲ್ಲಿ ವ್ಯಾಪಕವಾಗಿ ನಡೆಯುತ್ತಿರುವ ಮರಗಳ ಹನನ: ಭಾರಿ ದಂಡ, ಜೈಲು ಶಿಕ್ಷೆಗೂ ಆಗ್ರಹ



ಮೈಸೂರು ಗ್ರಾಹಕರ ಪರಿಷತ್ ವತಿಯಿಂದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಮೈಸೂರು, ಮಾ.28(ಎಂಕೆ)– ಮೈಸೂರು ನಗರ ಪ್ರದೇಶದಲ್ಲಿ ರಸ್ತೆ ಬದಿಯ ಮರಗಳನ್ನು ಅವ್ಯಾಹತವಾಗಿ ಕಡಿಯುತ್ತಿರುವುದನ್ನು ಕೂಡಲೇ ನಿಲ್ಲಿಸಿ, ವಿವೇಚನೆ ಇಲ್ಲದೆ ಮರ ಕಡಿಯುವವರಿಗೆ ದೊಡ್ಡ ಮೊತ್ತದ ದಂಡ ಹಾಗೂ ಜೈಲು ಶಿಕ್ಷೆ ವಿಧಿಸುವಂತೆ ಒತ್ತಾಯಿಸಿ ಮೈಸೂರು ಗ್ರಾಹಕರ ಪರಿಷತ್(ಎಂಜಿಪಿ) ವತಿಯಿಂದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಮೈಸೂರು ನಗರದ ರಸ್ತೆ ಬದಿಯಲ್ಲಿ ದಶಮಾನಗಳಿಂದ ಬೆಳೆಸು ನಿಂತಿರುವ ಮರಗಳು ಪಕ್ಷಿ ಸಂಕುಲಕ್ಕೆ ಆಸರೆಯಾಗಿದ್ದು, ಜೀವ ವೈವಿಧ್ಯತೆಗೆ ಸಾಕ್ಷಿಯಾಗಿವೆ. ಅಲ್ಲದೆ ಸಾಂಸ್ಕೃತಿಕ ನಗರಿ ಮೈಸೂರಿಗೆ ಆಗಮಿಸುವ ಪ್ರವಾಸಿಗರಿಗೆ, ಪಾದಚಾರಿಗಳಿಗೆ ನೆರಳಾಗಿವೆ. ಇಂತಹ ಮರಗಳನ್ನು ವಿವೇಚನೆ ಇಲ್ಲದೆ ಕಡಿದು ಹಾಕುತ್ತಿರುವುದು ಪ್ರಕೃತಿಗೆ ಮಾಡುವ ದ್ರೋಹವಾಗಿದೆ. ರಂಬೆ–ಕೊಂಬೆಗಳನ್ನು ಕಡಿಯಲು ಅನುಮತಿ ನೀಡಿದ್ದರೂ ತದ ನಂತರ ಇಡೀ ಮರವನ್ನೇ ಕಡಿದು ಹಾಕಲಾಗುತ್ತಿದೆ. ಇದರ ಬಗ್ಗೆ ಅರಣ್ಯ ಇಲಾಖೆ ಕಠಿಣ ಕ್ರಮ ತೆಗೆದುಕೊಳ್ಳಬೇಕು. ವಿವೇಚನೆ ಇಲ್ಲದೆ ಮರಕಡಿಯುವವರಿಗೆ ವಿಧಿಸುವ 2000 ರೂ.ದಂಡದ ಮೊತ್ತವನ್ನು ಹೆಚ್ಚಿಸಿ, ಜೈಲು ಶಿಕ್ಷೆಗೂ ಗುರಿಪಡಿಸಬೇಕು ಎಂದು ಆಗ್ರಹಿಸಿದರಲ್ಲದೆ ಮರಗಳಿಗೆ ಮೊಳೆ ಹೊಡೆದು ಬ್ಯಾನರ್ ಕಟ್ಟುವುದು, ಲೈಟಿಂಗ್ ಅಳವಡಿಕೆಗೆ ಕಡಿವಾಣ ಹಾಕಿ ಒಣಗುತ್ತಿರುವ ಮರಗಳು ಹಾಗೂ ಸಸಿಗಳ ಸಂರಕ್ಷಿಸುವ ವ್ಯವಸ್ಥೆ ಮಾಡುವಂತೆ ಕೋರಲಾಯಿತು.

ಉಚಿತ ಆರೋಗ್ಯ ತಪಾಸಣಾ ಶಿಬಿರ



ಮೈಸೂರು, ಮಾ. 28– ಎನ್‌ಜೆಎಸ್ ಚಾರಿಟೆಬಲ್ ಟ್ರಸ್ಟ್, ಮೈಸೂರು ವೀರಶೈವ ಸಜ್ಜನ ಸಂಘದ ಸಂಯುಕ್ತಾಶ್ರಯದಲ್ಲಿ ಏಪ್ರಿಲ್ 2ರಂದು ಬೆಳಗ್ಗೆ 9.30ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಮಂಡಿ ಮೊಹಲ್ಲಾದ ಮಂಡಿ ಪೊಲೀಸ್ ಸ್ಟೇಷನ್ ಹತ್ತಿರವಿರುವ ಕಂಠಿ ಮಲ್ಲಣ್ಣನವರ ಕಲ್ಯಾಣ ಮಂದಿರದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ. 94487 53597, 99161 55453, 94487 38657 ಸಂಪರ್ಕಿಸಬಹುದು.

ಮೂರನೇ ಪುಟದಿಂದ

ರಾಜ್ಯದಲ್ಲಿ ಪ್ರಚಾರ

ಹಾಗೂ ತುಮಕೂರು ಕ್ಷೇತ್ರಗಳನ್ನು ಒಳಗೊಂಡಿರುತ್ತದೆ. ಪ್ರಧಾನಿ ಭಾಷಣ ಸಂದರ್ಭದಲ್ಲಿ ಒಂದು ಇಲ್ಲವೆ, ಎರಡು ಕಡೆ ಮಾತ್ರ ದೇವೇಗೌಡರು ವೇದಿಕೆ ಹಂಚಿಕೊಳ್ಳಲಿದ್ದಾರೆ. ಇನ್ನುಳಿದ ಎಲ್ಲಾ ಪ್ರಚಾರ ವೇದಿಕೆಯಲ್ಲಿ ಬಿಜೆಪಿಯ ಹಿರಿಯ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಜೆಡಿಎಸ್ ರಾಜ್ಯಾಧ್ಯಕ್ಷ ಹಾಗೂ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಭಾಗಿಯಾಗಲಿದ್ದಾರೆ. ವೇದಿಕೆಯಲ್ಲಿ ಸುತ್ತಮುತ್ತಲಿನ ಲೋಕಸಭಾ ಕ್ಷೇತ್ರಗಳ ಅಭ್ಯರ್ಥಿಗಳು ಇರಲಿದ್ದಾರೆ.

ಪ್ರಧಾನಿ ಅವರಲ್ಲದೆ, ಬಿಜೆಪಿಯ ಮುಖಂಡರು ಹಾಗೂ ಕೇಂದ್ರ ಸಚಿವರಲ್ಲಿ ಯಾರಾದರು ಒಬ್ಬರು ದಿನನಿತ್ಯ ಮೊದಲ ಹಂತದಲ್ಲಿ ಚುನಾವಣಾ ಪ್ರಚಾರ ನಡೆಸಲಿದ್ದಾರೆ.

ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಅಮಿತ್ ಷಾ, ಯೋಗಿ ಆದಿತ್ಯನಾಥ್ ಭಾಗವಹಿಸುವ ಸಮಾವೇಶಗಳಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಪಾಲ್ಗೊಳ್ಳಲಿದ್ದಾರೆ. ಕೆಲವು ಆಯ್ದ ಕ್ಷೇತ್ರಗಳಲ್ಲಿ ದೇವೇಗೌಡರು ಹಾಗೂ ಯಡಿಯೂರಪ್ಪ ಜಂಟಿಯಾಗಿ ಎನ್‌ಡಿಎ ಅಭ್ಯರ್ಥಿಗಳ ಪರ ಪ್ರಚಾರ ನಡೆಸಲಿದ್ದಾರೆ.

ಇದಲ್ಲದೆ, ಯಡಿಯೂರಪ್ಪ–ಕುಮಾರಸ್ವಾಮಿ, ಮತ್ತೆ ಕೆಲವೆಡೆ ಬಿ.ವೈ.ವಿಜಯೇಂದ್ರ–ಕುಮಾರಸ್ವಾಮಿ ಜಂಟಿಯಾಗಿ ಚುನಾವಣಾ ಪ್ರಚಾರ ಕೈಗೊಳ್ಳಲಿದ್ದಾರೆ.

ಅಭ್ಯರ್ಥಿಗಳು ನಾಮಪತ್ರ ಸಲ್ಲಿಸುವುದಕ್ಕೂ ಮುನ್ನವೇ ವಿಜಯೇಂದ್ರ ಮತ್ತು ಕುಮಾರಸ್ವಾಮಿ ಅವರು ಬಿಜೆಪಿ–ಜೆಡಿಎಸ್ ಕಾರ್ಯಕರ್ತರ ಸಭೆಗಳನ್ನು ನಡೆಸುವಂತೆ ವರಿಷ್ಠರು ಸೂಚಿಸಿದ್ದು, ಅದರಂತೆ ನಿನ್ನೆಯಿಂದಲೇ ಈ ಪ್ರಕ್ರಿಯೆ ಆರಂಭಗೊಂಡಿದೆ.

ಅಮಿತ್ ಷಾ ಗೂಂಡಾ, ರೌಡಿ

ಕಾರ್ಯಕ್ರಮ ರೂಪಿಸಿಲ್ಲ. ದೇಶದ ಪ್ರತೀ ಹಳ್ಳಿ–ಹಳ್ಳಿಯಲ್ಲಿಯೂ ರಾಮ ಮಂದಿರಗಳಿವೆ. ನಮ್ಮ ಜನರು ಅನಾದಿ ಕಾಲದಿಂದಲೂ ರಾಮ ಭಕ್ತರಾಗಿದ್ದಾರೆ. ಇದನ್ನೇ ಬಂಡವಾಳ ಮಾಡಿಕೊಂಡಿರುವ ಬಿಜೆಪಿಯವರು, ಭಾವನಾತ್ಮಕವಾಗಿ ಜನರಿಗೆ ಮಂಕುಬೂದಿ ಎರಚುತ್ತಿದ್ದಾರೆ. ಅಯೋಧ್ಯೆ ರಾಮ ಮಂದಿರದ ಅಕ್ಷತೆ ಎಂದು ಹಂಚಿದರು. ಈ ಅಕ್ಷತೆಗೆ ಅಯೋಧ್ಯೆಯಿಂದ ಅಕ್ಕಿ ತಂದಿಲ್ಲ ಎಂದು ಅವರು ಹೇಳುತ್ತಿದ್ದಂತೆಯೇ ಸಭಿಕರಲ್ಲೊಬ್ಬರು 'ಅನ್ನ ಭಾಗ್ಯ' ಎಂದು ಹೇಳಿದಾಗ ವೆಂಕಟೇಶ್, ನೋಡಿ, ಅದು ಅನ್ನಭಾಗ್ಯ ಅಕ್ಕಿಯಂತೆ. ಅದನ್ನು ಅಯೋಧ್ಯೆಯಿಂದ ತಂದ ಅಕ್ಷತೆ ಎಂದು ಸುಳ್ಳು ಹೇಳಿದ್ದಾರೆ ಎಂದು ಆರೋಪಿಸಿದರು.

ಪ್ರಮುಖ ಆರೋಪಿ ಬಂಧನ

ಇರಿಸಲಾಗಿದೆ ಎಂದು ಎನ್‌ಐಎ ಗುರುವಾರ ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದೆ.

ಬೆಂಗಳೂರಿನ ಬ್ರೂಕ್‌ಫೀಲ್ಡ್‌ನ ಐಟಿಪಿಎಲ್ ರಸ್ತೆಯಲ್ಲಿರುವ ಜನನಿಬಿಡ ಜನಪ್ರಿಯ ರೆಸ್ಟೋರೆಂಟ್‌ನಲ್ಲಿ ಮಾರ್ಚ್ 1 ರಂದು ಹ್ಯಾಂಡ್‌ಬ್ಯಾಗ್‌ನಲ್ಲಿ ಬಚ್ಚಿಟ್ಟಿದ್ದ ಸುಧಾರಿತ ಸ್ಫೋಟಕ ಸಾಧನ ಸ್ಫೋಟಗೊಂಡ ನಂತರ ನೌಕರರು ಮತ್ತು ಗ್ರಾಹಕರು ಸೇರಿದಂತೆ ಒಂಬತ್ತಕ್ಕೂ ಹೆಚ್ಚು ಜನರು ಗಾಯಗೊಂಡಿದ್ದರು. ಸ್ಫೋಟದಿಂದ ಆಸ್ತಿಪಾಸ್ತಿಗೂ ಹಾನಿಯಾಗಿತ್ತು. ಮಾರ್ಚ್ 3 ರಂದು ಪ್ರಕರಣವನ್ನು ಕೈಗೆತ್ತಿಕೊಂಡಿದ್ದ ಎನ್‌ಐಎ, ಸ್ಫೋಟ ನಡೆಸಿದ ಪ್ರಮುಖ ಆರೋಪಿ ಮುಸ್ಸಾವಿರ್ ಶಜೀಬ್ ಹುಸೇನ್‌ನನ್ನು ಈ ಹಿಂದೆ ಗುರುತಿಸಿತ್ತು. ಇತರ ಪ್ರಕರಣಗಳಲ್ಲಿ ಏಜೆನ್ಸಿಗೆ ಬೇಕಾಗಿರುವ ಮತ್ತೊಬ್ಬ ಸಂಚುಕೋರ ಅಬ್ದುಲ್ ಮತೀನ್ ತಾಹಾ ಎಂಬಾತನನ್ನೂ ಅದು ಗುರುತಿಸಿತ್ತು. ಆದರೆ ಇವರಿಬ್ಬರೂ ಪರಾರಿಯಾಗಿದ್ದಾರೆ ಎಂದು ಸಂಸ್ಥೆ ತಿಳಿಸಿದೆ. ಪ್ರಕರಣದಲ್ಲಿ ಗುರುತಿಸಲಾದ ಇತರ ಇಬ್ಬರು ಆರೋಪಿಗಳಿಗೆ ಷರೀಫ್ ತಾತ್ವಿಕ ಬೆಂಬಲ ನೀಡಿದ್ದ ಎಂದು ಈವರೆಗಿನ ಎನ್‌ಐಎ ತನಿಖೆಗಳು ಬಹಿರಂಗಪಡಿಸಿವೆ. ಈ ಮೂವರು ಆರೋಪಿಗಳ ಮನೆಗಳು ಹಾಗೂ ಇತರ ಶಂಕಿತರ ಮನೆಗಳು ಮತ್ತು ಅಂಗಡಿಗಳ ಮೇಲೆ ಇಂದು ದಾಳಿ ನಡೆಸಲಾಯಿತು. ತಪಾಸಣೆಯ ವೇಳೆ ನಗದು ಸಹಿತ ವಿವಿಧ ಡಿಜಿಟಲ್ ಸಾಧನಗಳನ್ನು ವಶಪಡಿಸಿಕೊಳ್ಳಲಾಗಿದೆ. ತಲೆಮರೆಸಿಕೊಂಡಿರುವ ಆರೋಪಿಗಳನ್ನು ಬಂಧಿಸಲು ಮತ್ತು ಸ್ಫೋಟದ ಹಿಂದಿನ ದೊಡ್ಡ ಪಿತೂರಿಯನ್ನು ಬಯಲಿಗೆಳೆಯಲು ಕೇಂದ್ರ ಭಯೋತ್ಪಾದನಾ ನಿಗ್ರಹ ಸಂಸ್ಥೆ ಎಲ್ಲಾ ಪ್ರಯತ್ನಗಳನ್ನು ನಡೆಸುತ್ತಿದೆ.

ಕೇಜ್ರಿವಾಲ್ ಏ.1ರವರೆಗೆ ಇಡಿ ವಶಕ್ಕೆ

ಮೂವರ ಹೇಳಿಕೆಗಳನ್ನು ಸಹ ದಾಖಲಿಸಲಾಗಿದೆ ಎಂದು ಕೇಂದ್ರ ತನಿಖಾ ಸಂಸ್ಥೆ ತಿಳಿಸಿದೆ. ಸ್ವತಃ ರೋಸ್ ಅವೆನ್ಯೂ ನ್ಯಾಯಾಲಯದಲ್ಲಿ ಮಾತನಾಡಿದ ಮುಖ್ಯಮಂತ್ರಿ ಕೇಜ್ರಿವಾಲ್, ಎಎಪಿ ಭ್ರಷ್ಟವಾಗಿದೆ ಎಂಬ ಹೊಗೆ ಪರದೆಯನ್ನು ರಾಷ್ಟ್ರದ ಮುಂದೆ ಸೃಷ್ಟಿಸಲಾಗಿದೆ ಎಂದು ಹೇಳಿದರು. ತಮ್ಮ ಪರ ವಕೀಲರು ಹಾಜರಿದ್ದರೂ ನ್ಯಾಯಾಲಯದಿಂದ ಅನುಮತಿ ಪಡೆದು ಹಿಂದಿಯಲ್ಲಿ ತಮ್ಮ ಹೇಳಿಕೆಯನ್ನು ನ್ಯಾಯಾಲಯದ ಮುಂದೆ ಕೇಜ್ರಿವಾಲ್ ಮಂಡಿಸಿದರು.

ಅವರನ್ನು ಇಡಿ ವಿಶೇಷ ನ್ಯಾಯಾಧೀಶರಾದ ಕಾವೇರಿ ಬವೇಜಾ ಅವರ ನ್ಯಾಯಾಲಯಕ್ಕೆ ಹಾಜರುಪಡಿಸಿ ಏಳು ದಿನಗಳ ಹೆಚ್ಚಿನ ಕಸ್ಟಡಿಗೆ ಕೋರಿದ್ದರಿಂದ ತಮ್ಮ ಅಹವಾಲನ್ನು ಸಲ್ಲಿಸಿದರು. ಪ್ರಕರಣದೊಂದಿಗೆ ಸಂಬಂಧ ಹೊಂದಿರುವ ಕೆಲವು ಜನರ ವಿಚಾರಣೆಯ ಅಗತ್ಯವಿದೆ ಎಂದು ವಾದಿಸಿದರು. ಕೇಜ್ರಿವಾಲ್ ಅವರು ತಪ್ಪಿಸಿಕೊಳ್ಳುವ ಉತ್ತರಗಳನ್ನು ನೀಡುತ್ತಿದ್ದಾರೆ ಮತ್ತು ಅವರ ಡಿಜಿಟಲ್ ಸಾಧನಗಳ ಪಾಸ್‌ವರ್ಡ್‌ಗಳನ್ನು ಬಹಿರಂಗಪಡಿಸುತ್ತಿಲ್ಲ ಎಂದು ಇಡಿ ಹೇಳಿತು. ಅಬಕಾರಿ ನೀತಿ ಪ್ರಕರಣದಲ್ಲಿ ನಾಲ್ವರು ಸಾಕ್ಷಿಗಳಿಂದ ನನ್ನನ್ನು ಆರೋಪಿತನಾಗಿ ಮಾಡಲಾಗಿದೆ. ಹಾಲಿ ಸಿಎಂ ಅನ್ನು ಬಂಧಿಸಲು ನಾಲ್ಕು ಹೇಳಿಕೆಗಳು ಸಾಕೇ? ಎಂದು ಪ್ರಶ್ನಿಸಿದ ಕೇಜ್ರಿವಾಲ್, ಶರತ್ ಚಂದ್ರರೆಡ್ಡಿ ಬಿಜೆಪಿಗೆ 55 ಕೋಟಿ ದೇಣಿಗೆ ನೀಡಿದ್ದಾರೆ ನನ್ನ ಬಳಿ ಇದಕ್ಕೆ ಪುರಾವೆಗಳಿವೆ ಎಂದು ಹೇಳಿದರು. ರೆಡ್ಡಿ ಅವರು ಅರಬಿಂದೋ ಫಾರ್ಮಾ ಲಿಮಿಟೆಡ್‌ನ ನಿರ್ದೇಶಕರಾಗಿದ್ದು, ಪ್ರಕರಣದಲ್ಲಿ ಸಹ–ಆರೋಪಿ–ಅನುಮೋದಕರಲ್ಲಿ ಒಬ್ಬರಾಗಿದ್ದಾರೆ. ಇಡಿ ತನಿಖೆ ಎದುರಿಸಲು ಸಿದ್ಧ ಎಂದು ಹೇಳಿದರು. ಈ ಪ್ರಕರಣದಲ್ಲಿ ಮಾರ್ಚ್ 21ರಂದು ಎಎಪಿ ರಾಷ್ಟ್ರೀಯ ಸಂಚಾಲಕರನ್ನು ಇಡಿ ಬಂಧಿಸಿತ್ತು. ನಂತರ, ನ್ಯಾಯಾಲಯ ಅವರನ್ನು ಮಾರ್ಚ್ 28ರವರೆಗೆ ಇಡಿ ಕಸ್ಟಡಿಗೆ ಒಪ್ಪಿಸಲಾಗಿತ್ತು.


ವಿರೋಧಿಗಳಿಗೂ ನೆರವಾಗುವ ಹೃದಯವಂತಿಕೆ ವಾಸು ಅವರದು

ಅವರ ಆದರ್ಶ, ಸ್ನೇಹಮಯ ಜೀವನ ಅನುಕರಣೀಯ ; ಸುತ್ತೂರು ಶ್ರೀಗಳು



ಮೈಸೂರಿನ ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜಿನ ಸಾಹುಕಾರ್ ಚನ್ನಯ್ಯ ಸಭಾಂಗಣದಲ್ಲಿ ಇತ್ತೀಚೆಗೆ ನಿಧನರಾದ ಮಾಜಿ ಶಾಸಕ ವಾಸು ಅವರಿಗೆ ಗುರುವಾರ ಹಮ್ಮಿಕೊಂಡಿದ್ದ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ವಾಸು ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು.

ವಾಸು ತಮ್ಮ ಕಲ್ಯಾಣ ಕಾರ್ಯಗಳಿಂದ ಸ್ಮರಣೀಯರಾಗಿದ್ದಾರೆ



ವಾಸು ಅವರು ಹುಟ್ಟಿ, ಸಾಮಾನ್ಯರಂತೆ ಹೋಗಲಿಲ್ಲ. ಕೆಲಸ ಕಾರ್ಯಗಳನ್ನು ಮಾಡಿ ವಿಶೇಷವಾಗಿ ಹೋದಂತಹ ವ್ಯಕ್ತಿ. ಆದಿಚುಂಚನಗಿರಿ ಮಠದೊಂದಿಗೆ ಅವಿನಾಭಾವ ಒಡನಾಟ ಹೊಂದಿದ್ದರು. ರಾಜಕಾರಣಿ ಮಾತ್ರವಲ್ಲದೆ, ಸಾಹಿತ್ಯಾಸಕ್ತರೂ ಆಗಿದ್ದರು. ಪತ್ರಿಕಾ ಮಾಧ್ಯಮದಲ್ಲಿ ತೊಡಗಿಸಿಕೊಂಡಿದ್ದರು. ಅವರ ನಡೆಯಲ್ಲಿ ಎಂದೂ ವಿಚಲಿತರಾಗಿದ್ದನ್ನು ಕಂಡಿಲ್ಲ. ಸಮತ್ವದ ಸ್ಥಿತಿ ಅವರ ನಡೆ–ನುಡಿಯಲ್ಲಿತ್ತು. ಅವರು ತಮ್ಮ ಹಲವು ಕಲ್ಯಾಣ ಕಾರ್ಯಗಳಿಂದ ಸಮಾಜ ಸ್ಮರಿಸುವಂತಾಗಿದ್ದಾರೆ.

-ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಶ್ರೀ ಆದಿಚುಂಚನಗಿರಿ ಮಠ

ವಾಸು ಅತ್ಯಂತ ಶುದ್ಧಹಸ್ತರು

ವಾಸು ಅವರು ಇಡೀ ಮೈಸೂರಿಗೆ ಚಿರಪರಿಚಿತರು. ಅವರ ಜೀವನ ಅತ್ಯಂತ ಶಿಸ್ತುಬದ್ಧತೆಯಿಂದ ಕೂಡಿತ್ತು. ಕಾಂಗ್ರೆಸ್ ಪಕ್ಷದ ಕಟ್ಟಾಳು ಆಗಿದ್ದ ಅವರು ಈ ಭಾಗದಲ್ಲಿ ಪಕ್ಷ ಸಂಘಟನೆಗೆ ಅಪಾರ ಕೊಡುಗೆ ನೀಡಿದ್ದಾರೆ. ಪಕ್ಷ ಎಂದರೆ ಅವರಿಗೆ ಉಸಿರಾಗಿತ್ತು. ಅವರು ಶಾಸಕರಾಗಿದ್ದಾಗ ಅವರ ಪ್ರಾಮಾಣಿಕತೆಯನ್ನು ಕಂಡು ಈಗಲೂ ಅನೇಕ ಅಧಿಕಾರಿಗಳು ಕೊಂಡಾಡುತ್ತಾರೆ. ಅಂತಹ ಶುದ್ಧಹಸ್ತರು. ಅವರು ಶಾಸಕರಾಗಿದ್ದಾಗ ಮುಖ್ಯಮಂತ್ರಿ ಆಗಿದ್ದ ಸಿದ್ದರಾಮಯ್ಯ ಅವರು ಅವರ ಕ್ಷೇತ್ರಕ್ಕೆ 1,800 ಕೋಟಿ ಅನುದಾನ ಕಲ್ಪಿಸಿದರು. ಇಷ್ಟು ಮೊತ್ತದ ಅನುದಾನವನ್ನು ಅತ್ಯಂತ ಪ್ರಾಮಾಣಿಕವಾಗಿ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳಿಗೆ ತೊಡಗಿಸಿದರು.

-ಎಂ.ಲಕ್ಷ್ಮಣ, ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ

ನನ್ನ ನಡೆ–ನುಡಿ ರೂಪಿಸುವಲ್ಲಿ ಅವರ ಪರಿಣಾಮವಿದೆ

ನಾನು ಕಳೆದ 9 ವರ್ಷಗಳ ಹಿಂದೆ ಅರಮನೆ ಜವಾಬ್ದಾರಿ ಸ್ವೀಕರಿಸಿದಾಗ ಸಾರ್ವಜನಿಕ ಜೀವನದ ಬಗ್ಗೆ ಅನುಭವವಿರಲಿಲ್ಲ. ಆಗ ಚಾಮರಾಜ ಕ್ಷೇತ್ರದ ಶಾಸಕರಾಗಿದ್ದ ವಾಸು ಅವರು ನನ್ನ ಸಾರ್ವಜನಿಕ ನಡೆ ನುಡಿ ರೂಪಿಸುವಲ್ಲಿ ಪರಿಣಾಮ ಬೀರಿದ್ದರು. ಅವರ ಸಾವಿನ ಸುದ್ದಿ ಕೇಳಿ ಅತೀವ ದುಃಖ ಉಂಟಾಯಿತು. ಈಗ ರಾಜಕೀಯ ಪ್ರವೇಶಿಸಿದ್ದೇನೆ. ವಾಸು ಅವರು ಇದ್ದರೆ ಅವರ ಸಲಹೆ ಮಾರ್ಗದರ್ಶನ ದೊರೆಯುತ್ತಿತ್ತು. ಅವರ ಕುಟುಂಬದೊಂದಿಗೂ ಉತ್ತಮ ಒಡನಾಟ ಹೊಂದಿದ್ದೇನೆ.

-ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ

ಮೈಸೂರು,ಮಾ.28(ಪಿಎಂ)– ಮಾಜಿ ಶಾಸಕ ವಾಸು ಅವರು ವಿರೋಧ ಮಾಡಿದ್ದವರಿಗೂ ನೆರವಾಗುವ ಹೃದಯವಂತಿಕೆ ಹೊಂದಿದ್ದರು. ಅವರ ಆದರ್ಶ, ಸ್ನೇಹಮಯ ಜೀವನ ಅನುಕರಣೀಯ ಎಂದು ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಹೇಳಿದರು.

ಮೈಸೂರಿನ ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜಿನ ಸಾಹುಕಾರ್ ಚನ್ನಯ್ಯ ಸಭಾಂಗಣದಲ್ಲಿ ವಾಸು ವಿಶ್ವಾಸಿ ಬಳಗದ ವತಿಯಿಂದ 'ವಾಸು ಎಂಬ ಸಭ್ಯತಾ ಚೇತನಕ್ಕೆ ಶ್ರದ್ಧಾಂಜಲಿ' ಶೀರ್ಷಿಕೆಯಡಿ ಇತ್ತೀಚೆಗೆ ನಿಧನರಾದ ಮಾಜಿ ಶಾಸಕ ವಾಸು ಅವರಿಗೆ ಗುರುವಾರ ಹಮ್ಮಿಕೊಂಡಿದ್ದ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ವಾಸು ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ನಿರಂತರವಾಗಿ ವಾಯುವಿಹಾರಕ್ಕೆ ಹೋಗುವ ಅಭ್ಯಾಸ ಹೊಂದಿದ್ದ ವಾಸು ಅವರು ತಮ್ಮ ಆರೋಗ್ಯದ ಬಗ್ಗೆ ಕಾಳಜಿ ಹೊಂದಿದ್ದರು. ಹಾಗಾಗಿ ಅವರು ಇಷ್ಟು ಬೇಗ ನಮ್ಮಿಂದ ದೂರವಾಗುತ್ತಾರೆ ಎಂದು ಯಾರೂ ಊಹಿಸಿರಲಿಲ್ಲ. ಅವರು ಮೈಸೂರಿಗೆ ಬಂದು ನೆಲೆಸಿದ ಮೇಲೆ ಇಡೀ ನಗರದಲ್ಲಿ ತಮ್ಮದೇ ಛಾಪು ಮೂಡಿಸಿದ್ದರು ಎಂದರು.

ವೀರಪ್ಪ ಮೊಯ್ಲಿಯವರು ಮುಖ್ಯಮಂತ್ರಿ ಆಗಿದ್ದಾಗ ಅವರಿಗೆ ವಾಸು ರಾಜಕೀಯ ಕಾರ್ಯದರ್ಶಿ ಆಗಿದ್ದರು. ಶಾಸಕರಾದರೂ ಮೇಯರ್ ಎಂದೇ ಜನಪ್ರಿಯತೆ ಅವರಿಗಿತ್ತು. ಮೇಯರ್ ಪದಕ್ಕೆ ಅನ್ವರ್ಥ ಎನ್ನುವಂತಿದ್ದರು. ಹಿಡಿದ ಕೆಲಸಗಳನ್ನು ಪೂರ್ಣಗೊಳಿಸುವವರೆಗೂ ಬಿಡುತ್ತಿರಲಿಲ್ಲ. ಶಾಸಕರಾಗಿದ್ದ ಸಂದರ್ಭದಲ್ಲಿ ಚಾಮರಾಜ ಕ್ಷೇತ್ರದ ಅನೇಕ ಸಮಸ್ಯೆಗಳನ್ನು ಬಗೆ ಹರಿಸಿದರು. ಮಹಾರಾಣಿ ಕಾಲೇಜಿಗೆ ಮತ್ತೊಂದು ಕ್ಯಾಂಪಸ್ ನಿರ್ಮಾಣಕ್ಕೂ ಕಾರಣರಾದರು. ಮೇಯರ್ ಆಗಿದ್ದಾಗ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಅರಮನೆಯಲ್ಲಿ ನಡೆಸಲು ಕಾರಣಕರ್ತರಾದರು. ಆಗ ಇಷ್ಟೆಲ್ಲಾ ಅನುದಾನ ಬರುತ್ತಿಲ್ಲವಾದರೂ ಸಮ್ಮೇಳನ ಯಶಸ್ವಿಯಾಗುವ ರೀತಿಯಲ್ಲಿ ನಿರ್ವಹಿಸಿದರು ಎಂದು ತಿಳಿಸಿದರು.

ಜನಾನುರಾಗಿ ವ್ಯಕ್ತಿತ್ವದ ಅವರ ಬಗ್ಗೆ ಎಷ್ಟು ಹೇಳಿದರೂ ಕಡಿಮೆಯೇ. ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭಿಸಿ, ಗುಣಾತ್ಮಕ ಶಿಕ್ಷಣ ದೊರೆಯಲು ಕಾರಣರಾದರು. ಯಾರೇ ಮನೆಗೆ ಹೋದರು ಪ್ರೀತಿಯಿಂದ ಸತ್ಕರಿಸುತ್ತಿದ್ದರು. ವಿರೋಧ ಮಾಡಿದ್ದರು ಎಂದು ಗೊತ್ತಿದ್ದೂ ವಿರೋಧಿಗಳಿಗೆ ಕಷ್ಟದಲ್ಲಿ ಸ್ಪಂದಿಸುವ ದೊಡ್ಡ ಗುಣ ಹೊಂದಿದ್ದರು ಎಂದರು.

ವಾಸು ಎನ್ಸೈಕ್ಲೋಪಿಡಿಯಾ ಇದ್ದಂತೆ: ಯಾವುದೇ ವಿಷಯವಾದರೂ ನಿರರ್ಗಳವಾಗಿ ಮಾತನಾಡುವ ಕಲೆ ವಾಸು ಅವರಿಗೆ ಕರಗತವಾಗಿತ್ತು. ಅವರೊಂದು ರೀತಿಯಲ್ಲಿ 'ಎನ್ಸೈಕ್ಲೋಪಿಡಿಯಾ (ವಿಶ್ವಕೋಶ)' ಇದ್ದಂತೆ ಇದ್ದರು. ಅವರ ವಿದ್ಯಾವಿಕಾಸ ಸಂಸ್ಥೆಯಲ್ಲಿ ಒಂದು ಕಾರ್ಯಕ್ರಮಕ್ಕೆ ಅಂದಿನ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರು ಬರುವುದು ತಡವಾದಾಗ, ಒಂದೂವರೆ ಗಂಟೆ ಕಾಲ ಸ್ವಾಗತ ಭಾಷಣ ಮಾಡಿದ್ದರು. ಅವರು ಅಷ್ಟು ಸುದೀರ್ಘ ಮಾತನಾಡಿದರೂ ಸಭಿಕರಿಗೆ ಎಲ್ಲಿಯೂ ಬೇಸರವೇ ಆಗಲಿಲ್ಲ. ಅಷ್ಟೊಂದು ಮಹತ್ವದ ವಿಚಾರಗಳನ್ನು ಸಾದರಪಡಿಸಿದ್ದರು ಎಂದು ಸುತ್ತೂರು ಶ್ರೀಗಳು ಹೇಳಿದರು.

ವಾಸು ಅವರಿಗೆ ನೆನಪಿನ ಶಕ್ತಿ ಅಗಾಧವಾಗಿತ್ತು. ಮಠಮಾನ್ಯಗಳ ಬಗ್ಗೆ ಅಪಾರ ಗೌರವ ಹೊಂದಿದ್ದರು. ಸಮಾಜಕ್ಕೆ ಸಂಬಂಧಿಸಿದ ಅನೇಕ ವಿಷಯಗಳ ಬಗ್ಗೆ ಸದಾ ಸ್ಪಂದಿಸುತ್ತಿದ್ದರು. ಸಾರ್ವಜನಿಕ ಸಮಸ್ಯೆಗಳನ್ನು ಬಗೆಹರಿಸುವಲ್ಲಿ ಸದಾ ಮುಂಚೂಣಿಯಲ್ಲಿ ಇರುತ್ತಿದ್ದರು. ಅವರ ಆರೋಗ್ಯ ಸುಧಾರಿಸುತ್ತದೆ ಎಂದುಕೊಂಡಿದ್ದೆವು. ಆದರೆ ದೇಹದ ಧರ್ಮ ಹಾಗೂ ವಿಧಿಯಾಟದ ಕಾರಣಕ್ಕೆ ಅವರು ಭೌತಿಕವಾಗಿ ನಮ್ಮೊಂದಿಗೆ ಇಲ್ಲ. ಆದರೂ ಅವರು ನಮ್ಮೊಂದಿಗೆ ಇಲ್ಲ ಎಂದು ಅನ್ನಿಸುವುದಿಲ್ಲ ಎಂದು ನುಡಿದರು.

ಅಭಿವೃದ್ಧಿ ಕಾರ್ಯಗಳ ಮಾಡಿದರು: ಮೈಸೂರು ರಾಮಕೃಷ್ಣ ಆಶ್ರಮದ ಸ್ವಾಮಿ ಮಹಾಮೇಧಾನಂದ ಜೀ ಮಾತನಾಡಿ, ನಾನು ವಿದ್ಯಾರ್ಥಿಯಾಗಿದ್ದ ಸಂದರ್ಭದಲ್ಲಿ (1992) ಮಾನಸ ಗಂಗೋತ್ರಿಯಲ್ಲಿ ವಾಲಿಬಾಲ್ ಪಂದ್ಯಾವಳಿ ಆಯೋಜನೆಗೆ ಸಹಾಯ ಕೇಳಿಕೊಂಡು ವಾಸು ಅವರಲ್ಲಿಗೆ ನಾನು ಹಾಗೂ ನನ್ನ ಸಹಪಾಠಿಗಳು ಹೋಗಿದ್ದೆವು. ಆಗ ವಾಸು ಅವರು 500 ರೂಪಾಯಿ ಕೊಟ್ಟರು. ಆ ಕಾಲಕ್ಕೆ ಅದು ದೊಡ್ಡ ಮೊತ್ತವೇ. ಅಲ್ಲದೆ, ಇನ್ನೇನಾದರೂ ಸಹಾಯಬೇಕಿದ್ದರೆ ಹೇಳಿ ಎಂದಿದ್ದರು ಎಂದು ಹೇಳಿದರು.

ಶಾಸಕರು ಮತ್ತು ಮೇಯರ್ ಆಗಿ ಹಲವು ಅಭಿವೃದ್ಧಿ ಕಾರ್ಯಗಳಿಗೆ ಕಾರಣರಾಗಿದ್ದಾರೆ. ಅವರದು ಕ್ರಿಯಾತ್ಮಕ ವ್ಯಕ್ತಿತ್ವ. ಕೈಲಾದಷ್ಟು ಸಮಾಜಕ್ಕೆ ಸಹಾಯಹಸ್ತ ನೀಡುತ್ತಿದ್ದ ವ್ಯಕ್ತಿ. ನಮ್ಮ ಆಶ್ರಮದೊಂದಿಗೆ ನಿಕಟ ಸಂಪರ್ಕ ಹೊಂದಿದ್ದರು. ಮೈಸೂರಿನ ಚೆಲುವಾಂಬ ಪಾರ್ಕ್‌ನಲ್ಲಿ ಸ್ವಾಮಿ ವಿವೇಕಾನಂದ ಅವರ ಪ್ರತಿಮೆ ಸ್ಥಾಪನೆಗೂ ಅವರು ಸಹಕರಿಸಿದರು. ಜೊತೆಗೆ ಮೈಸೂರಿನಲ್ಲಿ ನಿರ್ಮಿಸುತ್ತಿರುವ ವಿವೇಕ ಸ್ಮಾರಕಕ್ಕೂ ಸಹಕಾರ ನೀಡಿದರು ಎಂದು ಹೇಳಿದರು.

ಹಿರಿಯ ವಕೀಲ ಚಂದ್ರಮೌಳಿ ಮಾತನಾಡಿ, ವಾಸು ಎಂದರೆ ವಾಸ್ತವ. ಅವರಲ್ಲಿ ಕೃತಕ ನಡೆ ನುಡಿ ಇರಲಿಲ್ಲ. ಕೋವಿಡ್ ಸಂದರ್ಭದಲ್ಲಿ ಆರ್ಥಿಕ ಸಹಾಯ ಮಾಡುವ ಮೂಲಕ ನೂರಾರು ಜೀವಗಳು ಬದುಕುಳಿಯಲು ವಾಸು ಕಾರಣರಾಗಿದ್ದಾರೆ. ಸಂಕಷ್ಟದಲ್ಲಿರುವವರಿಗೆ ಸ್ಪಂದಿಸುವ ಗುಣ ಅವರಲ್ಲಿತ್ತು ಎಂದರು.

ಮುಖಂಡ ಸಿ.ಬಸವೇಗೌಡ ಮಾತನಾಡಿ, ವಾಸು ಅವರು ನನಗೆ ಪಿಯುಸಿಯಲ್ಲಿ ಪರಿಚಯವಾದರು. ತದ ನಂತರ ಆತ್ಮೀಯ ಸ್ನೇಹಿತರಾದೆವು. ವಿದ್ಯಾರ್ಥಿಯಾಗಿದ್ದಾಗಲೇ ವಾಸು ಹೋರಾಟಗಳಲ್ಲಿ ಮುಂಚೂಣಿಯಲ್ಲಿ ಇರುತ್ತಿದ್ದರು. ಅವರು ಬನುಮಯ್ಯ ಕಾಲೇಜಿನಲ್ಲಿ ಬಿಎ ಓದುತ್ತಿದ್ದರೆ ನಾನು ಮಹಾರಾಜ ಕಾಲೇಜಿನಲ್ಲಿ ಬಿಎ ಓದುತ್ತಿದ್ದೆ. ಇಷ್ಟು ಬೇಗ ಅವರನ್ನು ಕಳೆದುಕೊಳ್ಳುತ್ತೇವೆ ಎಂದುಕೊಂಡಿರಲಿಲ್ಲ ಎಂದು ಭಾವುಕರಾದರು.

ಶ್ರೀ ಆದಿಚುಂಚನಗಿರಿ ಮಠದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಮೈಸೂರು ಶಾಖಾ ಮಠದ ಶ್ರೀ ಸೋಮನಾಥ ಸ್ವಾಮೀಜಿ ಉಪಸ್ಥಿತರಿದ್ದರು. ಸಾಹಿತಿ ಡಾ.ಸಿ.ನಾಗಣ್ಣ ಹಾಗೂ ವಾಗ್ಮಿ ಪ್ರೊ.ಎಂ.ಕೃಷ್ಣೇಗೌಡ ಕಾರ್ಯಕ್ರಮ ನಿರೂಪಿಸಿದರು. ಇದೇ ವೇಳೆ ನಿತಿನ್‌ರಾಜಾರಾಂ ಶಾಸ್ತ್ರಿ ಮತ್ತು ತಂಡವು ಭಕ್ತಿ ಹಾಗೂ ಭಾವಗೀತೆ ಕಾರ್ಯಕ್ರಮ ನಡೆಸಿಕೊಟ್ಟಿತು. ಮಹಾನಗರ ಪಾಲಿಕೆ ಮಾಜಿ ಸದಸ್ಯರಾದ ಕೆ.ವಿ.ಶ್ರೀಧರ್, ಪ್ರಶಾಂತ್‌ಗೌಡ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ನಗರಾಧ್ಯಕ್ಷ ಆರ್.ಮೂರ್ತಿ, ಬಿಜೆಪಿ ಮುಖಂಡ ರಘು ಕೌಟಿಲ್ಯ, ಹೋಟೆಲ್ ಉದ್ಯಮಿ ಪಿ.ವಿ.ಗಿರಿ, ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಮಾಜಿ ಅಧ್ಯಕ್ಷ ಡಾ.ವೈ.ಡಿ. ರಾಜಣ್ಣ, ಸುಯೋಗ್ ಆಸ್ಪತ್ರೆಯ ಡಾ.ಎಸ್.ಪಿ.ಯೋಗಣ್ಣ, ವಾಸು ಅವರ ಪುತ್ರರಾದ ಕವೀಶ್‌ಗೌಡ, ಅವೀಶ್‌ಗೌಡ, ರಿತೇಶ್‌ಗೌಡ, ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ, ಕಾರ್ಯದರ್ಶಿ ಪಿ.ವಿಶ್ವನಾಥ್, ಮಾಜಿ ಮೇಯರ್ ಪುಷ್ಪಲತಾ ಜಗನ್ನಾಥ್, ವಿಶ್ರಾಂತ ಕುಲಪತಿ ಡಾ.ಪದ್ಮಾಶೇಖರ್, ಮುಖಂಡರಾದ ಯೋಗಾನರಸಿಂಹೇಗೌಡ, ಎ.ರವಿ, ಮ.ನ.ಲತಾ ಮೋಹನ್, ಹೇಮಾನಂದೀಶ್, ಡಾ.ಅನಿಲ್ ಥಾಮಸ್, ವಕೀಲ ಪ್ರದೀಪ್ ಸೇರಿದಂತೆ ರಾಜಕೀಯ ಮುಖಂಡರು, ಸಾಹಿತಿಗಳು, ಕಲಾವಿದರು, ಶಿಕ್ಷಣತಜ್ಞರು, ವೈದ್ಯರು ಹಾಗೂ ವಿವಿಧ ಕ್ಷೇತ್ರಗಳ ನೂರಾರು ಮಂದಿ ಪಾಲ್ಗೊಂಡಿದ್ದರು.

ಭಾರತವನ್ನು ಒಕ್ಕೂಟವಾಗಿ ಹಿಡಿದಿಟ್ಟಿರುವುದೇ ದೇಶಿಯ ಜಾನಪದ ಕಲೆ, ಸಂಗೀತ

ಹಿರಿಯ ರಂಗನಿರ್ದೇಶಕ ಸಿ.ಬಸವಲಿಂಗಯ್ಯ ಅಭಿಮತ



ಮೈಸೂರು, ಮಾ.28(ಎಂಕೆ)– ಇಡೀ ದೇಶವನ್ನು ಒಕ್ಕೂಟವಾಗಿ ಹಿಡಿದಿಟ್ಟಿರುವುದು ದೇಶಿಯ ಜಾನಪದ ಕಲೆಗಳು ಮತ್ತು ಸಂಗೀತ. ಎಲ್ಲಾ ಕಲೆಗಳ ತಾಯಿ ಬೇರಾಗಿರುವ ಜಾನಪದ ಕಲೆಗಳು ದೇವರ ಆರಾಧನೆಯ ಕಲೆಗಳೂ ಆಗಿವೆ ಎಂದು ಹಿರಿಯ ರಂಗನಿರ್ದೇಶಕ ಸಿ.ಬಸವಲಿಂಗಯ್ಯ ಅಭಿಪ್ರಾಯಪಟ್ಟರು.

ಮೈಸೂರು ರಂಗಾಯಣದ ಶ್ರೀರಂಗ ವೇದಿಕೆಯಲ್ಲಿ ಗೌತಮ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಸೇವಾ ಟ್ರಸ್ಟ್ ವತಿಯಿಂದ ಹಮ್ಮಿಕೊಂಡಿರುವ 20 ದಿನಗಳ 'ರಂಗಭೂಮಿ ಮತ್ತು ಜಾನಪದ ಕಲಾಪ್ರಕಾರಗಳ ಉಚಿತ ತರಬೇತಿ ಶಿಬಿರ'ವನ್ನು ಸಂಗೀತ ಪರಿಕರಗಳನ್ನು ಬಾರಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಇಡೀ ಮನುಕುಲ ತನ್ನನ್ನು ತಾನು ಗುರ್ತಿಸಿಕೊಳ್ಳಲು ಹಾಗೂ ತಮ್ಮ ಬದುಕಿಗೆ ಪೂರಕವಾಗಿ ಕಲೆಗಳನ್ನು ಅವಲಂಬಿಸಿಕೊಳ್ಳಲಾಗಿದೆ ಎಂದು ತಿಳಿಸಿದರು.

ಕಲೆಯಲ್ಲಿ ಮೌಢ್ಯವಿಲ್ಲದ ಧರ್ಮವಿದ್ದು, ಎಲ್ಲಾ ಧರ್ಮಗಳು ತಮ್ಮ ತತ್ವ ಪ್ರಚಾರಕ್ಕೆ ಲಲಿತ ಕಲೆಗಳನ್ನು ಬಳಸಲಾಗಿದೆ. ಬುಡಕಟ್ಟು ಸಮುದಾಯಗಳು ತಮ್ಮ ಜಾನಪದ ಕಲೆಗಳನ್ನು ಬಳಸಿಕೊಂಡು ಜೀವನ ಕಟ್ಟಿಕೊಂಡಿದ್ದಾರೆ. ಮನುಷ್ಯ ಪ್ರಕೃತಿ ಜೊತೆಗೆ ಹೋರಾಟ ಮಾಡುತ್ತಾ ಪ್ರಕೃತಿಯ ಭಾಗವಾಗಿದ್ದಾನೆ. ಆದರೆ ನಾಗರಿಕತೆ ಬೆಳೆದಂತೆ ಕ್ರೂರಿಯಾಗುತ್ತಿದ್ದಾನೆ ಎಂದು ಬೇಸರ ವ್ಯಕ್ತಪಡಿಸಿದರು.

ಜಾನಪದ ಕಲೆಗಳಿಗೆ ಸಾಂಸ್ಕೃತಿಕ ಮಹತ್ವವಿದೆ ಜನರಿಗೆ ಒಂದೊಂದು ನಂಬಿಕೆ ಇದ್ದು, ನಂಬಿಕೆಯ ಅಗತ್ಯವೂ ಇದೆ. ಆದರೆ ಅದೇ ಅತಿಯೂ ಆಗಬಾರದು. ದೇವರ ಆರಾಧನೆ ಮತ್ತು ಕಲೆಗಳು ಒಂದಕ್ಕೊಂದು ಬದುಕಿಗೆ ಪೂರಕವಾಗಿ ವಿಕಸಿತಗೊಂಡಿದ್ದು, ಒಂದೊಂದು ಸಮುದಾಯಕ್ಕೂ ಸೀಮಿತಗೊಂಡಿವೆ. ಆದರೆ ಎಲ್ಲಾ ಕಲೆಗಳು ಬೆಸೆದಿರುವುದು ರಂಗಭೂಮಿಯಲ್ಲಿ ಮಾತ್ರ ಎಂದರು.

ಮುಖ್ಯ ಅತಿಥಿಗಳಾಗಿ ಹಿರಿಯ ರಂಗನಿರ್ದೇಶಕರಾದ ಕೆ.ಆರ್.ಸುಮತಿ ಭಾಗವಹಿಸಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮೈಸೂರು ವಿಭಾಗದ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನಸ್ವಾಮಿ, ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನ ಪ್ರಾಧ್ಯಾಪಕ ಡಾ.ಎನ್.ನಾಗೇಂದ್ರ, ಗೌತಮ ಶೈಕ್ಷಣಿಕ ಮತ್ತು ಸಾಂಸ್ಕೃತಿಕಕ ಸೇವಾ ಟ್ರಸ್ಟ್ ಅಧ್ಯಕ್ಷ ಕೃಷ್ಣಮೂರ್ತಿ ತಲಕಾಡು ಮತ್ತಿತರರಿದ್ದರು.

ಅರ್ಜಿ ಆಹ್ವಾನ

ಮೈಸೂರು: ಸುತ್ತೂರು ಶ್ರೀಕ್ಷೇತ್ರದ ಜೆಎಸ್‌ಎಸ್ ಶಾಲೆ ಹಾಗೂ ಉಚಿತ ವಿದ್ಯಾರ್ಥಿನಿಲಯದ 2024–25ನೇ ಸಾಲಿನ ಪ್ರವೇಶಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಕನ್ನಡ ಮಾಧ್ಯಮಕ್ಕೆ 1ರಿಂದ 8ನೇ ತರಗತಿವರೆಗೆ ಮತ್ತು ಇಂಗ್ಲಿಷ್ ಮಾಧ್ಯಮಕ್ಕೆ 1, 5 ಹಾಗೂ 8ನೇ ತರಗತಿಗಳಿಗೆ ಮಾತ್ರ ಪ್ರವೇಶಕ್ಕೆ ಅವಕಾಶವಿದೆ. ಗ್ರಾಮಾಂತರ ಪ್ರದೇಶದ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಬಾಲಕ ಹಾಗೂ ಬಾಲಕಿಯರಿಗೆ ಪ್ರವೇಶ ನೀಡಲಾಗುವುದು. ಅರ್ಜಿಯನ್ನು ಶಾಲಾ ಕಚೇರಿಯಲ್ಲಿ ಖುದ್ದಾಗಿ ಪಡೆಯಬಹುದು ಅಥವಾ www.jssschoolsuttur.org ಹಾಗೂ www.jssonline.orgನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು.

ಭರ್ತಿ ಮಾಡಿದ ಅರ್ಜಿಗಳನ್ನು ಮೇ 15ರೊಳಗಾಗಿ ಸಲ್ಲಿಸಬೇಕು. ಮಾಹಿತಿಗಾಗಿ 7411486938 ಮೊಬೈಲ್ ದೂರವಾಣಿ ಸಂಖ್ಯೆ ಸಂಪರ್ಕಿಸಬಹುದು.

ಮೈಸೂರು ಸಂಗೀತ ಸಭೆಗಳ ಒಕ್ಕೂಟದಿಂದ

ಹಿರಿಯ ವೈಣಿಕ ವಿದ್ವಾನ್ ಪ್ರೊ.ರಾ.ವಿಶ್ವೇಶ್ವರನ್‌ಗೆ ಗೌರವ ಸಲ್ಲಿಕೆ



ಮೈಸೂರು ಸಂಗೀತ ಸಭೆಗಳ ಒಕ್ಕೂಟದ ವತಿಯಿಂದ 'ಸಂಗೀತ ರತ್ನ' ಪ್ರಶಸ್ತಿಗೆ ಭಾಜನರಾದ ಮೈಸೂರಿನ ಹಿರಿಯ ವೈಣಿಕ ವಿದ್ವಾನ್ ಪ್ರೊ.ರಾ.ವಿಶ್ವೇಶ್ವರನ್ ಅವರನ್ನು ಸನ್ಮಾನಿಸಿ, ಗೌರವ ಸಲ್ಲಿಸಲಾಯಿತು. ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ವಿವಿಧ ಸಂಗೀತ, ಸಾಂಸ್ಕೃತಿಕ ಸಂಸ್ಥೆಗಳ ಪದಾಧಿಕಾರಿಗಳು, ಕಲಾವಿದರು ಉಪಸ್ಥಿತರಿದ್ದರು.

ದೈವಾನುಗ್ರಹವೇ ಸತ್ಯ...

ಪರಂಪರೆಗಿಂತ ದೈವಾನುಗ್ರಹ ಬಲದಿಂದ ಬಂದ ಪ್ರತಿಭೆ ಗಣನೀಯವಾದುದು. ಪ್ರತಿಭೆ ಮಾತ್ರವೇ ಪರಂಪರೆಗೆ ಬಲವನ್ನು, ಪೋಷಣೆಯನ್ನು ನೀಡುತ್ತದೆ. ಪರಂಪರೆಯು ಪ್ರತಿಭೆಯನ್ನು ಸೃಷ್ಟಿಸುವುದಿಲ್ಲ. ಇಲ್ಲದ ಪ್ರತಿಭೆಯನ್ನು ಅದ್ಭುತವಾಗಿ ಇದೆ ಎಂದು ಮೆಚ್ಚಿಸಿ ಪ್ರದರ್ಶಿಸುವುದಕ್ಕೂ ಸಮರ್ಥವಾಗುವುದಿಲ್ಲ. ಪ್ರತಿಭೆ ಎನ್ನುವುದು ಸಂಪ್ರದಾಯ ಸೂಕ್ಷ್ಮತೆಗಳ ವ್ಯಾಪ್ತಿಯಲ್ಲಿದ್ದು, ಸರ್ವಾನುಮತದಿಂದ ಕೂಡಿರಬೇಕಾಗಿರುವುದು ಅತ್ಯವಶ್ಯಕ. ಸ್ವೇಚ್ಛಾಚಾರದ ಭಾವನೆ ಮತ್ತು ಧೋರಣೆ ಇರಬಾರದು. ಪುರಸ್ಕಾರ ಅಥವಾ ಪ್ರತಿಭೆ ಗುರ್ತಿಸಲು ಪಾತ್ರತೆಯೇ ಮುಖ್ಯವಾದುದು. ಈ ಪಾತ್ರತೆಯೂ ನನ್ನ ಪ್ರತಿಭೆಯಿಂದ, ನನ್ನ ಪರಿಶ್ರಮದಿಂದ ದೊರೆತದ್ದು ಎಂಬ ಭಾವನೆಯೂ ನಮ್ಮಲ್ಲಿ ಇರಬಾರದು. ದೈವಾನುಗ್ರಹದಿಂದ ಈ ಪ್ರಶಸ್ತಿ ಪಾತ್ರತೆ ಸಂಭವಿಸಿರುವುದು ಎಂಬುದೇ ಸತ್ಯಾಂಶವೆಂಬುದನ್ನು ಅರಿಯಬೇಕು.

– ವಿದ್ವಾನ್ ರಾ.ವಿಶ್ವೇಶ್ವರನ್

ಮೈಸೂರು, ಮಾ.28(ಎಂಕೆ)– ಕೇಂದ್ರ ಸಂಗೀತ ಅಕಾಡೆಮಿಯಿಂದ 'ಸಂಗೀತ ರತ್ನ' ಪ್ರಶಸ್ತಿಗೆ ಭಾಜನರಾದ ಮೈಸೂರಿನ ಹಿರಿಯ ವೈಣಿಕ ವಿದ್ವಾನ್ ಪ್ರೊ.ರಾ.ವಿಶ್ವೇಶ್ವರನ್ ಅವರಿಗೆ ಮೈಸೂರು ಸಂಗೀತ ಸಭೆಗಳ ಒಕ್ಕೂಟದ ವತಿಯಿಂದ ಅತ್ಯಂತ ಆತ್ಮೀಯವಾಗಿ ಅಭಿನಂದಿಸಿ, ಗೌರವ ಸಲ್ಲಿಸಲಾಯಿತು.

ಮೈಸೂರಿನ ಕುವೆಂಪುನಗರದಲ್ಲಿರುವ ಗಾನಭಾರತೀ ರಮಾಗೋವಿಂದ ಕಲಾ ವೇದಿಕೆಯಲ್ಲಿ ಗುರುವಾರ ಆಯೋಜಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಒಕ್ಕೂಟದ ಅಧ್ಯಕ್ಷರಾದ ಡಾ.ರಮಾ ಬೆಣ್ಣೂರು ಹಾಗೂ 20ಕ್ಕೂ ಹೆಚ್ಚು ಸಂಗೀತ ಹಾಗೂ ಸಾಂಸ್ಕೃತಿಕ ಸಂಸ್ಥೆಗಳ ಪದಾಧಿಕಾರಿಗಳ ಸಮ್ಮುಖದಲ್ಲಿ ಗೌರವಿಸಲಾಯಿತು. ಜೊತೆಗೆ ವಿದ್ವಾನ್ ರಾ.ವಿಶ್ವೇಶ್ವರನ್ ಅವರ ಪತ್ನಿ ಶ್ರೀಮತಿ ಉಷಾ, ಸಂಗೀತ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ವಿದ್ವಾನ್ ನರಸಿಂಹಮೂರ್ತಿ ಮತ್ತು ಅವರ ಪತ್ನಿ ವಿದುಷಿ ರಾಜಲಕ್ಷ್ಮಿ ಹಾಗೂ ವಿದುಷಿ ಸಹನ ಅವರನ್ನೂ ಸನ್ಮಾನಿಸಲಾಯಿತು.

ಗೌರವ ಸ್ವೀಕರಿಸಿದ ಬಳಿಕ ಮಾತನಾಡಿದ ವಿದ್ವಾನ್ ರಾ.ವಿಶ್ವೇಶ್ವರನ್, ರಾಷ್ಟ್ರ ಪ್ರಶಸ್ತಿಯನ್ನು ನನಗೆ ಕೊಟ್ಟಿದ್ದಾರೆ ಎಂಬ ಭಾವನೆ ನನಗಿಲ್ಲ. ಈ ದೊಡ್ಡ ಪ್ರಶಸ್ತಿಗೆ ಪಾತ್ರತೆಯನ್ನು ಕೊಟ್ಟು ಅನುಗ್ರಹಿಸಿರುವ ಸರಸ್ವತಿ ದೇವಿಯು ನನ್ನ ಪರವಾಗಿ ನೀನು ಸ್ವೀಕರಿಸು ಎಂದು ಆಜ್ಞೆ ಮಾಡಿರುವಂತೆ ನನಗೆ ಭಾಸವಾಗುತ್ತಿದೆ. ಇದು ನನ್ನ ಪ್ರಾಮಾಣಿಕವಾದ ಭಾವನೆ. ನಾನು ಮೈಸೂರಿನವನಾಗಿದ್ದು, ಈ ಗೌರವವೂ ಮೈಸೂರಿಗೆ ಸೇರಿದ್ದು. ನನ್ನ ಮೈಸೂರು ಜನತೆಗೆ, ಸಂಗೀತ ಕ್ಷೇತ್ರದ ಎಲ್ಲಾ ಬಂಧುಗಳಿಗೆ, ನನ್ನ ಕುಟುಂಬ ವರ್ಗದವರಿಗೆ, ನನ್ನ ಮಾತಾಪಿತೃಗಳಿಗೆ, ನನ್ನನ್ನು ಪ್ರೀತಿಸುವ ಮತ್ತು ನನ್ನ ಬಗ್ಗೆ ಸದಭಿಪ್ರಾಯವಿರುವ ಎಲ್ಲರಿಗೂ ಸಂದಿರುವ ಈ ಪ್ರಶಸ್ತಿ ಇದಾಗಿದೆ ಎಂದು ಧನ್ಯವಾದ ಅರ್ಪಿಸಿದರಲ್ಲದೆ ಕಾವ್ಯ ವಾಚನ ಮಾಡಿ ಗಮನ ಸೆಳೆದರು.

ನಂತರ ವಿದ್ವಾನ್ ಪ್ರೊ.ರಾ.ವಿಶ್ವೇಶ್ವರನ್ ಅವರಿಂದ 'ವೀಣಾವಾದನ' ಸಂಗೀತ ಕಾರ್ಯಕ್ರಮ ನಡೆಯಿತು. ಅವರೊಂದಿಗೆ ಮೃದಂಗ ವಾದನದಲ್ಲಿ ವಿದ್ವಾನ್ ಹೆಚ್.ಎಲ್.ಶಿವಶಂಕರಸ್ವಾಮಿ, ಘಟದಲ್ಲಿ ವಿದ್ವಾನ್ ಶರತ್ ಕೌಶಿಕ್ ಉತ್ತಮ ಸಹಕಾರ ನೀಡಿದರು.

'ಬೆಳಕೆ' ಚಿತ್ರದ ನಿರ್ದೇಶಕ ರಕ್ಷಿತ್ ತೀರ್ಥಹಳ್ಳಿ, ನಟ, ನಿರ್ಮಾಪಕ ಆದರ್ಶ ಅಯ್ಯಂಗಾರ್ ಇದ್ದಾರೆ.



ಪರಿಸರ ಜಾಗೃತಿ ಮೂಡಿಸುವ 'ಬೆಳಕೆ'

ಆದರ್ಶ ಅಯ್ಯಂಗಾರ್ ಈಗಾಗಲೇ ಕಲ್ಪ್ ಸಿನಿಮಾ ಮಾಡೋ ಮೂಲಕ ಚಿತ್ರರಂಗದಲ್ಲಿ ಗುರುತಿಸಿಕೊಂಡವರು. ಈಗ ತಮ್ಮ ಹಾಡಿನ ಮೂಲಕ ಜನರಲ್ಲಿ ಪರಿಸರದ ಬಗ್ಗೆ ಜಾಗೃತಿ ಮೂಡಿಸುವ ಪ್ರಯತ್ನಕ್ಕೆ ಕೈ ಹಾಕಿದ್ದಾರೆ, ಬೇಸಿಗೆಯ ಆರಂಭದ ದಿನಗಳಲ್ಲೇ ನೀರಿನ ಹಾಹಾಕಾರ ತಲೆದೋರಿದೆ. ಇದಕ್ಕೆ ಕಾರಣ ಪರಿಸರ ನಾಶ ಹಾಗೂ ಜಾಗತಿಕ ತಾಪಮಾನದ ಏರಿಕೆ. ಈ ಕುರಿತು ಜನರಲ್ಲಿ ಜಾಗೃತಿ ಮೂಡಿ ಸುವ "ಬೆಳಕೆ" ಎಂಬ ಆಲ್ಬಮ್ ಹಾಡಿನ ಬಿಡುಗಡೆ ಕಾರ್ಯಕ್ರಮ ಇತ್ತೀಚೆಗೆ ನಡೆಯಿತು. ಈ ಹಿಂದೆ "ಹೊಂಬಣ್ಣ" ಎಂಬ ಚಿತ್ರವನ್ನು ನಿರ್ದೇಶಿಸಿದ್ದ ರಕ್ಷಿತ್ ತೀರ್ಥಹಳ್ಳಿ ಈ ಹಾಡಿನ ಸಾರಥ್ಯ ವಹಿಸಿ ಕೊಂಡಿದ್ದು, ನಟ, ನಿರ್ಮಾಪಕ ಆದರ್ಶ ಅಯ್ಯಂಗಾರ್ ಹಾಡಿನ ದನಿಯಾಗುವುದರ ಜೊತೆಗೆ ನಟನೆಯನ್ನು ಸಹ ಮಾಡಿದ್ದಾರೆ.

ಗಾಯಕ ಹಾಗೂ ನಾಯಕ ಆದರ್ಶ ಅಯ್ಯಂಗಾರ್ ಮಾತನಾಡುತ್ತ, ಒಮ್ಮೆ ರಕ್ಷಿತ್ ಜತೆ ಮಾತನಾಡುವಾಗ ಒಂದು ಅರ್ಥಪೂರ್ಣ ಕಂಟೆಂಟ್ ಇಟ್ಟುಕೊಂಡು ಹಾಡು ಮಾಡಬೇಕು, ನಮ್ಮಿಂದ ಸಮಾಜದಲ್ಲಿ ಒಂದು ಪರ್ಸೆಂಟ್ ನಷ್ಟು ಬದಲಾವಣೆಯಾದರೂ ಸಾರ್ಥಕವಾದಂತೆ. ಜಾಗತಿಕ ತಾಪಮಾನದ ಕುರಿತು ಜನರಿಗೆ ಜಾಗೃತಿ ಮೂಡಿಸುವ ಈ ಹಾಡನ್ನು ಮಾಡೋಣ ಎಂದು ಸಲಹೆ ನೀಡಿದರು. ಪರಿಸರದ ಕಾಳಜಿ ಮೂಡಿಸುವಂಥ "ಬೆಳಕೆ" ಹಾಡನ್ನು ಮಾಡಿದ್ದೇವೆ. ಪ್ರಮೋದ್ ಮರವಂತೆ ಬರೆದಿರುವ ಈ ಹಾಡಿಗೆ ಹೇಮಂತ್ ಜೋಯಿಸ್ ಸಂಗೀತ ನೀಡಿದ್ದಾರೆ. ಗುರುಪ್ರಸಾದ್ ನಾರ್ನಾಡ್ ಅವರ ಛಾಯಾಗ್ರಹಣದಲ್ಲಿ ಹಾಡು ಸುಂದರ ವಾಗಿ ಮೂಡಿಬಂದಿದೆ ಎಂದರು

ಈ ಹಿಂದೆ ಬೆಂಗಳೂರಿನಲ್ಲಿ ತಾಪಮಾನ ಕಡಿಮೆ ಇರುತ್ತಿತ್ತು. ಈಗ ಗಮನಿಸಿದರೆ ಬೆಂಗ ಳೂರು, ಮಲೆನಾಡು ಹಾಗೂ ಉತ್ತರ ಕರ್ನಾಟಕ ಎಲ್ಲಾ ಕಡೆ ಹೆಚ್ಚು ಕಡಿಮೆ ಒಂದೇ ತಾಪ ಮಾನವಿರುತ್ತದೆ. ಇದಕ್ಕೆ ಕಾರಣ ಪರಿಸರ ನಾಶ. ಗಿಡ ಬೆಳಸುವುದು ಹಾಗೂ ಈಗಿರುವ ಗಿಡಗಳನ್ನು ಉಳಿಸುವುದೆ ಇದಕ್ಕೆ ಪರಿಹಾರ. ಇಲ್ಲದಿದ್ದರೆ ಮುಂದೆ ಇನ್ನೂ ಹೆಚ್ಚಿನ ಸಮಸ್ಯೆ ಎದುರಿಸಬೇಕಾಗುತ್ತದೆ. ಇಂತಹ ವಿಷಯಗಳ ಬಗ್ಗೆ ಜನರಿಗೆ ತಿಳಿಸುವ ಹಾಡಿದು ಎಂದು ನಿರ್ದೇಶಕ ರಕ್ಷಿತ್ ತೀರ್ಥಹಳ್ಳಿ ತಿಳಿಸಿದರು. ನಾನು ಸಾಕಷ್ಟು ಚಿತ್ರಗಳಿಗೆ ಹಾಡು ಬರೆದಿರುವೆ, ಆದರೆ ಪರಿಸರ ಜಾಗೃತಿ ಮೂಡಿಸುವ ಈ ಹಾಡನ್ನು ಬರೆಯಲು ತುಂಬಾ ಸಂತೋಷ ವಾಯಿತು. ತುಂಬಾ ಬಿಸಿಲಿದೆ. ದಯವಿಟ್ಟು ಎಲ್ಲರೂ ತಮ್ಮ ಮನೆಯ ಮಹಡಿಯಲ್ಲಿ ಪಕ್ಷಿಗಳಿಗೆ ನೀರಿನ ವ್ಯವಸ್ಥೆ ಮಾಡಿ ಎಂದು ಗೀತ ರಚನೆಕಾರ ಪ್ರಮೋದ್ ಮರವಂತೆ ಹೇಳಿದರು.

ರಾಣಿಯ ಹುಡುಕಾಟದಲ್ಲಿ.... 'ರಾಜ ರಾಣಿ' ಟೀಸರ್ ಬಿಡುಗಡೆ



'ಇಟ್ಟಿಗೆ ಗೂಡಿನಲ್ಲಿ ರಾಜ ರಾಣಿ' ಎಂಬ ಬರಹವಿರುವ ರಾಜ ರಾಣಿ ಚಿತ್ರ ಬಿಡುಗಡೆಗೆ ಸಿದ್ದವಾಗಿದೆ. ಚಿತ್ರದ ಟೀಸರ್ ಬಿಡುಗಡೆ ಸಮಾರಂಭ ಇತ್ತೀಚೆಗೆ ನಡೆಯಿತು. ಚಿತ್ರದಲ್ಲಿ ಬಳ್ಳಾರಿ ಮೂಲದ ರಣಧೀರ್ ನಿರ್ದೇಶನದ ಜೊತೆ ನಾಯಕನಾಗಿಯೂ ಕಾಣಿಸಿಕೊಂಡಿದ್ದಾರೆ. ಅಲ್ಲದೆ ನಿರ್ಮಾಣದ ಜವಾಬ್ದಾರಿ ಸಹ ಹೊತ್ತಿದ್ದಾರೆ, ಮತ್ತೊಬ್ಬ ನಾಯಕನಾಗಿ ಜೆಪಿ ನಟಿಸಿದ್ದಾರೆ. ಲವ್, ಕ್ರೈಮ್ ಹಾಗೂ ಸೆಂಟಿಮೆಂಟ್ ಕಥೆಯಿರುವ ಈ ಚಿತ್ರಕ್ಕೆ ಬೆಂಗಳೂರು, ಮಾಲೂರು, ಕೋಲಾರ, ಚಿಕ್ಕಮಗಳೂರು, ದೊಡ್ಡಬಳ್ಳಾಪುರ, ಮಂಗಳೂರು, ಸಕಲೇಶಪುರ, ನಂದಿಹಿಲ್ಸ್ ಸುತ್ತಮುತ್ತ 75 ದಿನಗಳ ಚಿತ್ರೀಕರಣ ನಡೆಸಲಾಗಿದೆ.

ಈ ಸಂದರ್ಭದಲ್ಲಿ ನಾಯಕ ರಣಧೀರ್ ಮಾತನಾಡಿ, ಸಿನಿಮಾ ನಿರ್ದೇಶನ ಮಾಡಬೇಕೆಂಬುದು ನನ್ನ ಬಹು ವರ್ಷಗಳ ಕನಸು, ಪುದಿಯವರ್‌ಗಳ್ ಎಂಬ ತಮಿಳು ಚಿತ್ರದಲ್ಲಿ ನಾಯಕನಾಗಿ ನಟಿಸಿದ ನಂತರ ಕನ್ನಡದಲ್ಲಿ ಮೂರು ಚಿತ್ರಗಳಲ್ಲಿ ಅಭಿನಯಿಸಿದೆ. ಇದೇ ಅನುಭವದಿಂದ ರಾಜ ರಾಣಿ ಚಿತ್ರಕ್ಕೆ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡುವ ಜೊತೆಗೆ ನಾಯಕನಾಗಿಯೂ ಅಭಿನಯಿಸಿದ್ದೇನೆ. ಅನಾಥ ಮಗುವಾಗಿದ್ದ ನಾನು ಅಜ್ಜಿಯ ಆಸರೆಯಲ್ಲೇ ಬೆಳೆದಿರುತ್ತೇನೆ. ಅಜ್ಜಿ ಯಾವಾಗಲೂ ನಿನಗೆ ಒಬ್ಬ ರಾಣಿ ಸಿಕ್ತಾಳೆ, ಅವಳ ಮೂಲಕ ನಿನಗೆ ಅದೃಷ್ಟ ಬರುತ್ತದೆ ಎಂದು ಹೇಳಿರುತ್ತಾಳೆ, ಅದರ ಸುತ್ತ ನಡೆಯುವ ಕಥೆಯಿದು. ಇಬ್ಬರು ನಾಯಕರುಗಳ ನಡುವೆ ಕಾಣೆಯಾದ ಹುಡುಗಿಯ ಸುತ್ತ ಚಿತ್ರಕಥೆ ಸಾಗುತ್ತದೆ. ಸೆಸ್ಪೆನ್ಸ್, ಲವ್ ಹಾಗೂ ಫ್ಯಾಮಿಲಿ ಎಂಟರ್‌ಟೈನರ್ ಕಥೆಯಲ್ಲಿ ಕಾಣೆಯಾದ ಹುಡುಗಿ ಯಾರಿಗೆ ಒಲಿಯುತ್ತಾಳೆ ಎಂಬುದೇ ಕುತೂಹಲ. ಹೀರೋ ಇಂಟ್ರಡಕ್ಷನ್ ಸಾಂಗ್‌ನಲ್ಲಿ ಲೂಸ್‌ಮಾದ ಯೋಗಿ ಕಾಣಿಸಿಕೊಂಡಿದ್ದಾರೆ ಎಂದು ಹೇಳಿದರು.

ನಿರ್ಮಾಪಕರಾದ ನೇತ್ರಾವತಿ ಮಲ್ಲೇಶ್ ಮಾತನಾಡುತ್ತ ನಾನು ಲ್ಯಾಂಡ್ ಬ್ಯುಸಿನೆಸ್ ಮಾಡಿಕೊಂಡಿದ್ದೇನೆ. ಈ ಹಿಂದೆ ಸಿನಿಮಾ ಮಾಡಲು ಹೋಗಿ ಸಾಕಷ್ಟು ಜನರಿಂದ ಹಣ ಕಳೆದುಕೊಂಡಿದ್ದೇನೆ. ರಣಧೀರ್ ಅವರೊಂದಿಗಿನ ಸ್ನೇಹಕ್ಕಾಗಿ ಈ ಚಿತ್ರಕ್ಕೆ ಬಂಡವಾಳ ಹೂಡಿದ್ದೇನೆ. ಸಿನಿಮಾ ತುಂಬಾ ಚೆನ್ನಾಗಿ ಮೂಡಿಬಂದಿದೆ ಎಂದರು. ಮತ್ತೊಬ್ಬ ನಾಯಕ ಜೆಪಿ ಮಾತನಾಡಿ ಈ ಹಿಂದೆ ವಾಟ್ಸಾಪ್ ಲವ್ ಚಿತ್ರ ಮಾಡಿದ್ದೆ, ರಣಧೀರ್ ಬಂದು ಈ ಸಿನಿಮಾ ಮಾಡೋಣ ಎಂದು ಹೇಳಿದರು. ಮಂಡ್ಯದ ರಿತನ್ಯ ಶೆಟ್ಟಿ ಚಿತ್ರದ ನಾಯಕಿಯಾಗಿದ್ದು. ಗಿರಿಜಾ ಲೋಕೇಶ್, ಶೋಭರಾಜ್, ಬಿರಾದಾರ್, ಕಿಲ್ಲರ್ ವೆಂಕಟೇಶ್, ಚಂದ್ರಪ್ರಭ ಪ್ರಮುಖ ಪಾತ್ರಗಳಲ್ಲಿದ್ದಾರೆ.

ದಾಸ ಸಾಹಿತ್ಯವನ್ನು ಸಾಮಾನ್ಯರಿಗೆ ಪರಿಚಯಿಸಿದ ಶ್ರೀ ವಿಜಯದಾಸರು

ತ್ರಿವಿಕ್ರಮ ಜೋಶಿ ಅವರ ನಿರ್ಮಾಣದ, ಮಧುಸೂದನ್ ಹವಾಲ್ದಾರ್ ನಿರ್ದೇಶನದ ಭಕ್ತಿಪ್ರಧಾನ ಕಥಾಹಂದರ ಹೊಂದಿರುವ ಚಿತ್ರ ದಾಸವರೇಣ್ಯ ಶ್ರೀ ವಿಜಯದಾಸರು. ಏ.12ಕ್ಕೆ ಈ ಚಿತ್ರ ರಾಜ್ಯಾದ್ಯಂತ ಬಿಡುಗಡೆಯಾಗಲಿದ್ದು, ಅದಕ್ಕೂ ಮುನ್ನ ಹಾಡುಗಳ ಬಿಡುಗಡೆ ನಡೆಯಿತು.

ಆಗಿನ ಕಾಲದಲ್ಲಿ ವೇದವ್ಯಾಸರು ರಚಿಸಿದ ವೇದಗಳನ್ನು ಸಾಮಾನ್ಯ ಜನ ಅರ್ಥಮಾಡಿಕೊಳ್ಳುವುದು ಕಷ್ಟವಾಗಿತ್ತು. ಅಂಥಾ ಸಂದರ್ಭದಲ್ಲಿ ಹರಿದಾಸರು ವೇದಗಳ ಸಾರವನ್ನು ಕನ್ನಡ ಭಾಷೆಯಲ್ಲಿ ಜನರಿಗೆ ಅರ್ಥವಾಗುವ ಹಾಗೆ ಹಾಡುಗಳ ಮೂಲಕ ತಲುಪಿಸುತ್ತಿದ್ದರು. ಶ್ರೀ ಪುರಂದರದಾಸರ ನಂತರ ವಿಜಯದಾಸರು 2800ಕ್ಕೂ ಹೆಚ್ಚು ಸುಳಾದಿಗಳು ಹಾಗೂ ದೇವರನಾಮಗಳನ್ನು ರಚಿಸಿದ್ದಾರೆ. ಭೃಗು ಋಷಿಗಳ ಅಂಶಸಂಭೂತರಾದ ಶ್ರೀ ವಿಜಯದಾಸರ ಕುರಿತ ಕಥಾಹಂದರ ಹೊಂದಿರುವ ಈ ಚಿತ್ರಕ್ಕೆ ಜೆ.ಎಂ.ಪ್ರಹ್ಲಾದ್ ಚಿತ್ರಕಥೆ, ಸಂಭಾಷಣೆ ಬರೆದಿದ್ದಾರೆ, ಚಿತ್ರದ ಹಾಡುಗಳಿಗೆ ವಿಜಯಕೃಷ್ಣ ಸಂಗೀತ ಸಂಯೋಜನೆ, ನಾರಾಯಣ್ ಅವರ ಛಾಯಾಗ್ರಹಣವಿದೆ.

ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕ ಮಧುಸೂದನ್ ಹವಾಲ್ದಾರ್, ಜಗನ್ನಾಥ ದಾಸರು, ಪ್ರಸನ್ನ ವೆಂಕಟದಾಸರು ನಂತರ ಈಗ ಶ್ರೀ ವಿಜಯದಾಸರ ಚಿತ್ರವನ್ನು ಮಾಡಿದ್ದೇವೆ. ಇಂಥ ಸಿನಿಮಾ ಮಾಡುವಾಗ ಲಾಭ ನಷ್ಟದ ಬಗ್ಗೆ ಯೋಚಿಸುವಂತಿಲ್ಲ. ಒಂದೊಳ್ಳೇ ಸಿನಿಮಾನ ಜನರಿಗೆ ತಲುಪಿಸುವ ಪ್ರಯತ್ನ, ದಾಸರ ಸಿನಿಮಾಗಳನ್ನು ಒಳ್ಳೇ ಸಂದೇಶದೊಂದಿಗೆ ಮಾಡುತ್ತ ಬಂದಿದ್ದೇನೆ, ಒಬ್ಬೊಬ್ಬರೇ ನಮ್ಮ ಪ್ರಯತ್ನಕ್ಕೆ ಸಹಕಾರ ನೀಡುತ್ತ ಬಂದಿದ್ದಾರೆ ಎಂದು ಹೇಳಿದರು. ನಿರ್ಮಾಪಕ ತ್ರಿವಿಕ್ರಮ ಜೋಶಿ ಮಾತನಾಡುತ್ತ, ಪುರಂದರದಾಸರ, ಕನಕದಾಸರ ಚಿತ್ರಗಳ ನಂತರ ಹರಿದಾಸರ ಕುರಿತಂತೆ ಯಾವುದೇ ಚಿತ್ರ ನಿರ್ಮಾಣವಾಗಿಲ್ಲ. ನಮ್ಮ ಮುಂದಿನ ಪೀಳಿಗೆಗೆ ದಾಸ ಸಾಹಿತ್ಯವನ್ನು ಪರಿಚಯಿಸಬೇಕೆಂದು ಈ ಸಿನಿಮಾ ಮಾಡಿದ್ದೇವೆ ಎಂದರು.

ಶಿಕ್ಷಣದ ವ್ಯವಸ್ಥೆ ಎತ್ತಿ ಹಿಡಿಯುವ ಸ್ಲ್ಯಾಮ್ 1770




ಮನುಷ್ಯನಿಗೆ ಶಿಕ್ಷಣ ಎಲ್ಲಕ್ಕಿಂತ ಮುಖ್ಯವಾದುದು. ಆ ಶಿಕ್ಷಣ ವ್ಯವಸ್ಥೆಯಲ್ಲಿ ಸಾಕಷ್ಟು ಹಗರಣಗಳು ನಡೆಯುತ್ತಿದೆ. ಅಂತಹ ಹಗರಣಗಳ ಸುತ್ತ ನಡೆಯುವ ಕಥೆ ಇಟ್ಟುಕೊಂಡು ವಿಕಾಸ್ ಪುಷ್ಪಗಿರಿ ಅವರು ಸ್ಲ್ಯಾಮ್ 1770 ಚಿತ್ರವನ್ನು ನಿರ್ದೇ ಶಿಸಿದ್ದಾರೆ. ಇತ್ತೀಚೆಗೆ ಈ ಚಿತ್ರದ ಟ್ರೈಲರ್ ಬಿಡುಗಡೆ ಕಾರ್ಯಕ್ರಮ ನಡೆಯಿತು. ಪ್ರತಿದಿನ ಮನೆಮನೆಗೆ ಪೇಪರ್ ಹಾಕಿ, ವಿದ್ಯಾಭ್ಯಾಸ ಮಾಡುತ್ತಿರುವ ಆದರ್ಶ್ ಕೈಯಿಂದ ಈ ಚಿತ್ರದ ಟ್ರೇಲರ್‌ನ್ನು ಬಿಡುಗಡೆ ಮಾಡಿಸಲಾಯಿತು, ಡಿ ಕ್ರಿಯೇಷನ್ಸ್ ಲಾಂಛನದಲ್ಲಿ ದೇವರಾಜ್ ಆರ್. ಅವರು ಈ ಚಿತ್ರವನ್ನು ನಿರ್ಮಿಸಿ ದ್ದಾರೆ. ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಕಾಸರಗೋಡು ಖ್ಯಾತಿಯ ರಂಜನ್ ಚಿತ್ರದ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಈ ಸಂದರ್ಭದಲ್ಲಿ ನಿರ್ದೇಶಕ ವಿಕಾಸ್ ಪುಷ್ಪಗಿರಿ ಮಾತನಾಡುತ್ತ ಪ್ರಸ್ತುತ ಶಿಕ್ಷಣ ವ್ಯವಸ್ಥೆಯ ಹುಳುಕುಗಳನ್ನು ಸ್ಲ್ಯಾಮ್ 1770 ಚಿತ್ರದಲ್ಲಿ ಎತ್ತಿ ಹಿಡಿಯಲಾಗಿದೆ, ಶಿಕ್ಷಣ ವ್ಯವಸ್ಥೆ ಇಂದು ವ್ಯವಹಾರವಾಗಿಬಿಟ್ಟಿದೆ. ವಿದ್ಯೆ ಎಲ್ಲರಿಗೂ ಬೇಕು, ವಿದ್ಯೆ ಇಲ್ಲದಿದ್ದರೆ ಬದುಕುವುದು ಕಷ್ಟ, ಆದರೆ ಅಂತಹ ವಿದ್ಯೆ ಬಡವರ ಹಾಗೂ ಮಧ್ಯಮ ವರ್ಗದವರ ಕೈಗೆಟುಕದಂತಾಗಿದೆ. ಪ್ರಸ್ತುತ ಶಿಕ್ಷಣ ವ್ಯವಸ್ಥೆಯಲ್ಲಿನ ನ್ಯೂನ್ಯತೆಗಳನ್ನು ತೋರಿಸುವ ಪ್ರಯತ್ನವನ್ನು ನಮ್ಮ ಚಿತ್ರದಲ್ಲಿ ಮಾಡಿದ್ದೇವೆ. ಏಪ್ರಿಲ್ 12 ರಂದು ಚಿತ್ರ ತೆರೆಗೆ ಬರಲಿದೆ. ವಿದ್ಯಾರ್ಥಿಗಳ ಜೊತೆಗೆ ಪೋಷಕರೂ ಸಹ ತಪ್ಪದೇ ನೋಡಬೇಕಾದ ಚಿತ್ರವಿದು. ಮೊದ ಲಿನಿಂದಲೂ ಸದಭಿರುಚಿಯ ಚಿತ್ರಗಳಿಗೆ ಪ್ರೋತ್ಸಾಹ ನೀಡುತ್ತಾ ಬಂದಿರುವ ದೇವರಾಜ್ ಅವರು ಈ ಚಿತ್ರವನ್ನು ನಿರ್ಮಿಸಿದ್ದಾರೆ ಎಂದರು.

ಚಿತ್ರದ ನಾಯಕ ರಂಜನ್ ಮಾತನಾಡುತ್ತ, ಕಾಂತಾರ ಚಿತ್ರದ ಸಂದರ್ಭದಲ್ಲಿ ನಿರ್ದೇಶನದ ತಂಡದಲ್ಲಿ ಕೆಲಸ ಮಾಡುತ್ತಿದ್ದಾಗ ನನಗೆ ಈ ಚಿತ್ರದ ಆಫರ್ ಬಂತು, ಸ.ಹಿ.ಪ್ರಾ. ಶಾಲೆ ಕಾಸರಗೋಡು ಚಿತ್ರದಲ್ಲಿ ದಡ್ಡ ಪ್ರವೀಣನ ಪಾತ್ರ ಮಾಡಿದ್ದೆ. ಇದರಲ್ಲಿ ಜಾಣನ ಪಾತ್ರ ಕೊಟ್ಟಿದ್ದಾರೆ. ಶಿಕ್ಷಣದ ಮಹತ್ವ ಹೇಳುವ ಈ ಚಿತ್ರದಲ್ಲಿ ನಟಿಸಿರುವುದು ತುಂಬಾ ಖುಷಿಯಾಗಿದೆ ಎಂದು ಹೇಳಿದರು.

ನಾಯಕಿ ನಿಶ್ಚಿತ ತನ್ನ ಪಾತ್ರದ ಕುರಿತಂತೆ ಮಾಹಿತಿ ನೀಡಿದರು. ಉಳಿದಂತೆ ಹರಿಣಿ, ನಾರಾಯಣ ಸ್ವಾಮಿ, ನಟನ ಪ್ರಶಾಂತ್, ರಾಘು ಶಿವಮೊಗ್ಗ, ಸಂಗೀತ ನಿರ್ದೇಶಕ ಸತೀಶ್ ಆರ್ಯನ್ ಹಾಗೂ ನಿರ್ದೇಶಕರೊಂದಿಗೆ ಚಿತ್ರಕಥೆ ಬರೆದಿರುವ ಶಂಕರ್ ರಾಮನ್ ಚಿತ್ರದ ಬಗ್ಗೆ ಮಾತನಾಡಿದರು.

ಸಿನಿಪದಬಂಧ-519



ಹೆಸರು ________
ವಿಳಾಸ ________
____
ದೂರವಾಣಿ ಸಂಖ್ಯೆ ________



ವಿಜೇತರು: ಪಿ.ಶಿವಮೂರ್ತಿ, ನಂ.13/1, ಐಶ್ವರ್ಯ ನಿಲಯ, 'ಎನ್' ಬ್ಲಾಕ್, ಅಂಗಡಿ ರಸ್ತೆ, ಕುಂಬಾರಕೊಪ್ಪಲು, ಮೈಸೂರು-570016

ಎಡದಿಂದ ಬಲಕ್ಕೆ

1. ಮೇಲೋಗರದ ಪರಿಮಳ ಘಮ ಘಮಿಸಿದೆ 4
2. ಕೌರವ – ಪಾಂಡವರ ಇತಿಹಾಸ 5
5. "ಮಧುಮಾಸ ಚಂದ್ರಮ ನೈದಿಲೆಗೆ ಸಂಭ್ರಮ... ", ಗೀತೆಯ ಚಿತ್ರ 5
7. ಥ್ರಿಲ್ಲರ್ ಮಂಜು ಮನುಷ್ಯನನ್ನು ಕೊಲ್ಲುವವನು 5
9. ಕುವೆಂಪು ಅವರ ನೇಗಿಲ ಹಿಡಿದ ರೈತ 5
13. ಭಾರತಿ ಮಾಂಗಲ್ಯ ಮುಟ್ಟಿ ಮಾಡಿದ ಶಪಥ 5
14. ಕಲ್ಪನಾಳ ಬಿರುದು ಇಲ್ಲಿ ತಿರುಗಿದೆ 5
16. ವಿಷ್ಣುವರ್ಧನ್, ರಾಜೇಶ್, ಭಾರತಿ ಅಭಿನಯದ ಚಿತ್ರ 5
18. ಎಸ್ಪಿ ಬಾಲುಗೆ ಶಶಿಕುಮಾರ್ ಹೆಣ್ಣು ಕೊಟ್ಟವನು 5
19. ವಾಯುವಿನಲ್ಲಿ ತೇಲಿ ಬಂದ ನುಡಿ 4

ಮೇಲಿನಿಂದ ಕೆಳಕ್ಕೆ

1. ಅಂಬಿ, ಮಂಜುಳಾ ಶರ್ಮಾಳಿಗೆ ನೀಡಿದ ಬಳುವಳಿ 8
2. ಹಾಡಿನಲ್ಲಿ ಬಂದ ಸಿಹಿ ತೋಟ 4
3. ಶಂಕರ್ ನಾಗ್ ಅಭಿನಯದ ಸಸ್ಪೆನ್ಸ್ ಚಿತ್ರ 2
4. ವಿಷ್ಣುವರ್ಧನ್ ಅಭಿನಯದ ಒಡೆಯ 2
6. ಮದರಂಗಿಗೆ ಇನ್ನೊಂದು ಪದ 3
8. ತ. ಪು. ವೆಂಕಟರಾಮ್ ಕಥೆಯಲ್ಲಿ ಶಿಲೆ ನಾದ ಹೊಮ್ಮಿಸಿದೆ 8
10. ದಾದಾನೊಂದಿಗೆ ಬಂದ ಕುಳ್ಳ 2
11. ಆರಾಧನೆ ಚಿತ್ರದ ನಾಯಕಿ 2
12. ನೀರಿನಲ್ಲಿ ಅಲೆಯು _ _ _ 3
15. ಹೆಂಡತಿಯ ಅಪ್ಪ ಸೇನೆಯುವನು 4
16. ವಿಷ್ಣುವರ್ಧನ್ – ರೂಪಿಣಿ ಅಭಿನಯಕ್ಕೆ ವಿಜಯ್ ನಿರ್ದೇಶಕ 2
17. ಕೋಟಿ ನಿರ್ಮಾಪಕ 2



ಉಮ್ಮತ್ತೂರು ಇಂದುಶೇಖರ್
ಮೊ.9880820462

ಸಿನಿ ಪದಬಂಧ 518ರ ಉತ್ತರ

ತಾ	ಯಿ	ನಾ	ಡು		ಏ	ಕ	ಲ	ವ್ಯ		ಒ
ಯಿ		ಣಿ				ಮ				ಲ
ಕ			ಸ		ಒ	ಲ	ವು	ಗೆ	ಲ	ವು
ನ	ಯ	ನ	ಕ	ಮ	ಲ			ಣೆ		
ಸು			ಲ		ವಿ		ಬಂ	ಕಾ	ಪು	ರ
		ಸು			ನ			ರ		
ಟೆ	ಬೇ	ಳಿ	ಗಿ		ಆ		ನೇ			ಸಾ
		ಗಾ			ಸ	ತಿ	ಸ	ಕ್ಕೂ	ಬಾ	ಯಿ
ಕ	ರು	ಳಿ	ನ	ಕ	ರೆ		ರ			ಕು
ಲ್ಯಾ				ಲ್ವ				ವಿ		ಮಾ
ಣಿ		ಶಿ	ವ	ನಾ	ಗ		ಕ್ರೇ	ಜಿ	ಸ್ಟಾ	ರ್

ವಿಳಾಸ: 'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು-570 015

ಜನರಿಗೆ ನೀಡಿದ್ದ ಭರವಸೆ ಈಡೇರಿಸುವಲ್ಲಿ ಬಿಜೆಪಿ ವಿಫಲ

ಸಚಿವ ಹೆಚ್.ಸಿ.ಮಹದೇವಪ್ಪ ಪುತ್ರ ಸುನೀಲ್ ಬೋಸ್ ಟೀಕೆ



ತಿ.ನರಸೀಪುರದಲ್ಲಿ ನಡೆದ ಸಭೆಯಲ್ಲಿ ಸಚಿವ ಹೆಚ್.ಸಿ.ಮಹದೇವಪ್ಪ ಅವರ ಪುತ್ರ ಸುನೀಲ್ ಬೋಸ್ ಮಾತನಾಡಿದರು.

ತಿ.ನರಸೀಪುರ, ಮಾ.28– ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಚುನಾವಣೆ ಪೂರ್ವ ನೀಡಿದ್ದ ಭರವಸೆಗಳನ್ನು ಈಡೇರಿಸುವ ಮೂಲಕ ನುಡಿದಂತೆ ನಡೆದಿದೆ. ಆದರೆ ಕೇಂದ್ರದಲ್ಲಿ 2 ಅವಧಿಗೆ ಅಧಿಕಾರಕ್ಕೆ ಬಂದ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ಜನರಿಗೆ ನೀಡಿದ್ದ ಭರವಸೆ ಈಡೇರಿಸುವಲ್ಲಿ ಸಂಪೂರ್ಣ ವಿಫಲವಾಗಿದೆ ಎಂದು ಸಚಿವ ಹೆಚ್.ಸಿ.ಮಹದೇವಪ್ಪ ಪುತ್ರ ಸುನೀಲ್ ಬೋಸ್ ಟೀಕಿಸಿದರು.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಪಟ್ಟಣದ ಶ್ರೀಚಿಕ್ಕಮ್ಮತಾಯಿ ಯಾತ್ರಿ ಭವನದಲ್ಲಿ ಗುರುವಾರ ಸಂಜೆ ನಡೆದ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಚುನಾವಣೆಯಲ್ಲಿ ಜನರಿಗೆ ಮನವರಿಕೆ ಮಾಡಿಕೊಡಲು ಕಾಂಗ್ರೆಸ್‌ನ ಯೋಜನೆಗಳು ನೂರಾರಿವೆ. ಬಿಜೆಪಿಗೆ ಚುನಾವಣೆಯಲ್ಲಿ ಹಿಂದುತ್ವವೊಂದನ್ನು ಬಿಟ್ಟರೆ ಯಾವುದೇ ಅಭಿವೃದ್ಧಿ ಕಾರ್ಯ ಅಥವಾ ಜನಪರ ಯೋಜನೆಗಳಿಲ್ಲ. 10 ವರ್ಷ ಜನಕೊಟ್ಟ ಅಧಿಕಾರ ದುರ್ಬಳಕೆ ಮಾಡಿಕೊಂಡು ಜನ ವಿರೋಧಿ ಕಾಯ್ದೆಗಳನ್ನು ಜಾರಿಗೊಳಿಸಿದ್ದೆ ಕೇಂದ್ರ ಸರ್ಕಾರದ ಸಾಧನೆ ಎಂದು ವಾಗ್ದಾಳಿ ನಡೆಸಿದರು.

ದೇಶದ ಬೆನ್ನೆಲುಬು ರೈತರೇ ಕೇಂದ್ರದ ವಿರುದ್ಧ ದಂಗೆ ಎದ್ದಿದ್ದಾರೆ. ಬೆಲೆ ಏರಿಕೆಯಿಂದ ಬಸವಳಿದಿರುವ ಮಧ್ಯಮ ವರ್ಗ ಮತ್ತು ಬಡವರ ಬದುಕು ಹೈರಾಣಾಗಿದೆ. ಆದರೆ ರಾಜ್ಯ ಸರ್ಕಾರ ಜನರಿಗೆ ಐದು ಗ್ಯಾರಂಟಿಗಳನ್ನು ಅನುಷ್ಠಾನಗೊಳಿಸಿದ್ದರಿಂದ ಜನರ ಆರ್ಥಿಕ ಸ್ಥಿತಿ ಸುಧಾರಿಸಿದೆ. ಹಾಗಾಗಿ ಜೂ.5ರ ಫಲಿತಾಂಶದಲ್ಲಿ ಚಾಮರಾಜನಗರ ಕ್ಷೇತ್ರದ ಗೆಲುವನ್ನು ಸಿಎಂ ಸಿದ್ದರಾಮಯ್ಯ ಅವರಿಗೆ ಬಳುವಳಿ ನೀಡಿ ಎಂದು ಕರೆ ನೀಡಿದರು.

ನನ್ನನ್ನು ಮನೆ ಮಗನಂತೆ ನೋಡಿರುವ ನರಸೀಪುರ ಕ್ಷೇತ್ರದ ಜನತೆ ರಾಜಕೀಯವಾಗಿ ಗುರುತಿಸಿದ್ದೀರಿ. ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರಿಗೆ ರಾಜಕೀಯ ಅಧಿಕಾರ ಕೊಟ್ಟು ಕ್ಷೇತ್ರದ ಅಭಿವೃದ್ಧಿ ಹಾಗೂ ಜನರ ಸೇವೆ ಮಾಡಲು ಅವಕಾಶ ಕೊಟ್ಟಿದ್ದೀರಿ. ಸಾರ್ವತ್ರಿಕ ಲೋಕಸಭಾ ಚುನಾವಣೆಯಲ್ಲೂ ಕ್ಷೇತ್ರದ ಜನತೆ ನನಗೆ ಹೆಚ್ಚಿನ ಮತ ನೀಡುವ ಮೂಲಕ ಸಂಸತ್ತಿಗೆ ಸದಸ್ಯನಾಗಿ ಕಳುಹಿಸಿಕೊಡಬೇಕು ಮನವಿ ಮಾಡಿದರು.

ನಾಮಪತ್ರ ಸಲ್ಲಿಕೆಗೆ ಸಾಗರೋಪಾದಿಯಲ್ಲಿ ಬನ್ನಿ

ಚಾಮರಾಜನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ಏ.3ರಂದು ನಾಮಪತ್ರ ಸಲ್ಲಿಸಲಿದ್ದು, ಅಂದಿನ ಕಾರ್ಯಕ್ರಮಕ್ಕೆ 8 ವಿಧಾನಸಭಾ ಕ್ಷೇತ್ರಗಳಿಂದಲೂ ಕಾರ್ಯಕರ್ತರು ಹಾಗೂ ಮುಖಂಡರು ಸಾಗರೋಪಾದಿಯಲ್ಲಿ ಸೇರಿ ಮುನ್ನುಡಿ ಬರೆಯಬೇಕು. ಏ.1ರಂದು ವರುಣ ಮತ್ತು ನರಸೀಪುರದಲ್ಲಿ ನಡೆಯುವ ಕಾರ್ಯಕರ್ತರ ಸಭೆಗೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು. ಚುನಾವಣೆ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ಪ್ರತಿಷ್ಠೆಯಾಗಿರುವುದರಿಂದ ಚಾಮರಾಜನಗರ ಗೆಲ್ಲುವುದು ನಮ್ಮೆಲ್ಲರ ಗುರಿಯಾಗಲಿ.

\- ಸುನೀಲ್ ಬೋಸ್.

ತಲಕಾಡು ಮಂಜುನಾಥನ್ ಪ್ರತ್ಯಕ್ಷ: ಕಳೆದ ವಿಧಾನಸಭಾ ಚುನಾವಣೆ ವೇಳೆ ಮುನಿಸಿಕೊಂಡು ಅಂತರ ಕಾಯ್ದುಕೊಂಡಿದ್ದ ತಲಕಾಡು ಭಾಗದ ಮುಖಂಡ, ಜಿಪಂ ಮಾಜಿ ಸದಸ್ಯ ಮಂಜುನಾಥನ್ ಗುರುವಾರ ದಿನವಿಡೀ ಚಾಮರಾಜನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿ ಸುನೀಲ್ ಬೋಸ್ ಜೊತೆ ಕಾಣಿಸಿಕೊಂಡರು. ಅಲ್ಲದೇ ಸಭೆಯಲ್ಲೂ ಭಾಗವಹಿಸಿ ಎಲ್ಲರಿಗೂ ಅಚ್ಚರಿ ಮೂಡಿಸಿದರು. ಮಂಜುನಾಥನ್ ಪಾಲ್ಗೊಳ್ಳುವಿಕೆಯಿಂದ ಕೆಲವರಿಗೆ ಖುಷಿಯಾದರೇ, ಮತ್ತೆ ಕೆಲವರಿಗೆ ಮುಜುಗರವಾಗಿದ್ದು ಕಂಡುಬಂತು.

ಮಾಜಿ ಶಾಸಕಿ ಜೆ.ಸುನೀತಾ ವೀರಪ್ಪಗೌಡ, ಪಿಕಾರ್ಡ್ ಬ್ಯಾಂಕ್ ಮಾಜಿ ಅಧ್ಯಕ್ಷ ಕೆ.ವಜ್ರೇಗೌಡ, ರಾಜ್ಯ ಮಾರಾಟ ಸಹಕಾರ ಮಹಾಮಂಡಳದ ನಿರ್ದೇಶಕ ವೈ.ಎನ್.ಶಂಕರೇಗೌಡ, ಜಿಪಂ ಮಾಜಿ ಸದಸ್ಯರಾದ ಮಂಜುನಾಥನ್, ಎಂ.ಸುಧಾ ಮಹದೇವಯ್ಯ, ಎಂ.ಸುಧೀರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚನ್ನಕೇಶವ, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎ.ಎನ್.ಸ್ವಾಮಿ, ಸಹಾಯಕ ಪ್ರಾಧ್ಯಾಪಕ ಡಾ.ಬಿ.ಕೆ.ಜ್ಞಾನಪ್ರಕಾಶ್, ಇಂಧನ್ ಬಾಬು, ಎಪಿಎಂಸಿ ಮಾಜಿ ನಿರ್ದೇಶಕ ಉಕ್ಕಲಗೆರೆ ಬಸವಣ್ಣ, ತಾಪಂ ಮಾಜಿ ಅಧ್ಯಕ್ಷ ಎಂ.ಮಲ್ಲಿಕಾರ್ಜುನಸ್ವಾಮಿ, ಮಾಜಿ ಸದಸ್ಯರಾದ ಕುಕ್ಕೂರು ಗಣೇಶ್, ನರಸಿಂಹ ಮಾದನಾಯಕ, ಪಪಂ ಮಾಜಿ ಅಧ್ಯಕ್ಷ ಬಸವಣ್ಣ, ಮಾಜಿ ಸದಸ್ಯೆ ರೇಣುಕಾರಾಮು, ಪಿಎಸಿಎಸ್ ಅಧ್ಯಕ್ಷ ಎಂ.ಪರಶಿವಮೂರ್ತಿ, ಪ್ರಥಮ ದರ್ಜೆ ಗುತ್ತಿಗೆದಾರರಾದ ಕೆ.ಎಂ.ಮಧುಕುಮಾರ್, ಕೆ.ಮಲ್ಲು, ಮಹೇಂದ್ರ, ಕೇತಹಳ್ಳಿ ಸಿದ್ದಶೆಟ್ಟಿ, ಆಪ್ತ ಸಹಾಯಕ ಲಕ್ಷ್ಮಿನಾರಾಯಣ, ಮುಖಂಡರಾದ ಗದ್ದೆಮೋಳೆ ಸಿದ್ದರಾಜು, ನಂಜಾಪುರ ಶಿವಣ್ಣ, ಮುಸುವಿನ ಕೊಪ್ಪಲು ಶಿವರಾಂ, ಹೆಮ್ಮಿಗೆ ಶೇಷಾದ್ರಿ, ಶಿವಸ್ವಾಮಿ, ಚಿದರವಳ್ಳಿ ಚಂದ್ರಶೇಖರ್, ಸುಂದರನಾಯಕ, ವೀಣಾ ಶಿವಕುಮಾರ್, ವಾಟಾಳ್ ನಾಗೇಶ್, ಅಕ್ಕೂರು ಗುರು ಮೂರ್ತಿ, ಆದಿಬೆಟ್ಟಹಳ್ಳಿ ಮಂಜುನಾಥ್, ದಿಲೀಪ್ ಕುಮಾರ್, ಯಾಚನಹಳ್ಳಿ ಅಶೋಕ್ ಕುಮಾರ್, ಮಹೇಶ್, ಡೈರಿ ಸೋಮಣ್ಣ, ಧನಂಜಯ ಗೌಡ ಹಾಗೂ ಇನ್ನಿತರರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಚಿತ್ರಮಂದಿರ / ಚಿತ್ರ	
ಪದ್ಮ ಚಿತ್ರಮಂದಿರ	(ದೂ: 2521923)
ಟಿಲ್ಲು–2 (ತೆ)	4 ಪ್ರದರ್ಶನಗಳು,
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಯುವ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಸೈತಾನ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಯುವ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಜಾಕಿ (ಕ)	4 ಪ್ರದರ್ಶನಗಳು
ರಾಜಕಮಲ್	
ಗಾಡ್ಜಿಲ್ಲಾ ಕಾಂಗ್ (ಇಂ)	4 ಪ್ರದರ್ಶನಗಳು
ಸಂಗಂ	
ಟಿಲ್ಲು–2 (ತೆ)	4 ಪ್ರದರ್ಶನಗಳು
ಲಿಡೋ	
Mr. & Mrs. ಮನ್ಮಥ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಮಗಧೀರ (ತೆ)	4 ಪ್ರದರ್ಶನಗಳು
ಪ್ರಭಾ	
ದಿ ಗೋಟ್ ಲೈಫ್ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್	ಪ್ರದರ್ಶನಗಳು
ಸ್ಕ್ರೀನ್ 1	ಯುವ (ಕ): ಬೆ.10.30ಕ್ಕೆ, ಸಂ.4ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ)(ಇಂ): ಮ.1.30ಕ್ಕೆ, ರಾ.7.05ಕ್ಕೆ, ಆಡುಜೀವಿತಂ (ಮ): ರಾ.9.30ಕ್ಕೆ.
ಸ್ಕ್ರೀನ್ 2	ಯುವ (ಕ): ಬೆ.9.50ಕ್ಕೆ, ಕುಂಗ್ ಫು ಪಾಂಡ 4(3ಡಿ) (ಇಂ): ಮ.12.50ಕ್ಕೆ, ಮ.2.50ಕ್ಕೆ, ಕ್ರೂವ್ (ಹಿಂ): ಸಂ.4.50ಕ್ಕೆ, ರಾ.7.20ಕ್ಕೆ, ಟಿಲ್ಲು ಸ್ಕ್ವೇರ್ (ತೆ): ರಾ.9.55ಕ್ಕೆ.
ಸ್ಕ್ರೀನ್ 3	ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ)(ಇಂ): ಬೆ.10.25ಕ್ಕೆ, ರಾ.10.10ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಮ.12.45ಕ್ಕೆ, ಸ್ವತಂತ್ರ್ಯ ವೀರ ಸಾವರ್ಕರ್ (ಹಿಂ): ಮ.3.30ಕ್ಕೆ, ಆಡುಜೀವಿತಂ (ಮ): ಸಂ.6.50ಕ್ಕೆ.
ಸ್ಕ್ರೀನ್ 4	ಯುವ (ಕ): ಬೆ.9.50ಕ್ಕೆ, ಮ.1.10ಕ್ಕೆ, ರಾ.7ಕ್ಕೆ, ರಾ.10ಕ್ಕೆ, ಟಿಲ್ಲು ಸ್ಕ್ವೇರ್ (ತೆ): ಸಂ.4.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE

ದೂ : 2533444 / 2433456

ಸ್ಕ್ರೀನ್	ಪ್ರದರ್ಶನಗಳು
ಸ್ಕ್ರೀನ್ 1	ಟಿಲ್ಲು ಸ್ಕ್ವೇರ್ (ತೆ): ಬೆ.9.05ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ)(ಇಂ): ಮ.12.05ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಮ.2.45ಕ್ಕೆ, ಯುವ (ಕ): ಸಂ.6ಕ್ಕೆ, ಆಡುಜೀವಿತಂ (ಮ): ರಾ.9.15ಕ್ಕೆ.
ಸ್ಕ್ರೀನ್ 2	ಯುವ (ಕ): ಬೆ.9ಕ್ಕೆ, ಮ.12.15ಕ್ಕೆ, ಮ.3.30ಕ್ಕೆ, ಸಂ.6.45ಕ್ಕೆ, ರಾ.10ಕ್ಕೆ.
ಸ್ಕ್ರೀನ್ 3	ಕ್ರೂವ್ (ಹಿಂ): ಬೆ.10.55ಕ್ಕೆ, ಮ.1.40ಕ್ಕೆ, ರಾ.7.25ಕ್ಕೆ, ಟಿಲ್ಲು ಸ್ಕ್ವೇರ್ (ತೆ): ಸಂ.4.25ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 4	ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ)(ಇಂ): ಬೆ.11.25ಕ್ಕೆ, ಸಂ.5ಕ್ಕೆ, ರಾ.7.40ಕ್ಕೆ, ರಾ.10.20ಕ್ಕೆ, ಕುಂಗ್ ಫು ಪಾಂಡ 4(3ಡಿ) (ಇಂ): ಮ.2.45ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್	ಪ್ರದರ್ಶನಗಳು
ಸ್ಕ್ರೀನ್ 1	ಪಾರ್ಕಿಂಗ್ (ಕ): ಬೆ.10.35ಕ್ಕೆ, ಸಪ್ತ ಸಾಗರದಾಚೆ ಎಲ್ಲೋ 2 (ಕ): ಮ.1.10ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ಸಂ.4ಕ್ಕೆ, ಅರ್ಧಂಬರ್ಧ ಪ್ರೇಮಕಥೆ (ಕ): ಸಂ.6.35ಕ್ಕೆ, ಅನ್ನಪೂರ್ಣಿ (ತ): ರಾ.9.15ಕ್ಕೆ
ಸ್ಕ್ರೀನ್ 2	ಅನಿಮಲ್ (ಹಿಂ): ಬೆ.10ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ಮ.1.45ಕ್ಕೆ.
ಸ್ಕ್ರೀನ್ 3	ಸ್ಯಾಮ್ ಬಹದ್ದೂರ್ (ಹಿಂ): ಬೆ.10.10ಕ್ಕೆ, ಸಂ.4.50ಕ್ಕೆ, ಅನಿಮಲ್ (ಹಿಂ): ಮ.1.05ಕ್ಕೆ, ರಾ.7.45ಕ್ಕೆ.
ಸ್ಕ್ರೀನ್ 4	ಸಪ್ತ ಸಾಗರದಾಚೆ ಎಲ್ಲೋ 2 (ಕ): ಬೆ.10.45ಕ್ಕೆ, ಅನಿಮಲ್ (ಹಿಂ): ಮ.2.40ಕ್ಕೆ, ನೆಪೋಲಿಯನ್ (ಇಂ): ಸಂ.6.25ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಆರ್ಟಿಕಲ್ 370 (ಹಿಂ): ಬೆ.9ಕ್ಕೆ, ಮ.12.20ಕ್ಕೆ, ಮ.3.40ಕ್ಕೆ, ರಾ.7ಕ್ಕೆ, ರಾ.10.20ಕ್ಕೆ, ಡ್ಯೂನ್ ಪಾರ್ಟ್ 2 (ಇಂ): ಬೆ.8.30ಕ್ಕೆ, ಮ.12ಕ್ಕೆ, ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ, ಡೆಮೋನ್ ಸ್ಲೇಯರ್ (ಜ): ಸಂ.4.30ಕ್ಕೆ, ಆಪರೇಷನ್ ವ್ಯಾಲೆಂಟೈನ್ (ತೆ & ಹಿಂ): ಬೆ.9.45ಕ್ಕೆ, ಮ.3.40ಕ್ಕೆ, ಸಂ.6.35ಕ್ಕೆ, ರಾ.9.30ಕ್ಕೆ, ಲಾಪತಾ ಲೇಡಿಸ್ (ಹಿಂ): ಬೆ.10.35ಕ್ಕೆ, ಸಂ.4.10ಕ್ಕೆ, ರಾ.9.45ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಬೆ.10.20ಕ್ಕೆ, ಮ.1.25ಕ್ಕೆ, ರಾ.7.25ಕ್ಕೆ, ತೇರಿ ಬತೂನ್ ಮೇ ಐಸಾ ಉಲ್ಜಾ ಜಿಯಾ (ಹಿಂ): ಬೆ.11.55ಕ್ಕೆ, ಕ್ರೀಂ (ಕ): ಸಂ.6.55ಕ್ಕೆ, ಪ್ರೇಮಲು (ಮ): ರಾ.10.20ಕ್ಕೆ, ಜೋಶುವಾ (ತ): ಮ.1.20ಕ್ಕೆ, ಸಂ.6.55ಕ್ಕೆ, ಭ್ರಮಯುಗಂ (ಮ): ರಾ.9.45ಕ್ಕೆ, ವಾರನಂ ಆಯಿರಂ (ತ): ಮ.3.40ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ನದಿಯಲ್ಲಿ ಈಜಲು ಹೋದ ಯುವಕ ನೀರು ಪಾಲು

ನಂಜನಗೂಡು/ ಮಲ್ಕುಂಡಿ, ಮಾ.28– ಸ್ನೇಹಿತರ ಜೊತೆ ನದಿಯಲ್ಲಿ ಈಜಲು ತೆರಳಿದ್ದ ವಿದ್ಯಾರ್ಥಿಯೋರ್ವ ನೀರು ಪಾಲಾಗಿರುವ ಘಟನೆ ತಾಲೂಕಿನ ಹುಲ್ಲಹಳ್ಳಿ ಸಮೀಪದ ಹತ್ವಾಳು ಕಟ್ಟೆಯಲ್ಲಿ ನಡೆದಿದೆ.



ತಾಂಡವಪುರದ ಎಂಐಟಿ ಇಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿ ಹಾಗೂ ನಗರದ ಕೃಷ್ಣಮೂರ್ತಿ ಲೇಔಟ್ ನಿವಾಸಿ ಶ್ರೀನಿವಾಸಚಾರ್ ಅವರ ಪುತ್ರ ಅಭಿಷೇಕ್ (23) ಸಾವನ್ನಪ್ಪಿದವರು. ಕಾಲೇಜಿಗೆ ರಜೆ ಇದ್ದ ಕಾರಣ ಅಭಿಷೇಕ್ ಬುಧವಾರ ಸಂಜೆ ತನ್ನ ಸ್ನೇಹಿತರಾದ ಸಮರ್ಥ್ ಹಾಗೂ ಪ್ರೀತಂ ಜೊತೆಗೂಡಿ ಹುಲ್ಲಹಳ್ಳಿ ಸಮೀಪದ ಕಪಿಲಾ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಹತ್ವಾಳು ಕಟ್ಟೆಯಲ್ಲಿ ಈಜಲು ತೆರಳಿದ್ದಾನೆ. ಸ್ನೇಹಿತರ ಜೊತೆ ನೀರಿಗೆ ಧುಮುಕಿ ಈಜುತ್ತಾ ಮುಂದೆ ಸಾಗಿದ ಅಭಿಷೇಕ್ ವಾಪಸ್ ಹಿಂದಕ್ಕೆ ಬರಲು ಸಾಧ್ಯವಾಗದೆ ಮುಳುಗಿ ಮೃತಪಟ್ಟಿದ್ದಾನೆ.

ಈ ವೇಳೆ ಜೊತೆಯಲ್ಲಿದ್ದ ಸ್ನೇಹಿತರು ಸಹಾಯಕ್ಕಾಗಿ ಕೂಗಿಕೊಂಡಾಗ ಸ್ಥಳದಲ್ಲಿದ್ದವರು ನೀರಿಗಿಳಿದು ಅಭಿಷೇಕ್‌ನನ್ನು ಕಾಪಾಡಿದರಾದರೂ ಆತ ಅಷ್ಟರಲ್ಲಿ ಸಾವನ್ನಪ್ಪಿದ್ದ ಎನ್ನಲಾಗಿದೆ ಈ ಸಂಬಂಧ ಮೃತನ ತಂದೆ ನೀಡಿದ ದೂರಿನ ಮೇರೆಗೆ ಹುಲ್ಲಹಳ್ಳಿ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ಶವದ ಮರಣೋತ್ತರ ಪರೀಕ್ಷೆ ನಡೆಸಿ ವಾರಸುದಾರರಿಗೆ ಹಸ್ತಾಂತರಿಸಿದರು.

ಸೂರಹಳ್ಳಿ ಪಿಎಸಿಎಸ್‌ಗೆ ತಗಡೂರು ನಾಯಕ ಅಧ್ಯಕ್ಷ

ಮಲ್ಕುಂಡಿ, ಮಾ.28– ಇಲ್ಲಿಗೆ ಸಮೀಪದ ಸೂರಹಳ್ಳಿ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ತಗಡೂರು ನಾಯಕ ಹಾಗೂ ಉಪಾಧ್ಯಕ್ಷೆಯಾಗಿ ನಾಗರತ್ನ ಅವಿರೋಧವಾಗಿ ಆಯ್ಕೆಯಾದರು.

ಸಂಘದ ಆವರಣದಲ್ಲಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ತಗಡೂರು ನಾಯಕ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ನಾಗರತ್ನ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಪ್ರಸಾದ್ ಘೋಷಿಸಿದರು.

ಈ ವೇಳೆ ನಿರ್ದೇಶಕರಾದ ಮಹಾಲಿಂಗಪ್ಪ, ಮಹದೇವನಾಯಕ, ಸಿದ್ದಯ್ಯ, ಸಿ.ಮಂಜು, ನಿರಂಜನ್ ಕುಮಾರ್, ಸಿಇಓ ಎಸ್.ಮಹದೇವಸ್ವಾಮಿ, ಗ್ರಾಪಂ ಅಧ್ಯಕ್ಷ ರೇವಣ್ಣ, ಮುಖಂಡರಾದ ಶಿವಪ್ಪ, ಗಿರೀಶ್, ಲಕ್ಷ್ಮಣ್, ಚಿನ್ನಸ್ವಾಮಿ, ಕೂಸಪ್ಪ, ಮಹದೇವಪ್ಪ, ಪುಟ್ಟಪ್ಪ ಸೇರಿದಂತೆ ಇನ್ನಿತರರಿದ್ದರು.



ಸೂರಹಳ್ಳಿ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ತಗಡೂರು ನಾಯಕ ಹಾಗೂ ಉಪಾಧ್ಯಕ್ಷೆಯಾಗಿ ನಾಗರತ್ನ ಅವಿರೋಧವಾಗಿ ಆಯ್ಕೆಯಾದರು.

ವಿಜೃಂಭಣೆಯ ನೂರಾಳೇಶ್ವರಸ್ವಾಮಿ ಜಾತ್ರಾ ಮಹೋತ್ಸವ



ಸರಗೂರು ತಾಲೂಕಿನ ಹುಸ್ಕೂರು ಹಾಡಿಯಲ್ಲಿ ನೂರಾಳೇಶ್ವರಸ್ವಾಮಿ ಜಾತ್ರಾ ಮಹೋತ್ಸವ ಹಾಗೂ ಕೊಂಡೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ಗುರುವಾರ ವಿಜೃಂಭಣೆಯಿಂದ ನಡೆಯಿತು.

ಸರಗೂರು, ಮಾ.28– ತಾಲೂಕಿನ ಹುಸ್ಕೂರು ಹಾಡಿಯಲ್ಲಿ ನೂರಾಳೇಶ್ವರಸ್ವಾಮಿ ಜಾತ್ರಾ ಮಹೋತ್ಸವ ಹಾಗೂ ಕೊಂಡೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ಗುರುವಾರ ವಿಜೃಂಭಣೆಯಿಂದ ನಡೆಯಿತು.

ಜಾತ್ರಾ ಮಹೋತ್ಸವ ಅಂಗವಾಗಿ ದೇವಾಲಯವನ್ನು ಬಣ್ಣ ಬಣ್ಣದ ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು. ಬಳಿಕ ನುಗು ಜಲಾಶಯಕ್ಕೆ ದೇವರ ಉತ್ಸವ ಮೂರ್ತಿಯನ್ನು ಕರೆದೊಯ್ದು ಅಭಿಷೇಕ ನೆರವೇರಿಸಿ, ಬಾಯಿ ಬೀಗ ಸೇವೆ, ಸತ್ತಿಗೆ, ಸುರಪಾನಿ, ವಾದ್ಯಗೋಷ್ಠಿಗಳೊಂದಿಗೆ ಮೆರವಣಿಗೆಯಲ್ಲಿ ದೇವಾಲಯಕ್ಕೆ ತರಲಾಯಿತು. ಈ ವೇಳೆ ಭಕ್ತರು ದೇವರಿಗೆ ನಮಿಸಿ ಭಕ್ತಿಭಾವ ಮೆರೆದರು. ಮಹಿಳೆಯರು, ಮಕ್ಕಳು ಬಾಯಿ ಬೀಗ ಸೇವೆ ಹರಕೆ ತೀರಿಸಿದರು. ಇದೇ ವೇಳೆ ದೇವಾಲಯದ ಮುಂಭಾಗ ಕೊಂಡೋತ್ಸವ ನಡೆಯಿತು.

ಹುಸ್ಕೂರು ಹಾಡಿ, ದಡದಹಳ್ಳಿ, ಹಳೆಯೂರು, ಬೆದ್ದಲಪುರ, ಹೊಸಹೆಗ್ಗುಡಿಲು, ಹಲಸೂರು, ಹೊಸ ಬಿರ್‍ವಾಳ್ ಸೇರಿದಂತೆ ಅಕ್ಕಪಕ್ಕದ ಗ್ರಾಮಸ್ಥರು ದೇವರ ದರ್ಶನ ಪಡೆದರು. ಸರಗೂರು ಇನ್ಸ್‌ಪೆಕ್ಟರ್ ಲಕ್ಷ್ಮಿಕಾಂತ್, ಎಸ್‌ಐ ಎಂ.ಸಿ.ಮಧು, ಎಎಸ್‌ಐ ರಂಗನಾಥಯ್ಯ, ನಾರಾಯಣ, ಸಿಬ್ಬಂದಿಗಳಾದ ನಾಗರಾಜು, ಕೃಷ್ಣಯ್ಯ, ಇಮ್ರಾನ್ ಅಹಮ್ಮದ್, ಜಗದೀಶ್, ಸೋಮನಾಯಕ, ಮಂಜು ಸೇರಿದಂತೆ ಇನ್ನಿತರರು ಸೂಕ್ತ ಬಂದೋಬಸ್ತ್ ಮಾಡಿದ್ದರು.

ಶ್ರೀಕಂಠೇಶ್ವರನ ಹುಂಡಿಯಲ್ಲಿ 1.78 ಕೋಟಿ ಸಂಗ್ರಹ

ನಂಜನಗೂಡು, ಮಾ.28– ನಗರದ ಶ್ರೀಕಂಠೇಶ್ವರ ದೇವಾಲಯದ 34 ಹುಂಡಿಗಳಲ್ಲಿ 1.78 ಕೋಟಿ ಹಣ ಸಂಗ್ರಹವಾಗಿದೆ.

ದೇವಾಲಯದ ದಾಸೋಹ ಭವನದಲ್ಲಿ ಗುರುವಾರ ನಡೆದ ಹುಂಡಿ ಎಣಿಕೆ ವೇಳೆ 1,78,29,672 ರೂ., 123 ಗ್ರಾಂ ಚಿನ್ನ ಹಾಗೂ 4.6 ಕೆಜಿ ಬೆಳ್ಳಿ, 26 ವಿದೇಶಿ ಕರೆನ್ಸಿ ದೊರೆತಿವೆ. ನಗರದ ಕೆನರಾ ಬ್ಯಾಂಕ್, ದೇವಾಲಯದ ಸಿಬ್ಬಂದಿ ಹಾಗೂ ನೂರಕ್ಕೂ ಹೆಚ್ಚು ಸ್ವಸಹಾಯ ಸಂಘದ ಮಹಿಳಾ ಸದಸ್ಯೆಯರು ಹುಂಡಿ ಎಣಿಕೆ ಕಾರ್ಯದಲ್ಲಿ ಭಾಗವಹಿಸಿದ್ದರು.

ಈ ವೇಳೆ ದೇವಾಲಯದ ಇಓ ಜಗದೀಶ್ ಕುಮಾರ್, ಎಇಓ ಸತೀಶ್, ಚಾಮುಂಡೇಶ್ವರಿ ದೇವಾಲಯದ ಇಓ ಸಿ.ಜಿ.ಕೃಷ್ಣ, ಲೆಕ್ಕಾಧಿಕಾರಿ ಗುರುಮಲ್ಲಯ್ಯ, ಕೆನರಾ ಬ್ಯಾಂಕ್ ವ್ಯವಸ್ಥಾಪಕಿ ಲಕ್ಷ್ಮಿ ಉಪಸ್ಥಿತರಿದ್ದರು.



ನಂಜನಗೂಡು ಶ್ರೀಕಂಠೇಶ್ವರ ದೇವಾಲಯದ ಹುಂಡಿ ಎಣಿಕೆ ನಡೆಸುತ್ತಿರುವುದು.

ನಾನು ಸೋಲುತ್ತೇನೆಂದು ಹೇಳಲು ಸಿದ್ದರಾಮಯ್ಯ ಜ್ಯೋತಿಷಿಯೇ

ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ವ್ಯಂಗ್ಯ

ನಂಜನಗೂಡು, ಮಾ.28– ರಾಜ್ಯದ ಮುಖ್ಯಮಂತ್ರಿಗಳು ಜ್ಯೋತಿಷ್ಯ ಹೇಳಲು ಶುರು ಮಾಡಿದ್ದಾರೆ. ಈಗಾಗಲೇ ಮಂಡ್ಯದಲ್ಲಿ ನನ್ನನ್ನು ಸೋಲುತ್ತಾರೆ ಎಂದು ಜ್ಯೋತಿಷ್ಯ ಹೇಳಿದ್ದಾರೆ. ಉಳಿದವರ ಸೋಲು ಗೆಲುವಿನ ಬಗ್ಗೆಯೂ ಅವರನ್ನೇ ಕೇಳಿ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ವ್ಯಂಗ್ಯವಾಡಿದರು.

ನಗರದ ಶ್ರೀಕಂಠೇಶ್ವರಸ್ವಾಮಿ ದೇವಾಲಯಕ್ಕೆ ಗುರುವಾರ ಭೇಟಿ ನೀಡಿ ತುಲಾಭಾರ ಸೇರಿದಂತೆ ವಿಶೇಷ ಪೂಜೆ ಸಲ್ಲಿಸಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಜ್ಯೋತಿಷಿಯಾಗಿದ್ದಾರೆ. ಯಾರ್ ಯಾರು ಗೆಲ್ಲುತ್ತಾರೆ, ಸೋಲುತ್ತಾರೆ ಎಂಬುದರ ಬಗ್ಗೆ ಸಿದ್ದರಾಮಯ್ಯ ಜ್ಯೋತಿಷ್ಯ ಹೇಳಲು ಆರಂಭಿಸಿದ್ದಾರೆ ಎಂದು ಲೇವಡಿ ಮಾಡಿದರು.



ಶ್ರೀಕಂಠೇಶ್ವರಸ್ವಾಮಿ ದೇವಾಲಯಕ್ಕೆ ಮಾಜಿ ಸಿಎಂ ಹೆಚ್.ಡಿ. ಕುಮಾರಸ್ವಾಮಿ ತೆರಳಿ ದೇವರ ದರ್ಶನ ಪಡೆದರು.

ರಾಜ್ಯದ 28 ಕ್ಷೇತ್ರದಲ್ಲೂ ಗೆಲ್ಲುವ ಗುರಿಯೊಂದಿಗೆ ಬಿಜೆಪಿ–ಜೆಡಿಎಸ್ ಮೈತ್ರಿಕೂಟ ಕಣಕ್ಕಿಳಿದಿದೆ. ಅಭ್ಯರ್ಥಿಗಳ ಗೆಲುವು ಸೋಲನ್ನು ತೀರ್ಮಾನಿಸುವುದು ಮತದಾರ ಪ್ರಭುಗಳು ಎಂಬುದು ಸಿದ್ದರಾಮಯ್ಯ ಅವರಿಗೆ ತಿಳಿದಿರಲಿ. ಎಲ್ಲೆಡೆ ಮೈತ್ರಿಕೂಟದ ಅಭ್ಯರ್ಥಿಗಳು ಗೆಲುವು ಸಾಧಿಸುವ ಮೂಲಕ ಸಿದ್ದರಾಮಯ್ಯ ಸರ್ಕಾರದ ಆಡಳಿತಕ್ಕೆ ಕನ್ನಡಿ ಹಿಡಿಯಲಿದೆ ಎಂದು ತಿರುಗೇಟು ನೀಡಿದ ಅವರು, ರಾಜ್ಯದ 28 ಕ್ಷೇತ್ರಗಳಲ್ಲೂ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿಗಳು ಗೆಲುವು ಸಾಧಿಸಿದಲ್ಲಿ ರಾಜ್ಯ ಸರ್ಕಾರ ಪತನಗೊಳ್ಳಲಿದೆ ಎಂದರು.

ಇದಕ್ಕೂ ಮುನ್ನ ಶ್ರೀಕಂಠೇಶ್ವರಸ್ವಾಮಿ ದೇವಾಲಯಕ್ಕೆ ಭೇಟಿ ನೀಡಿದ ಹೆಚ್.ಡಿ.ಕುಮಾರಸ್ವಾಮಿ ಅಕ್ಕಿ, ಬೆಲ್ಲದ ಮೂಲಕ ತುಲಾಭಾರ ಸೇವೆ ಸಲ್ಲಿಸಿದರು. ನಂತರ ಶ್ರೀಕಂಠೇಶ್ವರಸ್ವಾಮಿ, ಪಾರ್ವತಿದೇವಿ, ಸುಬ್ರಹ್ಮಣ್ಯ, ನಾರಾಯಣಸ್ವಾಮಿ ಸೇರಿದಂತೆ ದೇವಾಲಯದ ಎಲ್ಲಾ ಗುಡಿಗಳಲ್ಲೂ ವಿಶೇಷ ಪೂಜೆ ಸಲ್ಲಿಸಿದರು. ನಂತರ ಜೆಡಿಎಸ್ ಜಿಲ್ಲಾಧ್ಯಕ್ಷ ಎನ್.ನರಸಿಂಹಸ್ವಾಮಿ ನಿವಾಸಕ್ಕೆ ತೆರಳಿ ಉಪಾಹಾರ ಸೇವಿಸಿದರು.

ಇದೇ ಸಂದರ್ಭ ಶಾಸಕ ಜಿ.ಟಿ.ದೇವೇಗೌಡ, ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಮಾಜಿ ಸಚಿವ ಸಾ.ರಾ.ಮಹೇಶ್, ಮಾಜಿ ಶಾಸಕ ಅಶ್ವಿನ್ ಕುಮಾರ್, ಜೆಡಿಎಸ್ ಜಿಲ್ಲಾಧ್ಯಕ್ಷ ಎನ್.ನರಸಿಂಹಸ್ವಾಮಿ, ತಾಲೂಕು ಅಧ್ಯಕ್ಷ ಆರ್.ವಿ.ಮಹದೇವಸ್ವಾಮಿ, ಮುಖಂಡರಾದ ಸಂಜಯ್ ಗೌಡ, ರವಿಕುಮಾರ್, ಬಿಜೆಪಿ ನಗರಾಧ್ಯಕ್ಷ ಸಿದ್ದರಾಜು ಸೇರಿದಂತೆ ಇತರರಿದ್ದರು.

ವಿಜೃಂಭಣೆಯ ಕಳಲೆ ಶ್ರೀಲಕ್ಷ್ಮಿಕಾಂತಸ್ವಾಮಿ ರಥೋತ್ಸವ



ನಂಜನಗೂಡು ತಾಲೂಕಿನ ಕಳಲೆಯಲ್ಲಿ ಲಕ್ಷ್ಮಿಕಾಂತಸ್ವಾಮಿ ರಥೋತ್ಸವ ನಡೆಯಿತು


ನಂಜನಗೂಡು, ಮಾ.28– ತಾಲೂಕಿನ ಕಳಲೆ ಗ್ರಾಮದ ಪುರಾಣ ಪ್ರಸಿದ್ಧ ಶ್ರೀಲಕ್ಷ್ಮಿಕಾಂತಸ್ವಾಮಿಯವರ ರಥೋತ್ಸವ ಗುರುವಾರ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ಜರುಗಿತು.

ರಥೋತ್ಸವ ಅಂಗವಾಗಿ ದೇವಾಲಯದಲ್ಲಿ ಗುರುವಾರ ಮುಂಜಾನೆಯಿಂದಲೇ ದೇವರಿಗೆ ಕ್ಷೀರಾಭಿಷೇಕ, ಫಲ ಪಂಚಾಮೃತ ಅಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ವಿಧಿ ವಿಧಾನ ನೆರವೇರಿಸಿದ ನಂತರ ಬೆಳಗ್ಗೆ 7.53 ರಿಂದ 8.21 ರೊಳಗೆ ಸಲ್ಲುವ ಶುಭ ಮೇಷ ಲಗ್ನದಲ್ಲಿ ಶ್ರೀಲಕ್ಷ್ಮೀಕಾಂತಸ್ವಾಮಿಯವರ ಉತ್ಸವ ಮೂರ್ತಿಯನ್ನು ರಥೋತ್ಸದಲ್ಲಿ ಪ್ರತಿಷ್ಠಾಪಿಸಲಾಯಿತು. ಶಾಸಕ ದರ್ಶನ್ ಹಾಗೂ ದೇವಾಲಯದ ಪಾರುಪತ್ತೇದಾರ ಜಯರಾಮ್ ಅವರು ರಥದ ಚಕ್ರಕ್ಕೆ ಈಡುಗಾಯಿ ಒಡೆಯುವ ಮೂಲಕ ರಥೋತ್ಸವಕ್ಕೆ ಚಾಲನೆ ನೀಡಿದರು. ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ್ದ ಭಕ್ತರು ಶ್ರದ್ಧಾಭಕ್ತಿಯಿಂದ ರಥ ಎಳೆದು ಭಕ್ತಿ ಪರಾಕಾಷ್ಠೆ ಮೆರೆದರು. ರಥ ಗ್ರಾಮದ ಪ್ರಮುಖ ಬೀದಿಗಳಲ್ಲಿ ಚಲಿಸುವಾಗ ಭಕ್ತರು ಇಷ್ಟಾರ್ಥ ನೆರವೇರಿಸುವಂತೆ ಪ್ರಾರ್ಥಿಸಿದರು. ಅಲ್ಲದೇ ಹರಕೆ ಕಟ್ಟಿಕೊಂಡು ಹಣ್ಣು ಜವನ ಎಸೆದು ಭಕ್ತಿ ಮೆರೆದರು. ರಥ ಯಾವುದೇ ಅಡಚಣೆ ಇಲ್ಲದೇ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಸ್ವಸ್ಥಾನ ಸೇರಿತು.

ಜಾತ್ರಾ ಮಹೋತ್ಸವ ಅಂಗವಾಗಿ ದೇವಾಲಯದ ಸುತ್ತಲು ವಿದ್ಯುತ್ ದೀಪಗಳಿಂದ ಅಲಂಕಾರ ಮಾಡಲಾಗಿತ್ತು. ಅಲ್ಲದೆ ರಥವನ್ನು ಬಗೆ ಬಗೆಯ ಬಣ್ಣದ ಬಟ್ಟೆಯ ಬಾವುಟಗಳಿಂದ ಹಾಗೂ ನಾನಾ ಬಗೆಯ ಹೂಗಳಿಂದ ಸಿಂಗರಿಸಲಾಗಿತ್ತು. ಉತ್ಸವ ಮೂರ್ತಿಯನ್ನು ವಜ್ರ–ವೈಡೂರ್ಯಗಳಿಂದ ಅಲಂಕರಿಸಲಾಗಿತ್ತು. ರಥ ಚಲಿಸುವ ಮಾರ್ಗದಲ್ಲಿ ರಂಗೋಲೆ ಬಿಡಿಸಿ, ತಳಿರು ತೋರಣಗಳಿಂದ ಸಿಂಗರಿಸಲಾಗಿತ್ತು. ಅಲ್ಲದೆ ಜಾತ್ರಾ ಮಹೋತ್ಸವದ ಅಂಗವಾಗಿ ಸೂಕ್ತ ಪೊಲೀಸ್ ಬಂದೋಬಸ್ತ್ ನಿಯೋಜಿಸಲಾಗಿತ್ತು.

ಈ ವೇಳೆ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಕಳಲೆ ಗ್ರಾಪಂ ಅಧ್ಯಕ್ಷ ಮಹೇಶ್, ಉಪಾಧ್ಯಕ್ಷ ಹರೀಶ್, ಸದಸ್ಯರಾದ ಲತಾ, ಸಿದ್ದೇಶ್, ಮುಖಂಡರಾದ ರಾಜೇಶ್, ಬಸವಣ್ಣ, ರಾಚನಾಯಕ, ನಗರಸಭಾ ಸದಸ್ಯ ಪ್ರದೀಪ್, ಹಾಗೂ ಕಳಲೆ ಗ್ರಾಮಸ್ಥರು, ಯಜಮಾನರು ಇದ್ದರು.

ಅಸ್ಲಾಂ ಪಾಷ ನಿಧನ



ಹುಣಸೂರು, ಮಾ.28– ಇಲ್ಲಿನ ಶಬ್ಬೀರ್ ನಗರದ ನಿವಾಸಿ, ಮಾಜಿ ಪುರಸಭಾ ಸದಸ್ಯ ಝರೀನ್ ತಾಜ್ ಅವರ ಪತಿ ಅಸ್ಲಾಂ ಪಾಷ (ಅಂಡು 63) ಬುಧವಾರ ನಿಧನರಾದರು. ಮೃತರು ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶಬ್ಬೀರ್ ನಗರದ ಖಬರಸ್ತಾನದಲ್ಲಿ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಇಂದು ಪಟ್ಟಲದಮ್ಮನವರ ಜಾತ್ರಾ ಮಹೋತ್ಸವ

ಗಾವಡಗೆರೆ, ಮಾ.28– ಹುಣಸೂರು ತಾಲೂಕಿನ ಗಾವಡಗೆರೆಯಲ್ಲಿ ಶುಕ್ರವಾರ ಶ್ರೀಪಟ್ಟಲದಮ್ಮನವರ ಜಾತ್ರಾ ಮಹೋತ್ಸವ ಹಾಗೂ ಕೊಂಡೋತ್ಸವ ನಡೆಯಲಿದೆ. ಜಾತ್ರಾ ಮಹೋತ್ಸವ ಅಂಗವಾಗಿ ದೇವಾಲಯವನ್ನು ಬಣ್ಣ ಬಣ್ಣದ ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿದೆ. ಅಲ್ಲದೇ ತಳಿರು ತೋರಣಗಳಿಂದ ಸಿಂಗರಿಸಲಾಗಿದೆ. ಜಾತ್ರಾ ಮಹೋತ್ಸವಕ್ಕೆ ಮುಂಬಯಿ, ಪುಣೆ, ಬೆಂಗಳೂರು ಸೇರಿದಂತೆ ಸುತ್ತಮುತ್ತಲ ಸಾವಿರಾರು ಮಂದಿ ಭಾಗವಹಿಸಲಿದ್ದಾರೆ. ಶುಕ್ರವಾರ ರಾತ್ರಿ 8 ಗಂಟೆಗೆ ಶ್ರೀಪಟ್ಟಲದಮ್ಮನವರ ಉತ್ಸವ ಮೂರ್ತಿಯನ್ನು ವಿವಿಧ ಜಾನಪದ ಕಲಾ ತಂಡಗಳೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಗುವುದು. ಅಲ್ಲದೇ ಶನಿವಾರ ಮುಂಜಾನೆ ದೇವಾಲಯದಲ್ಲಿ ಕೊಂಡೋತ್ಸವ ನಡೆಯಲಿದೆ ಎಂದರು. ಅಂದು ಗುರುಲಿಂಗ ಜಂಗಮ ದೇವರ ಮಠದ ಶ್ರೀನಟರಾಜ ಸ್ವಾಮೀಜಿ ಅನ್ನ ಸಂತರ್ಪಣೆ ಏರ್ಪಡಿಸಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.


ಶ್ರೀ ಚಾಮುಂಡೇಶ್ವರಿ ಕೃಪೆ
ಹೋಟೆಲ್ ಮಹಾರಾಜ ಗ್ರ್ಯಾಂಡ್ ಹಾಗೂ
ದೇವಿಶ್ರೀ ಹೋಟೆಲ್‌ನ ಮಾಲೀಕರಾದ
ಆರ್. ಅಶ್ವಥ್‌ನಾರಾಯಣ್
ಅವರಿಗೆ
ಹುಟ್ಟುಹಬ್ಬದ ಶುಭಾಶಯಗಳು
ಮೊ: 9036709090